ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜುಲೈ 30 ಶನಿವಾರ 2022


₹4

ದೂರವಾಣಿ: 2496520, 2496521, 2496526, 2496527, 2496528. ಜಾಹೀರಾತು: 2496522, 2496523
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695

ಸಂಪುಟ: 43 | ಸಂಚಿಕೆ: 105 | ಪುಟಗಳು: 10

ಸುದ್ದಿ, ಫೋಟೋಗೆ: news@mysurumithra.com ಜಾಹೀರಾತು: ad@mysurumithra.com











ಸರಣಿ ಹತ್ಯೆ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರದ ವೈಫಲ್ಯ ಖಂಡಿಸಿ ಮೈಸೂರಲ್ಲಿ ಪ್ರತಿಭಟನೆ



ಮೈಸೂರು, ಜು.29(ಎಸ್‌ಬಿಡಿ)–ರಾಜ್ಯ ಬಿಜೆಪಿ ಸರ್ಕಾರ ಹಣ ಮತ್ತು ಹೆಣದ ಮೇಲೆ ರಾಜಕಾರಣ ನಡೆಸುತ್ತಿದೆ ಎಂದು ಆರೋಪಿಸಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ವತಿಯಿಂದ ಶುಕ್ರವಾರ ಮೈಸೂರಿನಲ್ಲಿ ಪ್ರತಿಭಟನೆ ನಡೆಸಲಾಯಿತು.

ನಗರದ ನ್ಯಾಯಾಲಯ ಮುಂಭಾಗದ ಗಾಂಧಿ ಪುತ್ಥಳಿ ಬಳಿ ಜಮಾಯಿಸಿದ ವೇದಿಕೆ ಕಾರ್ಯಕರ್ತರು, ಕರಾವಳಿಯಲ್ಲಿ ಹತ್ಯೆಗೀಡಾದ ಪ್ರವೀಣ್ ಹಾಗೂ ಫಾಜಿಲ್ ಭಾವಚಿತ್ರ ಹಿಡಿದು ಬಿಜೆಪಿ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು. ಭ್ರಷ್ಟಾಚಾರದಲ್ಲಿ ಮುಳುಗಿರುವ ಬಿಜೆಪಿ ಸರ್ಕಾರ ರಾಜ್ಯದಲ್ಲಿ ಕೋಮುದ್ವೇಷ ಸೃಷ್ಟಿಸಿ, ಹಣ ಮತ್ತು ಹೆಣದ ಮೇಲೆ ರಾಜಕಾರಣ ನಡೆಸುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ವೇದಿಕೆಯ ರಾಜ್ಯಾಧ್ಯಕ್ಷ ಕೆ.ಎಸ್.ಶಿವರಾಮು ಮಾಧ್ಯಮಗಳೊಂದಿಗೆ ಮಾತನಾಡಿ, ರಾಜ್ಯದಲ್ಲಿ ಕೋಮು ದಳ್ಳುರಿಯ ದ್ವೇಷ ಹೊತ್ತಿ ಉರಿಯುತ್ತಿದೆ. ಇದಕ್ಕೆ ಇತ್ತೀಚೆಗೆ ಪ್ರವೀಣ್ ಹಾಗೂ ಫಾಜಿಲ್ ಬಲಿಯಾಗಿದ್ದಾರೆ. ಕೆಲ ತಿಂಗಳ ಹಿಂದೆ ಶಿವಮೊಗ್ಗದಲ್ಲಿ ಹರ್ಷ ಹಾಗೂ ಬೆಂಗಳೂರಲ್ಲಿ ಚಂದ್ರುವಿನ ಕೊಲೆಯಾಗಿದೆ. ಕೋಮು ದ್ವೇಷದಿಂದ ಅನೇಕ ಯುವಕರು ಬೀದಿ ಹೆಣವಾಗುತ್ತಿದ್ದಾರೆ. ಈ ರೀತಿಯ ಬೆಳವಣಿಗೆ ನಿಜಕ್ಕೂ ಖಂಡನೀಯ ಎಂದು ಬೇಸರ ವ್ಯಕ್ತಪಡಿಸಿದರು.

ಹಿಂದುಗಳ ರಕ್ಷಣೆ ಮಾಡುತ್ತೇವೆ ಎಂದು ಹೇಳಿಕೊಂಡು ಅಧಿಕಾರಕ್ಕೆ ಬಂದ ಬಿಜೆಪಿ, ಹಿಂದುತ್ವದ ಹೆಸರಿನಲ್ಲಿ ಕೋಮು ಸಂಘರ್ಷ ಸೃಷ್ಟಿಸುವ ಕೆಲಸ ಮಾಡುತ್ತಿದೆ. ಮುಖ್ಯಮಂತ್ರಿಗಳು, ಗೃಹಸಚಿವರ ವೈಫಲ್ಯದಿಂದ ಆಡಳಿತದಲ್ಲಿ ಬಿಗಿ ಇಲ್ಲದಂತಾಗಿದೆ. ಆರ್‌ಎಸ್‌ಎಸ್ ಹಾಗೂ ಬಿಜೆಪಿ ಹಿಂದುತ್ವ ಅಂಜೆಂಡಾ ಇಟ್ಟುಕೊಂಡು ಧರ್ಮಗಳು ಹಾಗೂ ಜಾತಿಗಳ ನಡುವೆ ವೈಷಮ್ಯ ಬಿತ್ತುತ್ತಿವೆ. ಬಿಜೆಪಿ ನಾಯಕರ ಬೂಟಾಟಿಕೆ, ನಕಲಿ ಭಾವನಾತ್ಮಕ ಹೇಳಿಕೆಗಳಿಂದ ರೋಸಿಹೋಗಿರುವ ಆ ಪಕ್ಷದ ಕಾರ್ಯಕರ್ತರೇ ಭುಗಿಲೆದಿದ್ದಾರೆ. ಸಮಾಜದಲ್ಲಿ ಸಾಮರಸ್ಯ ಬೆಸೆಯುವುದನ್ನು ಬಿಟ್ಟು ಹಣ ಮತ್ತು ಹೆಣದ ಮೇಲೆ ರಾಜಕೀಯ ನಡೆಸುತ್ತಿರುವುದು ಅಪಾಯಕಾರಿ. ಇಂದಿನ ಬೆಳವಣಿಗೆಯನ್ನು ರಾಜ್ಯಪಾಲರು ಹಾಗೂ ರಾಷ್ಟ್ರಪತಿಗಳು ಗಂಭೀರವಾಗಿ ಪರಿಗಣಿಸಿ, ರಾಜ್ಯದಲ್ಲಿ ಬಿಜೆಪಿ ಸರ್ಕಾರವನ್ನು ವಜಾಗೊಳಿಸಬೇಕು ಎಂದು ಆಗ್ರಹಿಸಿದರು.

ಮೈಸೂರು ನಗರ ಪಾಲಿಕೆ ಮಾಜಿ ಕಾರ್ಪೊರೇಟರ್ ಡಿ.ನಾಗಭೂಷಣ್, ಜಿಲ್ಲಾ ಸವಿತ ಸಮಾಜದ ಅಧ್ಯಕ್ಷ ಎನ್.ಆರ್.ನಾಗೇಶ್, ಜಿಲ್ಲಾ ಉಪ್ಪಾರರ ಸಂಘದ ಅಧ್ಯಕ್ಷ ಯೋಗೇಶ್ ಉಪ್ಪಾರ್, ಎಂ.ಲೋಕೇಶ್ ಕುಮಾರ್ ಮಾದಾಪುರ, ಎಂ.ಮಹೇಂದ್ರ ಕಾಗಿನೆಲೆ, ಆರ್.ಕೆ.ರವಿ. ಸತ್ಯನಾರಾಯಣ್, ವಿದ್ಯಾ, ಭವ್ಯ, ಪ್ರಕಾಶ್, ಉದಯ್, ರವಿ ನಾಯಕ್, ಪ್ರದೀಪ್‌ಕುಮಾರ್, ಪುಟ್ಟಸ್ವಾಮಿ ಮತ್ತಿತರರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.


ಅನಿಲ ಸೋರಿಕೆ ಸಂದರ್ಭದ ನಿರ್ವಹಣೆಯ ಅಣಕು ಪ್ರದರ್ಶನ



ಮೈಸೂರು, ಜು.29(ಎಸ್‌ಬಿಡಿ)– ಎಲ್‌ಪಿಜಿ ಸಾಗಿಸುತ್ತಿದ್ದ ಟ್ಯಾಂಕರ್‌ನಿಂದ ಸೋರಿಕೆ ಉಂಟಾಗಿ ಕೆಲಕಾಲ ಆತಂಕದ ವಾತಾವರಣ ಸೃಷ್ಟಿಯಾಗಿತ್ತು. ಕೆ.ಆರ್.ನಗರ ತಾಲೂಕು ಕುಂಬಾರಕೊಪ್ಪಲು ಗ್ರಾಮದಲ್ಲಿ ಸಂಭವಿಸಿದ್ದ ಈ ಘಟನೆಯಲ್ಲಿ ಟ್ಯಾಂಕರ್‌ನ ಚಾಲಕ ಹಾಗೂ ಸಹಾಯಕರು ಅಪಾಯದಲ್ಲಿ ಸಿಲುಕಿದ್ದರು. ಸಾರ್ವಜನಿಕರು ಭಯಭೀತರಾಗಿ ದೂರದಲ್ಲೇ ನಿಂತು ಟ್ಯಾಂಕರ್‌ನತ್ತ ದೃಷ್ಟಿ ನೆಟ್ಟಿದ್ದರು. ಪಕ್ಕದಲ್ಲೇ ಶಾಲೆ ಇದ್ದ ಕಾರಣ ಆತಂಕ ಮತ್ತಷ್ಟು ಹೆಚ್ಚಿತ್ತು. ವಿವಿಧ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ದೌಡಾಯಿಸಿದ್ದರು. ಅಗ್ನಿಶಾಮಕ ಹಾಗೂ ತುರ್ತು ಸೇವೆಗಳ ಸಿಬ್ಬಂದಿ ನೀರು ಸಿಂಪಡಿಸಿ, ಟ್ಯಾಂಕರ್‌ನಲ್ಲಿದ್ದವರನ್ನು ಹೆಗಲ ಮೇಲೆ ಹೊತ್ತುತಂದು ರಕ್ಷಿಸಿದರು. ತಕ್ಷಣ ಅವರನ್ನು ಆಂಬುಲೆನ್ಸ್ ಮೂಲಕ ಆಸ್ಪತ್ರೆಗೆ ಕರೆದೊಯ್ಯಲಾಯಿತು. ನಿರಂತರ ಕಾರ್ಯಾಚರಣೆಯಿಂದ ಎಲ್‌ಪಿಜಿ ಸೋರಿಕೆ ನಿಲ್ಲಿಸಿ, ಭಾರೀ ದುರಂತ ತಪ್ಪಿಸಲಾಯಿತು.

ಇದು ಮೈಸೂರು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ, ಕಾರ್ಖಾನೆಗಳು, ಬಾಯ್ಲರ್‌ಗಳು, ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆ ಸಹಯೋಗದೊಂದಿಗೆ ನಡೆಸಿದ ವಿಪತ್ತು ನಿರ್ವಹಣೆಯ ಅಣಕು ಪ್ರದರ್ಶನದ ದೃಶ್ಯ. ರಾಸಾಯನಿಕ ಸೋರಿಕೆ ಸಂದರ್ಭದಲ್ಲಿ ಕೈಗೊಳ್ಳಬೇಕಾದ ತುರ್ತು ಕ್ರಮಗಳು, ಮುಂಜಾಗೃತೆ, ವಿಪತ್ತು ನಿರ್ವಹಣೆಗೆ ಅಗತ್ಯವಾದ ಸಿದ್ಧತೆ, ದುರಂತದಿಂದ ಸಂಭವಿಸಬಹುದಾದ ಸಾವು–ನೋವು ಹಾಗೂ ಇತರೆ ನಷ್ಟ ತಡೆಯುವುದು, ವಿಪತ್ತು ನಿರ್ವಹಣೆ ಕಾರ್ಯಾಚರಣೆಗೆ ಸಿಬ್ಬಂದಿಯನ್ನು ಸಜ್ಜುಗೊಳಿಸುವುದು, ಆಡಳಿತ ವರ್ಗದವರ ಪಾತ್ರ, ಹೀಗೆ ಎಲ್ಲಾ ಹಂತಗಳ ಬಗ್ಗೆಯೂ ಅಣಕು ಪ್ರದರ್ಶನದ ಮೂಲಕ ಜಾಗೃತಿ ಮೂಡಿಸಲಾಯಿತು.

ಅಗ್ನಿಶಾಮಕ, ಪೊಲೀಸ್ ಹಾಗೂ ವಿವಿಧ ಇಲಾಖೆ ಸಿಬ್ಬಂದಿಯನ್ನೊಳಗೊಂಡ ಸುಮಾರು 30 ಜನರ ತಂಡ ಅರ್ಧಗಂಟೆ ಅಣಕು ಪ್ರದರ್ಶನ ನಡೆಸಿತು. ಇದಕ್ಕಾಗಿ ವಾಟರ್ ಟ್ಯಾಂಕರ್, 8 ಆಂಬುಲೆನ್ಸ್‌ಗಳನ್ನು ಬಳಸಿಕೊಳ್ಳಲಾಯಿತು. ಅಪರ ಜಿಲ್ಲಾಧಿಕಾರಿ ಮಂಜುನಾಥಸ್ವಾಮಿ ಅವರ ಸಮ್ಮುಖದಲ್ಲಿ ನಡೆದ ಅಣಕು ಪ್ರದರ್ಶನದಲ್ಲಿ ಕೆ.ಆರ್.ನಗರ ತಹಶೀಲ್ದಾರ್ ಸಂತೋಷ್, ಅಗ್ನಿಶಾಮಕ ಅಧಿಕಾರಿ ಜಯರಾಮಯ್ಯ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕ ಟಿ.ಕೆ.ಹರೀಶ್, ಜಿಲ್ಲಾ ಸರ್ವೇಕ್ಷಣಾಧಿಕಾರಿ ಮಹದೇವಸ್ವಾಮಿ, ತಾಲೂಕು ಆರೋಗ್ಯಾಧಿಕಾರಿ ಮಹೇಂದ್ರ, ಕೆ.ಆರ್.ನಗರ ವೃತ್ತ ನಿರೀಕ್ಷಕ ಲವ ಸೇರಿದಂತೆ ಅಗ್ನಿಶಾಮಕ, ಆರೋಗ್ಯ, ಪೊಲೀಸ್, ಕಂದಾಯ, ಜಿಲ್ಲಾ ಪಂಚಾಯ್ತಿ, ಪಶು ಸಂಗೋಪನೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿಗಳು ಹಾಗೂ ಸಾರ್ವಜನಿಕರು ಭಾಗಿಯಾಗಿದ್ದರು.



ಕರ್ನಾಟಕ ಮೃಗಾಲಯ ಪ್ರಾಧಿಕಾರದ ಅಧ್ಯಕ್ಷ ಎಂ.ಶಿವಕುಮಾರ್ ಅವರನ್ನು ಬಿಜೆಪಿ ಮೈಸೂರು ನಗರ ವಾಣಿಜ್ಯ ಮತ್ತು ವ್ಯಾಪಾರಿ ಪ್ರಕೋಷ್ಠದ ಸಹ ಸಂಚಾಲಕ ಆರ್. ಸೋಮಶೇಖರ್ ಅಭಿನಂದಿಸಿದರು. ಗೋಕುಲ್ ಗೋವರ್ಧನ್, ಸೋಮು, ಬಿ. ಶಿವಣ್ಣ, ಪ್ರಸನ್ನ ಹಾಜರಿದ್ದರು.

ಆನಂದ ರಾವ್ ನಿಧನ



ಮೈಸೂರು, ಜು.29–ಮೈಸೂರಿನ ಚಾಮುಂಡಿಪುರಂ ನಿವಾಸಿ, ರೋಟರಿ ಮೈಸೂರು ವೆಸ್ಟ್‌ನ ಮಾಜಿ ಅಧ್ಯಕ್ಷ ವಿ.ಆನಂದ ರಾವ್ (92) ಅವರು ಜು.26ರಂದು ನಿಧನರಾದರು.

ರಸಾಯನಶಾಸ್ತ್ರ ಉಪನ್ಯಾಸಕರಾಗಿದ್ದ ಇವರು ತಾಂಜೇನಿಯಾದಲ್ಲಿ ಸುದೀರ್ಘ 25 ವರ್ಷಗಳ ಕಾಲ ಸೇವೆ ಸಲ್ಲಿಸಿದ್ದರು. ಇವರು 'ಮಂಕುತಿಮ್ಮನ ಕಗ್ಗ'ದ ನಿರೂಪಕರೂ ಆಗಿದ್ದರು. ಮೃತರು ಪತ್ನಿ ಸುಖನ್ಯಾ ಆನಂದ ರಾವ್, ಇಬ್ಬರು ಪುತ್ರರು, ಮೂವರು ಪುತ್ರಿಯರು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ.

ಮೈಲ್ಯಾಕ್, ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷರ ಅಧಿಕಾರ ಸ್ವೀಕಾರ





ಮೈಲ್ಯಾಕ್ ಅಧ್ಯಕ್ಷ ರಘು ಕೌಟಿಲ್ಯ ಶುಕ್ರವಾರ ಅಧಿಕಾರ ವಹಿಸಿಕೊಂಡರು. ಈ ವೇಳೆ ಅವರ ಪುತ್ರ ಕೌಟಿಲ್ಯ, ಪುತ್ರಿ ವರ್ಣಿಕಾ, ಮೈಲ್ಯಾಕ್‌ನ ಎಂ.ಡಿ.ಕುಮಾರಸ್ವಾಮಿ, ಜನರಲ್ ಮ್ಯಾನೇಜರ್ ಹರಕುಮಾರ್ ಉಪಸ್ಥಿತರಿದ್ದಾರೆ. ಬಲಚಿತ್ರದಲ್ಲಿ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಮಿರ್ಲೆ ಶ್ರೀನಿವಾಸಗೌಡರನ್ನು ಎಂಎಲ್‌ಸಿ ವಿಶ್ವನಾಥ್ ಅಭಿನಂದಿಸಿದರು.

ಮೈಸೂರು,ಜು.29(ಆರ್‌ಕೆ)– ಮೈಸೂರು ಪೇಂಟ್ಸ್ ಅಂಡ್ ವಾರ್ನಿಷ್ ಲಿಮಿಟೆಡ್ (ಮೈಲ್ಯಾಕ್) ಅಧ್ಯಕ್ಷ ರಘು ಆರ್. ಕೌಟಿಲ್ಯ ಹಾಗೂ ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಮಿರ್ಲೆ ಶ್ರೀನಿವಾಸ ಗೌಡ ಇಂದು ಅಧಿಕಾರ ವಹಿಸಿಕೊಂಡರು.

ಮೈಸೂರಿನ ತಿಲಕ್‌ನಗರದಲ್ಲಿರುವ ಮೈಸೂರು ಪೇಂಟ್ಸ್ ಅಂಡ್ ವಾರ್ನಿಷ್ ಲಿಮಿಟೆಡ್ ಕಚೇರಿಯಲ್ಲಿ ದಾಖಲಾತಿಗೆ ಸಹಿ ಮಾಡುವ ಮೂಲಕ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ರಘು ಕೌಟಿಲ್ಯ, ಮಹಾರಾಜ ನಾಲ್ವಡಿ ಕೃಷ್ಣರಾಜ ಒಡೆಯರ್ ಸ್ಥಾಪಿಸಿದ, 75 ವರ್ಷಗಳ ಚಾರಿತ್ರಿಕ ಹಿನ್ನೆಲೆ ಹೊಂದಿರುವ ಮೈಲ್ಯಾಕ್ ಸಂಸ್ಥೆ ವಿಶ್ವದ ಹಲವು ರಾಷ್ಟ್ರಗಳಿಗೆ ಪ್ರಜಾಪ್ರಭುತ್ವ ವ್ಯವಸ್ಥೆಯಡಿ ನಡೆಯುವ ಚುನಾವಣೆಗಳಿಗೆ ಅಳಿಸಲಾಗದ ಶಾಹಿ ಪೂರೈಸುತ್ತಿರುವುದು ಹೆಮ್ಮೆ ಎನಿಸಿದೆ ಎಂದರು.

ಸ್ವಾತಂತ್ರ್ಯದ ಅಮೃತ ಮಹೋತ್ಸವ ಸಂದರ್ಭ 75 ವರ್ಷಗಳ ಇತಿಹಾಸ ಹೊಂದಿರುವ ಮೈಸೂರಿನ ಪ್ರತಿಷ್ಠಿತ ಸಂಸ್ಥೆಯ ಮುಖ್ಯಸ್ಥನಾಗಿರುವುದಕ್ಕೆ ಸಂತಸವೆನಿಸಿದೆ. ಉತ್ಪನ್ನ–ವ್ಯಾಪಾರ– ಉದ್ಯೋಗ ಕೇಂದ್ರವಾಗಿರುವ ಸಂಸ್ಥೆಯನ್ನು ಪ್ರಧಾನಿ ನರೇಂದ್ರ ಮೋದಿ ಅವರ 'ಸ್ವಾವಲಂಬನೆ ಭಾರತ' ಮತ್ತು 'ಮೇಕ್ ಇನ್ ಇಂಡಿಯಾ' ಕಲ್ಪನೆ ಸಾಕಾರಗೊಳಿಸಲು ಆದ್ಯತೆ ನೀಡುವುದಾಗಿ ತಿಳಿಸಿದರು. ಮೈಲ್ಯಾಕ್ ಉತ್ಪಾದಿಸುತ್ತಿರುವ ಬಣ್ಣ ಮತ್ತು ಅರಗು ಉತ್ಪನ್ನಕ್ಕೆ ಬೇಡಿಕೆ ಕಡಿಮೆಯಾಗದಂತೆ ನೋಡಿಕೊಂಡು ಅತ್ಯಾಧುನಿಕ ತಂತ್ರಜ್ಞಾನ ಬಳಸಿ ಅಭಿವೃದ್ಧಿಗೊಳಿಸುವ ಜೊತೆಗೆ ಜಾಗತಿಕ ಮಟ್ಟದಲ್ಲಿ ಬೇಡಿಕೆ ಬರುವಂತೆ ಮಾಡಿ ಮಾರುಕಟ್ಟೆ ವಿಸ್ತರಿಸಲು ಪ್ರಯತ್ನಿಸುತ್ತೇನೆ ಎಂದ ರಘು, ಡೊಮೆಸ್ಟಿಕ್ ಬಣ್ಣ ತಯಾರಿಸುವುದಲ್ಲದೆ, ಬಣ್ಣ ಆಧಾರಿತ ಅಲಂಕಾರಿಕ ವಸ್ತು ತಯಾರಿಸುವತ್ತ ಗಮನ ಹರಿಸುವುದಾಗಿಯೂ ನುಡಿದರು.

ತಮ್ಮನ್ನು ಮೈಲ್ಯಾಕ್ ಅಧ್ಯಕ್ಷರಾಗಿ ನೇಮಕ ಮಾಡಿದ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಸಹಕರಿಸಿದ ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ ನಳೀನ್ ಕುಮಾರ್ ಕಟೀಲ್ ಸೇರಿದಂತೆ ಪಕ್ಷದ ಎಲ್ಲಾ ಮುಖಂಡರಿಗೂ ಕೃತಜ್ಞತೆ ಸಲ್ಲಿಸುತ್ತೇನೆ ಎಂದು ಅವರು ಇದೇ ಸಂದರ್ಭ ತಿಳಿಸಿದರು. ಮೈಲ್ಯಾಕ್ ವ್ಯವಸ್ಥಾಪಕ ನಿರ್ದೇಶಕ ಜಿ. ಕುಮಾರಸ್ವಾಮಿ, ಪ್ರಧಾನ ವ್ಯವಸ್ಥಾಪಕ ಹರಕುಮಾರ್, ಮಾರುಕಟ್ಟೆ ವ್ಯವಸ್ಥಾಪಕ ಅಪ್ಪಣ್ಣ, ರಘು ಅವರ ಪುತ್ರ ಕೌಟಿಲ್ಯ, ಪುತ್ರಿ ವರ್ಣಿಕ ಸೇರಿದಂತೆ ಹಲವರು ಈ ಸಂದರ್ಭ ಉಪಸ್ಥಿತರಿದ್ದರು.

ಶ್ರೀನಿವಾಸಗೌಡ: ಮೈಸೂರಿನ ದೊಡ್ಡಕೆರೆ ಮೈದಾನದಲ್ಲಿರುವ ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಕಚೇರಿಯಲ್ಲಿ ಮಿರ್ಲೆ ಶ್ರೀನಿವಾಸಗೌಡ ಅವರು ಇಂದು ಬೆಳಗ್ಗೆ ಪ್ರಾಧಿಕಾರದ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದರು. ಸಿಇಓ ರುದ್ರೇಶ್, ಮೇಯರ್ ಸುನಂದ ಪಾಲನೇತ್ರ, ಬಿಜೆಪಿ ನಗರಾಧ್ಯಕ್ಷ ಶ್ರೀವತ್ಸ, ಜಿಲ್ಲಾಧ್ಯಕ್ಷೆ ಮಂಗಳಾ ಸೋಮಶೇಖರ್, ಮುಖಂಡರಾದ ವೈ.ವಿ.ರವಿಶಂಕರ್, ಎಂ.ಎಸ್.ವಿಶ್ವನಾಥ್ ಸೇರಿದಂತೆ ಹಲವರು ಈ ವೇಳೆ ಉಪಸ್ಥಿತರಿದ್ದರು.

ನಂತರ ಸುದ್ದಿಗಾರರಿಗೆ ಪ್ರತಿಕ್ರಿಯೆ ನೀಡಿದ ಶ್ರೀನಿವಾಸಗೌಡ, ಈಗಾಗಲೇ 2022ರ ದಸರಾ ಮಹೋತ್ಸವದ ಕೆಲಸಗಳು ಆರಂಭವಾಗಿದ್ದು, 15 ದಿನ ಮುಂಚಿತವಾಗಿಯೇ ಈ ಬಾರಿ ಶೇ. 100 ರಷ್ಟು ಮಳಿಗೆಗಳನ್ನು ಅಣಿಗೊಳಿಸಲು ನಿರ್ಧರಿಸಿರುವುದಾಗಿ ನುಡಿದರು. ಸುಮಾರು 80 ಎಕರೆ ಪ್ರದೇಶವಿರುವ ವಸ್ತುಪ್ರದರ್ಶನ ಮೈದಾನದಲ್ಲಿ ವರ್ಷವಿಡೀ ವಸ್ತುಪ್ರದರ್ಶನ ನಡೆಸುವ ಬಗ್ಗೆ ಈ ಹಿಂದಿನ ಅಧ್ಯಕ್ಷರು ಯೋಜನೆ ರೂಪಿಸಿ ಪ್ರವಾಸೋದ್ಯಮ ಸಚಿವರು, ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿದ್ದಾರೆ. ತಾವು ಪ್ರಕ್ರಿಯೆಯನ್ನು ಮುಂದುವರೆಸಿ ಯೋಜನೆಯನ್ನು ಅನುಷ್ಠಾನಗೊಳಿಸುವ ಮೂಲಕ ಸಮಗ್ರ ಅಭಿವೃದ್ಧಿಗೆ ಶ್ರಮಿಸುವುದಾಗಿ ನುಡಿದರು.

ಮೈಸೂರು ವಿಭಾಗಕ್ಕೆ 2021–22ನೇ ಸಾಲಿನಲ್ಲಿ ಹತ್ತು ಪಟ್ಟು ಆಹಾರ ಧಾನ್ಯ ಪೂರೈಕೆ

● ಭಾರತದ ಆಹಾರ ನಿಗಮದ ವಿಭಾಗೀಯ ವ್ಯವಸ್ಥಾಪಕ ಉದಯ್‌ಸಿಂಗ್ ಮಾಹಿತಿ ● ಪ್ರತಿ ತಿಂಗಳು 40 ಸಾವಿರ ಮೆಟ್ರಿಕ್ ಟನ್ ಆಹಾರ ಧಾನ್ಯ ಪೂರೈಕೆ



ಮೈಸೂರು, ಜು.29(ಜಿಎ)– ಭಾರತ ಆಹಾರ ನಿಗಮ ಮೈಸೂರು ವಿಭಾಗದ ಐದು ಜಿಲ್ಲೆಗಳಿಗೆ ಪ್ರಧಾನಮಂತ್ರಿ ಗರೀಬ್ ಕಲ್ಯಾಣ್ ಅನ್ನ ಯೋಜನೆಯಡಿ(ಪಿಎಂಜಿಕೆಎವೈ) ದುರ್ಬಲ ವರ್ಗದವರಿಗೆ 2021–22ರ ಸಾಲಿನಲ್ಲಿ ಹತ್ತು ಪಟ್ಟು ಹೆಚ್ಚಾಗಿ ಆಹಾರಧಾನ್ಯ ವಿತರಿಸಲಾಗಿದೆ ಎಂದು ಭಾರತ ಆಹಾರ ನಿಗಮದ ವಿಭಾಗೀಯ ವ್ಯವಸ್ಥಾಪಕ ಉದಯ್‌ಸಿಂಗ್ ರಾವತ್ ತಿಳಿಸಿದರು.

ಭಾರತ ಆಹಾರ ನಿಗಮದ ಮೈಸೂರು ವಿಭಾಗಿಯ ಕಚೇರಿಯಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾಮಾನ್ಯವಾಗಿ ನಿಗಮದ ವತಿಯಿಂದ ಮೈಸೂರು ವಿಭಾಗದ ಐದು ಜಿಲ್ಲೆಗೆ ನಾನಾ ಯೋಜನೆಗಳಡಿ ಪ್ರತೀ ತಿಂಗಳು 40,000 ಮೆಟ್ರಿಕ್ ಟನ್ ಆಹಾರ ಧಾನ್ಯ(ಗೋಧಿ, ಅಕ್ಕಿ) ವಿತರಿಸ ಲಾಗುತ್ತದೆ. ಆದರೆ ಕೋವಿಡ್ ಸಂದರ್ಭದಲ್ಲಿ ಕೇಂದ್ರ ಸರಕಾರ ಜಾರಿಗೆ ತಂದ ಪ್ರಧಾನ ಮಂತ್ರಿ ಗರೀಬ್ ಕಲ್ಯಾಣ್ ಅನ್ನ ಯೋಜನೆಯಡಿ (ಪಿಎಂಜಿಕೆಎವೈ) 2020–21ನೇ ಸಾಲಿನಲ್ಲಿ 2,92,615 ಮೆಟ್ರಿಕ್ ಟನ್, 2021–22ರಲ್ಲಿ 4,11,164 ಮೆಟ್ರಿಕ್ ಟನ್ ಆಹಾರಧಾನ್ಯವನ್ನು 458 ಕೋಟಿ ರೂ. ಸಬ್ಸಿಡಿ ಮೂಲಕ ಮೈಸೂರು ವಿಭಾಗದ ಚಾಮರಾಜನಗರ, ಮಂಡ್ಯ, ತುಮಕೂರು, ಕೊಡಗು, ಮೈಸೂರು ಜಿಲ್ಲೆಗಳಿಗೆ ವಿತರಿಸಲಾಗಿದೆ. ಈ ಮೂಲಕ ಸಮಾಜದ ದುರ್ಬಲ ವರ್ಗಕ್ಕೆ ಉಚಿತವಾಗಿ ಆಹಾರಧಾನ್ಯ ನೀಡುವ ಈ ಕಾರ್ಯಕ್ಕೆ ನಿಗಮ ಒತ್ತಾಸೆಯಾಗಿದೆ ಎಂದು ಮಾಹಿತಿ ನೀಡಿದರು.

ರೈತರಿಗೆ ಕನಿಷ್ಠ ಬೆಂಬಲ ಬೆಲೆ ಖಚಿತಪಡಿಸುವುದು, ಮುಕ್ತ ಮಾರುಕಟ್ಟೆ ದರ ಸ್ಥಿರಗೊಳಿಸುವುದು, ದುರ್ಬಲ ವರ್ಗಗಳಿಗೆ ಆಹಾರ ಧಾನ್ಯಗಳನ್ನು ವಿತರಿಸುವುದು ಮತ್ತು ತುರ್ತು ಪರಿಸ್ಥಿತಿಯ ಸಂದರ್ಭದಲ್ಲಿ ಬಳಕೆ ಮಾಡಲು ಅಗತ್ಯವಾದ ಆಹಾರಧಾನ್ಯವನ್ನು ಸಂಗ್ರಹಿಸುವುದು ನಿಗಮದ ಪ್ರಮುಖ ಕಾರ್ಯವಾಗಿದೆ. ಕೊರೊನಾ ಸಂದರ್ಭದಲ್ಲಿ ಮೈಸೂರಿನಿಂದಲೇ ವಿಭಾಗದ ಎಲ್ಲಾ ಜಿಲ್ಲೆಗಳಿಗೆ ಪಡಿತರ ಅಕ್ಕಿ ಪೂರೈಸಲಾಯಿತು ಎಂದರು. ಅಪೌಷ್ಟಿಕತೆಯಿಂದ ಬಳಲುವ ಜನರನ್ನು ಗಮನದಲ್ಲಿಟ್ಟುಕೊಂಡು ಈ ಸಮಸ್ಯೆ ಹೆಚ್ಚಾಗಿರುವ ಜಿಲ್ಲೆಗಳಿಗೆ ಮಧ್ಯಾಹ್ನದ ಬಿಸಿಯೂಟದಲ್ಲಿ ಮಕ್ಕಳಿಗೆ ವಿತರಿಸಲು ಹಾಗೂ ಮಹಿಳೆಯರಿಗೆ ಪೌಷ್ಟಿಕಾಂಶವುಳ್ಳ ಆಹಾರ ವಿತರಣೆ ಕಾರ್ಯಕ್ರಮದಡಿ ಪೌಷ್ಟಿಕಾಂಶಯುಕ್ತ ಅಕ್ಕಿಯನ್ನು ವಿತರಿಸಲಾಗುತ್ತಿದೆ ಎಂದರು.

ಮೈಸೂರಿನ ವಿಭಾಗಕ್ಕೆ ಪ್ರತಿ ತಿಂಗಳು 75 ಸಾವಿರ ಮೆಟ್ರಿಕ್ ಟನ್ ಆಹಾರ ಧಾನ್ಯವನ್ನು ಉತ್ತರ ಭಾರತದಿಂದ ಸ್ವೀಕರಿಸಲಾಗುತ್ತಿದೆ. ಆಹಾರ ಧಾನ್ಯಗಳನ್ನು ಹೆಚ್ಚುವರಿ ರಾಜ್ಯಗಳಿಂದ ರೈಲಿನ ಮೂಲಕ ಪಡೆಯಲಾಗುತ್ತಿದ್ದು, ರೈಲ್ವೇ ಗೂಡ್ಸ್ ಶೇಡ್‌ನಿಂದ ಉಗ್ರಾಣಕ್ಕೆ ಸ್ಥಳಾಂತರಿಸಲಾಗುತ್ತಿದೆ. ಉಗ್ರಾಣಕ್ಕೆ ಬಂದ ನಂತರ ಇಲ್ಲಿ ಆಹಾರ ಧಾನ್ಯಗಳು ಹಾಳಾಗದಂತೆ ಮತ್ತು ಇಲಿಗಳು ತಿನ್ನದಂತೆ ಸಂರಕ್ಷಣೆ ಮಾಡಲಾಗುತ್ತದೆ. ನೀರು ಆಹಾರ ಧಾನ್ಯಕ್ಕೆ ಸೇರದಂತೆ ದೊಡ್ಡ ಟಾರ್ಪಲಿನ್ ಮೂಲಕ ಮುಚ್ಚಿ ಸಂರಕ್ಷಿಸಲಾಗುತ್ತದೆ. ಇದರೊಟ್ಟಿಗೆ 15 ದಿನಕ್ಕೊಮ್ಮೆ ಪರೀಕ್ಷೆ ಮಾಡಲಾಗುತ್ತದೆ ಎಂದರು.

ದೇಶದಾದ್ಯಂತ ಆಜಾದಿ ಕಾ ಅಮೃತ ಮಹೋತ್ಸವ ಅಂಗವಾಗಿ ಭಾರತ ಆಹಾರ ನಿಗಮ ವತಿಯಿಂದ ಅನೇಕ ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಶಾಲೆಗಳಿಗೆ ಭೇಟಿ ನೀಡಿ ಮಕ್ಕಳಿಗೂ ಆಹಾರ ನಿಗಮದಿಂದ ಹೇಗೆ ಆಹಾರ ಧಾನ್ಯಗಳನ್ನು ಸಂರಕ್ಷಣೆ ಮಾಡಲಾಗುತ್ತಿದೆ ಎಂಬುದರ ಬಗ್ಗೆ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ಡಿಜಿಟಲ್ ಇಂಡಿಯಾದ ಯೋಜನೆಯಾಗಿ ಮತ್ತು ಪಾರದರ್ಶಕ ರೀತಿ ವ್ಯವಹರಿಸಲು ಡೀಪೋಗಳಲ್ಲಿ ಎಲ್ಲಾ ಕಾರ್ಯಾಚರಣೆಗಳನ್ನು ಆನ್‌ಲೈನ್ ಸಿಸ್ಟಮ್ ಮೂಲಕ ನಡೆಸಲಾಗುತ್ತಿದೆ ಎಂದು ತಿಳಿಸಿದರು.


ಸದ್ದಿಲ್ಲದೆ ಹೆಚ್ಚಳವಾಗುತ್ತಿದೆ ಕೊರೊನಾ ಸೋಂಕಿನ ಸಂಖ್ಯೆ

ಮೈಸೂರು, ಜು.29(ಎಸ್‌ಬಿಡಿ)– ಕೊರೊನಾ ಸೋಂಕಿನ ಬಗ್ಗೆ ಜನ ಮೈಮರೆತಿರುವ ನಡುವೆಯೇ ರಾಜ್ಯದಲ್ಲಿ ದಿನೇ ದಿನೆ ಪಾಸಿಟಿವ್ ಪ್ರಕರಣಗಳ ಸಂಖ್ಯೆಯಲ್ಲಿ ಹೆಚ್ಚಳವಾಗುತ್ತಿದೆ.

ಮೈಸೂರು ಜಿಲ್ಲೆಯಲ್ಲಿ ಶುಕ್ರವಾರ 51 ಜನರಲ್ಲಿ ಕೊರೊನಾ ಸೋಂಕು ದೃಢಪಟ್ಟಿದ್ದು, 35 ಮಂದಿ ಚಿಕಿತ್ಸೆಯಿಂದ ಗುಣಮುಖರಾಗಿ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿದ್ದಾರೆ. ಸಕ್ರಿಯ ಪ್ರಕರಣಗಳ ಸಂಖ್ಯೆ 202ಕ್ಕೆ ಏರಿಕೆಯಾಗಿದ್ದು ಸದ್ಯ ಸಾವು ಪ್ರಕರಣ ವರದಿಯಾಗಿಲ್ಲ. ಇದರೊಂದಿಗೆ ಜಿಲ್ಲೆಯ ಒಟ್ಟು ಪಾಸಿಟಿವ್ ಪ್ರಕರಣ 2,30,367, ಗುಣಮುಖರಾದವರ ಸಂಖ್ಯೆ 2,27,605 ಹಾಗೂ ಸಾವಿನ ಸಂಖ್ಯೆ 2,560 ದಾಖಲಾಗಿದೆ

ರಾಜ್ಯದಲ್ಲಿ 2 ಸಾವಿರ: ಬೆಂಗಳೂರು ನಗರ 1,615, ಧಾರವಾಡ 70, ಮೈಸೂರು 51, ಕೊಡಗು 47, ತುಮಕೂರು 41, ಹಾಸನ 40, ಬೆಳಗಾವಿ 34, ಕಲಬುರಗಿ 33, ಬಳ್ಳಾರಿ 27, ಮಂಡ್ಯ 22, ದಕ್ಷಿಣ ಕನ್ನಡ 20, ಕೋಲಾರ 18, ಬಾಗಲಕೋಟೆ ಹಾಗೂ ಚಿಕ್ಕಬಳ್ಳಾಪುರದಲ್ಲಿ ತಲಾ 15, ಬೀದರ್ 13, ಶಿವಮೊಗ್ಗ 12, ಹಾವೇರಿ 8, ಚಾಮರಾಜನಗರ ಹಾಗೂ ಉಡುಪಿಯಲ್ಲಿ ತಲಾ 7, ದಾವಣಗೆರೆ, ಬೆಂಗಳೂರು ಗ್ರಾಮಾಂತರ, ಉತ್ತರಕನ್ನಡ ಹಾಗೂ ರಾಯಚೂರು ಜಿಲ್ಲೆಯಲ್ಲಿ ತಲಾ 6, ಕೊಪ್ಪಳ ಹಾಗೂ ರಾಮನಗರದಲ್ಲಿ ತಲಾ 3, ವಿಜಯಪುರ 2, ಚಿಕ್ಕಮಗಳೂರು, ಚಿತ್ರದುರ್ಗ ಹಾಗೂ ಗದಗದಲ್ಲಿ ತಲಾ 1 ಸೇರಿದಂತೆ ರಾಜ್ಯದಲ್ಲಿಂದು 2,130 ಕೊರೊನಾ ಪಾಸಿಟಿವ್ ಪ್ರಕರಣ ವರದಿಯಾಗಿದ್ದು, ಯಾದಗಿರಿ ಜಿಲ್ಲೆಯಲ್ಲಿ ಮಾತ್ರ ಒಂದೂ ಪ್ರಕರಣ ಪ್ರಕಟವಾಗಿಲ್ಲ. ಚಿಕಿತ್ಸೆ ಫಲಕಾರಿಯಾಗದೆ ರಾಜ್ಯದಲ್ಲಿ ನಾಲ್ವರು ಸಾವನ್ನಪ್ಪಿದ್ದು, 1,395 ಮಂದಿ ಗುಣಮುಖರಾಗಿದ್ದಾರೆ. ಸದ್ಯ 9,866 ಜನರಲ್ಲಿ ಸೋಂಕು ಸಕ್ರಿಯವಾಗಿದೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

30.07.2022 ಶನಿವಾರ, ಮಳೆ ನಕ್ಷತ್ರ : ಪುಷ್ಯ, 20.07.2022 ರಿಂದ 02.08.2022
ಶ್ರೀ ಶುಭಕೃತುನಾಮ ಸಂವತ್ಸರ, ದಕ್ಷಿಣಾಯನ, ಗ್ರೀಷ್ಮ ಋತು, ಶ್ರಾವಣ ಮಾಸ, ಶುಕ್ಲ ಪಕ್ಷ
ತಿಥಿ: ದ್ವಿತೀಯ, ನಕ್ಷತ್ರ : ಆಶ್ಲೇಷ, ರಾಹುಕಾಲ: ಬೆಳಗ್ಗೆ 9 ರಿಂದ 10.30ರವರೆಗೆ

■ **ಜೆಎಸ್‌ಎಸ್ ಪ್ರೌಢಶಾಲೆ, ಹಿರಣ್ಮಯಿ ಪ್ರತಿಷ್ಠಾನ ಮತ್ತು ಕಾವೇರಿ ಬಳಗ :** ಪ್ರತಿಭಾ ಪುರಸ್ಕಾರ, ಅಧ್ಯಕ್ಷತೆ : ಮುಖ್ಯ ಶಿಕ್ಷಕ ಎಚ್.ಎಂ. ನಾಗರಾಜಪ್ಪ, ಅಭಿನಂದನಾ ಭಾಷಣ : ಸಾಹಿತಿ ಬನ್ನೂರು ಕೆ. ರಾಜು, ಮುಖ್ಯ ಅತಿಥಿಗಳು : ಪ್ರೊ. ಸಿದ್ದರಾಮು, ಕೆರೋಡಿ ಎಂ. ಲೋಲಾಕ್ಷಿ, ಪ್ರಾಸ್ತಾವಿಕ ನುಡಿ : ಹಿರಿಯ ಶಿಕ್ಷಕಿ ಎಂ.ಎಸ್. ಮಂಗಳ, ಸ್ಥಳ: ಜೆಎಸ್‌ಎಸ್ ಪ್ರೌಢಶಾಲೆ, ಜೆಎಸ್‌ಎಸ್ ಬಡಾವಣೆ, ಬೆಳಗ್ಗೆ 10ಕ್ಕೆ.

■ **ನ್ಯಾಷನಲ್ ದಲಿತ್ ಮೂವ್‌ಮೆಂಟ್ ಫಾರ್ ಜಸ್ಟೀಸ್ :** ಪರಿಶಿಷ್ಟ ಜಾತಿ ಮತ್ತು ಪಂಗಡಗಳ ದೌರ್ಜನ್ಯ ತಡೆ ಕಾಯ್ದೆ ಮತ್ತು ಹಕ್ಕುಗಳ ಕುರಿತು ಸಂವಾದ ಕಾರ್ಯಕ್ರಮ, ಪ್ರಾಸ್ತಾವಿಕ ಭಾಷಣ : ಜಸ್ಟೀಸ್ ಎಲ್. ನಾರಾಯಣಸ್ವಾಮಿ, ಉಪಸ್ಥಿತರು: ಶಾಸಕ ಎನ್. ಮಹೇಶ್, ಸ್ಥಳ: ಐಡಿಯಲ್ ಜಾವಾ ರೋಟರಿ ಶಾಲೆ ಸಭಾಂಗಣ, ಬೆಳಗ್ಗೆ 10 ರಿಂದ.

■ **ಡಿಸೈನರ್ ಹಾಟ್ :** ವರಮಹಾಲಕ್ಷ್ಮಿ ಹಬ್ಬದ ಪ್ರಯುಕ್ತ ಲೈಫ್ ಸ್ಟೈಲ್ ಎಕ್ಸಿಬಿಷನ್, ಸ್ಥಳ: ಸದರನ್ ಸ್ಟಾರ್ ಹೋಟೆಲ್, ವಿನೋಬ ರಸ್ತೆ, ಬೆಳಗ್ಗೆ 10.30 ರಿಂದ

■ **ಎಂಎಂಕೆ ಮತ್ತು ಎಸ್‌ಡಿಎಂ ಮಹಿಳಾ ಮಹಾವಿದ್ಯಾಲಯ :** ರಿಯಲ್ ಅನಾಲಿಸಿಸ್ ಕುರಿತು ಕಾರ್ಯಾಗಾರ, ಸಂಪನ್ಮೂಲ ವ್ಯಕ್ತಿಗಳು : ಡಾ. ಪ್ರದೀಪ್ ಜಿ. ಸಿದ್ದೇಶ್ವರ್, ಡಾ. ರುಬಿ ಸಲೆಸ್ಟಿನಾ, ಡಾ. ಸಿ. ಕಾಂಚನ, ಸ್ಥಳ: ಕಾಲೇಜು ಸಭಾಂಗಣ, ಬೆಳಗ್ಗೆ 10.30 ರಿಂದ.

■ **ಶ್ರೀ ನಾದಬ್ರಹ್ಮ ಸಂಗೀತ ಸಭಾ :** ಶ್ರೀಮತಿ ಭಾಗೀರಥಿ ಮತ್ತು ಕುಸ್ನೂರು ಕೃಷ್ಣಮೂರ್ತಿ ನೆನಪಿನ ಕಾರ್ಯಕ್ರಮ, ವಿದ್ವಾನ್ ಪಾಲಕ್ಕಡ್ ರಾಮಪ್ರಸಾದ್ ಅವರಿಂದ ಕರ್ನಾಟಕ ಶಾಸ್ತ್ರೀಯ ಗಾಯನ, ವಿದ್ವಾನ್ ಡಾ. ನಿಶಾಂತ್‌ಚಂದ್ರನ್ –ಪಿಟೀಲು, ವಿದ್ವಾನ್ ಕೆ.ಯು. ಜಯಚಂದ್ರರಾವ್–ಮೃದಂಗ, ವಿದ್ವಾನ್ ಜಿ. ಗುರುಪ್ರಸನ್ನ–ಖಂಜಿರ, ಸ್ಥಳ: ಶ್ರೀ ವಾಸುದೇವಾಚಾರ್ಯ ಭವನ, ಜೆಎಲ್‌ಬಿ ರಸ್ತೆ, ಸಂಜೆ 5.30ಕ್ಕೆ.

■ **ಮೈಸೂರು ಯೂನಿವರ್ಸಿಟಿ ಸ್ಕೂಲ್ ಆಫ್ ಇಂಜಿನಿಯರಿಂಗ್ :** ಅಮ್ಯೂಸ್–2022 ಸಮಾರೋಪ ಸಮಾರಂಭ, ಅಧ್ಯಕ್ಷತೆ : ಮೈಸೂರು ವಿವಿ ಕುಲಪತಿ ಪ್ರೊ. ಜಿ. ಹೇಮಂತಕುಮಾರ್, ಗೌರವ ಅತಿಥಿಗಳು : ಮೈಸೂರು ವಿವಿ ವಿಶೇಷ ಅಧಿಕಾರಿ ಡಾ. ಹೆಚ್.ಕೆ. ಚೇತನ್, ಸ್ಥಳ: ಮೈಸೂರು ಯೂನಿವರ್ಸಿಟಿ ಸ್ಕೂಲ್ ಆಫ್ ಇಂಜಿನಿಯರಿಂಗ್, ಮಾನಸಗಂಗೋತ್ರಿ, ಸಂಜೆ 5.30ಕ್ಕೆ.

■ **ಶ್ರೀರಾಮಕೃಷ್ಣ ಆಶ್ರಮ :** ಸ್ವಾಮಿ ಇಷ್ಟನಾಥಾನಂದ ಅವರಿಂದ ಆತ್ಮಬೋಧ ಕುರಿತು ಉಪನ್ಯಾಸ, ಸ್ಥಳ: ಆಶ್ರಮದ ಸ್ವಾಮಿ ಶಾಂಭವಾನಂದಜಿ ಸಭಾಂಗಣ, ಯಾದವಗಿರಿ, ಸಂಜೆ 6ಕ್ಕೆ.

■ **ಗಾನಭಾರತೀ :** ವೈಣಿಕ ಶಿಖಾಮಣಿ ವೀಣೆ ಶೇಷಣ್ಣನವರ ಜಯಂತಿ ದತ್ತಿ ಕಾರ್ಯಕ್ರಮ, ದ್ವಂದ್ವ ವೀಣಾ ವಾದನ, ವಿದುಷಿ ಆರ್.ಎಸ್. ಜಯಲಕ್ಷ್ಮಿ, ವಿದುಷಿ ಚಾರುಲತಾ ಚಂದ್ರಶೇಖರ್ ಅವರಿಂದ ವೀಣಾ ವಾದನ, ವಿದ್ವಾನ್ ಬಿ.ಎಸ್. ಪ್ರಶಾಂತ್–ಮೃದಂಗ, ವಿದ್ವಾನ್ ಎಸ್. ಮಂಜುನಾಥ್–ಘಟಂ, ಸ್ಥಳ: ವೀಣೆ ಶೇಷಣ್ಣ ಭವನ, ಆದಿಚುಂಚನಗಿರಿ ರಸ್ತೆ, ಕುವೆಂಪುನಗರ, ಸಂಜೆ 6ಕ್ಕೆ.

■ **ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ :** ಶಿವಾನುಭವ ದಾಸೋಹ ಮಾಲಿಕೆಯ 291ನೇ ಕಾರ್ಯಕ್ರಮ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮೀಜಿ, ಮಂಗಳೂರು ಶ್ರೀನಿವಾಸ ವಿಶ್ವವಿದ್ಯಾನಿಲಯದ ಸಂಶೋಧನಾ ಮಾರ್ಗದರ್ಶಕ ಡಾ. ರಾಜಶೇಖರ ಜಮದಂಡಿ ಅವರಿಂದ ಶರಣೆ ಅಕ್ಕಮ್ಮನ ವಚನಗಳಲ್ಲಿ ವ್ರತಾಚರಣೆ ಕುರಿತು ಉಪನ್ಯಾಸ, ಅಧ್ಯಕ್ಷತೆ : ಮೈಸೂರು ವಿವಿ ವಿಶ್ರಾಂತ ಪ್ರಾಧ್ಯಾಪಕ ಡಾ. ಎಂ.ಜಿ. ಬಸವರಾಜ, ಸ್ಥಳ: ಜೆಎಸ್‌ಎಸ್ ವಿದ್ಯಾರ್ಥಿ ನಿಲಯ, ನಂಜುಮಳಿಗೆ, ಸಂಜೆ 6ಕ್ಕೆ.

■ **ಶ್ರೀ ಸುತ್ತೂರು ಮಠ, ಚಾಮುಂಡಿಬೆಟ್ಟದ ತಪ್ಪಲು :** ಶ್ರಾವಣಮಾಸ ಪೂಜಾನುಷ್ಠಾನ ಮತ್ತು ಪ್ರವಚನ, ವಿಶ್ರಾಂತ ಪ್ರಾಧ್ಯಾಪಕ ಡಾ. ಕೆ. ಅನಂತರಾಮು ಅವರಿಂದ ಭಾರತೀಯ ಸಂಸ್ಕೃತಿ ಕುರಿತು ಪ್ರವಚನ, ಸ್ಥಳ: ಶ್ರೀ ಸುತ್ತೂರು ಮಠ, ಚಾಮುಂಡಿಬೆಟ್ಟದ ತಪ್ಪಲು, ಸಂಜೆ 6.30ಕ್ಕೆ.

■ **ರಂಗಾಯಣ :** ಸುಬ್ಬಯ್ಯನಾಯ್ಡು ರಂಗ ಕಾರ್ಯಗಾರದ ಶಿಬಿರಾರ್ಥಿಗಳಿಂದ 'ಅಶ್ವಪರ್ವ' ನಾಟಕ ಪ್ರದರ್ಶನ, ರಚನೆ : ಎಸ್. ರಾಮನಾಥ್, ನಿರ್ದೇಶನ : ಕಾರ್ತಿಕ್ ಉಪಮನ್ಯು, ಸ್ಥಳ: ಭೂಮಿಗೀತ, ಸಂಜೆ 6.30ಕ್ಕೆ

■ **ನಟನ ರಂಗಶಾಲೆ :** ನಟನ ರಂಗಶಾಲೆ ವಿದ್ಯಾರ್ಥಿಗಳಿಂದ ನಾಟಕಕಾರ ಬಿ. ಸುರೇಶ ಅವರ 'ಅಡುಗೆ ಮನೆಯಲ್ಲೊಂದು ಹುಲಿ' ನಾಟಕ ಪ್ರದರ್ಶನ, ನಿರ್ದೇಶನ : ಮೇಘ ಸಮೀರ, ಸ್ಥಳ: ನಟನ ರಂಗಶಾಲೆ, ರಾಮಕೃಷ್ಣನಗರ, ಸಂಜೆ 6.30ಕ್ಕೆ.


ಸುತ್ತೂರಿನಲ್ಲಿಂದು

■ **ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ :** ಶ್ರಾವಣಮಾಸ ಪೂಜಾನುಷ್ಠಾನ ಮತ್ತು ಪ್ರವಚನ, ಸುರಂಗ ಕವಿಕೃತ ತ್ರಿಷಷ್ಠಿ ಪುರಾತನ ಚಾರಿತ್ರಂ ಕಾವ್ಯವಾಚನ ಮತ್ತು ಪ್ರವಚನ, ಪ್ರವಚನ : ಪ್ರಾಧ್ಯಾಪಕ ಪ್ರೊ. ಹೆಚ್.ಬಿ. ದೇವಣ್ಣ, ವಾಚನ : ಡಿ.ಎಂ. ಸಿದ್ದಲಿಂಗಸ್ವಾಮಿ, ಸ್ಥಳ: ಸುತ್ತೂರು, ಸಂಜೆ 7 ರಿಂದ.

ಪಿರಿಯಾಪಟ್ಟಣದಲ್ಲಿಂದು

■ **ಪಿರಿಯಾಪಟ್ಟಣ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘ :** ಪತ್ರಿಕಾ ದಿನಾಚರಣೆ–2022, ಉದ್ಘಾಟನೆ: ಶಾಸಕ ಕೆ. ಮಹದೇವ್, ಅಧ್ಯಕ್ಷತೆ: ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಬಿ.ಎಸ್. ಸತೀಶ್ ಆರಾಧ್ಯ, ಸನ್ಮಾನ, ಬಹುಮಾನ ವಿತರಣೆ, ನೆನಪಿನ ಕಾಣಿಕೆ ವಿತರಣೆ ಕಾರ್ಯಕ್ರಮ, ಸ್ಥಳ: ತಾಲೂಕು ಪಂಚಾಯಿತಿ ಸಭಾಂಗಣ, ಪಿರಿಯಾಪಟ್ಟಣ, ಬೆಳಗ್ಗೆ 11 ಗಂಟೆಗೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.05 ಚಿಂತನ, 6.20ಗೀತಾರಾಧನ, 6.35 ಭವದ ಬಯಲಿಗರು–ರಚನೆ ಮತ್ತು ಪ್ರಸ್ತುತಿ– ಮೈಸೂರು ಉಮೇಶ್, 6.40 ಹಾಡು ಹೇಳಿದ ಕಥೆ, ರಚನೆ– ಡಾ.ಡಿ.ಸತೀಶ್ಚಂದ್ರ, ಪ್ರಸ್ತುತಿ– ಮೈಸೂರು ಉಮೇಶ್, 6.50 ರೈತರಿಗೆ ಸಲಹೆ, 9.00 ರಾಗಲಹರಿ–ಕರ್ನಾಟಕ ಶಾಸ್ತ್ರೀಯ ಸಂಗೀತದ ರಾಗಗಳ ಚಿತ್ತಾರ, 9.30 ಭಾರತದ ಸ್ವಾತಂತ್ರ್ಯ ಅಮೃತ ಮಹೋತ್ಸವದ ಅಂಗವಾಗಿ ದೈನಂದಿನ ವಿಶೇಷ ಕಾರ್ಯಕ್ರಮ ಸರಣಿ "ಸ್ವಾತಂತ್ರ್ಯ ಚಳುವಳಿಯ ಪಯಣ– ಆಕಾಶವಾಣಿ ಯೊಂದಿಗೆ, 10.00 ಅನಯಂಪಟ್ಟಿ ಎಸ್. ಗಣೇಶನ್–ಜಲತರಂಗ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ

ಮಧ್ಯಾಹ್ನ: 12.30 ಎದೆ ತುಂಬಿದ ಹಾಡು, ಪರಿಕಲ್ಪನೆ ಮತ್ತು ಪ್ರಸ್ತುತಿ– ಬಸವರಾಜ್ ಸಾದರ್, 12.45 ಜನಪದಗೀತೆ–ತಂಬೂರಿ ಜವರಯ್ಯ ಮತ್ತು ಸಂಗಡಿಗರು, 1.20 ಭಾವಗೀತೆ–ಎಂ.ಎಸ್. ಲಕ್ಷ್ಮೀಶ, 3.35 ಮಕ್ಕಳ ಮಂಟಪ– ಮುಖಾಮುಖಿ, ನಂದಗೋಕುಲ, ಪ್ರಸ್ತುತಿ– ಕೆ.ಬಿ. ಮೀನಾ, 4.00 ನಾಟಕ "ಜಾತಕ ಫಲ", ರಚನೆ– ಬಿ.ಎಸ್.ಕೇಶವರಾವ್, ನಿರ್ಮಾಣ–ಉಮೇಶ್ ಎಸ್.ಎಸ್., 4.30 ನೆನಪಿನಂಗಳ, 6.50 ಕೃಷಿರಂಗ–ಕಿಸಾನ್‌ವಾಣಿ, ತೋರಣ ಹೂರಣ–ಸಾಪ್ತಾಹಿಕ ಸರಣಿ ಕಾರ್ಯಕ್ರಮ, 9.15 ರಾಷ್ಟ್ರೀಯ ಜಾಗೃತಿಗೆ ರಂಗಭೂಮಿ–ಮೈಸೂರು ರಂಗಾಯಣ ನಿರ್ದೇಶಕ ಅಡ್ಡಂಡ ಕಾರ್ಯಪ್ಪ ಅವರೊಡನೆ ಸಂದರ್ಶನ, ಸಂದರ್ಶಕರು–ದಿವಾಕರ ಹೆಗಡೆ, 9.30 ರಾಷ್ಟ್ರೀಯ ಸಂಗೀತ ಕಾರ್ಯಕ್ರಮ–ಪಂಡಿತ್ ಸಂಜೀವ್ ಅಭಯಂಕರ್ – ಗಾಯನ, 11.00 ಸವಿನೆನಪು

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜುಲೈ 30 ಶನಿವಾರ 2022

ಸಂಪುಟ: 43 | ಸಂಚಿಕೆ: 105 | ಪುಟಗಳು: 10

ದೂರವಾಣಿ: 2496520, 2496521, 2496526, 2496527, 2496528,
ಜಾಹೀರಾತು: 2496522, 2496523, ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774,
ಡಿ.ದೇವರಾಜ ಅರಸು ರಸ್ತೆ, Ph: 2428695

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com
website: www.mysurumithra.com

₹4

ರೋಹಿಣಿ ಸಿಂಧೂರಿ ವಿರುದ್ಧ ಆರೋಪ: ಇಂದು ವಿಚಾರಣೆ



ಮೈಸೂರು, ಜು.29(ಆರ್‌ಕೆ)–ಬಟ್ಟೆ ಬ್ಯಾಗ್ ಖರೀದಿಯಲ್ಲಿ ಅಪವ್ಯಯ, ನಿಯಮ ಉಲ್ಲಂಘಿಸಿ ಜಿಲ್ಲಾಧಿಕಾರಿ ಅಧಿಕೃತ ನಿವಾಸ ಜಲ ಸನ್ನಿಧಿ ಪಾರಂಪರಿಕ ಕಟ್ಟಡಕ್ಕೆ ನೆಲಹಾಸು ವೆಟ್ರಿಫೈಡ್ ಟೈಲ್ಸ್ ಅಳವಡಿಸಿದ್ದಾರೆಂಬ ಆರೋಪ ಎದುರಿಸುತ್ತಿರುವ ಮೈಸೂರು ಜಿಲ್ಲೆಯ ಹಿಂದಿನ ಜಿಲ್ಲಾಧಿಕಾರಿಗಳಾದ, ಹಾಲಿ ಧಾರ್ಮಿಕ ದತ್ತಿ ಇಲಾಖೆ ಆಯುಕ್ತೆ ರೋಹಿಣಿ ಸಿಂಧೂರಿ ಅವರ ವಿಚಾರಣೆ ನಾಳೆ(ಜು.30) ನಡೆಯಲಿದೆ.

ಆರೋಪ ಕುರಿತು ಪ್ರಾಥಮಿಕ ತನಿಖೆ ನಡೆಸುತ್ತಿರುವ ವಸತಿ ಇಲಾಖೆ ಕಾರ್ಯದರ್ಶಿ ಡಾ. ಜೆ.ರವಿಶಂಕರ್ ಅವರು, ಶನಿವಾರ ಬೆಳಗ್ಗೆ 11 ಗಂಟೆಗೆ ವಿಧಾನಸೌಧದ 2ನೇ ಮಹಡಿಯ 213ನೇ ಸಂಖ್ಯೆ ಕೊಠಡಿಯಲ್ಲಿ ನಡೆಯುವ ವಿಚಾರಣೆಗೆ ಹಾಜರಾಗಿ ಹೇಳಿಕೆ ಹಾಗೂ ಪೂರಕ ದಾಖಲಾತಿಗಳನ್ನು ನೀಡುವಂತೆ ಜುಲೈ 27ರಂದು ರೋಹಿಣಿ ಸಿಂಧೂರಿ ಅವರಿಗೆ ತಿಳುವಳಿಕೆ ಪತ್ರ ನೀಡಿದ್ದಾರೆ. ▸ 8ನೇ ಪುಟಕ್ಕೆ

ಇಂದು ಸಿಇಟಿ ಫಲಿತಾಂಶ

ಬೆಂಗಳೂರು: ನಾಳೆ (ಶನಿವಾರ) ಬೆಳಗ್ಗೆ 10 ಗಂಟೆಗೆ ಸಿಇಟಿ ಪರೀಕ್ಷಾ ಫಲಿತಾಂಶ ಪ್ರಕಟವಾಗಲಿದೆ. ಮಲ್ಲೇಶ್ವರಂ ಕೆಇಎ ಬೋರ್ಡ್‌ನಲ್ಲಿ ಉನ್ನತ ಶಿಕ್ಷಣ ಸಚಿವ ಡಾ.ಅಶ್ವಥ್ ನಾರಾಯಣ್ ಅವರು ಸುದ್ದಿಗೋಷ್ಠಿ ನಡೆಸಿ ಫಲಿತಾಂಶ ಪ್ರಕಟಿಸಲಿದ್ದಾರೆ. ಜೂನ್ 16 ರಿಂದ 18 ರವರೆಗೆ ರಾಜ್ಯದ ಒಟ್ಟು 486 ಕೇಂದ್ರಗಳಲ್ಲಿ ಪರೀಕ್ಷೆ ನಡೆಸಲಾಗಿತ್ತು. ಒಟ್ಟು 2,16,559 ವಿದ್ಯಾರ್ಥಿಗಳು ಸಿಇಟಿ ಪರೀಕ್ಷೆಗೆ ನೋಂದಣಿ ಮಾಡಿಸಿಕೊಂಡಿದ್ದರು. ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಅಧಿಕೃತ ವೆಬ್‌ಸೈಟ್ kea.kar.nic.in ಫಲಿತಾಂಶ ಪ್ರಕಟವಾಗಲಿದೆ. ವೆಬ್‌ಸೈಟ್‌ನ ಮುಖಪುಟದಲ್ಲಿ KCET ಫಲಿತಾಂಶ 2022 ಮೇಲೆ ಕ್ಲಿಕ್ ಮಾಡಿ, ಲಾಗ್ ಇನ್ ಮಾಡಲು ಅಗತ್ಯವಿರುವ ಎಲ್ಲಾ ದಾಖಲೆಗಳನ್ನು ನಮೂದಿಸಿ. ಆಗ ನಿಮ್ಮ KCET ಫಲಿತಾಂಶ ಸ್ಕ್ರೀನ್ ಮೇಲೆ ಕಾಣಿಸಿಕೊಳ್ಳುತ್ತವೆ. ನಂತರ ಅದನ್ನು ಡೌನ್‌ಲೋಡ್ ಮಾಡಿ ಕೊಂಡು, ಪ್ರಿಂಟ್‌ಔಟ್ ತೆಗೆದುಕೊಳ್ಳಬಹುದು.

ಮೈಸೂರು-ಬೆಂಗಳೂರು-ಚೆನ್ನೈ ಬುಲೆಟ್ ಟ್ರೈನ್

ಯೋಜನಾ ವರದಿಗೆ ಕೇಂದ್ರ ಹಸಿರು ನಿಶಾನೆ

- ರಾಜ್ಯದ ಮೊಟ್ಟ ಮೊದಲ ಬುಲೆಟ್ ಟ್ರೈನ್ ಯೋಜನೆ ಸಾಕಾರಗೊಳ್ಳುವ ಆಶಾಭಾವ
- 484 ಕಿಲೋ ಮೀಟರ್‌ನ ಈ ಯೋಜನೆಯಿಂದ ಮೈಸೂರು–ಚೆನ್ನೈ ಪ್ರಯಾಣ ಅವಧಿ ಕೇವಲ 3 ಗಂಟೆ
- ಮೂಲ ಸೌಕರ್ಯ ಸಚಿವ ವಿ.ಸೋಮಣ್ಣರಿಂದ ಮಾಹಿತಿ





ಈ ವರ್ಷ ಸದರಿ ಯೋಜನೆಗಳಿಗೆ ಐನೂರು ಕೋಟಿ ರೂಪಾಯಿಗಳನ್ನು ಮೀಸಲಿಟ್ಟಿದ್ದು ತ್ವರಿತಗತಿಯಲ್ಲಿ ಕಾಮಗಾರಿ ನಡೆಯುತ್ತಿದೆ. ತುಮಕೂರು–ದಾವಣಗೆರೆ ಮಾರ್ಗಕ್ಕೆ 1801 ಕೋಟಿ, ಶಿವಮೊಗ್ಗ–ಶಿಕಾರಿಪುರ–ರಾಣೇಬೆನ್ನೂರು ಮಾರ್ಗಕ್ಕೆ 1200 ಕೋಟಿ, ಬೇಲೂರು–ಹಾಸನ ಮಾರ್ಗಕ್ಕೆ 462 ಕೋಟಿ, ಧಾರವಾಡ–ಬೆಳಗಾವಿ ಮಾರ್ಗಕ್ಕೆ 927 ಕೋಟಿ ರೂ. ವೆಚ್ಚವಾಗಲಿದ್ದು ಯೋಜನೆಯ ಶೇ. 50ರಷ್ಟು ಹಣವನ್ನು ಕೇಂದ್ರ ಸರ್ಕಾರ, ಉಳಿದ ಹಣವನ್ನು ರಾಜ್ಯ ಸರ್ಕಾರ ಭರಿಸಲಿದೆ.

–ಸಚಿವ ವಿ.ಸೋಮಣ್ಣ

ಬೆಂಗಳೂರು, ಜು.29(ಕೆಎಂಶಿ)–ಮೈಸೂರು–ಬೆಂಗಳೂರು–ಚೆನ್ನೈ ನಡುವೆ ಸಂಚರಿಸಲಿರುವ ರಾಜ್ಯದ ಮೊಟ್ಟ ಮೊದಲ ಬುಲೆಟ್ ಟ್ರೈನ್ ಯೋಜನೆಗೆ ಸಮಗ್ರ ಯೋಜನಾ ವರದಿ ಸಿದ್ಧಪಡಿಸಲು ಕೇಂದ್ರ ಸರ್ಕಾರ ಹಸಿರು ನಿಶಾನೆ ತೋರಿದೆ.

ಅರಮನೆ ನಗರಿ–ಸಿಲಿಕಾನ್ ಸಿಟಿ–ಚೆನ್ನೈ ನಡುವಿನ 484 ಕಿಲೋ ಮೀಟರ್ ಅಂತರವನ್ನು ಕೇವಲ ಮೂರು ಗಂಟೆಗಳಲ್ಲಿ ಈ ರೈಲು ಕ್ರಮಿಸಲಿದೆ. ಈ ಯೋಜನೆಗೆ ಒಟ್ಟಾರೆ 1.15 ಲಕ್ಷ ಕೋಟಿ ತಗುಲಲಿದ್ದು, ಯೋಜನೆಗೆ ರಾಜ್ಯದಲ್ಲಿ ಅಗತ್ಯವಿರುವ ಭೂಮಿಯನ್ನು ಇಲ್ಲಿನ ಸರ್ಕಾರವೇ ಭರಿಸಲಿದೆ. ಸುದ್ದಿಗಾರರಿಗೆ ಈ ವಿಷಯ ತಿಳಿಸಿದ ಮೂಲ ಸೌಕರ್ಯ ಸಚಿವ ವಿ. ಸೋಮಣ್ಣ, ಮುಂಬೈ–ಅಹಮದಾಬಾದ್ ನಡುವಿನ ಬುಲೆಟ್ ಟ್ರೈನ್ ನಂತರ ಕರ್ನಾಟಕ ಮತ್ತು ತಮಿಳುನಾಡಿನ ಪ್ರಮುಖ ನಗರಗಳಿಗೆ ಸಂಪರ್ಕ ಕಲ್ಪಿಸಲು ಕೇಂದ್ರ ಸರ್ಕಾರ ಮುಂದಾಗಿದೆ ಎಂದರು.

ಈ ಯೋಜನೆಗೆ ಸಂಬಂಧಿಸಿದಂತೆ ಸಮಗ್ರ ಯೋಜನಾ ವರದಿ ನೀಡಲು ನ್ಯಾಷನಲ್ ಹೈಸ್ಪೀಡ್ ರೈಲ್ವೇ ಕಾರ್ಪೋರೇಷನ್‌ಗೆ ಕೇಂದ್ರ ಸರ್ಕಾರ ಆದೇಶ ನೀಡಿದೆ ಎಂದರು.

ಈ ಯೋಜನೆ ಜಾರಿಯಾದರೆ ಮೈಸೂರಿನಿಂದ ಬೆಂಗಳೂರಿಗೆ ನಲವತ್ತೈದು ನಿಮಿಷಗಳಲ್ಲಿ ಬರಬಹುದು. ಅದೇ ರೀತಿ ಬೆಂಗಳೂರಿನಿಂದ ಚೆನ್ನೈಗೆ ಎರಡು ಗಂಟೆಗಳ ಅವಧಿ ಸಾಕು ಎಂದರು. ಬೆಂಗಳೂರು–ಮೈಸೂರು ದಶಪಥ ರಸ್ತೆಗೆ ಹೊಂದಿಕೊಂಡಂತೆ ಬುಲೆಟ್ ಟ್ರೈನ್ ಸಂಚಾರಕ್ಕೆ ಮಾರ್ಗ ಒದಗಿಸಬಹುದು ಎಂಬುದೂ ಸೇರಿದಂತೆ ಯೋಜನೆಗೆ ಭೂಮಿ ಒದಗಿಸುವ ಸಂಬಂಧ ಒಂದೆರಡು ದಿನದಲ್ಲೇ ಉನ್ನತ ಮಟ್ಟದ ಸಭೆ ನಡೆಸಿ, ತೀರ್ಮಾನ ಕೈಗೊಳ್ಳಲಾಗುವುದು ಎಂದರು. ಈ ಯೋಜನೆ ಪೂರ್ಣ ಹಣವನ್ನು ಕೇಂದ್ರವೇ ▸ 8ನೇ ಪುಟಕ್ಕೆ

ಮುಂದಿನ ತಿಂಗಳು ಅಯೋಧ್ಯೆ ರಾಮ ಮಂದಿರದ ಪ್ಲಿಂತ್ ಪೂರ್ಣಗೊಳ್ಳಲಿದೆ



ಲಖನೌ: ಅಯೋಧ್ಯೆಯಲ್ಲಿ ನಿರ್ಮಾಣ ಹಂತದಲ್ಲಿರುವ ರಾಮಮಂದಿರದ ಪ್ಲಿಂತ್ (ಪಾಯ) ಆಗಸ್ಟ್‌ನಲ್ಲಿ ಪೂರ್ಣಗೊಳ್ಳಲಿದ್ದು, ಗರ್ಭಗುಡಿಯಲ್ಲಿ ಕೆತ್ತಿದ ಕಲ್ಲುಗಳಿಂದ ಮಾಡಲಾಗುತ್ತಿರುವ ಪರಿಕ್ರಮ ಪಥದ(ಪ್ರದಕ್ಷಿಣೆ ಪಥ) ಶೇಕಡಾ 30–40ರಷ್ಟು ಕೆಲಸಗಳು ಆಗಸ್ಟ್‌ನಲ್ಲಿ ಪೂರ್ಣಗೊಳ್ಳಲಿವೆ.

ದೇವಾಲಯದ ನಿರ್ಮಾಣ ಕಾರ್ಯದ ಬಗ್ಗೆ ವಿವರಗಳನ್ನು ಹಂಚಿಕೊಂಡ ದೇವಾಲಯ ಟ್ರಸ್ಟ್ ಪ್ರಧಾನ ಕಾರ್ಯದರ್ಶಿ ಚಂಪತ್ ರೈ ಅವರು, ಪ್ಲಿಂತ್ ನ ಮುಕ್ಕಾಲು ಭಾಗದಷ್ಟು ಕೆಲಸ ಪೂರ್ಣಗೊಂಡಿದೆ. ಪ್ಲಿಂತ್ ಕಾಮಗಾರಿ ಒಂದು ತಿಂಗಳಲ್ಲಿ ಪೂರ್ಣಗೊಳ್ಳಲಿದ್ದು, ಗರ್ಭಗುಡಿ ಕಾಮಗಾರಿಯೂ ತ್ವರಿತಗತಿಯಲ್ಲಿ ನಡೆಯುತ್ತಿದೆ ಎಂದಿದ್ದಾರೆ.

ಪಿಎಸ್‌ಐ ನೇಮಕಾತಿ ಹಗರಣ

2ನೇ ಚಾರ್ಜ್‌ಶೀಟ್‌ನಲ್ಲಿ DYSP ಶಾಂತಕುಮಾರ್ ಹೆಸರು ಉಲ್ಲೇಖ



ಬೆಂಗಳೂರು: ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ನೇಮಕಾತಿ ಹಗರಣದ ಎರಡನೇ ಆರೋಪ ಪಟ್ಟಿಯನ್ನು ಸಿಐಡಿ ಬುಧವಾರ ನಗರದ ಒಂದನೇ ಎಸಿಎಂಎಂ ನ್ಯಾಯಾಲಯಕ್ಕೆ ಸಲ್ಲಿಸಿದೆ.

ಅಮಾನತುಗೊಂಡಿರುವ ನೇಮಕಾತಿ ಘಟಕದ ಡಿವೈಎಸ್‌ಪಿ ಶಾಂತಕುಮಾರ್ ಮತ್ತು ಮೂವರು ಪೊಲೀಸ್ ಅಧಿಕಾರಿಗಳು, 14 ಅಭ್ಯರ್ಥಿಗಳು ಮತ್ತು ಏಳು ಮಧ್ಯವರ್ತಿಗಳು ಸೇರಿದಂತೆ 29 ಜನರ ಹೆಸರನ್ನು ಉಲ್ಲೇಖಿಸಲಾಗಿದೆ. ಉತ್ತರ ಪತ್ರಿಕೆಗಳನ್ನು ಇಡಲಾಗಿದ್ದ ಸ್ಟ್ರಾಂಗ್ ರೂಂ ಉಸ್ತುವಾರಿಯನ್ನು ಶಾಂತಕುಮಾರ್ ನೋಡಿಕೊಳ್ಳುತ್ತಿದ್ದರು. ಸಿಐಡಿ ಪ್ರಕಾರ, ಆರೋಪಿ ಅಭ್ಯರ್ಥಿಗಳಿಂದ ದೊಡ್ಡ ಪ್ರಮಾಣದಲ್ಲಿ ಹಣ ಪಡೆದು ಓಎಂಆರ್ ಶೀಟ್‌ಗಳನ್ನು ತಿರುಚಿದ್ದಾರೆ ಎಂದು ಆರೋಪಿಸಲಾಗಿದೆ.

ಬಿಜೆಪಿ ಮುಖಂಡ ಪ್ರವೀಣ್ ನೆಟ್ಟಾರು ಹತ್ಯೆ: ಎನ್‌ಐಎ ತನಿಖೆ

- ಸಿಎಂ ಬಸವರಾಜ ಬೊಮ್ಮಾಯಿ ಘೋಷಣೆ
- ಅಂತರರಾಜ್ಯ ವಿಷಯವಾಗಿ ಪರಿಣಮಿಸಿದ್ದರಿಂದ ಈ ನಿರ್ಧಾರ
- ಕರಾವಳಿಯಲ್ಲಿ ಕಟ್ಟೆಚ್ಚರ: ಹಿರಿಯ ಅಧಿಕಾರಿಗಳೊಂದಿಗೆ ಸಿಎಂ ಸಭೆ

ಬೆಂಗಳೂರು, ಜು.29(ಕೆಎಂಶಿ)–ಬಿಜೆಪಿ ಮುಖಂಡ ಪ್ರವೀಣ್ ನೆಟ್ಟಾರು ಅವರ ಹತ್ಯೆ ಪ್ರಕರಣದ ತನಿಖೆಯನ್ನು ರಾಷ್ಟ್ರೀಯ ತನಿಖಾ ದಳಕ್ಕೆ (NIA) ವಹಿಸಲು ತೀರ್ಮಾನಿಸಲಾಗಿದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದರು.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರವೀಣ್ ಹತ್ಯೆ ವ್ಯವಸ್ಥಿತವಾಗಿ ಆಗಿದೆ ಹಾಗೂ ಇದು ಅಂತರರಾಜ್ಯಕ್ಕೆ ಸೇರಿರುವುದರಿಂದ ಈ ತೀರ್ಮಾನ ಕೈಗೊಳ್ಳಲಾಗಿದೆ ಎಂದರು. ತನಿಖೆ ತೀವ್ರಗತಿಯಲ್ಲಿ ನಡೆಯುತ್ತಿದ್ದು, ಮಾಹಿತಿ ಪಡೆದ ನಂತರ ಕೇಂದ್ರ ಗೃಹ ಇಲಾಖೆಗೆ ಪತ್ರ ಬರೆಯಲಿದೆ. ಕೇರಳ ಗಡಿಯಲ್ಲಿ ಎರಡು ರಾಜ್ಯಗಳ ಸಂಪರ್ಕಿಸುವ ಪ್ರಮುಖ ಸ್ಥಳಗಳಲ್ಲಿ ಸಿಸಿಟಿವಿ ಕ್ಯಾಮರಾಗಳನ್ನು ಅಳವಡಿಸಿ, ಚೆಕ್‌ಪೋಸ್ಟ್‌ಗಳನ್ನು ಸ್ಥಾಪಿಸಲಾಗುವುದು. ಸೂಕ್ಷ್ಮ ಊರುಗಳಲ್ಲಿ ತಾತ್ಕಾಲಿಕ ಪೊಲೀಸ್ ▸ 8ನೇ ಪುಟಕ್ಕೆ

ಸಿದ್ದರಾಮಯ್ಯ ಹೇಳಿದ್ದು ವೇದವಾಕ್ಯ ಅಲ್ಲ

ಬೆಂಗಳೂರು, ಜು.29– ಸಿದ್ದರಾಮಯ್ಯನವರು ಅಧಿಕಾರದಲ್ಲಿದ್ದಾಗ 32 ಸರಣಿ ಕೊಲೆಗಳಾಗಿದ್ದವು. ಅವರು ಏನು ಮಾಡುತ್ತಿದ್ದರಂತೆ ಆಗ, ಸುಮ್ಮನೆ ಎಲ್ಲದಕ್ಕೂ ರಾಜಕಾರಣ ಹೇರುವುದು ಸರಿಯಲ್ಲ, ಅವರ ಹೇಳಿಕೆಗೆ ಏನೂ ಮಹತ್ವವಿಲ್ಲ, ಪರಿಸ್ಥಿತಿಯನ್ನು ಸಮರ್ಥವಾಗಿ ಹೇಗೆ ನಿಭಾಯಿಸಬೇಕೆಂದು ನಮಗೆ ಗೊತ್ತಿದೆ ಎಂದು ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು ರಾಜ್ಯ ಸರ್ಕಾರ ವಿಫಲವಾಗಿದೆ ಎಂಬ ಸಿದ್ದರಾಮಯ್ಯನವರ ಟೀಕೆಗೆ ಮುಖ್ಯಮಂತ್ರಿ ಪ್ರತಿಕ್ರಿಯಿಸಿದರು.

ಮಸೂದ್ ಹತ್ಯೆಯ ಆರೋಪಿಗಳನ್ನು ದಸ್ತಗಿರಿ ಮಾಡಿದ್ದೇವೆ. ಪ್ರವೀಣ್ ನೆಟ್ಟಾರು ಹತ್ಯೆಯಲ್ಲಿ ಇಬ್ಬರನ್ನು ಬಂಧಿಸಿದ್ದೇವೆ. ವಿಚಾರಣೆ ನಡೆಸುತ್ತಿದ್ದೇವೆ. ಬಿಜೆಪಿ ಕಾರ್ಯಕರ್ತರು ನಮ್ಮ ಸರ್ಕಾರ ಮೇಲೆ ಒತ್ತಡ ಹೇರುತ್ತಿದ್ದಾರೆ. ಎಸ್‌ಡಿಪಿಐ, ಪಿಎಫ್‌ಐ ಸಂಘಟನೆಯವರು ಅವರ ಸಮುದಾಯದ ಶಾಸಕರಾಗಿದ್ದ ತನ್ವೀರ್ ಸೇಠ್ ಮೇಲೆಯೇ ದಾಳಿ ಮಾಡಿದ್ದರು ಎಂದರು.

ಇದೊಂದು ಸಂಘಟಿತ ಸಂಚು: ಸರ್ಕಾರ ಈ ಪ್ರಕರಣವನ್ನು ಕೇವಲ ಕೊಲೆ ಎಂದು ನೋಡುತ್ತಿಲ್ಲ, ಇದೊಂದು ಸಂಘಟಿತ ಕೃತ್ಯ ಎಂದು ಗಂಭೀರವಾಗಿ ನೋಡುತ್ತಿದೆ. ಇನ್ನು ಕೆಲವು ದಿನ ಕಾದುನೋಡಿ ಎಲ್ಲ ಕ್ರಮ ಗೊತ್ತಾಗಲಿದೆ ಎಂದರು. ರಾಜಕೀಯಕ್ಕಾಗಿ ಸಿದ್ದರಾಮಯ್ಯ ಏನು ಬೇಕಾದರೂ ಹೇಳಬಹುದು, ಸಿದ್ದರಾಮಯ್ಯ ಹೇಳುವುದೆಲ್ಲ ವೇದವಾಕ್ಯವಲ್ಲ. ನಾವು ತೆಗೆದುಕೊಂಡ ಕ್ರಮಗಳು ಜನರ ಮುಂದಿವೆ. ಸಮಾಜಘಾತುಕ ಶಕ್ತಿಗಳಿಗೆ ಕೆಲವು ರಾಜಕೀಯ ಪ್ರೇರಣೆಯಿದೆ, ಕೇರಳದ ಗಡಿಯಿಂದ ಬಂದು ಕೃತ್ಯವೆಸಗುತ್ತಿದ್ದಾರೆ ಎಂದರು.

ರಾಜ್ಯದಲ್ಲಿ ಜನ ಭಯದಿಂದ ಬದುಕುವಂತಾಗಿದೆ

- ಸರ್ಕಾರದ ವಿರುದ್ಧ ವಿಪಕ್ಷ ನಾಯಕ ಸಿದ್ದರಾಮಯ್ಯ ವಾಗ್ದಾಳಿ
- ಕಾನೂನು-ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿದೆ; ರಾಜ್ಯದಲ್ಲಿ ಸರ್ಕಾರವೇ ಇಲ್ಲ

ಮೈಸೂರು, ಜು.29(ಎಂಟಿವೈ)–ರಾಜ್ಯದಲ್ಲಿ ಸರ್ಕಾರವೇ ಇಲ್ಲ. ಕಾನೂನು–ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿದೆ ಎಂದು ವಿಪಕ್ಷ ನಾಯಕ ಸಿದ್ದರಾಮಯ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು. ಖಾಸಗಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಬೆಂಗಳೂರಿನಿಂದ ಹೆಲಿಕಾಪ್ಟರ್‌ನಲ್ಲಿ ಆಗಮಿಸಿದ ಅವರು, ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಕರಾವಳಿಯಲ್ಲಿ ಕೆಲವೇ ದಿನಗಳ ಅಂತರದಲ್ಲಿ ಮೂವರ ಕೊಲೆ ನಡೆದಿದೆ. ಕಾನೂನು–ಸುವ್ಯವಸ್ಥೆ ಕಾಪಾಡುವಲ್ಲಿ ಸರ್ಕಾರ ವಿಫಲವಾಗಿರುವುದನ್ನು ಈಗಿನ ಪರಿಸ್ಥಿತಿ ತೋರಿಸುತ್ತದೆ. ಮುಖ್ಯಮಂತ್ರಿ ಆ ಭಾಗದ ಪ್ರವಾಸದಲ್ಲಿ ಇದ್ದಾಗಲೇ ಕೊಲೆಯಾಗಿದೆ. ಮುಖ್ಯಮಂತ್ರಿ ಬಳಿಯೇ ಇರುವ ಗುಪ್ತಚರ ಇಲಾಖೆ ಏನು ಮಾಡುತ್ತಿದೆ? ಮುಖ್ಯಮಂತ್ರಿ ಕ್ರಮ ಕೈಗೊಳ್ಳುತ್ತಿಲ್ಲವೇಕೆ? ಇದು ಮುಖ್ಯಮಂತ್ರಿ ಹಾಗೂ ಗೃಹ ಸಚಿವರ ವೈಫಲ್ಯ. ಜನರಿಗೆ ರಕ್ಷಣೆ ಕೊಡಲು ಇವರಿಗೆ ಆಗುತ್ತಿಲ್ಲ ಎಂದು ದೂರಿದರು. ರಾಜ್ಯದಲ್ಲಿ ಜನರು ಭಯದಿಂದ ಬದುಕುತ್ತಿದ್ದಾರೆ. ಮನೆಯಿಂದ ಹೊರಬರಲು ▸ 8ನೇ ಪುಟಕ್ಕೆ



ಕಬಿನಿ ಬಲದಂಡೆ ನಾಲೆಗೆ ಉರುಳಿ ಬಿದ್ದ ಕಾರು: ಇಬ್ಬರು ವಕೀಲರು ನಾಪತ್ತೆ, ಮತ್ತೊಬ್ಬರ ರಕ್ಷಣೆ



ಸರಗೂರು, ಜು.29– ಚಾಲಕನ ನಿಯಂತ್ರಣ ತಪ್ಪಿದ ಕಾರು ಕಬಿನಿ ಬಲದಂಡೆ ನಾಲೆಗೆ ಉರುಳಿ ಬಿದ್ದ ಪರಿಣಾಮ ಇಬ್ಬರು ವಕೀಲರು ನೀರಿನಲ್ಲಿ ಕೊಚ್ಚಿ ಹೋಗಿದ್ದು, ಮತ್ತೊಬ್ಬರನ್ನು ಸಾರ್ವಜನಿಕರು ರಕ್ಷಿಸಿದ್ದಾರೆ. ಈ ಘಟನೆ ತಾಲೂಕಿನ ಸಾಗರೆ ಬಳಿ ಶುಕ್ರವಾರ ಸಂಜೆ ನಡೆದಿದೆ.

ಹುಣಸೂರು ತಾಲೂಕಿನ ಹುಂಡವಾಡಿ ಗ್ರಾಮದ ಸಿ.ದಿನೇಶ್(50), ನಿಲುವಾಗಿಲು ಗ್ರಾಮದ ಗಿರೀಶ್ (40) ಕೊಚ್ಚಿಹೋದ ವಕೀಲರಾಗಿದ್ದು, ಮತ್ತೋರ್ವ ವಕೀಲ ಕಟ್ಟೆಮಳಲವಾಡಿ ಗ್ರಾಮದ ಅಶೋಕ್ ಅವರನ್ನು ಸಾರ್ವಜನಿಕರು ರಕ್ಷಿಸಿದ್ದಾರೆ.

ವಿವರ: ಹುಣಸೂರಿನ ವಕೀಲರಾದ ಸಿ.ದಿನೇಶ್, ಗಿರೀಶ್ ಹಾಗೂ ಅಶೋಕ್ ಶುಕ್ರವಾರ ಸ್ಯಾಂಟ್ರೋ ಕಾರಿ(ಕೆಎ.09, ಪಿ.8823)ನಲ್ಲಿ ಕಬಿನಿ ಜಲಾಶಯಕ್ಕೆ ತೆರಳಿ, ಅಲ್ಲಿಂದ ವಾಪಸ್ಸಾಗುತ್ತಿದ್ದ ವೇಳೆ ಸಾಗರೆ ಸಮೀಪ ಸೇತುವೆ ಬಳಿ ಚಾಲಕನ ನಿಯಂತ್ರಣ ಕಳೆದುಕೊಂಡ ಕಾರು ಕಬಿನಿ ಬಲದಂಡೆ ನಾಲೆಗೆ ಉರುಳಿ ಬಿದ್ದಿದೆ. ಈ ವೇಳೆ ಕಾರಿನಲ್ಲಿದ್ದ ಮೂವರೂ ಕಾರಿನಿಂದ ಹೊರಬಿದ್ದು, ನೀರಿನಲ್ಲಿ ಕೊಚ್ಚಿ ಹೋಗುತ್ತಿದ್ದರು. ಇದನ್ನು ಕಂಡ ಸಾರ್ವಜನಿಕರು ಅವರ ರಕ್ಷಣೆಗೆ ಮುಂದಾಗಿದ್ದಾರೆ. ಆ ಪೈಕಿ ವಕೀಲ ಅಶೋಕ ಎಂಬುವರು ಸಾರ್ವಜನಿಕರು ನೀಡಿದ ಹಗ್ಗದ ಸಹಾಯದಿಂದ ಮೇಲೆ ಬಂದಿದ್ದು, ಇನ್ನಿಬ್ಬರು ವಕೀಲರು ನೀರಿನಲ್ಲಿ ಕೊಚ್ಚಿ ಹೋಗಿದ್ದಾರೆ. ▸ 8ನೇ ಪುಟಕ್ಕೆ

ಅಮಾಯಕರ ಹತ್ಯೆ ಮಾಡಿದವರ ಎನ್‌ಕೌಂಟರ್‌ಗೂ ಸರ್ಕಾರ ಸಿದ್ಧ



ರಾಮನಗರ: ಮಂಗಳೂರಿನಲ್ಲಿ ಅಮಾಯಕರ ಹತ್ಯೆ ಮಾಡಿದ ಆರೋಪಿಗಳ ವಿರುದ್ಧ ಎನ್‌ಕೌಂಟರ್ ಸೇರಿದಂತೆ ಯಾವುದೇ ಕಠಿಣ ಕ್ರಮಕ್ಕೆ ಸರ್ಕಾರ ಸಿದ್ಧವಿದೆ ಎಂದು ಉನ್ನತ ಶಿಕ್ಷಣ ಸಚಿವ ಡಾ. ಸಿ.ಎನ್.ಅಶ್ವತ್ಥನಾರಾಯಣ ಹೇಳಿದರು. ರಾಮನಗರದಲ್ಲಿ ಮಾತನಾಡಿದ ಅವರು, ಯಾವ ಕಾರಣಕ್ಕೂ ಕೊಲೆಗಡುಕರು, ದುಷ್ಕರ್ಮಿಗಳನ್ನು ರಕ್ಷಿಸುವ ಪ್ರಶ್ನೆ ಇಲ್ಲ. ಈಗಾಗಲೇ ತನಿಖೆಗೆ ತಂಡಗಳನ್ನು ರಚಿಸಲಾಗಿದೆ. ಅಮಾಯಕರ ಜೀವ ರಕ್ಷಣೆ ನಮ್ಮ ಕರ್ತವ್ಯ ಎಂದರು. ಬಿಜೆಪಿ ಕಾರ್ಯಕರ್ತರ ಆಕ್ರೋಶ ಈ ಸಂದರ್ಭದಲ್ಲಿ ಸಹಜ. ಈಗಾಗಲೇ ಸಂಬಂಧಿಸಿದವರನ್ನು ಬಂಧಿಸಲಾಗಿದೆ. ಸರ್ಕಾರ ಹಾಗೂ ಗೃಹ ಸಚಿವರು ಸಮರ್ಥವಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಜನರ ಭಾವನೆಗಳಿಗೆ ಪೂರಕವಾಗಿ ಕಾರ್ಯ ನಿರ್ವಹಿಸುತ್ತೇವೆ. ಯು.ಪಿ. ಮಾದರಿ ಅಲ್ಲ, ಅದಕ್ಕಿಂತ ಐದು ಹೆಜ್ಜೆ ಮುಂದೆ ಹೋಗಿ ಕ್ರಮ ಕೈಗೊಳ್ಳುತ್ತೇವೆ. ಅದರಲ್ಲೂ ಯಾವುದೇ ಮುಲಾಜು ಇಲ್ಲ ಎಂದು ಸ್ಪಷ್ಟಪಡಿಸಿದರು.

ಮೈಸೂರಲ್ಲಿ ಯುದ್ಧ ಸ್ಮಾರಕಕ್ಕೆ ಶಂಕುಸ್ಥಾಪನೆ

- ಸತತ 12 ವರ್ಷಗಳ ಪ್ರಯತ್ನದ ಫಲ
- ಹಾಲಿ, ಮಾಜಿ ಯೋಧರ ಕುಟುಂಬಕ್ಕೆ ಸಂತಸದ ವಿಚಾರ
- ಮೈಸೂರಿನ ಹೆಮ್ಮೆಯ ಪ್ರತೀಕವಾಗಲಿರುವ ಸ್ಮಾರಕ

ಮೈಸೂರು, ಜು.29(ಎಂಟಿವೈ)–ಎರಡು ದಶಕಗಳ ಬೇಡಿಕೆಯಾದ ಯುದ್ಧ ಸ್ಮಾರಕ ನಿರ್ಮಾಣಕ್ಕೆ ಶುಕ್ರವಾರ ಅಧಿಕೃತವಾಗಿ ಗುದ್ದಲಿ ಪೂಜೆ ನೆರವೇರಿತು.

ಮೈಸೂರಿನ ಜಿಲ್ಲಾಧಿಕಾರಿ ಕಚೇರಿ ಸಮೀಪದ ಎನ್‌ಸಿಸಿ ಕವಾಯತು ಮೈದಾನದಲ್ಲಿ ಈ ಸ್ಮಾರಕ ನಿರ್ಮಾಣಕ್ಕೆ ಉದ್ದೇಶಿಸಲಾಗಿದ್ದು, ಇಂದು ಮಧ್ಯಾಹ್ನ ನಡೆದ ಕಾರ್ಯಕ್ರಮದಲ್ಲಿ ಶಾಸಕರಾದ ಎಲ್. ನಾಗೇಂದ್ರ, ಹೆಚ್.ಪಿ.ಮಂಜುನಾಥ್, ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ, ಪ್ರಭಾರ ಮೇಯರ್ ಸುನಂದಾ ಪಾಲನೇತ್ರ, ಜಿಲ್ಲಾಧಿಕಾರಿ ಡಾ.ಬಗಾದಿ ಗೌತಮ್, ನಗರ ಪೊಲೀಸ್ ಆಯುಕ್ತ ಡಾ.ಚಂದ್ರಗುಪ್ತ, ಬಿಡಿಎ ಕಾರ್ಯದರ್ಶಿ ಸಿ.ಎಲ್.ಆನಂದ್ ಇನ್ನಿತರರು ಸರ್ವಧರ್ಮಗಳ ಪ್ರಾರ್ಥನೆಯೊಂದಿಗೆ ಗುದ್ದಲಿ ಪೂಜೆ ನೆರವೇರಿಸಿದರು. ಈ ಕಾರ್ಯಕ್ರಮಕ್ಕೆ ಮೈಸೂರು, ಕೊಡಗು, ಚಾಮರಾಜನಗರ, ಮಂಡ್ಯ ಜಿಲ್ಲೆಗಳ ಮಾಜಿ ಸೈನಿಕರು ಸಾಕ್ಷಿಯಾದರು.

ಮೈಸೂರಿನ ಅಸ್ಮಿತೆ: ಕಾರ್ಯಕ್ರಮದಲ್ಲಿ ಶಾಸಕ ಹೆಚ್.ಪಿ.ಮಂಜುನಾಥ್ ಮಾತನಾಡಿ, ಸಾಂಸ್ಕೃತಿಕ ನಗರಿ ಮೈಸೂರಲ್ಲಿ ಯುದ್ಧ ಸ್ಮಾರಕ ನಿರ್ಮಾಣ ಮಾಡುತ್ತಿರುವುದು ಶ್ಲಾಘನೀಯ. ಈ ಸ್ಮಾರಕ ಮೈಸೂರಿನ ಅಸ್ಮಿತೆಯಾಗಿ ಹೊಮ್ಮಲಿದೆ. ದೇಶ ಸೇವೆಯಲ್ಲಿ ತೊಡಗಿಸಿಕೊಂಡಿರುವ ಯೋಧರ ಗೌರವಾರ್ಥ ಸ್ಮಾರಕ ನಿರ್ಮಾಣ ಮಾಡುತ್ತಿರುವುದು ಹೆಮ್ಮೆಯ ಸಂಗತಿ. ದೇಶ ಕಾಯುವ ಯೋಧರನ್ನು ಎಲ್ಲರೂ ಸ್ಮರಿಸಬೇಕು ಎಂದರು.

ನಿಮಗಿದೋ ನಮ್ಮ ನಮನ: ಶಾಸಕ ಎಲ್.ನಾಗೇಂದ್ರ ಮಾತನಾಡಿ, ಮೈಸೂರಲ್ಲಿ ಯುದ್ಧ ಸ್ಮಾರಕ ನಿರ್ಮಾಣ ಹೆಮ್ಮೆಯ ಸಂಗತಿ. ದೇಶ ಕಾಯುವ ಹಾಲಿ ಯೋಧರು ಹಾಗೂ ಮಾಜಿ ಯೋಧರಿಗೆ ನಾವು ಸದಾ ಚಿರಋಣಿ. ಹಲವು ಸವಾಲುಗಳನ್ನು ಮೆಟ್ಟಿ ದೇಶ ರಕ್ಷಣೆಯಲ್ಲಿ ತೊಡಗಿಸಿಕೊಂಡಿರುವ ಸೈನಿಕರು ಹಲವು ಸಂದರ್ಭದಲ್ಲಿ ಪ್ರಾಣತ್ಯಾಗ ಮಾಡಿರುವುದು ಉಂಟು. ಸೈನಿಕರ ಸೇವೆಗೆ ಸರಿಸಾಟಿಯೇ ಇಲ್ಲ. ಇಂತಹ ಸಂದರ್ಭದಲ್ಲಿ ಮೈಸೂರಲ್ಲಿ ಯುದ್ಧ ಸ್ಮಾರಕ ನಿರ್ಮಾಣ ಖುಷಿ ಕೊಡುವ ಸಂಗತಿ. ಸ್ಮಾರಕ ನಿರ್ಮಾಣಕ್ಕೆ ಚಾಮರಾಜನಗರದ ಪಟೇಲ್ ಪುಟ್ಟಮಾದಯ್ಯ ಅವರು ಒಂದು ಕೋಟಿ ರೂ.ಮೌಲ್ಯದ ಉತ್ಕೃಷ್ಟ ಕಪ್ಪು ಕಲ್ಲನ್ನು ಕೊಡುಗೆ ನೀಡಿದ್ದಾರೆ. ಅವರ ಈ ದೇಶ ಪ್ರೇಮವನ್ನು ನೋಡಿದಾಗ ಗೌರವ ಇಮ್ಮಡಿಯಾಗುತ್ತದೆ. ಎಲ್ಲರಲ್ಲೂ ಇಂತಹ ದೇಶ ಭಕ್ತಿ ಇರಬೇಕು ಎಂದು ಅಭಿಪ್ರಾಯಪಟ್ಟರು.

ಸರ್ವಧರ್ಮ ಪ್ರಾರ್ಥನೆ: ಯುದ್ಧ ಸ್ಮಾರಕ ನಿರ್ಮಾಣದ ಗುದ್ದಲಿ ಪೂಜೆ ವೇಳೆ ಹಿಂದು, ಮುಸ್ಲಿಂ, ಕ್ರೈಸ್ತ ಹಾಗೂ ಸಿಖ್ ಗುರುಗಳಿಂದ ಪ್ರಾರ್ಥನೆ ನೆರವೇರಿಸಿದ್ದು ವಿಶೇಷ. ಕಾರ್ಯಕ್ರಮದಲ್ಲಿ ಭಾರತೀಯ ಸೇನೆಯ ವಿವಿಧ ವಿಭಾಗಗಳಲ್ಲಿ ಸೇವೆ ಸಲ್ಲಿಸಿ ನಿವೃತ್ತಿಯಾಗಿರುವ ಯೋಧರು, ಸೇನಾಧಿಕಾರಿಗಳು, ಅವರ ಕುಟುಂಬ ಸದಸ್ಯರು ಪಾಲ್ಗೊಂಡಿದ್ದರು.

ಸನ್ಮಾನ: ಕಾರ್ಯಕ್ರಮದಲ್ಲಿ ಸ್ಮಾರಕ ನಿರ್ಮಾಣಕ್ಕೆ 1 ಕೋಟಿ ರೂ.ಮೌಲ್ಯದ ಕಲ್ಲನ್ನು ಕೊಡುಗೆ ನೀಡಿರುವ ಚಾಮರಾಜನಗರದ ಅಮಚವಾಡಿ ನಿವಾಸಿ, ಕ್ವಾರಿ ಮಾಲೀಕ ಪಟೇಲ್ ಪುಟ್ಟಮಾದಯ್ಯ, ಕಚ್ಚಾಶಿಲೆಯನ್ನು ವಿವಿಧ ಆಕಾರಗಳಲ್ಲಿ ಉಚಿತವಾಗಿ ಕತ್ತರಿಸಿಕೊಟ್ಟ ಎಸ್‌ವಿಜಿ ಗ್ರೂಪ್‌ನ ಶ್ರೀನಾಥ್, ಮಾಜಿ ಸೇನಾಧಿಕಾರಿಗಳಾದ ಸಾರ್ಜೆಂಟ್ ಎಂ.ಎನ್. ಸುಬ್ರಮಣಿ, ಲೆಫ್ಟಿನೆಂಟ್ ಕರ್ನಲ್ ವಿಜಯ್ ಕುಮಾರ್, ಮೇಜರ್ ಜನರಲ್ ಕೆಕೆಮೂರ್ತಿ, ಸಿಪಾಯಿ, ಹಾಲಿ ಬಿಡಿಎ ಕಾರ್ಯದರ್ಶಿ ಸಿ.ಎಲ್.ಆನಂದ್‌ರನ್ನು ಸನ್ಮಾನಿಸಲಾಯಿತು.

ಮನೆಯಲ್ಲೇ ಮೂವರಿಗೆ ಸನ್ಮಾನ: ಸ್ಮಾರಕ ನಿರ್ಮಾಣಕ್ಕೆ ಹೋರಾಟ ಮಾಡಿದ ಮೇಜರ್ ಜನರಲ್ ಎಸ್.ಜಿ.ಒಂಭತ್ಕೆರೆ, ಮೇಜರ್ ಜನರಲ್ ಸಿ.ಕೆ.ಕರುಂಬಯ್ಯ ಹಾಗೂ ಉಚಿತವಾಗಿ ಜಲ್ಲಿ ನೀಡಿದ ಗುಂಡ್ಲುಪೇಟೆಯ ಹಿಂದೂಸ್ತಾನ್ ಕ್ರಷರ್ ಮಧುಕರ್ ಅವರಿಗೆ ಮನೆಗಳಲ್ಲೇ ಸನ್ಮಾನಿಸಲು ನಿರ್ಧರಿಸಲಾಯಿತು ಕಾರ್ಯಕ್ರಮದಲ್ಲಿ ಎನ್‌ಸಿಸಿ ▸ 8ನೇ ಪುಟಕ್ಕೆ



ಮೈಸೂರಿನ ಜಿಲ್ಲಾಧಿಕಾರಿ ಕಚೇರಿ ಸಮೀಪದ ಎನ್‌ಸಿಸಿ ಕವಾಯತು ಮೈದಾನದಲ್ಲಿ ಯುದ್ಧ ಸ್ಮಾರಕ ನಿರ್ಮಾಣಕ್ಕೆ ಶಾಸಕರಾದ ಎಲ್.ನಾಗೇಂದ್ರ, ಹೆಚ್.ಪಿ.ಮಂಜುನಾಥ್, ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ, ಮೇಯರ್ ಸುನಂದಾ ಪಾಲನೇತ್ರ, ಜಿಲ್ಲಾಧಿಕಾರಿ ಡಾ.ಬಗಾದಿ ಗೌತಮ್ ಗುದ್ದಲಿ ಪೂಜೆ ನೆರವೇರಿಸಿದರು.

ಮಾಜಿ ಸೈನಿಕರಿಗೆ ಖುಷಿಯಾಗಿದೆ



ಇಂದು ಮೈಸೂರಿಗೆ ಐತಿಹಾಸಿಕ ದಿನ. ಮೈಸೂರಲ್ಲಿ ಇದುವರೆಗೆ ಯುದ್ಧ ಸ್ಮಾರಕವಿರಲಿಲ್ಲ. 22 ವರ್ಷಗಳ ಹೋರಾಟಕ್ಕೆ ಜಯ ಸಂದಿದೆ. ಯುದ್ಧ ಸ್ಮಾರಕ ನಿರ್ಮಾಣಕ್ಕಾಗಿ ಪತ್ರ ಬರೆದಿದ್ದೆ. ಸುದೀರ್ಘ ಪ್ರಯತ್ನದ ಫಲವಾಗಿ ಇಂದು ಗುದ್ದಲಿಪೂಜೆ ನೆರವೇರಿದೆ. ಇದರಿಂದ ನನ್ನನ್ನೂ ಒಳಗೊಂಡಂತೆ ಮಾಜಿ ಸೈನಿಕರಿಗೆ ಖುಷಿಯಾಗಿದೆ.

– ಎಂ.ಎನ್.ಸುಬ್ರಮಣಿ, ಮಾಜಿ ಸೇನಾಧಿಕಾರಿ

ಸೇನೆಯ ಬಗ್ಗೆ ಮಾಹಿತಿ ನೀಡುವ ಕೇಂದ್ರವಾಗಲಿದೆ



ಜಿಲ್ಲಾಧಿಕಾರಿ ಕಚೇರಿ ಸಮೀಪದ ಮೈದಾನದಲ್ಲಿ ನಿರ್ಮಿಸಲುದ್ದೇಶಿಸಿರುವ ಯುದ್ಧ ಸ್ಮಾರಕ ಭಾರತೀಯ ಸೇನೆಯ ಮೂರು ವಿಭಾಗಗಳ ಬಗ್ಗೆ ಮಾಹಿತಿ ಒದಗಿಸುವ ಕೇಂದ್ರವೂ ಆಗಲಿದೆ. ಯುವಜನತೆ ಹಾಗೂ ವಿದ್ಯಾರ್ಥಿಗಳನ್ನು ಸೇನೆಗೆ ಆಕರ್ಷಿಸಲು ನೆರವಾಗಲಿದೆ. ಕಾಂಕ್ರಿಟ್ ಕಟ್ಟಡವಾಗಿಸದೇ ಸುಂದರ ತಾಣವಾಗಿ ಸ್ಮಾರಕ ಹೊರಹೊಮ್ಮಲಿದೆ.

– ಸಿ.ಎಲ್.ಆನಂದ್, ಬಿಡಿಎ ಕಾರ್ಯದರ್ಶಿ

ನಕ್ಕರೆ ಅದೇ ಸ್ವರ್ಗ

ವೈದ್ಯರು : ನಿಮ್ಮ ಗಂಡ ನಿದ್ದೆಯಲ್ಲೇ ಮಾತಾಡ್ತಾ ಇದ್ದರು ಅಂತ ಏನು ಗ್ಯಾರಂಟಿ?

ಆಕೆ : ಎಚ್ಚರವಾಗಿದ್ರೆ ಅಂತಹ ಪದಗಳಿಂದ ಬೈಯ್ಯುವ ಧೈರ್ಯ ನಮ್ಮ ಯಜಮಾನರಿಗೆ ಎಲ್ಲಿಂದ ಬರಬೇಕು ಡಾಕ್ಟ್ರೆ?!

ಮೈಸೂರು ಮಿತ್ರ

ಶನಿವಾರ, 30 ಜುಲೈ 2022

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ. ಗೋವಿಂದೇಗೌಡ *M.A.*

ಅಮೃತವಾಹಿನಿ

ದೀಪದ ಬೆಳಕಿನಿಂದ ಕಿರಣಗಳು ಬಹುದೂರ ಹೋಗುವಂತೆ ಈ ಲೋಕದಲ್ಲಿ ಸತ್ಕಾರ್ಯಗಳು ಪ್ರಕಾಶಿಸುತ್ತವೆ. – ಷೇಕ್ಸ್‌ಪಿಯರ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು

ಮುಂದೆ ಹೋಗಳಿಕೆ ಬೇಡ, ಹಿಂದೆ ತೆಗಳಿಕೆ ಬೇಡ

ನಿಮ್ಮ ಪತ್ರಗಳು

ವಾಹನ ನಿಲುಗಡೆಗೆ ಶಿಸ್ತಿಲ್ಲ!



ಮಾನ್ಯರೆ,

ಹೀಗೆ ಎಲ್ಲೆಂದರಲ್ಲಿ ರಸ್ತೆಯಲ್ಲೇ ವಾಹನಗಳು ನಿಂತಿರುವುದು ಎಲ್ಲೆಂದಿರಾ? ರಾಮಸ್ವಾಮಿ ಸರ್ಕಲ್ ಕಡೆಯಿಂದ ನ್ಯಾಯಾಲಯದ ಕಡೆಗೆ ಹೋಗುವ ಜಯಲಕ್ಷ್ಮೀ ವಿಲಾಸ ರಸ್ತೆಯಲ್ಲಿ. ಪ್ರತಿನಿತ್ಯ ಸಂಜೆಯ ವೇಳೆ ಗೋಬಿ ಮಂಚೂರಿ ತಿನ್ನಲು ಬರುವ ತಿಂಡಿ ಪೋತರಿಗೆ ತಮ್ಮ ವಾಹನವನ್ನು ಹೇಗೆ ನಿಲ್ಲಿಸಬೇಕೆಂಬ ಶಿಸ್ತೇ ಇಲ್ಲ. ಎಲ್ಲೆಂದರಲ್ಲಿ ನಿಲ್ಲುವ ವಾಹನಗಳಿಂದ ಕಿರಿ ಕಿರಿ ಸಾಮಾನ್ಯವಾಗಿದೆ. ಪಾಪ ಪೊಲೀಸರಿಗೂ ಬಾಯಿ ಚಪಲವಿಲ್ಲದಿರುತ್ತದೆಯೇ? ಅವರ ವಾಹನವೂ ನಡು ರಸ್ತೆಯಲ್ಲೇ ನಿಂತಿದೆ. ಪೊಲೀಸರೇ ತಮ್ಮ ವಾಹನವನ್ನು ಹೀಗೆ ನಿಲ್ಲಿಸಿದರೆ ಬೇರೆಯವರಿಗೆ ಹೇಳಲಾದೀತಾ? ಈ ರಸ್ತೆಯ ಬಗ್ಗೆ ಸಂಚಾರಿ ಪೊಲೀಸರು ದಿವ್ಯ ನಿರ್ಲಕ್ಷ್ಯ ತೋರುತ್ತಿದ್ದಾರೆ.

ವಾಹನಗಳ ಪಾರ್ಕಿಂಗ್ ಮಾಡಲು ರಸ್ತೆಯಲ್ಲಿ ಗುರುತು ಮಾಡಬೇಕು. ನಿಲುಗಡೆಯಿಲ್ಲದ ಜಾಗವನ್ನೂ ಗುರುತಿಸಿ ಫಲಕ ಹಾಕಬೇಕು. ವಿಶೇಷವಾಗಿ ಶನಿವಾರ ಹಾಗೂ ಭಾನುವಾರ ಸಮೀಪದಲ್ಲೇ ಇರುವ ಹೋಟೆಲ್‌ಗೆ ಬರುವ ಗಿರಾಕಿಗಳು ಹೆಚ್ಚಿರುವುದರಿಂದ ಸಾರ್ವಜನಿಕರು ಸಮಸ್ಯೆಯನ್ನೆ ಎದುರಿಸಬೇಕಾಗುತ್ತದೆ. ಸಂಚಾರಿ ಪೊಲೀಸರು ಈ ಸಮಸ್ಯೆಯ ಬಗ್ಗೆ ತಮ್ಮ ಗಮನ ಹರಿಸುತ್ತಾರಾ?

–ಕೊ.ಸು.ನರಸಿಂಹಮೂರ್ತಿ, ಹಿರಿಯ ನಾಗರಿಕ, ಚಾಮರಾಜಪುರಂ, ಮೈಸೂರು.

ನಿಮ್ಮ ಸಾಧನೆಯನ್ನು ಪ್ರಜೆಗಳಿಗೆ ತಿಳಿಸಿ

ಮಾನ್ಯರೆ,

ಪ್ರಜಾಪ್ರಭುತ್ವದಲ್ಲಿ ಜನರಿಂದ ಆಯ್ಕೆಯಾದ ಸರ್ಕಾರ ಯಾವುದೇ ಇರಲಿ ಅ ಸರ್ಕಾರ ಪ್ರಜೆಗಳು ಮತ್ತು ಸಮಾಜವನ್ನು ಮುಖ್ಯವಾಹಿನಿಗೆ ತರುವಲ್ಲಿ ಪ್ರಮಾಣಿಕ ಪ್ರಯತ್ನ ಮಾಡಬೇಕೆ ವಿನಹ ಅದರ ವಿರುದ್ಧವಾಗಿ ಅಲ್ಲ. ಇಂತಹ ಸಾಧನೆಯನ್ನು ಪ್ರಸಕ್ತ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರ ಮಾಡುತ್ತಿದೆ ಎಂದರೇ ತಪ್ಪಾಗಲಾರದು.

ಪ್ರಜೆಗಳಿಂದ ಆಯ್ಕೆಯಾದ ಸರ್ಕಾರಗಳಲ್ಲಿ ಪ್ರಜೆಗಳು ನಿರೀಕ್ಷೆ ಮಾಡುವುದು ನಮ್ಮ ಅಭಿವೃದ್ಧಿಗೆ ಸರ್ಕಾರ ಶ್ರಮಿಸುತ್ತದೆ, ನಾವು ಅಭಿವೃದ್ಧಿ ಆಗಬಹುದು, ಯಾವುದೇ ತೊಂದರೆಗಳು ಸಂಭವಿಸುವುದಿಲ್ಲ, ನಮ್ಮ ಕಷ್ಟಗಳಿಗೆ ಸರ್ಕಾರ ಯಾವಾಗಲೂ ನಮ್ಮ ಬೆನ್ನುಲುಬಾಗಿರುತ್ತದೆ ಎನ್ನುವ ಹಲವಾರು ಮಹತ್ವಾಕಾಂಕ್ಷೆ ನಿರೀಕ್ಷೆಯನ್ನು ಜನರು ಬಯಸಿರುತ್ತಾರೆ. ಆದರೆ ಇಂದಿನ ಸರ್ಕಾರದಲ್ಲಿ ಪ್ರಜೆಗಳು ನಿರೀಕ್ಷೆ ಮಾಡದೇ ಇದ್ದ ನಿಮ್ಮ ಸಾಧನೆಗಳೆಂದರೇ, ಪ್ರಜೆಗಳ ವಿರುದ್ಧವಾದ ಹಲವಾರು ಕಾನೂನುಗಳು, ದಿನನಿತ್ಯ ಬಳಸುವ ವಸ್ತುಗಳ ಬೆಲೆ ಏರಿಕೆ, ಪೆಟ್ರೋಲ್–ಡೀಸೆಲ್ ದರ ಹೆಚ್ಚಳ, ಕೊಲೆಗಡುಕರಿಗೆ ಶಿಕ್ಷೆ ಕೊಡದೆ ಇರುವುದು, ಜನರಿಗೆ ಕೊಡಬೇಕಾದ ಸರ್ಕಾರದ ಸಹಾಯಧನವನ್ನು ಕಡಿತಗೊಳಿಸಿದ್ದು, ಇನ್ನು ಮುಂತಾದ ಹಲವಾರು ಈ ತರಹದ ಯೋಜನೆಗಳೇ ಈ ಸರ್ಕಾರದ ಸಾಧನೆಗಳು ಎಂದರೇ ತಪ್ಪಾಗಲಾರದು.

ಈ ಮೇಲಿನ ಸಾಧನೆಗಳನ್ನು ಬಿಟ್ಟು ಕೇಂದ್ರ ಮತ್ತು ರಾಜ್ಯ ಸರ್ಕಾರ ಬಡವರಿಗಾಗಿ ಪ್ರಾಮಾಣಿಕ ಮತ್ತು ಶಿಸ್ತುಬದ್ಧ ಆಡಳಿತ ನೀಡುವುದರ ಜೊತೆಗೆ ಬಡವರು, ರೈತರು, ಕೂಲಿ ಕಾರ್ಮಿಕರು, ವಿದ್ಯಾರ್ಥಿಗಳು, ಮಹಿಳೆಯರಿಗಾಗಿ ಹಲವಾರು ಅಭಿವೃದ್ಧಿಯ ಯೋಜನೆಗಳನ್ನು ಜಾರಿಗೆ ತರುವ ಮೂಲಕ ಪ್ರಜೆಗಳಿಗೆ ಮತ್ತು ಸಮಾಜಕ್ಕೆ ಹಾಗೂ ಕಾನೂನಿಗೆ ಗೌರವ ನೀಡಬೇಕಾಗಿ ಮನವಿ.

–ತಿಮ್ಮರಾಜು, ಭೋಗೇಶ್ವರ ಕಾಲೋನಿ, ಹೆಚ್.ಡಿ.ಕೋಟೆ ತಾ.


ವಿಜಯನಗರ 4ನೇ ಹಂತ, ಆರ್‌ಎಂಪಿಗೆ ಹೆಚ್ಚುವರಿ ಸಿಟಿ ಬಸ್ ಸೌಲಭ್ಯ ಕಲ್ಪಿಸಿ

ಮಾನ್ಯರೆ,

ಮೈಸೂರಿನ ವಿಜಯನಗರ 4ನೇ ಹಂತದ ನಿವಾಸಿಗಳ ಕೋರಿಕೆಯಂತೆ ಈಗಿರುವ ಬಸ್‌ಗಳ ಜೊತೆಗೆ ಹೆಚ್ಚುವರಿ ಸಿಟಿ ಬಸ್ ಅಗತ್ಯವಿದೆ.

ಬೆಳಿಗ್ಗೆ 6.40 ರ ಚಾಮುಂಡಿ ಎಕ್ಸ್‌ಪ್ರೆಸ್‌ಗೆ ಸಾಕಷ್ಟು ಜನ ಈ ಬಡಾವಣೆಯಿಂದ ಹೋಗುತ್ತಾರೆ ಹಾಗೂ ನಂತರದಲ್ಲಿ ಹೊರಡುವ ರೈಲಿಗೂ ಹೋಗುವವರಿರುತ್ತಾರೆ. ಬೇರೆ ಬೇರೆ ತಾಲೂಕುಗಳಿಗೆ ಹೋಗುವ ಶಿಕ್ಷಕರು – ಕಚೇರಿ ಸಿಬ್ಬಂದಿ ಬೆಳಗ್ಗೆ ಬೇಗನೆ ಮನೆ ಬಿಡಬೇಕಾಗುತ್ತದೆ. ಶಾಲಾ ಕಾಲೇಜುಗಳಿಗೆ ಹೋಗುವ ವಿದ್ಯಾರ್ಥಿಗಳು, ಕೂಲಿ ಕಾರ್ಮಿಕರು, ಕಾರ್ಖಾನೆಗಳಿಗೆ ಹೋಗುವ ನೌಕರರು ಇರುವುದರಿಂದ ಅಲ್ಲದೆ ವಿಜಯನಗರ ಬಡಾವಣೆ ಜನಸಂಖ್ಯೆ ದಿನೇ ದಿನೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಈಗ ಓಡುತ್ತಿರುವ ಬಸ್‌ಗಳ ಜೊತೆಗೆ ಹೆಚ್ಚುವರಿ ಬಸ್‌ಗಳನ್ನು ಬಿಡಬೇಕಾಗಿ ಮನವಿ. ಅಲ್ಲದೆ ವಿಜಯನಗರ 4ನೇ ಹಂತದ ಬಸ್‌ಗಳಿಗೆ ಹಿನಕಲ್ ಎಂದು ಫಲಕವಿರುವ ಕಾರಣ ಜನರಿಗೆ ಗೊಂದಲವಾಗುತ್ತದೆ. ಆದಕಾರಣ ವಿಜಯನಗರ 4ನೇ ಹಂತಕ್ಕೆ ಬರುವ ಬಸ್‌ಗಳಿಗೆ ಬೋರ್ಡ್ ವಿಜಯನಗರ 4ನೇ ಹಂತ ಎಂದು ಫಲಕ ನಮೂದಿಸಬೇಕೆಂದು ಮನವಿ. ಹಾಗೂ ಕೆಎಸ್‌ಆರ್‌ಟಿಸಿ ವತಿಯಿಂದ ಯಾವ ಬಸ್ ಯಾವ ಸಮಯಕ್ಕೆ ಇಲ್ಲಿಂದ ಹೊರಡುತ್ತದೆ ಮತ್ತು ನಗರ ಬಸ್ ನಿಲ್ದಾಣದಿಂದ ಎಷ್ಟು ಸಮಯಕ್ಕೆ ಬಿಡುತ್ತದೆ ಎಂಬ ವೇಳಾಪಟ್ಟಿಯನ್ನು ವಿಜಯನಗರ 4ನೇ ಹಂತದ ನಿಲುಗಡೆ ತಂಗುದಾಣದಲ್ಲಿ ಪ್ರಕಟಿಸಬೇಕು. ಅಲ್ಲದೆ ಈಗ ಓಡಾಡುತ್ತಿರುವ ಬಸ್‌ಗಳು ಸಮಯಕ್ಕೆ ಸರಿಯಾಗಿ ಬರುವುದಿಲ್ಲ ಎಂಬ ದೂರು ಇದೆ. ವಿಜಯನಗರ 4ನೇ ಹಂತದಿಂದ ಹೆಚ್ಚುವರಿಯಾಗಿ ಬಿಡಬೇಕಾದ ಬಸ್ ಸಮಯ: ಬೆಳಗ್ಗೆ 6ಕ್ಕೆ, ಬೆಳಗ್ಗೆ7 ಕ್ಕೆ ಮಧ್ಯಾಹ್ನ 2ಕ್ಕೆ, ಸಂಜೆ 4ಕ್ಕೆ, ಸಂಜೆ ನಗರ ಬಸ್ ನಿಲ್ದಾಣದಿಂದ ವಿಜಯನಗರ 4ನೇ ಹಂತಕ್ಕೆ ಬಿಡಬೇಕಾದ ಹೆಚ್ಚುವರಿ ಬಸ್‌ಗಳ ಸಮಯ ರಾತ್ರಿ 9ಕ್ಕೆ. ವಿಜಯನಗರ 4ನೇ ಹಂತ ಆರ್.ಎಂ.ಪಿ. ಲೇಔಟ್‌ವರೆಗೂ ವಿಸ್ತರಿಸಿದ್ದು, ಆರ್‌ಎಂಪಿ ಲೇಔಟ್ ಬಸ್ ತಂಗದಾಣ (ರಾಜಾರಾಮಣ್ಣ ವೃತ್ತ) ದಿಂದ ವಿಜಯನಗರ 4ನೇ ಹಂತ ಆ ಭಾಗದ ನಿವಾಸಿಗಳು ಸಂಕಲ್ಪ ಅಪಾರ್ಟ್‌ಮೆಂಟ್ ನಿವಾಸಿಗಳು, ಆರ್.ಎಂ.ಪಿ. ನಿವಾಸಿಗಳು – ಶಾಲಾ ಕಾಲೇಜು ವಿದ್ಯಾರ್ಥಿಗಳು ಕೂಲಿ ಕಾರ್ಮಿಕರು ಬಹಳಷ್ಟು ಜನರ ಗುಂಪೇ ಇಲ್ಲಿರುತ್ತದೆ. ಆದರೆ ಇಲ್ಲಿ ಬಸ್ ವ್ಯವಸ್ಥೆಯೇ ಇಲ್ಲ. ಆರ್.ಎಂ.ಪಿ. ಲೇಟ್ ಬಸ್ ತಂಗುದಾಣಕ್ಕೂ ಅಗತ್ಯ ಬಸ್‌ಗಳ ವ್ಯವಸ್ಥೆ ಮಾಡಬೇಕಾಗಿ ಈ ಮೂಲಕ ಮನವಿ

–ಬಿ.ಜಿ.ರಂಗೇಗೌಡ, ಮೈಸೂರು.



ಕಾರ್ಕಳ ಆನಂದಭಟ್
ಮೊ. 7676554198

ದಿಕ್ಕುದೆಸೆ

ರಾಷ್ಟ್ರದ ನೂತನ ರಾಷ್ಟ್ರಪತಿ ದ್ರೌಪದಿ ಮುರ್ಮು

ದೇಶಕ್ಕೆ ಸ್ವಾತಂತ್ರ್ಯ ಬಂದ ಅಮೃತೋತ್ಸವದ ವರ್ಷದಲ್ಲಿ ಭಾರತವು ಜಗತ್ತಿಗೆ ಪ್ರಜಾಪ್ರಭುತ್ವಕ್ಕೆ ಸಂಬಂಧಪಟ್ಟಂತೆ ಶ್ರೇಷ್ಠ ಸಂದೇಶ ರವಾನಿಸಿದೆ. ಅತ್ಯಂತ ಕೆಳಸ್ತರದ ಸಮುದಾಯಕ್ಕೆ ಸೇರಿದ ಮಹಿಳೆ ದ್ರೌಪದಿ ಮುರ್ಮುರನ್ನು ರಾಷ್ಟ್ರದ ಪರಮೋಚ್ಛ ಸ್ಥಾನಕ್ಕೆ ಆಯ್ಕೆ ಮಾಡಿದ್ದು ಪ್ರಜಾತಂತ್ರದ ವಿಜಯದ ಸಂಕೇತವಾಗಿದೆ. ಈ ಆಯ್ಕೆ ಭಾರತದ ಪ್ರಜಾತಂತ್ರದ ಸೌಂದರ್ಯ, ಶಕ್ತಿ, ಸಾಮರ್ಥ್ಯ ಹಾಗೂ ಅಂತಃಸತ್ವವನ್ನು ಜಗತ್ತಿಗೆ ಪರಿಚಯಿಸಿದೆ. ಪ್ರಧಾನಿ ಮೋದಿಯವರು ದ್ರೌಪದಿ ಮುರ್ಮು ಅವರಿಗೆ ರಾಷ್ಟ್ರಪತಿಯಾಗಿ ಆಯ್ಕೆಯಾಗಿರುವುದಕ್ಕೆ ಅಭಿನಂದಿಸುತ್ತಾ, "ಭಾರತ ವಿಂದು ಹೊಸ ಇತಿಹಾಸ ಸೃಷ್ಟಿಸಿದೆ. ಸ್ವಾತಂತ್ರ್ಯದ ಅಮೃತೋತ್ಸವ ಆಚರಿಸುವ ಸಂದರ್ಭದಲ್ಲಿ ಪೂರ್ವ ಭಾರತದ ಕುಗ್ರಾಮ ಒಂದರಲ್ಲಿ ಜನಿಸಿದ ಆದಿವಾಸಿ ಸಮುದಾಯದ ಮಗಳು ರಾಷ್ಟ್ರಪತಿಯಾಗಿ ಆಯ್ಕೆಯಾಗಿದ್ದಾರೆ" ಎಂದು ಸಂತಸ ವ್ಯಕ್ತಪಡಿಸಿದರು.

ಭಾರತದ ರಾಷ್ಟ್ರಪತಿ ಸ್ಥಾನಕ್ಕೆ ಈ ಹಿಂದೆಯೂ ವಿಭಿನ್ನ ಸಾಮಾಜಿಕ, ರಾಜಕೀಯ ಹಿನ್ನೆಲೆಯುಳ್ಳ ವಿಶಿಷ್ಟ ವ್ಯಕ್ತಿಗಳು ಸ್ಪರ್ಧಿಸಿದ್ದಾರೆ. ಸ್ವಾತಂತ್ರ್ಯಾನಂತರ ಇದುವರೆಗೆ ಪರಿಶಿಷ್ಟ ಜಾತಿಗೆ ಸೇರಿದ ಕೆ.ಆರ್. ನಾರಾಯಣನ್ ಮತ್ತು ರಾಮನಾಥ್ ಕೋವಿಂದ್ ರಾಷ್ಟ್ರಪತಿಗಳಾಗಿದ್ದರೆ, ಮುಸಲ್ಮಾನ್ ಸಮಾಜದಿಂದ ಝಾಕೀರ್ ಹುಸೇನ್, ಫಕ್ರುದ್ದಿನ್ ಆಲಿ ಅಹ್ಮದ್ ಹಾಗೂ ಡಾ. ಎಪಿಜೆ ಅಬ್ದುಲ್ ಕಲಾಂ ರಾಷ್ಟ್ರಪತಿಗಳಾಗಿದ್ದರು.

ದೇಶದಲ್ಲಿನ ಸಾಮಾಜಿಕ ಸಮೀಕರಣಗಳು, ರಾಜಕೀಯ ಪರಿದೃಶ್ಯಗಳು ಮತ್ತು ಸಂಯೋಜನೆಗಳು ಹಾಗೂ ಚುನಾವಣಾ ಗಣಿತಗಳ ಆಧಾರದಲ್ಲಿ ಫಲಿತಾಂಶ ಮೊದಲೇ ನಿಶ್ಚಿತವಾಗಿತ್ತು. ಕಾಂಗ್ರೆಸ್ ನೇತೃತ್ವದ ಯುಪಿಎ ಮತ್ತು ಕೆಲವು ವಿಪಕ್ಷಗಳು ಸೇರಿ ಆಯ್ಕೆ ಮಾಡಿದ ಶರದ್ ಪವಾರ್, ಫಾರೂಕ್ ಅಬ್ದುಲ್ಲಾ ಹಾಗೂ ಗೋಪಾಲಕೃಷ್ಣ ಗಾಂಧಿಯವರು ವೈಯಕ್ತಿಕ ಕಾರಣಗಳು ಹಾಗೂ ಸೋಲು ಖಚಿತವೆಂದು ಸ್ಪರ್ಧಿಸಲು ಸ್ಪಷ್ಟವಾಗಿ ನಿರಾಕರಿಸಿದರು. ಕೊನೆಗೆ ಬಿಜೆಪಿಯಿಂದ ಹೊರಬಂದ ಯಶವಂತ ಸಿನ್ಹಾರವರನ್ನು ನಾಲ್ಕನೆಯವರಾಗಿ ಪ್ರತಿಪಕ್ಷಗಳ ಅಭ್ಯರ್ಥಿಯಾದರು. ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿಯವರಿಗೆ ಮೋದಿ ಮೇಲಿರುವ ಸಿಟ್ಟು ಹಾಗೂ ಸಿನ್ಹಾರವರಿಗೆ ಮೋದಿ ಮೇಲಿರುವ ದ್ವೇಷ ಅವರ ಆಯ್ಕೆಯಲ್ಲಿ ಪ್ರಮುಖ ಪಾತ್ರ ವಹಿಸಿತು.

ದೇಶದ ಎನ್‌ಡಿಎ, ಯುಪಿಎಯೇತರ ಪಕ್ಷಗಳು ಮುರ್ಮುರವರಿಗೆ ಬೆಂಬಲ ವ್ಯಕ್ತಪಡಿಸಿದವು. ಒಡಿಶಾದ ಬಿಜೆಡಿ, ಬಹುಜನ ಸಮಾಜ ಪಕ್ಷ ಝಾರ್ಖಂಡ್ ಮುಕ್ತಿ ಮೋರ್ಚಾ, ಮುರ್ಮುರನ್ನು ಬೆಂಬಲಿಸಿದವು. ದಕ್ಷಿಣದ ಆಂಧ್ರದಲ್ಲಿ ಎಲ್ಲ ಪಕ್ಷಗಳು, ತಮಿಳ್ನಾಡಿನ ಅಣ್ಣಾ ಡಿಎಂಕೆ, ಕರ್ನಾಟಕದ ಜೆಡಿಎಸ್ ಬೆಂಬಲ ನೀಡಿದವು. ಮಹಾರಾಷ್ಟ್ರದಲ್ಲಿ ಬದಲಾದ ರಾಜಕೀಯ ಪರಿಸ್ಥಿತಿಯಲ್ಲಿ ಅಳಿದುಳಿದ ಸಂಸದರನ್ನು, ಶಾಸಕರನ್ನು ತಮ್ಮ ಬಣದಲ್ಲಿ ಉಳಿಸಿಕೊಳ್ಳಲು ಶಿವಸೇನೆಯ ಉದ್ಧವ್ ಠಾಕ್ರೆಯವರು ಕೂಡ ಮುರ್ಮುರಿಗೆ ಬೆಂಬಲ ಘೋಷಿಸಿದರು. ಪೂರ್ವೋತ್ತರ ಭಾರತದ ಬಹುತೇಕ ಜಾತಿಯ ಬುಡಕಟ್ಟಿನ ಪಕ್ಷಗಳು ಮುರ್ಮುರನ್ನು ಬೆಂಬಲಿಸಿದವು. ಗಮನಿಸತಕ್ಕ ಅಂಶವೆಂದರೆ ಕಾಂಗ್ರೆಸ್ ಹಾಗೂ ಟಿಎಂಸಿಯೇತರ ವಿಪಕ್ಷಗಳು ಯಶವಂತ ಸಿನ್ಹಾ ಬಗ್ಗೆ ಅಷ್ಟೇನೂ ಒಲವು ತೋರಿಸಲಿಲ್ಲ.

ದೇಶದ ಮೂರನೇ ಅತೀ ದೊಡ್ಡ ಸಮುದಾಯವಾಗಿರುವ ಸಂಥಾಲ್ ಬುಡಕಟ್ಟು ಜನಾಂಗದ ದ್ರೌಪದಿ ಮುರ್ಮುರವರು 1958ರಲ್ಲಿ ಒಡಿಶಾದ ಮಯೂರಭಂಜ್ ಜಿಲ್ಲೆಯ ಬೈದಾಪ್ರಸಿ ಎಂಬ ಕುಗ್ರಾಮದಲ್ಲಿ ಜನಿಸಿದರು. ಅತ್ಯಂತ ಹಿಂದುಳಿದ ಪ್ರದೇಶದ ಬುಡಕಟ್ಟು ಸಮುದಾಯಕ್ಕೆ ಸೇರಿದವರಾಗಿದ್ದರೂ ಇವರ ಪರಿವಾರದವರು ವಿದ್ಯಾವಂತರಾಗಿದ್ದು, ಗ್ರಾಮದಲ್ಲಿ ಗೌರವಕ್ಕೆ ಪಾತ್ರರಾಗಿದ್ದರು. ಇವರ ತಂದೆ ಬಿರಿಂಚಿ ನಾರಾಯಣ ಟುಡು, ಅಜ್ಜ, ಗ್ರಾಮದ ಪ್ರಮುಖರಾಗಿದ್ದರು. ಶಿವನ ಅನನ್ಯ ಭಕ್ತೆಯಾಗಿದ್ದ ಇವರು, ಅಂದಿನ ಸಾಮಾಜಿಕ ವ್ಯವಸ್ಥೆಯಲ್ಲಿ ವಿದ್ಯಾಭ್ಯಾಸ ಮಾಡುವಾಗ ಸಾಕಷ್ಟು ಕಷ್ಟಗಳನ್ನು ಎದುರಿಸಿದ್ದರು. ವಿದ್ಯಾಭ್ಯಾಸದಲ್ಲಿ ಪ್ರತಿಭಾವಂತರಾಗಿದ್ದ ಇವರು ಅಸೀಮ ಧೈರ್ಯ, ಆತ್ಮವಿಶ್ವಾಸ ಹೊಂದಿದ್ದರು. ಬಾಲಕಿಯಾಗಿದ್ದಾಗ ಇವರನ್ನು ಒಮ್ಮೆ ತಂದೆ ಟುಡುರವರು ರಾಯ್‌ರಂಗಪುರದಲ್ಲಿ ಒಡಿಶಾದ ಮಂತ್ರಿಯಾಗಿದ್ದ ಕಾರ್ತಿಕ ಮಾಝೀಯವರ ಸಾರ್ವಜನಿಕ ಕಾರ್ಯಕ್ರಮಕ್ಕೆ ಕರೆದುಕೊಂಡು ಹೋಗಿದ್ದರು. ತುಂಬಿದ ಆ ಸಭೆಯಲ್ಲಿ ಬಾಲಕಿ ಮುರ್ಮು ಏಕಾಏಕಿ ತಮ್ಮ ಶಾಲಾ ಪ್ರಮಾಣ ಪತ್ರವನ್ನು ತೋರಿಸುತ್ತಾ ವೇದಿಕೆಯತ್ತ ಧಾವಿಸಿ ಮಾಝಿಯವರಲ್ಲಿ ತನಗೆ ಭುವನೇಶ್ವರದಲ್ಲಿ ವಿದ್ಯಾಭ್ಯಾಸಕ್ಕೆ ಅವಕಾಶ ಮಾಡಿಕೊಡಬೇಕೆಂದು ಮನವಿ ಮಾಡಿದರು. ಮುರ್ಮುರವರಲ್ಲಿದ್ದ ಧೈರ್ಯ, ಆತ್ಮವಿಶ್ವಾಸ, ವಿದ್ಯಾಭ್ಯಾಸಕ್ಕಾಗಿ ಇದ್ದ ತುಡಿತದಿಂದ ಪ್ರಭಾವಿತರಾದ ಮಾಝಿಯವರು ಮುರ್ಮುರವರಿಗೆ ಅವಶ್ಯಕವಾದ ವ್ಯವಸ್ಥೆಯನ್ನು ಮಾಡಿದರು. ಭುವನೇಶ್ವರದ ರಮಾದೇವಿ ಮಹಿಳಾ ಕಾಲೇಜ್‌ನಿಂದ ಪದವಿ ಪಡೆದ ನಂತರ ಒಡಿಶಾ ಸರಕಾರದ ನೀರಾವರಿ ಇಲಾಖೆಯಲ್ಲಿ ಜೂನಿಯರ್ ಅಸಿಸ್ಟೆಂಟ್ ಆಗಿ ವೃತ್ತಿ ಜೀವನ ಆರಂಭಿಸಿದರು.



> **ದ್ರೌಪದಿ ಮುರ್ಮುರನ್ನು ರಾಷ್ಟ್ರಪತಿ ಅಭ್ಯರ್ಥಿಯಾಗಿ ಆಯ್ಕೆ ಮಾಡುವಲ್ಲಿ ಬಿಜೆಪಿಯ ಲೆಕ್ಕಾಚಾರ ವಿಶೇಷವಾಗಿ ಪ್ರಧಾನಿ ಮೋದಿಯವರ ರಾಜಕೀಯ ಚಾಣಾಕ್ಷತನ ಯಶಸ್ವಿಯಾಯಿತು. ಯಶವಂತ ಸಿನ್ಹಾರನ್ನು ಆಯ್ಕೆ ಮಾಡಿದ ಹದಿನೇಳು ವಿಪಕ್ಷಗಳ ಮೈತ್ರಿ ಕೂಟ ಮಂಕಾಯಿತು. ಸಿನ್ಹಾ ಆಯ್ಕೆಯಲ್ಲಿ ಪ್ರಮುಖ ಪಾತ್ರ ವಹಿಸಿದ್ದ ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿಯವರು ಮುರ್ಮು ಘೋಷಣೆಯಾಗುತ್ತಿದ್ದಂತೆ ದಿಗ್ಭ್ರಮೆಗೊಳಗಾದರು. ಬಂಗಾಳದ ಜಂಗಲ್ ಮಹಲ್ ಪ್ರದೇಶದಲ್ಲಿರುವ ಸಂಥಾಲ್ ಬಾಹುಳ್ಯವಿರುವ ನಲ್ವತ್ತಕ್ಕೂ ಹೆಚ್ಚು ವಿಧಾನಸಭಾ ಕ್ಷೇತ್ರಗಳು ತಮ್ಮ ಕೈಜಾರಬಹುದೆಂದು ಮಮತಾ ಆತಂಕಗೊಂಡಿದ್ದಾರೆ. ಕೇಂದ್ರವು ಮೊದಲೇ ತಿಳಿಸಿದ್ದರೆ ಮುರ್ಮುರನ್ನು ಅವಿರೋಧವಾಗಿ ಆಯ್ಕೆ ಮಾಡಬಹುದಿತ್ತು ಎನ್ನುವುದರೊಂದಿಗೆ ಸಿನ್ಹಾರಿಗೆ ಬಾಗಿಲು ತೋರಿಸಿದರು.**

1980ರಲ್ಲಿ ಶ್ಯಾಮ್‌ಚರಣ್ ಮುರ್ಮುರನ್ನು ವಿವಾಹವಾಗಿದ್ದ ಇವರು 2014ರಲ್ಲಿ ಪತಿಯನ್ನು ಕಳೆದುಕೊಂಡರು. ಮುಂದಿನ ನಾಲ್ಕು ವರ್ಷಗಳಲ್ಲಿ ವಯಸ್ಸಿಗೆ ಬಂದ ಇಬ್ಬರು ಪುತ್ರರು ಮೃತರಾದರು. ಅತ್ತೆಯವರ ಅಪೇಕ್ಷೆಯಂತೆ 1983ರಲ್ಲಿ ಸರಕಾರಿ ಹುದ್ದೆಗೆ ರಾಜೀನಾಮೆ ನೀಡಿ ತಮ್ಮ ಗ್ರಾಮಕ್ಕೆ ಮರಳಿದರು. ಆನಂತರ ಶ್ರೀ ಅರಬಿಂದು ಇಂಟಗ್ರಲ್ ಶಾಲೆಯಲ್ಲಿ ವೇತನ ಸ್ವಿಕರಿಸದೇ ಅಧ್ಯಾಪಕಿಯಾಗಿ ಸೇವೆ ಸಲ್ಲಿಸಿದರು. ಬ್ಯಾಂಕ್ ಉದ್ಯೋಗಿಯಾಗಿದ್ದ ತಮ್ಮ ಪತಿಯ ವೇತನವೇ ತನ್ನ ಕುಟುಂಬ ನಿರ್ವಹಣೆಗೆ ಸಾಕೆಂದು ತಿಳಿಸಿದರು. ಮುಂದೆ ತನ್ನ ಕುಟುಂಬದ ನಾಲ್ಕು ಎಕರೆ ಜಮೀನನ್ನು ತನ್ನ ಗ್ರಾಮದ ಮಕ್ಕಳ ಶಿಕ್ಷಣಕ್ಕಾಗಿ ತಮ್ಮ ಪತಿಯ ಹೆಸರಿನಲ್ಲಿ ಶಾಲೆಯನ್ನು ನಿರ್ಮಿಸಲು ದಾನವಾಗಿ ನೀಡಿದರು. ಈ ರೀತಿ ತಮ್ಮ ಜೀವನವನ್ನು ತಮ್ಮ ಸಮುದಾಯದ ಸಮಾಜದ ಸೇವೆಗಾಗಿ ಸಮರ್ಪಿಸಿದರು. ಪತಿ, ಪುತ್ರರಿಬ್ಬರ ವಿಯೋಗದ ನಂತರವೂ ಧೃತಿಗೆಡದೇ ತನ್ನ ಪರಿವಾರ ಮಾತ್ರವಲ್ಲ, ಸಂಪೂರ್ಣ ಸಮಾಜದ ಹೊಣೆಯನ್ನು ಶ್ರದ್ಧೆ, ಸಮರ್ಪಣೆ ಮತ್ತು ಪ್ರಾಮಾಣಿಕತೆಯಿಂದ ನಿರ್ವಹಿಸಿದರು.

1997ರಲ್ಲಿ ದ್ರೌಪದಿ ಮುರ್ಮುರವರು ಬಿಜೆಪಿಗೆ ಅಧಿಕೃತವಾಗಿ ಸೇರ್ಪಡೆಯಾಗುವುದರೊಂದಿಗೆ ತಮ್ಮ ರಾಜಕೀಯ ಜೀವನವನ್ನು ಪ್ರಾರಂಭಿಸಿದರು. ಆರಂಭದಲ್ಲಿ ಬಿಜೆಪಿ ಪರಿಶಿಷ್ಟ ಪಂಗಡ ಮೋರ್ಚಾದ ಉಪಾಧ್ಯಕ್ಷೆಯಾದರು. 2000 ದಿಂದ 2009ರ ಅವಧಿಯಲ್ಲಿ ಎರಡು ಬಾರಿ ರಾಯರಂಗಪುರವನ್ನು ಶಾಸಕಿಯಾಗಿ ಪ್ರತಿನಿಧಿಸಿದರು. ಒಡಿಶಾದ ನವೀನ ಪಟ್ನಾಯಕ್ ಮಂತ್ರಿ ಮಂಡಲದಲ್ಲಿ ಸಾರಿಗೆ, ವಾಣಿಜ್ಯ, ಮೀನುಗಾರಿಕೆ ಹಾಗೂ ಪಶು ಸಂಗೋಪನಾ ಖಾತೆಗಳ ಸಚಿವರಾಗಿ ತಮ್ಮ ಅತ್ಯುತ್ತಮ ಆಡಳಿತ ಸಾಮರ್ಥ್ಯವನ್ನು ತೋರಿದ್ದರು. ಶಾಸಕಿಯಾಗಿ, ಮಂತ್ರಿಯಾಗಿ ಅವರು ತೋರಿದ ನಿರ್ವಹಣೆಗಾಗಿ 2007ರಲ್ಲಿ ಒಡಿಶಾ ಸರಕಾರವು ಅತ್ಯುತ್ತಮ ಶಾಸಕರಿಗಾಗಿ ನೀಡುವ "ನೀಲಕಂಠ" ಪ್ರಶಸ್ತಿ ನೀಡಿ ಗೌರವಿಸಿತು. 2015 ರಿಂದ 2021ರವರೆಗೆ ಝಾರ್ಖಂಡ್‌ನ ರಾಜ್ಯಪಾಲರಾದರು. ಈ ಸ್ಥಾನ ಅಲಂಕರಿಸಿದ ಪ್ರಥಮ ಬುಡಕಟ್ಟು ಸಮುದಾಯಕ್ಕೆ ಸೇರಿದ ಮಹಿಳೆಯೆಂಬ ಗೌರವಕ್ಕೆ ಪಾತ್ರರಾದರು.

ರಾಜ್ಯಪಾಲರಾಗಿದ್ದ ಅವಧಿಯಲ್ಲಿ ರಾಜ್ಯದ ಬಿಜೆಪಿ ಸರಕಾರ ಸದನದಲ್ಲಿ ಅಂಗೀಕರಿಸಿದ ಮಸೂದೆಯೊಂದು ಆದಿವಾಸಿಗಳ ಹಿತಕ್ಕೆ ವಿರುದ್ಧವಿದೆಯೆಂದು ವಾಪಸ್ಸು ಕಳಿಸಿದ್ದರು. ಇದೇ ರೀತಿ ಆನಂತರ ಬಂದ ಹೇಮಂತ ಸೊರೇನ್ ಸರಕಾರ ರಚಿಸಿದ ಬುಡಕಟ್ಟು ಸಲಹಾ ಮಂಡಳಿಯು (TAC) ರಾಜ್ಯಪಾಲರ ಅಧಿಕಾರವನ್ನು ಮೊಟಕುಗೊಳಿಸಬಹುದೇ ಎಂಬ ಬಗ್ಗೆ ಮುರ್ಮುರವರು ಕಾನೂನು ಸಲಹೆ ಕೇಳಿದ್ದರು. ಈ ಮೂಲಕ ಪಕ್ಷಕ್ಕಿಂತ, ಅಧಿಕಾರಕ್ಕಿಂತ ಆದಿವಾಸಿಗಳ ಹಿತ ರಕ್ಷಣೆ ತನ್ನ ಪ್ರಥಮ ಆದ್ಯತೆ ಎಂದು ಸ್ಪಷ್ಟಪಡಿಸಿದ್ದರು.

ತನ್ನ ರಾಜ್ಯದ, ತನ್ನ ಸಮುದಾಯದ ಹಿತಕ್ಕಾಗಿ ಯಾವುದೇ ಶಿಷ್ಟಾಚಾರ ಉಲ್ಲಂಘಿಸಲು ಹಿಂಜರಿಯುತ್ತಿರಲಿಲ್ಲ. ಒಮ್ಮೆ ರಾಜ್ಯದ ಮುಖ್ಯಮಂತ್ರಿ ನವೀನ್ ಪಟ್ನಾಯಕ್‌ರ ಸರಕಾರಿ ನಿವಾಸಕ್ಕೆ ಭೇಟಿ ನೀಡುವ ಸಂದರ್ಭದಲ್ಲಿ, ಅದೇ ರೀತಿ ರೈಲ್ವೆ ಸೇವೆಯನ್ನು ತನ್ನ ಮಯೂರ ಭಂಜ್ ಜಿಲ್ಲೆಗೂ ವಿಸ್ತರಿಸಬೇಕೆಂದು ಕೇಂದ್ರ ರೈಲ್ವೆ ಸಚಿವರಿಗೆ ಮನವಿ ನೀಡುವ ಎರಡೂ ಸಂದರ್ಭದಲ್ಲಿ ಅವರು ಶಿಷ್ಟಾಚಾರ ಉಲ್ಲಂಘಿಸಿದ್ದರೆಂದು ಅವರ ರಾಜಕೀಯ ಗುರು ರಾಜ್ ಕಿಶೋರ ದಾಸ್ ಹೇಳಿದ್ದರು. ದಾಸ್‌ರವರು ಮುರ್ಮು ವ್ಯಕ್ತಿತ್ವದ ಬಗ್ಗೆ "ಅವರು ಸಂತೋಷ ಮತ್ತು ದುಃಖದ ಸಂದರ್ಭದಲ್ಲಿ ಹಾಗೂ ಪರಿವಾರದಲ್ಲಿ ದುರಂತಗಳ ಸರಮಾಲೆ ಸಂಭವಿಸಿದ ಎಲ್ಲ ಸಂದರ್ಭಗಳನ್ನು ಸಮಚಿತ್ತತೆಯಿಂದ ಸ್ವೀಕರಿಸಿದ್ದರು" ಎನ್ನುತ್ತಾರೆ.

ದ್ರೌಪದಿ ಮುರ್ಮುರನ್ನು ರಾಷ್ಟ್ರಪತಿ ಅಭ್ಯರ್ಥಿಯಾಗಿ ಆಯ್ಕೆ ಮಾಡುವಲ್ಲಿ ಬಿಜೆಪಿಯ ಲೆಕ್ಕಾಚಾರ ವಿಶೇಷವಾಗಿ ಪ್ರಧಾನಿ ಮೋದಿಯವರ ರಾಜಕೀಯ ಚಾಣಾಕ್ಷತನ ಯಶಸ್ವಿಯಾಯಿತು. ಯಶವಂತ ಸಿನ್ಹಾರನ್ನು ಆಯ್ಕೆ ಮಾಡಿದ ಹದಿನೇಳು ವಿಪಕ್ಷಗಳ ಮೈತ್ರಿ ಕೂಟ ಮಂಕಾಯಿತು. ಸಿನ್ಹಾ ಆಯ್ಕೆಯಲ್ಲಿ ಪ್ರಮುಖ ಪಾತ್ರ ವಹಿಸಿದ್ದ ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿಯವರು ಮುರ್ಮು ಘೋಷಣೆಯಾಗುತ್ತಿದ್ದಂತೆ ದಿಗ್ಭ್ರಮೆಗೊಳಗಾದರು. ಬಂಗಾಳದ ಜಂಗಲ್ ಮಹಲ್ ಪ್ರದೇಶದಲ್ಲಿರುವ ಸಂಥಾಲ್ ಬಾಹುಳ್ಯವಿರುವ ನಲ್ವತ್ತಕ್ಕೂ ಹೆಚ್ಚು ವಿಧಾನಸಭಾ ಕ್ಷೇತ್ರಗಳು ತಮ್ಮ ಕೈಜಾರಬಹುದೆಂದು ಮಮತಾ ಆತಂಕಗೊಂಡಿದ್ದಾರೆ. ಕೇಂದ್ರವು ಮೊದಲೇ ತಿಳಿಸಿದ್ದರೆ ಮುರ್ಮುರನ್ನು ಅವಿರೋಧವಾಗಿ ಆಯ್ಕೆ ಮಾಡಬಹುದಿತ್ತು ಎನ್ನುವುದ ರೊಂದಿಗೆ ಸಿನ್ಹಾರಿಗೆ ಬಾಗಿಲು ತೋರಿಸಿದರು.

ಯಶವಂತ ಸಿನ್ಹಾರಂತೂ ಮೋದಿಯವರ ಮೇಲಿನ ದ್ವೇಷದಿಂದ ತಾನು ಸ್ಪರ್ಧಿಸುತ್ತಿರುವುದು ರಾಷ್ಟ್ರದ ಸರ್ವೋಚ್ಛ ಸ್ಥಾನಕ್ಕೆ ಎಂಬುದನ್ನು ಯೋಚಿಸದೇ ದರ್ಪದಿಂದ ತಮ್ಮ ಪರ ಪ್ರಚಾರ ಮಾಡಿದರು. ಒಂದು ಸಂದರ್ಭದಲ್ಲಿ ದ್ರೌಪದಿ ಮುರ್ಮುರಿಗೆ ವಿಜಯಿಯಾದರೆ ರಬ್ಬರ್ ಸ್ಟಾಂಪ್ ರಾಷ್ಟ್ರಪತಿಯಾಗಬಾರದೆಂದು ದರ್ಪದ, ನಗೆಪಾಟಲಿನ ಸಲಹೆ ನೀಡಿದರು. ಈ ಸಲಹೆ ನೀಡುವಾಗ ಸಿನ್ಹಾ ತಮ್ಮನ್ನು ಬೆಂಬಲಿಸುತ್ತಿರುವ ಪಕ್ಷಗಳ ಇತಿಹಾಸದ ಬಗ್ಗೆ ಯೋಚಿಸಲಿಲ್ಲ. ಮಮತಾ ಬ್ಯಾನರ್ಜಿಯವರು ಬಂಗಾಳದ ವಿಶ್ವವಿದ್ಯಾಲಯಗಳಿಗೆ ಕುಲಪತಿಗಳನ್ನು ನೇಮಿಸುವ ರಾಜ್ಯಪಾಲರ ಅಧಿಕಾರವನ್ನು ಕಸಿಯುವ ಮಸೂದೆಯನ್ನು ವಿಧಾನಸಭೆಯಲ್ಲಿ ಅಂಗೀಕರಿಸಿದ್ದರು. ಕಾಂಗ್ರೆಸ್ ಅಂತೂ ಈ ದೇಶದ ಸಂವಿಧಾನಕ್ಕೆ ಯಾವತ್ತೂ ಬೆಲೆ ನೀಡಲಿಲ್ಲ. ಸಂವಿಧಾನಕ್ಕೆ ಅನೇಕ ಬಾರಿ ತಿದ್ದುಪಡಿ ಮಾಡಿದ್ದರು. ಸಂವಿಧಾನದ 356ನೇ ವಿಧಿಯನ್ನು ದುರುಪಯೋಗಿಸಿ ಐವತ್ತಕ್ಕೂ ಹೆಚ್ಚು ಬಾರಿ ಚುನಾಯಿತ ರಾಜ್ಯ ಸರಕಾರಗಳನ್ನು ವಿಸರ್ಜನೆ ಮಾಡಿದ್ದರು. ಗ್ಯಾನಿ ಜೈಲ್‌ಸಿಂಗ್, ಫಕ್ರುದ್ದೀನ್ ಅಲಿ ಅಹ್ಮದ್, ಪ್ರತಿಭಾ ಪಾಟೀಲ್ ಮೊದಲಾದವರು ಕಾಂಗ್ರೆಸ್ ಪಕ್ಷದ ರಬ್ಬರ್ ಸ್ಟಾಂಪ್‌ಗಳಂತೆ ಕಾರ್ಯ ನಿರ್ವಹಿಸಿದ್ದರು ಎನ್ನಬಹುದು. ಯಶವಂತ ಸಿನ್ಹಾರ ನಕಾರಾತ್ಮಕ ಪ್ರಚಾರ ಅವರನ್ನು ಬೆಂಬಲಿಸಿದ ಪಕ್ಷಗಳು ತಿರಸ್ಕರಿಸುವಂತಾಯಿತು. ಇದರ ಪರಿಣಾಮ ಸರಳ ಸ್ವಭಾವದ ಮುರ್ಮು ಪರ ವಿಪಕ್ಷಗಳ ಹದಿನೇಳು ಸಂಸದರು, 125 ಶಾಸಕರು ತಮ್ಮ ಪಕ್ಷಗಳ ನಿರ್ಣಯ ಮೀರಿ ಅಡ್ಡ ಮತದಾನ ಮಾಡಿದರು. ಹೀಗಾಗಿ ವಿಪಕ್ಷಗಳ ಪೂರ್ಣ ಮತಗಳನ್ನು ಪಡೆಯಲು ಯಶವಂತ ಸಿನ್ಹಾ ವಿಫಲರಾಗಿ ದಯನೀಯ ಸೋಲನುಭವಿಸಿದರು. ಜು.21ರಂದು ಫಲಿತಾಂಶ ಪ್ರಕಟವಾಗುತ್ತಿದ್ದಂತೆ ಎರಡು ವಿದ್ಯಮಾನಗಳು ಸಂಭವಿಸಿದವು. ಒಂದೆಡೆ ದೇಶದ ಬಡ ಆದಿವಾಸಿ ಮಹಿಳೆ ರಾಷ್ಟ್ರಪತಿ ಭವನದತ್ತ ಮುಂದಡಿ ಇಡುತ್ತಿದ್ದರೆ, ಮತ್ತೊಂದೆಡೆ ದೇಶದ ಅತ್ಯಂತ ಶಕ್ತಿಶಾಲಿ, ಶ್ರೀಮಂತ ಮಹಿಳೆ ವಿಚಾರಣೆಗಾಗಿ ಜಾರಿ ನಿರ್ದೇಶನಾಲಯದತ್ತ ಸಾಗುತ್ತಿದ್ದರು. ಏಕ ಕಾಲದಲ್ಲಿ ಸಂಭವಿಸಿದ ಈ ಎರಡು ವಿದ್ಯಮಾನಗಳು ಭಾರತೀಯ ಪ್ರಜಾತಂತ್ರದಲ್ಲಿ ಅಡಕವಾಗಿರುವ ಸರ್ವವ್ಯಾಪಿ ಹಾಗೂ ಸರ್ವ ಸ್ಪರ್ಶಿ ಮತ್ತು ತಾಕತ್ತು ಹಾಗೂ ಸಾಮರ್ಥ್ಯದಂತಹ ಮೌಲ್ಯಗಳನ್ನು ಪ್ರತಿಬಿಂಬಿಸುತ್ತಿತ್ತು.

ಕೆಆರ್‌ಎಸ್ ಹಿನ್ನೀರಲ್ಲಿ ಜೂನಿಯರ್ ರ್‍ಯಾಂಕಿಂಗ್ ಸೈಲಿಂಗ್ ಚಾಂಪಿಯನ್‌ಶಿಪ್ ವಿಧ್ಯುಕ್ತ ಆರಂಭ

ಮೊದಲ ದಿನ ಕ್ರೀಡಾಪಟುಗಳ ರಿಜಿಸ್ಟ್ರೇಷನ್



ಶ್ರೀರಂಗಪಟ್ಟಣ, ಜು. 29– ಮಂಡ್ಯ ಜಿಲ್ಲೆ ಶ್ರೀರಂಗಪಟ್ಟಣ ತಾಲೂಕಿನ ಕೃಷ್ಣರಾಜ ಸಾಗರ (ಕೆಆರ್‌ಎಸ್)ದ ಜಲಾಶಯದ ಹಿನ್ನೀರಿನಲ್ಲಿ ನಡೆಯುವ ನ್ಯಾಷನಲ್ ಜೂನಿಯರ್ ರ್‍ಯಾಂಕಿಂಗ್ ಸೈಲಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಸುಮಾರು 70ಕ್ಕೂ ಅಧಿಕ ಮಂದಿ ಸ್ಪರ್ಧಾಳುಗಳು ಭಾಗವಹಿಸಲಿದ್ದಾರೆ.

ದೇಶದ ನಾನಾ ಮೂಲೆಗಳಿಂದ ನಾವಿಕ ಕ್ರೀಡಾಪಟುಗಳು ತಮ್ಮ ಬೋಟುಗಳೊಂದಿಗೆ ಸ್ಪರ್ಧೆ ನಡೆಯುವ ಸ್ಥಳಕ್ಕೆ ಆಗಮಿಸಿದ್ದು, ಮೊದಲ ದಿನವಾದ ಶುಕ್ರವಾರ ಕ್ರೀಡಾಪಟುಗಳ ರಿಜಿಸ್ಟ್ರೇಷನ್ ನಡೆಯಿತು. ಇದರೊಂದಿಗೆ ಬೋಟುಗಳ ಅಳತೆ ಮಾಡುವ ಪ್ರಕ್ರಿಯೆಯೂ ನಡೆಯಿತು.

ಈ ಸ್ಪರ್ಧೆಯಲ್ಲಿ ಬೋಟುಗಳ ಅಳತೆ ಬಹು ಮುಖ್ಯವಾದುದು. ಒಂದು ವೇಳೆ ನಿಯಮ ಮೀರಿ ಅಥವಾ ಏನಾದರೂ ಅಳತೆಯಲ್ಲಿ ವ್ಯತ್ಯಾಸ ಕಂಡು ಬಂದರೆ ಅಂತಹ ಕ್ರೀಡಾಪಟುಗಳನ್ನು ಸ್ಪರ್ಧೆಯಿಂದ ಅನರ್ಹಗೊಳಿಸಲಾಗುವುದು ಎಂದು ಕ್ಯಾಪ್ಟನ್ ಅರವಿಂದ್ ಶರ್ಮಾ ತಿಳಿಸಿದರು.

ದಿ ರಾಯಲ್ ಮೈಸೂರು ಸೈಲಿಂಗ್ ಕ್ಲಬ್ (ಆರ್‌ಎಂಎಸ್‌ಸಿ) ವತಿಯಿಂದ ನ್ಯಾಷನಲ್ ಫೆಡರೇಷನ್ ಯಾಚಿಂಗ್ ಅಸೋಸಿಯೇಷನ್ ಆಫ್ ಇಂಡಿಯಾ (ವೈಎಐ) ಸಹಯೋಗದೊಂದಿಗೆ ಈ ಪಂದ್ಯಾವಳಿಯನ್ನು ಆಯೋಜಿಸಲಾಗಿದ್ದು, ಆ. 4 ರವರೆಗೆ ನಡೆಯಲಿದೆ. ಆಹ್ವಾನಿತರಿಗೆ ಮಾತ್ರ ಸ್ಪರ್ಧೆ ವೀಕ್ಷಿಸಲು ಅವಕಾಶ ಕಲ್ಪಿಸಲಾಗಿದ್ದು, ನಾಳೆ (ಜು. 30)ಯಿಂದ ಅಧಿಕೃತವಾಗಿ ಸ್ಪರ್ಧೆಗಳು ಆರಂಭವಾಗಲಿವೆ.

ದೇಶದ ತಮಿಳುನಾಡು, ಹೈದರಾಬಾದ್, ಭೋಪಾಲ್, ಮುಂಬೈ, ಗೋವಾ, ಕರ್ನಾಟಕ, ಇಂಡಿಯನ್ ನೇವಿ ಮತ್ತು ಇಂಡಿಯನ್ ಆರ್ಮಿ ತಂಡಗಳು ಈ ಸ್ಪರ್ಧೆಯಲ್ಲಿ ಭಾಗವಹಿಸುತ್ತಿರುವುದು ವಿಶೇಷವಾಗಿದೆ. ಶುಕ್ರವಾರ ನಾವಿಕ ಪಟುಗಳು ನಾಳಿನ ಪಂದ್ಯಗಳಿಗೆ ಪೂರ್ವ ತಯಾರಿ ನಡೆಸಿಕೊಳ್ಳುತ್ತಿದ್ದುದು ಕಂಡುಬಂದಿತು.

ಯದುವೀರರಿಂದ ಕಾಸ್ಮೋಪಾಲಿಟನ್ ಕ್ಲಬ್ ನವೀಕೃತ ವಸತಿಗೃಹ ಕಟ್ಟಡ ಉದ್ಘಾಟನೆ



ಮೈಸೂರು, ಜು.29(ಎಸ್‌ಪಿಎನ್)– ಮೈಸೂರಿನ ಕಾಸ್ಮೋಪಾಲಿಟನ್ ಕ್ಲಬ್ ಆವರಣದಲ್ಲಿ ನವೀಕೃತ ವಸತಿ ಗೃಹ ಕಟ್ಟಡವನ್ನು ರಾಜವಂಶಸ್ಥ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಇಂದು ಉದ್ಘಾಟಿಸಿದರು.

ಈ ವೇಳೆ ಮಾತನಾಡಿದ ಅವರು, ನಮ್ಮ ಪೂರ್ವಜರು ಶಿಕ್ಷಣ, ಆರೋಗ್ಯ, ಕೈಗಾರಿಕೆ ಹಾಗೂ ಸಾಂಸ್ಕೃತಿಕ ಕ್ಷೇತ್ರಕ್ಕೆ ಸಾಕಷ್ಟು ಕೊಡುಗೆ ನೀಡಿದ್ದಾರೆ. ಮೈಸೂರಿನಲ್ಲಿರುವ ಕ್ಲಬ್‌ಗಳ ಸ್ಥಾಪನೆಗೂ ಕಾರಣಕರ್ತರಾಗಿದ್ದಾರೆ. ಈ ಪ್ರತಿಷ್ಠಿತ ಕಾಸ್ಮೋಪಾಲಿಟನ್ ಕ್ಲಬ್ ಸ್ಥಾಪನೆಗೂ ನೆರವು ನೀಡಿದ್ದಾರೆ. ಇಲ್ಲಿನ ವಸತಿಗೃಹ ಕಟ್ಟಡಗಳನ್ನು ನಮ್ಮ ತಂದೆ ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಉದ್ಘಾಟಿಸಿದ್ದರು ಎಂದು ತಿಳಿಸಿದರು.

ಮೈಸೂರು ಪ್ರವಾಸೋದ್ಯಮ ವಿಶ್ವಮಟ್ಟದಲ್ಲಿ ಹೆಸರು ಗಳಿಸಿದ್ದು, ಇದರಲ್ಲಿ ಹೋಟೆಲ್ ಉದ್ಯಮದ ಪಾತ್ರವೂ ದೊಡ್ಡದು. ಉದ್ಯಮ ಬೆಳೆದರೆ, ನೂರಾರು ಯುವಕರಿಗೆ ಉದ್ಯೋಗ ಸೃಷ್ಟಿಯಾಗುತ್ತದೆ. ಹಾಗಾಗಿ ಪ್ರವಾಸೋದ್ಯಮ ಬೆಳವಣಿಗೆಗೆ ಪೂರಕವಾಗಿ ಉದ್ಯಮಗಳು ಸ್ಥಾಪನೆಯಾಗಬೇಕು ಎಂದು ತಿಳಿಸಿದರು.

ಈ ವೇಳೆ ಕಾಸ್ಮೋಪಾಲಿಟನ್ ಕ್ಲಬ್ ಅಧ್ಯಕ್ಷ ಸಿ.ನಾರಾಯಣ ಗೌಡ, ಉಪಾಧ್ಯಕ್ಷ ಎಸ್.ದ್ವಾರಕಿ, ಕಾರ್ಯದರ್ಶಿ ಹೆಚ್.ಎನ್.ಜಯಪಾಲ್, ಖಜಾಂಚಿ ಬಿ.ಪಿ. ವೀರೇಶ್ ಸೇರಿದಂತೆ ಇತರರಿದ್ದರು.

ದಸರಾ ಫಲಪುಷ್ಪ ಪ್ರದರ್ಶನ

ಮೈಸೂರು, ಜು.29– ತೋಟಗಾರಿಕೆ ಇಲಾಖೆ ಮತ್ತು ಜಿಲ್ಲಾ ತೋಟಗಾರಿಕೆ ಸಂಘ ಕರ್ಜನ್ ಪಾರ್ಕ್ ಮೈಸೂರು ಇವರ ಸಂಯುಕ್ತಾಶ್ರಯದಲ್ಲಿ ದಸರಾ ಫಲಪುಷ್ಪ ಪ್ರದರ್ಶನವನ್ನು ಸೆ.26ರಿಂದ ಅ.5 ನಿಶಾದ್ ಬಾಗ್(ಕುಪ್ಪಣ್ಣ ಪಾರ್ಕ್) ಆವರಣದಲ್ಲಿ ನಡೆಸಲು ತೀರ್ಮಾನಿಸಲಾಗಿದೆ. ಜಿಲ್ಲೆಯ ವಿವಿಧ ಬೃಹತ್ ಕೈಗಾರಿಕಾ ಉದ್ಯಮದವರು ಫಲಪುಷ್ಪ ಪ್ರದರ್ಶನಕ್ಕೆ ಭಾಗವಹಿಸಲು ಅವಕಾಶವಿದ್ದು ಸೆ.15ರೊಳಗೆ ಜಿಲ್ಲಾ ತೋಟಗಾರಿಕೆ ಸಂಘ ಕರ್ಜನ್ ಪಾರ್ಕ್ ಮೈಸೂರು ಇವರಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು ಎಂದು ಪ್ರಕಟಣೆ ತಿಳಿಸಿದೆ.

ಮೊದಲ ಟಿ20: ವಿಂಡೀಸ್ ವಿರುದ್ಧ ಭಾರತಕ್ಕೆ ಜಯ

ಪೋರ್ಟ್ ಆಫ್ ಸ್ಪೇನ್, ಜು.29– ನಾಯಕ ರೋಹಿತ್ ಶರ್ಮಾ ಅವರ ಅರ್ಧಶತಕ ಹಾಗೂ ದಿನೇಶ್ ಕಾರ್ತಿಕ್ ಬಿರುಸಿನ ಬ್ಯಾಟಿಂಗ್ ನೆರವಿನಿಂದ ಭಾರತ ವೆಸ್ಟ್ ಇಂಡೀಸ್ ವಿರುದ್ಧದ ಮೊದಲ ಟಿ20 ಪಂದ್ಯದಲ್ಲಿ 68 ರನ್‌ಗಳ ಗೆಲುವು ಸಾಧಿಸಿದೆ. ಈ ಮೂಲಕ ಸರಣಿಯಲ್ಲಿ 1–0 ಅಂತರದಿಂದ ಮುನ್ನಡೆ ಸಾಧಿಸಿದೆ. ಇಲ್ಲಿನ ಬ್ರಯಾನ್ ಲಾರಾ ಮೈದಾನದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಭಾರತ ನಿಗದಿತ 20 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 191 ರನ್ ಗಳಿಸಿತು. ಭಾರತದ ಪರ ನಾಯಕ ರೋಹಿತ್ ಶರ್ಮಾ 64, ಸೂರ್ಯಕುಮಾರ್ ಯಾದವ್ 24, ದಿನೇಶ್ ಕಾರ್ತಿಕ್ 41, ಜಡೇಜಾ 16 ರನ್ ಗಳಿಸಿದರು. ವಿಂಡೀಸ್ ಪರ ಅಲ್ಜಾರಿ ಜೋಸೆಫ್ 2, ಮೇಕಾಯ್, ಹೋಲ್ಡರ್, ಅಖೇಲ್ ಹುಸೇನ್ ಹಾಗೂ ಕಿಮು ಪಾಲ್ ತಲಾ ಒಂದೊಂದು ವಿಕೆಟ್ ಉರುಳಿಸಿದರು. ಭಾರತ ನೀಡಿದ ಗೆಲುವಿನ ಗುರಿ ಬೆನ್ನತ್ತಿದ ವೆಸ್ಟ್ ಇಂಡೀಸ್ ನಿಗದಿತ 20 ಓವರ್‌ಗಳಲ್ಲಿ 8 ವಿಕೆಟ್ ನಷ್ಟಕ್ಕೆ 122 ರನ್ ಗಳಿಸಲಷ್ಟೇ ಶಕ್ತವಾಯಿತು. ತಂಡದ ಪರ ಕೈಲ್ ಮೇಯರ್ಸ್ 15, ಶಮರ್ ಬ್ರೂಕ್ಸ್ 20, ನಿಕೋಲಸ್ ಪೂರನ್ 18, ಶಿಮ್ರಾನ್ ಹೆಟ್ಮೆಯರ್, ರೋವ್ಮನ್ ಪೋವೆಲ್ ತಲಾ 14, ಕಿಮೋ ಪಾಲ್ 19 ರನ್ ಗಳಿಸಿದರು. ಭಾರತದ ಪರ ಅರ್ಶದೀಪ್ ಸಿಂಗ್, ರವಿಚಂದ್ರನ್ ಅಶ್ವಿನ್, ರವಿ ಬಿಷ್ಣೋಯಿ ತಲಾ 2, ಭುವನೇಶ್ವರ್ ಕುಮಾರ್, ರವೀಂದ್ರ ಜಡೇಜಾ ತಲಾ ಒಂದೊಂದು ವಿಕೆಟ್ ಒಪ್ಪಿಸಿದರು. ದಿನೇಶ್ ಕಾರ್ತಿಕ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಅನಗತ್ಯವಾಗಿ ಸಿಮೆಂಟ್ ರಸ್ತೆಗಳ ನಿರ್ಮಾಣ ಬೇಡ

● ನಿರಂತರವಾಗಿ ನೀರು ಹರಿಯುವಂತಹ ಸ್ಥಳದಲ್ಲಿ ಮಾತ್ರ ಸಿಮೆಂಟ್ ರಸ್ತೆ ಮಾಡಿ: ಡಿಸಿ ● ಕ್ರಿಯಾ ಯೋಜನೆಗಳನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ: ಅಧಿಕಾರಿಗಳಿಗೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಎನ್.ಜಯರಾಂ ಸೂಚನೆ ●





ಮೈಸೂರು, ಜು.29(ಆರ್‌ಕೆ)– ಅನುಮೋದನೆಯಾಗಿರುವ ಕ್ರಿಯಾ ಯೋಜನೆಗಳನ್ನು ನಿಗದಿತ ಅವಧಿಯೊಳಗಾಗಿ ಪೂರ್ಣಗೊಳಿಸಿ ಸಾರ್ವಜನಿಕರಿಗೆ ಸೌಲಭ್ಯ ಕಲ್ಪಿಸಿ ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಎನ್.ಜಯರಾಂ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಮೈಸೂರಿನ ಜಿಲ್ಲಾ ಪಂಚಾಯಿತಿ ಕಚೇರಿ ಸಭಾಂಗಣದಲ್ಲಿ ಇಂದು ನಡೆದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, 2022ನೇ ಸಾಲಿನಲ್ಲಿ ಅನುಮೋದನೆಗೊಂಡಿರುವ ಕ್ರಿಯಾ ಯೋಜನೆಗಳಿಗೆ ಟೆಂಡರ್ ಕರೆದು ಅಭಿವೃದ್ಧಿ ಕಾಮಗಾರಿಗಳನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ ಹಂಚಿಕೆಯಾಗಿರುವ ಅನುದಾನವನ್ನು ಸದ್ಬಳಕೆ ಮಾಡುವಂತೆ ತಾಕೀತು ಮಾಡಿದರು.

ಟೆಂಡರ್ ಕರೆಯದೇ ಯಾವುದೇ ಕಾಮಗಾರಿ ನಡೆಸಕೂಡದು. ಒಬ್ಬರೇ ಗುತ್ತಿಗೆದಾರನಿಗೆ ಹಲವು ಕೆಲಸ ನೀಡಿದಲ್ಲಿ ಕಾಮಗಾರಿ ವಿಳಂಬವಾಗುವುದಲ್ಲದೇ ಗುಣಮಟ್ಟ ಕಾಪಾಡಲು ಸಾಧ್ಯವಾಗುವುದಿಲ್ಲ. ಪಾರದರ್ಶಕ ನೀತಿಯಂತೆ ಪ್ರಕ್ರಿಯೆ ನಡೆಸಿ ಎಂದು ಸಲಹೆ ನೀಡಿದ ಅವರು, ಅಂಗನವಾಡಿ ಕಟ್ಟಡಗಳ ರಿಪೇರಿ, ಹೊಸ ಕಟ್ಟಡ ನಿರ್ಮಾಣ ಕೆಲಸಗಳಿಗೆ ಗ್ರಾಮ ಪಂಚಾಯಿತಿಗಳಲ್ಲಿ 5 ಲಕ್ಷ ರೂ.ಗಳವರೆಗೆ ಅನುದಾನ ಬಳಸಲು ಅವಕಾಶವಿರುವುದರಿಂದ ಅದನ್ನು ಸಾಕಾರಗೊಳಿಸಿ ಎಂದು ಸಲಹೆ ನೀಡಿದರು.

ಕಾಂಕ್ರಿಟ್ ರಸ್ತೆ ಬೇಡ: ನಿರಂತರವಾಗಿ ನೀರು ಹರಿಯುವ ಸ್ಥಳ ಹೊರತುಪಡಿಸಿ ಉಳಿದೆಡೆ ಅನಗತ್ಯವಾಗಿ ಸಿಮೆಂಟ್ ಕಾಂಕ್ರಿಟ್ ರಸ್ತೆ ನಿರ್ಮಿಸುವ ಅಗತ್ಯವಿಲ್ಲ. ಅದರಿಂದ ಉಳಿತಾಯವಾಗುವ ಹಣದಿಂದ ಇನ್ನಷ್ಟು ರಸ್ತೆಗಳಿಗೆ ಡಾಂಬರ್ ಹಾಕಬಹುದು ಎಂದ ಮೈಸೂರು ಜಿಲ್ಲಾಧಿಕಾರಿ ಡಾ. ಬಗಾದಿ ಗೌತಮ್, ಗುರುತಿಸಿರುವ ರಸ್ತೆಗಳಿಗೆ ಗುಣಮಟ್ಟದ ಡಾಂಬರ್ ರಸ್ತೆಗಳನ್ನೇ ಮಾಡಿ ಅನಿವಾರ್ಯ ಸಂದರ್ಭಗಳಲ್ಲಿ ಮಾತ್ರ ಸಿಮೆಂಟ್ ಕಾಂಕ್ರಿಟ್ ರಸ್ತೆ ನಿರ್ಮಿಸಿ ಎಂದು ಲೋಕೋಪಯೋಗಿ ಇಲಾಖೆ ಅಧಿಕಾರಿಗಳಿಗೆ ಸಲಹೆ ನೀಡಿದರು.

ಶಾಲಾ ಕೊಠಡಿಗಳಿಗೆ ಪ್ರಸ್ತಾವನೆ: ಶಿಥಿಲಗೊಂಡಿರುವ ಶಾಲಾ ಕೊಠಡಿಗಳ ರಿಪೇರಿ ಹಾಗೂ ಅಗತ್ಯವಿದ್ದರೆ ಹೆಚ್ಚುವರಿ ಕೊಠಡಿ ನಿರ್ಮಾಣಕ್ಕೆ ಅನುದಾನ ಕೋರಿ ಡಿಪಿಆರ್ ಮತ್ತು ಅಂದಾಜಿನೊಂದಿಗೆ ತಡಮಾಡದೇ ತಮಗೆ ಪ್ರಸ್ತಾವನೆ ಸಲ್ಲಿಸಿ, ಅನುಮೋದನೆ ಸಿಕ್ಕಿದ ಕೂಡಲೇ ಕಾಮಗಾರಿ ಆರಂಭಿಸಿ ಎಂದು ಜಯರಾಂ ಅವರು ಸಾರ್ವಜನಿಕ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ: ಮಳೆ ಆರಂಭವಾಗಿದ್ದು, ಜಲಾಶಯ, ಕೆರೆ–ಕಟ್ಟೆಗಳು ತುಂಬಿರುವುದರಿಂದ ಕೃಷಿ ಚಟುವಟಿಕೆಗಳಿಗೆ ಬಿತ್ತನೆ ಬೀಜಗಳನ್ನು ರಿಯಾಯಿತಿ ದರದಲ್ಲಿ ರೈತರಿಗೆ ಒದಗಿಸುವ ಜೊತೆಗೆ ಬೆಳೆ ವಿಧಾನದ ಬಗ್ಗೆ ಅರಿವು ಮೂಡಿಸಿ ಅಧಿಕ ಇಳುವರಿ ಬರುವಂತೆ ಮಾಡಬೇಕು ಹಾಗೂ ಬೆಳೆ ವಿಮೆಗೆ ಪ್ರೋತ್ಸಾಹ ನೀಡುವಂತೆಯೂ ಕೃಷಿ ಅಧಿಕಾರಿಗಳಿಗೆ ಅವರು ತಾಕೀತು ಮಾಡಿದರು.

ಕಾಳಸಂತೆ ವ್ಯಾಪಾರ ನಿಲ್ಲಿಸಿ: ಬಡವರಿಗಾಗಿ ಸರ್ಕಾರ ನೀಡುತ್ತಿರುವ ಆಹಾರ ಧಾನ್ಯ, ಪಡಿತರ ಕಾಳಸಂತೆಯಲ್ಲಿ ವ್ಯಾಪಾರವಾಗದಂತೆ ತಡೆಯಬೇಕು. ಭಾರತ್ ಆಹಾರ ನಿಗಮ(FCI)ದಿಂದ ಪೂರೈಕೆಯಾಗುವ ಆಹಾರ ಧಾನ್ಯಗಳ ಗುಣಮಟ್ಟ ಪರೀಕ್ಷಿಸಿದ ನಂತರವೇ ತಮ್ಮ ಗೋದಾಮುಗಳಿಗೆ ತರಿಸಿಕೊಂಡು ಪಡಿತರ ಕಾರ್ಡುದಾರರಿಗೆ ನ್ಯಾಯಬೆಲೆ ಅಂಗಡಿ ಮೂಲಕ ವಿತರಿಸಬೇಕು ಎಂದು ಉಸ್ತುವಾರಿ ಕಾರ್ಯದರ್ಶಿಗಳು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

18 ಅಂಗಡಿ ಅಮಾನತು: ಆ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಿರುವ ತಾವು ಕಾರ್ಯಾಚರಣೆ ನಡೆಸಿ ಸರಿಯಾಗಿ ಪಡಿತರ ವಿತರಿಸದೇ ಲೋಪ ಎಸಗುತ್ತಿರುವ 18 ನ್ಯಾಯ ಬೆಲೆ ಅಂಗಡಿಗಳ ಲೈಸೆನ್ಸ್ ಅಮಾನತು ಮಾಡಲಾಗಿದ್ದು, 39 ಅಂಗಡಿ ಮಾಲೀಕರ ವಿರುದ್ಧ ಪ್ರಕರಣ ದಾಖಲಿಸಿ ಒಬ್ಬರ ಮೇಲೆ ಪೊಲೀಸರು ಎಫ್‌ಐಆರ್ ಮಾಡಿ ತನಿಖೆ ನಡೆಸುತ್ತಿದ್ದಾರೆ. ನಿನ್ನೆಯಷ್ಟೇ 34 ಕ್ವಿಂಟಾಲ್ ಅಕ್ಕಿಯನ್ನು ಅಕ್ರಮವಾಗಿ ಸಾಗಿಸುತ್ತಿದ್ದವರನ್ನು ಪತ್ತೆ ಮಾಡಿ ವಶಪಡಿಸಿಕೊಂಡಿದ್ದೇವೆ ಎಂದು ಇಲಾಖೆ ಜಂಟಿ ನಿರ್ದೇಶಕಿ ಕುಮುದ ಅವರು ತಿಳಿಸಿದರು.

ಪರಿಹಾರ ನೀಡಿ: ಮಳೆ ಹಾನಿ, ಹಾವು ಕಚ್ಚಿ ಸಾವಾದರೆ ಪರಿಹಾರ ಸಿಗುತ್ತದೆ, ಉಳುಮೆ ಮಾಡುವಾಗ ಅಥವಾ ಇನ್ನಿತರ ಸಂದರ್ಭಗಳಲ್ಲಿ ಎತ್ತುಗಳು, ಹಸು ಸಾವನ್ನಪ್ಪಿದರೆ ಪರಿಹಾರ ಸಿಗುತ್ತಿಲ್ಲವಾದ್ದರಿಂದ ರೈತರಿಗೆ ನೆರವು ನೀಡುವಂತೆ ಪಶು ಸಂಗೋಪನಾ ಇಲಾಖೆ ಅಧಿಕಾರಿಗಳು ಕೋರಿಕೊಂಡರು.

ಲಸಿಕೆಯಲ್ಲಿ ಗುರಿ ಸಾಧನೆ: ಜಿಲ್ಲೆಯಲ್ಲಿ 15 ವರ್ಷ ಮೇಲ್ಪಟ್ಟವರಿಗೆ ಬೂಸ್ಟರ್ ಡೋಸ್ ಲಸಿಕೆಯಲ್ಲಿ ಗುರಿ ಸಾಧಿಸಿದ್ದೇವೆ. ಪ್ರಸ್ತುತ ಶೇ.4ರಷ್ಟು ಮಾತ್ರ ಕೊರೊನಾ ಸಕ್ರಿಯ ಪ್ರಕರಣಗಳಿದ್ದು, ಸಾವು ಸಂಭವಿಸಿಲ್ಲ. ಡೆಂಗ್ಯೂ ಜ್ವರ ಅಲ್ಲಲ್ಲಿ ಕಾಣಿಸಿಕೊಳ್ಳುತ್ತಿದ್ದು, ಮುಂಜಾಗ್ರತಾ ಕ್ರಮ ವಹಿಸುತ್ತಿದ್ದೇವೆ. ಔಷಧಿ, ಲಸಿಕೆ ಕೊರತೆ ಇಲ್ಲ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ. ಕೆ.ಹೆಚ್.ಪ್ರಸಾದ್ ತಿಳಿಸಿದರು.

ಬಿಸಿಯೂಟಕ್ಕೆ ಪ್ರೇರೇಪಿಸಿ: ಶಾಲೆಗಳಲ್ಲಿ ಮಧ್ಯಾಹ್ನದ ಬಿಸಿಯೂಟ ನಿರಾಕರಿಸುವ ಮಕ್ಕಳಿಗೆ ಊಟ ಮಾಡುವಂತೆ ಪ್ರೇರೇಪಿಸಿ, ಅವರ ಪೋಷಕರೊಂದಿಗೂ ಮಾತನಾಡಿ ಮನವೊಲಿಸುವ ಮೂಲಕ ಶೇ.100ರಷ್ಟು ಮಕ್ಕಳು ಅಕ್ಷರ ದಾಸೋಹದಲ್ಲಿ ಪಾಲ್ಗೊಳ್ಳುವಂತೆ ಜಯರಾಂ ಅವರು ಸಾರ್ವಜನಿಕ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸಲಹೆ ನೀಡಿದರು.

ಕುಡಿಯುವ ನೀರು ಸರಬರಾಜು, ಗಂಗಾ ಕಲ್ಯಾಣ ಯೋಜನೆಗಳು, ರೈತರ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಪೂರೈಕೆ ಸೇರಿದಂತೆ ಗ್ರಾಮೀಣಾಭಿವೃದ್ಧಿ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆಯೂ ಅವರು ಇದೇ ವೇಳೆ ತಿಳಿಸಿದರು. ಜಿಲ್ಲಾಧಿಕಾರಿ ಡಾ. ಬಗಾದಿ ಗೌತಮ್, ನಗರ ಪಾಲಿಕೆ ಕಮಿಷ್ನರ್ ಜಿ.ಲಕ್ಷ್ಮೀಕಾಂತ ರೆಡ್ಡಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.


ದಸರಾ ಫಲಪುಷ್ಪ ಪ್ರದರ್ಶನಕ್ಕೆ ಅರ್ಜಿ ಅಹ್ವಾನ

ಮೈಸೂರು, ಜು.29– ತೋಟಗಾರಿಕೆ ಇಲಾಖೆ ಮತ್ತು ಜಿಲ್ಲಾ ತೋಟಗಾರಿಕೆ ಸಂಘ ಕರ್ಜನ್ ಪಾರ್ಕ್ ಸಂಯುಕ್ತಾಶ್ರಯದಲ್ಲಿ 2022–23 ನೇ ಸಾಲಿನ ದಸರಾ ಫಲಪುಷ್ಪ ಪ್ರದರ್ಶನವನ್ನು ಸೆಪ್ಟೆಂಬರ್ 26 ರಿಂದ ಅಕ್ಟೋಬರ್ 5 ನಿಶಾದ್ ಬಾಗ್(ಕುಪ್ಪಣ್ಣ ಪಾರ್ಕ್) ಆವರಣದಲ್ಲಿ ನಡೆಸಲು ತೀರ್ಮಾನಿಸಲಾಗಿದೆ.

ಈ ಸಂಬಂಧ ತಮ್ಮಲ್ಲಿರುವ ಆರ್ಕಿಡ್ಸ್, ಆಂಥೋರಿಯಂ, ಬೋನ್ಸಾಯಿ ಗಿಡಗಳು ಮತ್ತು ವಿವಿಧ exotic plants species ಗಳನ್ನು ನಿಶಾದ್ ಬಾಗ್ ಆವರಣದಲ್ಲಿ ಪ್ರದರ್ಶಿಸಲು ಅವಕಾಶವಿದ್ದು, ಆಸಕ್ತಿ ಇರುವ ಸಂಘ–ಸಂಸ್ಥೆಗಳು ನಾಗರಿಕರು, ನರ್ಸರಿ ಅವರು 2022ರ ಸೆಪ್ಟೆಂಬರ್ 15ರೊಳಗೆ ಜಿಲ್ಲಾ ತೋಟಗಾರಿಕೆ ಸಂಘ ಕರ್ಜನ್ ಪಾರ್ಕ್ ಮೈಸೂರು ಇವರಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು ಎಂದು ಜಿಲ್ಲಾ ತೋಟಗಾರಿಕೆ ಸಂಘ ಹಾಗೂ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ರಾಜ್ಯವಲಯ ಕಬ್ಬನ್ ಪಾರ್ಕ್ ಪದನಿಮಿತ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಡಾ. ಶೆಣೈರಿಂದ ಇಂದು ಉತ್ತರಾಖಂಡ್ ಕುರಿತ ಪುಸ್ತಕ ಬಿಡುಗಡೆ





ಮೈಸೂರು, ಜು.29– ದೇಸಿರಾಜು ಅಸೋಸಿಯೇಟ್ಸ್ ಲಲಿತರಾವ್ ಛಾರಿಟಬಲ್ ಟ್ರಸ್ಟ್ (DALRCT), ಮೈಸೂರುರವರು ಹೊರತಂದಿರುವ ಉತ್ತರಾಖಂಡ್ ಮೇಲಿನ 'Where the Gods Dwell' ಪುಸ್ತಕವನ್ನು ನಾಳೆ (ಶನಿವಾರ) ಮೈಸೂರಿನ ಹೋಟೆಲ್ ರಿಯೋ ಮೆರಿಡಿಯನ್‌ನಲ್ಲಿ ಸಂಜೆ 5.30 ಗಂಟೆಗೆ ನಡೆಯುವ ಕಾರ್ಯಕ್ರಮದಲ್ಲಿ ಹೆಸರಾಂತ ಉದ್ಯಮಿ ಡಾ. ಎಂ. ಜಗನ್ನಾಥ ಶೆಣೈ ಬಿಡುಗಡೆ ಮಾಡುವರು.

ಉತ್ತರಾಖಂಡದ ಆಸ್ಕೋಟ್ ರಾಜ ರಾಜವಾಡ್ ಭಾನುರಾಜ್ ಸಿಂಗ್ ಪಾಲ್ ಅವರು ಗೌರವ ಅತಿಥಿಗಳಾಗಿ ಪಾಲ್ಗೊಂಡು, ಪುಸ್ತಕದ ಮೊದಲ ಪ್ರತಿ ಸ್ವೀಕರಿಸುವರು. DALRCT ಮ್ಯಾನೇಜಿಂಗ್ ಟ್ರಸ್ಟಿ ಡಿ.ಎಸ್. ರಾಮಕೃಷ್ಣರಾವ್ ಉಪಸ್ಥಿತರಿರುವರು. ಸಮಾರಂಭ ಸ್ಥಳದಲ್ಲಿ ಪುಸ್ತಕ ಮಾರಾಟದ ಮೂಲಕ ಉತ್ತರಾಖಂಡದ ಮಹಿಳೆಯರ ಕಲ್ಯಾಣಕ್ಕಾಗಿ ನಿಧಿ ಸಂಗ್ರಹಿಸಲಾಗುವುದು. ಇದೇ ವೇಳೆ ಪುಸ್ತಕಗಳು, ಉತ್ತರಾಖಂಡ್‌ನ ಸಾವಯವ ಆಹಾರೋತ್ಪನ್ನಗಳು ಮತ್ತು ಕುಶಲ ವಸ್ತುಗಳ ಪ್ರದರ್ಶನ ಮತ್ತು ಮಾರಾಟವನ್ನು ಏರ್ಪಡಿಸಲಾಗಿದೆ. ಮಾಹಿತಿಗಾಗಿ 0821–2416542 ಅಥವಾ ಮೊ. 97406–46542 ಅನ್ನು ಸಂಪರ್ಕಿಸಬಹುದು.

ಅರ್ಜಿ ಆಹ್ವಾನ

ಮೈಸೂರು, ಜು. 29– ವಿಶ್ವಮಾನವ ವಿದ್ಯಾರ್ಥಿ ಯುವ ವೇದಿಕೆ ವತಿಯಿಂದ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಗಳಲ್ಲಿ ಶೇ. 90ಕ್ಕಿಂತ ಅಧಿಕ ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುವುದು. ಮೈಸೂರು, ಚಾಮರಾಜನಗರ, ಮಂಡ್ಯ, ಹಾಸನ ಹಾಗೂ ಕೊಡಗು ಜಿಲ್ಲೆಗಳ ವಿದ್ಯಾರ್ಥಿಗಳು ಆ. 10ರೊಳಗೆ ತಮ್ಮ ಸ್ವವಿವರ ಅರ್ಜಿ ಹಾಗೂ ಅಂಕ ಪಟ್ಟಿ ನಕಲಿನೊಂದಿಗೆ ಅರ್ಜಿ ಸಲ್ಲಿಸಬಹುದು. ಮಾಹಿತಿಗೆ ಮೊ. 9844027885 ಸಂಪರ್ಕಿಸಬಹುದು.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು

ಸಂಖ್ಯೆ.ಮೈ.ನ.ಪ್ರಾ/ವಿತ-4/2022-23 ದಿನಾಂಕ: 27.07.2022

ಪತ್ರಿಕಾ ಪ್ರಕಟಣೆ

ಸಾರ್ವಜನಿಕರ ಗಮನಕ್ಕೆ

ಈ ಮೂಲಕ ಸಾರ್ವಜನಿಕರ ಗಮನಕ್ಕೆ ತರುವುದೇನೆಂದರೆ, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು ರವರಿಂದ ಶ್ರೀ ಕಪನಿ ಪತಯ್ಯ ರವರಿಗೆ ಸಿಐಟಿಬಿಯಿಂದ ಗೋಕುಲಂ 3ನೇ ಹಂತ ಬಡಾವಣೆಯ ನಿವೇಶನ ಸಂಖ್ಯೆ: 152, ಅಳತೆ 80X22+371/2 ಅಡಿಗಳು ದಿ: 07.12.1973 ರಂದು ಮಂಜೂರಾಗಿರುತ್ತದೆ. ದಿ: 28.03.1974 ರಂದು ಸ್ವಾಧೀನ ಪತ್ರ ನೀಡಲಾಗಿದೆ. ಇವರು ಪ್ರಾಧಿಕಾರದ ನಗರ ಯೋಜನಾ ಶಾಖೆಯಿಂದ ದಿನಾಂಕ: 11.01.1982 ರಂದು ನಿವೇಶನ ವಿಭಾಗವಾಗಿ ಹೊಸ ಸಂಖ್ಯೆ 152/1, 152/2 ಎಂದು ಅನುಮತಿ ನೀಡಲಾಗಿದೆ. ಶ್ರೀ ಕಪನಿ ಪತಯ್ಯ ಮತ್ತು ಇವರ ಮಗಳು ಶ್ರೀಮತಿ ಅನ್ನಪೂರ್ಣಮ್ಮ ಇವರು ಶ್ರೀಮತಿ ಎಂ.ಎಸ್. ಲಲಿತಮ್ಮ ಇವರಿಗೆ ನಿ.ಸಂ. 152/2, ಅಳತೆ 40X37+30/2 ಅನ್ನು ದಿ: 07.10.1997 ರಂದು ಮಾರಾಟ ಮಾಡಿದ್ದು, ದಿನಾಂಕ: 24.10.2016 ರಂದು ವರ್ಗಾವಣೆ ಪತ್ರ ಹಾಗೂ ದಿನಾಂಕ: 24.11.2016 ರಂದು ಕ್ರಯಪತ್ರ ನೀಡಲಾಗಿದೆ. ಶ್ರೀ ಕಪನಿ ಪತಯ್ಯರವರು ನಿ.ಸಂ. 152/1, ಅಳತೆ 40X30+22/2 ಅಡಿಯನ್ನು ಶ್ರೀಮತಿ ಜಯಮ್ಮ ರವರಿಗೆ ದಿನಾಂಕ: 24.03.1988 ರಂದು ಮಾರಾಟ ಮಾಡಿರುತ್ತಾರೆ. ಶ್ರೀಮತಿ ಜಯಮ್ಮರವರು ಶ್ರೀ ಎಲ್. ಜಯದೇವ್ ರವರಿಗೆ ದಿ: 17.04.1990 ರಂದು ಮಾರಾಟ ಮಾಡಿದ್ದು, ಶ್ರೀ ಎಲ್. ಜಯದೇವ್ ರವರು ತಮ್ಮ ಮಗನಾದ ಶ್ರೀ ಎಲ್.ಜಿ. ಸುದೇವ್ ರವರಿಗೆ ದಿನಾಂಕ: 29.01.2009 ರಲ್ಲಿ ದಾನ ಪತ್ರದ ಮೂಲಕ ನೋಂದಾಯಿಸಿರುತ್ತಾರೆ. ಮನೆ ನಂ.241, 5ನೇ ಕ್ರಾಸ್, 3ನೇ ಮೇನ್, ವಿಜಯನಗರ 3ನೇ ಹಂತ, ಎ-1 ಬ್ಲಾಕ್, ಮೈಸೂರು ಇವರು ಖಾತಾ ವರ್ಗಾವಣೆ ಹಾಗೂ ಕಯಪತ್ರ ಕೋರಿ ಪ್ರಾಧಿಕಾರಕ್ಕೆ ಅರ್ಜಿ ಸಲ್ಲಿಸಿರುತ್ತಾರೆ.

ಶ್ರೀ ಎಲ್.ಜಿ. ಸುದೇವ್ ರವರು ಹೆಸರಿಗೆ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು ರವರಿಂದ ವರ್ಗಾವಣೆ ಮಾಡಲು, ಯಾರಿಂದಾದರು ತಂಟೆ, ತಕರಾರು, ಆಕ್ಷೇಪಣೆ ಏನಾದರು ಇದ್ದಲ್ಲಿ ಈ ಪ್ರಕಟಣೆ ಹೊರಡಿಸಿದ 7 ದಿವಸಗಳೊಳಗೆ ಲಿಖಿತವಾಗಿ ಆಯುಕ್ತರು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು ರವರಿಗೆ ತಕರಾರು ಸಲ್ಲಿಸುವುದು. ಇಲ್ಲದಿದ್ದಲ್ಲಿ ಯಾವುದೇ ಆಕ್ಷೇಪಣೆ ಬಂದಿಲ್ಲವೆಂದು ನಿಯಮಾನುಸಾರ ಕ್ರಮವಹಿಸಲಾಗುವುದು.

ಸಹಿ/- ತಹಸೀಲ್ದಾರ್
ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು

ಮೈಸೂರು ಅರಮನೆ ಮಂಡಳಿ, ಮೈಸೂರು

ಕಾರ್ಯನಿರ್ವಾಹಕ ಅಧಿಕಾರಿರವರ ಕಛೇರಿ, ಮೈಸೂರು ಅರಮನೆ ಮಂಡಳಿ, ಮೈಸೂರು
ದೂರವಾಣಿ:0821-2421051 ಫ್ಯಾಕ್ಸ್:2434425, ಇಮೇಲ್: ddmysorepalace@gmail.com

ಸಂ:ಕಾನಿಅ/ಅಮಂ/ಉನಿ/ವಿದ್ಯುತ್/ಟೆಂಡರ್ ಸಂಖ್ಯೆ:07/2022-23 ದಿನಾಂಕ:27.07.2022

ಟೆಂಡರ್ ಪ್ರಕಟಣೆ

ಕರ್ನಾಟಕ ಸರ್ಕಾರದ ರಾಜ್ಯಪಾಲರ ಪರವಾಗಿ ಉಪ ನಿರ್ದೇಶಕರು, ಅರಮನೆ ಮಂಡಳಿ, ಮೈಸೂರು ಇವರಿಂದ ಮೈಸೂರು ಅರಮನೆಯ ಆವರಣದಲ್ಲಿ ಒಟ್ಟು ಅಂದಾಜು ಮೊತ್ತ ರೂ. 15.00 ಲಕ್ಷಗಳಿಗೆ ಸಂಬಂಧಿಸಿದ 04 ಸಂಖ್ಯೆ ದುರಸ್ಥಿ / ನಿರ್ವಹಣೆ ಕಾಮಗಾರಿಗೆ ಸಂಬಂಧಿಸಿದ ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ. ನೊಂದಾಯಿತ ಅರ್ಹ ವಿದ್ಯುತ್ ಗುತ್ತಿಗೆದಾರರಿಂದ / ನೋಂದಾಯಿತ ಏಜೆನ್ಸಿ/ತಯಾರಕರುಗಳಿಂದ ದ್ವಿಪ್ರತಿಯಲ್ಲಿ ಮೊಹರಾದ ಲಕೋಟೆಯಲ್ಲಿ ಶೇಕಡವಾರು ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ. (1) ಖಾಲಿ ಟೆಂಡರ್ ಫಾರಂ ಕೋರಿ ಅರ್ಜಿ ಸಲ್ಲಿಸಲು ಕೊನೆಯ **ದಿನಾಂಕ: 10-08-2022 ಸಂಜೆ 4:00 ಗಂಟೆಯವರೆಗೆ.** (2) ಖಾಲಿ ಟೆಂಡರ್ ಫಾರಂಗಳನ್ನು ಗುತ್ತಿಗೆದಾರರಿಗೆ ನೀಡುವ **ದಿನಾಂಕ: 11-08-2022 ಸಂಜೆ 4:00 ಗಂಟೆಯವರೆಗೆ.** (3) ಭರ್ತಿ ಮಾಡಿದ ಟೆಂಡರ್ ಸ್ವೀಕರಿಸುವ **ದಿನಾಂಕ: 12-08-2022 ಸಂಜೆ 4.00 ಗಂಟೆಯವರೆಗೆ.** (4) ಟೆಂಡರ್‌ಗಳನ್ನು ತೆರೆಯುವ **ದಿನಾಂಕ: 12-08-2022ರ ಸಂಜೆ 4.30 ಗಂಟೆಗೆ.** (5) ಟೆಂಡರ್‌ಗಿಟ್ಟಿರುವ ಗರಿಷ್ಠ ಮೊತ್ತ ರೂ. 5.00 ಲಕ್ಷಗಳು ಹಾಗೂ ಕನಿಷ್ಠ ಮೊತ್ತ ರೂ. 2.00 ಲಕ್ಷಗಳು. ಯಾವುದಾದರೂ ಅಥವಾ ಎಲ್ಲಾ ಟೆಂಡರ್‌ಗಳನ್ನು ಯಾವ ಕಾರಣಗಳನ್ನೂ ನೀಡದೆ ಸ್ವೀಕರಿಸುವ/ ತಿರಸ್ಕರಿಸುವ ಹಕ್ಕು ಉಪ ನಿರ್ದೇಶಕರು, ಮೈಸೂರು ಅರಮನೆ ಮಂಡಳಿ, ಮೈಸೂರು ರವರಿಗೆ ಸೇರಿರುತ್ತದೆ. ಇಷ್ಟಲ್ಲದೆ ಇನ್ನುಳಿದ ಯಾವುದಾದರೂ ಮಾಹಿತಿಗಳನ್ನು ಗುತ್ತಿಗೆದಾರರು ಬಯಸಿದಲ್ಲಿ ಅವುಗಳನ್ನು ಈ ಕಛೇರಿಯ ಕೆಲಸದ ಎಲ್ಲಾ ದಿನಗಳಂದು ಮತ್ತು ಕಛೇರಿಯ ವೇಳೆಯಲ್ಲಿ ಪಡೆಯಬಹುದು. ಒಂದು ವೇಳೆ ಮೇಲೆ ನೀಡಲಾಗಿರುವ ದಿನಗಳು ಸಾರ್ವಜನಿಕ ರಜಾ ದಿನಗಳಾಗಿದ್ದಲ್ಲಿ ಅನಂತರದ ದಿನಗಳನ್ನು ಪರಿಗಣಿಸಲಾಗುವುದು.

ಸಹಿ/- ಉಪ ನಿರ್ದೇಶಕರು,
ಮೈಸೂರು ಅರಮನೆ ಮಂಡಳಿ, ಮೈಸೂರು

DIPR/MYS/KAVITA/308/22-23

ಹಿಂದೂ ಜಾಗರಣಾ ವೇದಿಕೆಯಿಂದ ಮಡಿಕೇರಿ ಚಲೋ ಪ್ರತಿಭಟನೆ

'ಕಮ್ಯೂನಲ್ ಗೂಂಡಾ ರೌಡಿ ಶೀಟರ್' ಪಟ್ಟಿ ರದ್ದಿಗೆ ಆಗ್ರಹಿಸಿ

ಜಿಲ್ಲೆಯ ಮೂಲೆ ಮೂಲೆಗಳಿಂದ ಸಾವಿರಾರು ಮಂದಿ ಬಾಗಿ

- ಪೊಲೀಸರ ಕಿರುಕುಳ ತಪ್ಪಿಸಬೇಕು
- ಕುಶಾಲನಗರ ವೃತ್ತ ನಿರೀಕ್ಷಕರ ವರ್ಗಾವಣೆ ಮಾಡಿ
- ಅಹೋರಾತ್ರಿ ಪ್ರತಿಭಟನೆಯ ಎಚ್ಚರಿಕೆ



ಮಡಿಕೇರಿ,ಜು.29– ಹಿಂದೂ ಸಂಘಟನೆಗಳ ಕಾರ್ಯಕರ್ತರ ಮೇಲೆ ಈ ಹಿಂದಿನ ಸರ್ಕಾರ ಹೂಡಿರುವ 'ಕಮ್ಯೂನಲ್ ಗೂಂಡಾ ರೌಡಿ ಶೀಟರ್' ಪಟ್ಟಿಯನ್ನು ರದ್ದುಪಡಿಸಬೇಕು, ಕುಶಾಲನಗರ ವೃತ್ತ ನಿರೀಕ್ಷಕರನ್ನು ವರ್ಗಾಯಿಸಬೇಕು ಮತ್ತು ಪೊಲೀಸರ ಕಿರುಕುಳ ತಪ್ಪಿಸಬೇಕು ಎಂಬ ಪ್ರಮುಖ ಬೇಡಿಕೆಗಳನ್ನು ಮುಂದಿಟ್ಟುಕೊಂಡು ಹಿಂದೂ ಜಾಗರಣಾ ವೇದಿಕೆ ಮಡಿಕೇರಿಯಲ್ಲಿ ಬೃಹತ್ ಪ್ರತಿಭಟನೆ ನಡೆಸಿತು.

'ಮಡಿಕೇರಿ ಚಲೋ' ಕರೆಯ ಮೂಲಕ ಭಾರೀ ಪ್ರತಿಭಟನೆಗೆ ಹಿಂದೂ ಜಾಗರಣಾ ವೇದಿಕೆ ಕರೆ ನೀಡಿದ್ದ ಹಿನ್ನೆಲೆಯಲ್ಲಿ ಜಿಲ್ಲೆಯ ಮೂಲೆ ಮೂಲೆಗಳಿಂದ ಸಾವಿರಾರು ಸಂಖ್ಯೆಯಲ್ಲಿ ಹಿಂದೂ ಪರ ಸಂಘಟನೆಗಳ ಕಾರ್ಯಕರ್ತರು ಮಡಿಕೇರಿಗೆ ಆಗಮಿಸಿದ್ದರು. ಜನರಲ್ ತಿಮ್ಮಯ್ಯ ವೃತ್ತದ ಬಳಿ ಅರ್ಧ ಗಂಟೆ ಕಾಲ ಪ್ರತಿಭಟನೆ ನಡೆಸಿದ ಕೇಸರಿ ಕಾರ್ಯಕರ್ತರು, ಬಳಿಕ ನಗರದ ಪ್ರಮುಖ ರಸ್ತೆಗಳ ಮೂಲಕ ಪ್ರತಿಭಟನಾ ಜಾಥಾ ತೆರಳಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಗೆ ಮುತ್ತಿಗೆ ಹಾಕಿ ಪೊಲೀಸರ ನಡೆಯ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಮಾತ್ರವಲ್ಲದೇ ತಕ್ಷಣವೇ ತಮ್ಮ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿದರು.

ಹಿಂದೂ ಜಾಗರಣಾ ವೇದಿಕೆಯ ವಿಭಾಗೀಯ ಪ್ರಮುಖರಾದ ಮಹೇಶ್ ಕಡಗದಾಳು ಮಾತನಾಡಿ, ಹಿಂದೂ ಸಾಮಾಜಿಕ ಕಾರ್ಯಕರ್ತರ ಮೇಲೆ ಪೊಲೀಸ್ ಇಲಾಖೆ ಸುಳ್ಳು ಕೇಸುಗಳನ್ನು ದಾಖಲಿಸಿ, ಗೂಂಡಾ ಪಟ್ಟಿಗೆ ಸೇರಿಸಿ ಕಿರುಕುಳವನ್ನು ನೀಡುತ್ತಿದೆ ಎಂದು ಗಂಭೀರ ಆರೋಪ ಮಾಡಿದರು.

ಮಾದಾಪುರದಲ್ಲಿ ಇತ್ತೀಚೆಗೆ ನಡೆದ ಪ್ರಕರಣವೊಂದರಲ್ಲಿ ಸತ್ಯಾಸತ್ಯತೆಯನ್ನು ಪರಿಶೀಲಿಸದೆ ಹಿಂದೂ ಕಾರ್ಯಕರ್ತರ ಮೇಲೆ ಪ್ರಕರಣ ದಾಖಲಿಸಲಾಗಿದೆ. ಇದನ್ನು ಆಧಾರವಾಗಿಸಿಕೊಂಡು ಯಾವುದೇ 'ಸರ್ಚ್ ವಾರಂಟ್' ಇಲ್ಲದೆ ಬೆಳ್ಳಂಬೆಳಗ್ಗೆ ಹಿಂದೂ ಕಾರ್ಯಕರ್ತರ ಮನೆಗೆ ಪೊಲೀಸ್ ಸಿಬ್ಬಂದಿಗಳು ಆಗಮಿಸಿ ಮನೆ ಮಂದಿಗೆ ಕಿರುಕುಳ ನೀಡಿದ್ದಾರೆ ಎಂದು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಇಂತಹ ಸುಳ್ಳು ದೂರುಗಳನ್ನು ದಾಖಲಿಸುವ ಮೂಲಕ ಹಿಂದೂಗಳನ್ನು ದಮನಿಸಬಹುದೆಂದು ಭಾವಿಸಿದಲ್ಲಿ ಅದು ಪೊಲೀಸ್ ಇಲಾಖೆಯ ತಪ್ಪು ಕಲ್ಪನೆಯಾಗಲಿದೆ ಎಂದು ಹೇಳಿದರು.

ಹಿಂದೂ ಕಾರ್ಯಕರ್ತರ ಮೇಲೆ ಸುಳ್ಳು ಪ್ರಕರಣಗಳನ್ನು ದಾಖಲಿಸಿ ಕಿರುಕುಳ ನೀಡುತ್ತಿರುವ ಕುಶಾಲನಗರ ವೃತ್ತ ನಿರೀಕ್ಷಕ ಮಹೇಶ್ ದೇವರ್ ಅವರನ್ನು ತಕ್ಷಣ ವರ್ಗಾವಣೆ ಮಾಡಬೇಕೆಂದು ಒತ್ತಾಯಿಸಿದರು. ಹಿಂದೂ ಕಾರ್ಯಕರ್ತರ ಮನೆ ಮನೆಗಳಿಗೆ ನುಗ್ಗಿ ಕಿರುಕುಳ ನೀಡುವ ಸಿಬ್ಬಂದಿಗಳನ್ನು ಅಮಾನತುಗೊಳಿಸಬೇಕು. ಹಿಂದೂ ಸಮಾಜದ ರಕ್ಷಣೆಗಾಗಿ ಶ್ರಮಿಸುತ್ತಿರುವ ಕಾರ್ಯಕರ್ತರನ್ನು 'ಕಮ್ಯೂನಲ್ ಗೂಂಡಾ' ಪಟ್ಟಿಗೆ ಒಳಪಡಿಸಲಾಗಿದ್ದು, ಇದನ್ನು ತಕ್ಷಣವೇ ತೆಗೆಯಬೇಕೆಂದು ಒತ್ತಾಯಿಸಿದರು.

ಹಿಂದೂ ಜಾಗರಣಾ ವೇದಿಕೆಯ ಸಹ ಪ್ರಾಂತ ಸಂಚಾಲಕ ಲೋಕೇಶ್ ಅರಸ್ ಮಾತನಾಡಿ, ಈ ಸರ್ಕಾರ ಬಂದ ಮೇಲೆ ಹಿಂದೂ ಕಾರ್ಯಕರ್ತರ ನಿರಂತರ ಹತ್ಯೆ, ಕಾರ್ಯಕರ್ತರ ಮೇಲೆ ದೌರ್ಜನ್ಯಗಳು ನಡೆಯುತ್ತಿದೆ. ರಾಜ್ಯದಲ್ಲಿ ಏನಾಗುತ್ತಿದೆ ಎಂದು ತಿಳಿಯದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಸಮಾಜ ಘಾತುಕ ಶಕ್ತಿಗಳಿಗೆ ಪೊಲೀಸ್ ಇಲಾಖೆ ಬೆಂಬಲ ನೀಡುತ್ತಿರುವ ಸಂಶಯ ವ್ಯಕ್ತವಾಗುತ್ತಿದೆ ಎಂದು ಆರೋಪಿಸಿದರು.

ಅಹೋರಾತ್ರಿ ಪ್ರತಿಭಟನೆ ಎಚ್ಚರಿಕೆ: ಹಿಂದೂ ಪರ ಸಂಘಟನೆಗಳ ನೂರಾರು ಕಾರ್ಯಕರ್ತರು ಎಸ್.ಪಿ.ಕಚೇರಿಗೆ ಮಧ್ಯಾಹ್ನ 12 ಗಂಟೆಗೆ ಮುತ್ತಿಗೆ ಹಾಕಿ ತಮ್ಮ ಬೇಡಿಕೆಗಳನ್ನು ಈಡೇರಿಸುವವರೆಗೆ ಅಹೋರಾತ್ರಿ ಧರಣಿ ನಡೆಸುವುದಾಗಿ ಘೋಷಿಸಿದ ಘಟನೆಯೂ ನಡೆಯಿತು. ಈ ಸಂದರ್ಭ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕ್ಯಾಪ್ಟನ್ ಎಂ.ಎ. ಅಯ್ಯಪ್ಪ ಅವರು ಪ್ರತಿಭಟನಾಕಾರರ ಬಳಿಗೆ ಆಗಮಿಸಿದರು.

ಕ್ರಮದ ಭರವಸೆ: ಈ ಸಂದರ್ಭ ಎಸ್.ಪಿ. ಕ್ಯಾಪ್ಟನ್ ಎಂ.ಎ.ಅಯ್ಯಪ್ಪ ಮಾತನಾಡಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿ ಬಾಗಿಲು ಸದಾ ಸಾರ್ವಜನಿಕರಿಗೆ ಮುಕ್ತವಾಗಿದೆ ಎಂದು ಸ್ಪಷ್ಟಪಡಿಸಿದರು. ಹಿರಿಯರು, ಮಹಿಳೆಯರು, ಮಕ್ಕಳು ಭೇಟಿಗೆ ಬಂದರೆ ಆದ್ಯತೆ ನೀಡಲಾಗುತ್ತದೆ. ಬಹು ದೂರದ ಊರುಗಳಿಂದ ತಮ್ಮನ್ನು ಭೇಟಿಯಾಗಲು ಅವರು ಬರುತ್ತಾರೆ. ಹಿಂದೂ ಜಾಗರಣಾ ವೇದಿಕೆ ಪ್ರಮುಖರು ಭೇಟಿಗೆ ಬಂದಾಗ ಅವರನ್ನು ಭೇಟಿ ಮಾಡಲು ಸಾಧ್ಯವಾಗಿಲ್ಲ, ಅದಕ್ಕಾಗಿ ಕ್ಷಮೆ ಕೋರುತ್ತೇನೆ ಎಂದರು.

'ಕಮ್ಯೂನಲ್ ಗೂಂಡಾ' ಪಟ್ಟಿಯಿಂದ ಹೆಸರುಗಳನ್ನು ಕೈ ಬಿಡುವುದಕ್ಕೆ ಅಗತ್ಯ ಕ್ರಮ ಕೈಗೊಳ್ಳಲು ಈಗಾಗಲೆ ಆಯಾ ಡಿವೈಎಸ್‌ಪಿಗಳಿಗೆ ಸೂಚಿಸಿದ್ದೇನೆ. ಆ ಪಟ್ಟಿಯಲ್ಲಿರುವ ಹೆಸರುಗಳ ಪರಿಶೀಲನಾ ಕಾರ್ಯ ಪ್ರಗತಿಯಲ್ಲಿದೆ ಎಂದು ವಿವರಿಸಿದರು. ಸರ್ಚ್ ವಾರಂಟ್ ಇಲ್ಲದೆಯೇ ಮನೆಗಳಿಗೆ ತೆರಳಿ ಕಿರುಕುಳ ನೀಡಿದ ಸಿಬ್ಬಂದಿ ವಿರುದ್ಧ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಭರವಸೆ ನೀಡಿದರು.

ಕುಶಾಲನಗರ ವೃತ್ತ ನಿರೀಕ್ಷಕ ಮಹೇಶ್ ದೇವರ್ ಅವರ ವರ್ಗಾವಣೆ ತನ್ನ ವ್ಯಾಪ್ತಿಗೆ ಬರುವುದಿಲ್ಲ. ಅದನ್ನು ತನ್ನ ಮೇಲಾಧಿಕಾರಿಗಳು ಮತ್ತು ಸರ್ಕಾರಕ್ಕೆ ವರದಿ ನೀಡಿ ಒಂದೆರಡು ದಿನಗಳಲ್ಲಿ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ವಿಹಿಂಪ ಕಾರ್ಯಾಧ್ಯಕ್ಷ ಸುರೇಶ್ ಮುತ್ತಪ್ಪ, ಜಿಲ್ಲಾ ಕಾರ್ಯದರ್ಶಿ ಪದಿಯಂಡ್ರ ರಮೇಶ್, ಬಜರಂಗ ದಳದ ಸಹ ಸಂಚಾಲಕ ಚೇತನ್, ಆರ್.ಎಸ್.ಎಸ್.ನ ಪಾಲಿ, ಹಿಂದೂ ಪರ ಸಂಘಟನೆಗಳ ಮುಖಂಡರಾದ ವಿನಯ್, ಮನು ರೈ, ಸುನಿಲ್ ಮಾದಾಪುರ, ನಾಣಿ ಕುಶಾಲನಗರ, ಸೇರಿದಂತೆ ಮಾಜಿ ಎಂಎಲ್‌ಸಿ ಸುನಿಲ್ ಸುಬ್ರಮಣಿ, ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಬಿನ್ ದೇವಯ್ಯ, ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಬಿ.ಬಿ. ಭಾರತೀಶ್, ಪಶ್ಚಿಮ ಘಟ್ಟ ಸಂರಕ್ಷಣಾ ಕಾರ್ಯಪಡೆ ಮಾಜಿ ಅಧ್ಯಕ್ಷ ಶಾಂತೆಯಂಡ ರವಿ ಕುಶಾಲಪ್ಪ ಸೇರಿದಂತೆ, ಮಡಿಕೇರಿ ನಗರ ಸಭೆ ಸದಸ್ಯರು, ವಿವಿಧ ಹಿಂದೂ ಪರ ಸಂಘಟನೆಗಳ ಪ್ರಮುಖರು, ಕಾಲೇಜು ವಿದ್ಯಾರ್ಥಿಗಳು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಭಗಂಡೇಶ್ವರ ದೇವಾಲಯದಲ್ಲಿ ಪೊಲಿಂಕಾನ ಉತ್ಸವ ಆಚರಣೆ



ಮಡಿಕೇರಿ,ಜು.29– ಭಾಗಮಂಡಲ ಶ್ರೀ ಭಗಂಡೇಶ್ವರ ದೇವಾಲಯದಲ್ಲಿ ಪೊಲಿಂಕಾನ ಉತ್ಸವವು ಸಾಂಪ್ರದಾಯಿಕ ವಿಧಿ ವಿಧಾನಗಳೊಂದಿಗೆ ಶ್ರದ್ಧಾಭಕ್ತಿಯಿಂದ ಜರುಗಿತು.

ದೇವಾಲಯದಲ್ಲಿ ಬಾಳೆ ದಿಂಡಿನಿಂದ ಮಾಡಲಾದ ಉತ್ಸವದ ಮಂಟಪಕ್ಕೆ ದೀಪ ಬೆಳಗಿಸಿ, ಕರಿಮಣಿ ಬಿಚ್ಚೋಲೆ, ಕಾವೇರಿ ಮಾತೆಗೆ ವಸ್ತ್ರಾಭರಣ, ಬೆಳ್ಳಿತಟ್ಟೆ, ಬೆಳ್ಳಿಯ ತೊಟ್ಟಿಲು, ಚಿನ್ನದ ಮಾಂಗಲ್ಯ ಸರವನ್ನಿಟ್ಟು ವಿಶೇಷ ಪೂಜೆ ಸಲ್ಲಿಸಲಾಯಿತು. ನಂತರ ದೇವಾಲಯಕ್ಕೆ ಪ್ರದಕ್ಷಿಣೆ ಹಾಕಿ ತ್ರಿವೇಣಿ ಸಂಗಮಕ್ಕೆ ಕೊಂಡೊಯ್ದು ಕಾವೇರಿ ಮಾತೆಗೆ ಪೂಜೆ ಸಲ್ಲಿಸಲಾಯಿತು. ಬಳಿಕ ತ್ರಿವೇಣಿ ಸಂಗಮದಲ್ಲಿ ಕಾವೇರಿ ನದಿ ನೀರಿನಲ್ಲಿ ಬಾಳೆದಿಂಡಿನ ಮಂಟಪವನ್ನು ತೇಲಿ ಬಿಡಲಾಯಿತು.

ಮಳೆಯ ಬಿರುಸು ಕಡಿಮೆಯಾಗಿ ಕಾವೇರಿ ನದಿಯು ಶಾಂತಗೊಳ್ಳಲಿ ಎಂಬ ಉದ್ದೇಶದಿಂದ ಅನಾದಿ ಕಾಲದಿಂದಲೂ ಈ ಉತ್ಸವನ್ನು ಆಚರಿಸಿಕೊಂಡು ಬರಲಾಗುತ್ತಿದೆ. ಮಹಾ ಪೂಜೆ ಬಳಿಕ ರೈತರ ಅನುಕೂಲಕ್ಕೆ ತಕ್ಕಂತೆ ಮಳೆ ಬಂದು ನಾಡಿನ ಜನತೆಗೆ ಒಳಿತಾಗಲಿ ಎಂದು ಇದೇ ಸಂದರ್ಭ ಹಿರಿಯರು ಪ್ರಾರ್ಥಿಸಿದರು. ದೇವಾಲಯದ ಅರ್ಚಕರಾದ ರವಿ ಭಟ್ ಹಾಗೂ ಹರೀಶ್ ಭಟ್ ನೇತೃತ್ವದಲ್ಲಿ ನಡೆದ ಪೂಜಾ ಕಾರ್ಯಗಳು ಜರುಗಿತು.

ಈ ಸಂದರ್ಭ ದೇವಾಲಯದ ತಕ್ಕರಾದ ಬಳ್ಳಡ್ಕ ಅಪ್ಪಾಜಿ, ತಲಕಾವೇರಿ ದೇವಾಲಯದ ತಕ್ಕರಾದ ಕೋಡಿ ಮೋಟಯ್ಯ, ಕಾರ್ಯ ನಿರ್ವಹಣಾಧಿಕಾರಿ ಕೃಷ್ಣಪ್ಪ, ಪಾರುಪತ್ತೆಗಾರ ಪೊನ್ನಣ್ಣ, ಗ್ರಾ.ಪಂ ಉಪಾಧ್ಯಕ್ಷ ಹೊಸೂರು ಸತೀಶ್ ಕುಮಾರ್, ಸದಸ್ಯರಾದ ಶಿರಕಜ್ಜೆ ನಾಗೇಶ್, ದಂಡಿನ ಜಯಂತ್, ಸ್ಥಳೀಯ ದೇವಾಲಯದ ತಕ್ಕರಾದ ಹೊಸಗದ್ದೆ ಭಾಸ್ಕರ, ಕುದುಪಜೆ ಪ್ರಕಾಶ್ ಹಾಗೂ ಮತ್ತಿತರರು ಹಾಜರಿದ್ದರು.

ಜಲಾಶಯದ ವ್ಯಾಪ್ತಿಯಲ್ಲಿ ಗಣಿಗಾರಿಕೆ ಶಾಶ್ವತ ನಿಷೇಧಕ್ಕೆ ಆಗ್ರಹಿಸಿ

ಕೆಆರ್‌ಎಸ್ ಉಳಿವಿಗಾಗಿ ನಿರಂತರ ಹೋರಾಟ



ಮಂಡ್ಯ,ಜು.26– ರೈತರ ಜೀವನಾಡಿ ಕೃಷ್ಣರಾಜಸಾಗರ ಉಳಿವಿಗಾಗಿ ಜಲಾಶಯದ ಸುತ್ತಮುತ್ತಲ 25 ಕಿಲೋಮೀಟರ್ ಪ್ರದೇಶದಲ್ಲಿ ಶಾಶ್ವತವಾಗಿ ಗಣಿಗಾರಿಕೆ ನಿಷೇಧಿಸುವಂತೆ ಆಗ್ರಹಿಸಿ ನಿರಂತರ ಹೋರಾಟ ನಡೆಸಲು ತೀರ್ಮಾನಿಸಲಾಯಿತು.

ಶುಕ್ರವಾರ ನಗರದ ಗಾಂಧಿ ಭವನದಲ್ಲಿ ನಡೆದ ಗಣಿಗಾರಿಕೆ ನಿಲ್ಲಿಸಿ, ಕೆಆರ್‌ಎಸ್ ಉಳಿಸಿ ಹೋರಾಟದ ರೂಪುರೇಷೆಯ ಪೂರ್ವಭಾವಿ ಸಭೆಯಲ್ಲಿ ರಾಜ್ಯ ರೈತ ಸಂಘ, ದಲಿತ ಸಂಘರ್ಷ ಸಮಿತಿ ಒಕ್ಕೂಟ, ಪ್ರಗತಿಪರ ಸಂಘಟನೆಗಳು, ಕನ್ನಡಪರ ಸಂಘಟನೆಗಳು ಹಾಗೂ ಮೈಸೂರು–ಚಾಮರಾಜನಗರ ಹಾಸನ ಜಿಲ್ಲೆಯ ಜನಪರ ಹೋರಾಟಗಾರರು ಈ ನಿರ್ಣಯ ಅಂಗೀಕರಿಸಿದರು. ಜಲಾಶಯದ ಉಳಿವಿಗಾಗಿ ಹಲವು ನಿರ್ಣಯ ಕೈಗೊಂಡು ಗಣಿಗಾರಿಕೆಯು ಕೃಷ್ಣರಾಜಸಾಗರಕ್ಕೆ ಅಪಾಯ ತಂದೊಡ್ಡುತ್ತಿರುವುದರಿಂದ ಶಾಶ್ವತವಾಗಿ ಗಣಿಗಾರಿಕೆ ನಿಷೇಧಿಸಲು ಸರ್ಕಾರದ ಮೇಲೆ ಒತ್ತಡ ತರಲು ನಿರ್ಧರಿಸಲಾಯಿತು.

ಕೆ.ಆರ್.ಎಸ್. ಉಳಿವಿಗಾಗಿ ಗ್ರಾಮೀಣ ಪ್ರದೇಶದಲ್ಲಿ ಜನಜಾಗೃತಿ ಮೂಡಿಸಿ ಹಳ್ಳಿಹಳ್ಳಿಗಳಲ್ಲಿ ಹೋರಾಟ ನಡೆಸುವುದು, ಕಾವೇರಿ ಕಣಿವೆ ಜಿಲ್ಲೆಗಳು ಸೇರಿ ರಾಜ್ಯ ವ್ಯಾಪ್ತಿಗೆ ಹೋರಾಟ ವಿಸ್ತರಿಸಲು ತೀರ್ಮಾನಿಸಲಾಯಿತು.

ಜಲಾಶಯಕ್ಕೆ ಎದುರಾಗಿರುವ ಅಪಾಯದ ಬಗ್ಗೆ ಹಾಗೂ ಸೂಕ್ತ ಮುನ್ನೆಚ್ಚರಿಕೆ ವಹಿಸಲು ಮುಂದಾಗುವಂತೆ ಸರ್ಕಾರದ ಮೇಲೆ ಒತ್ತಡ ಹಾಕಲು ಮುಖ್ಯಮಂತ್ರಿ ಬಳಿಗೆ ನಿಯೋಗ ತೆರಳಲು ನಿರ್ಣಯಿಸಿದ ಸಭೆಯು ಗಣಿಗಾರಿಕೆಯಿಂದ ಜಲಾಶಯಕ್ಕೆ ಎದುರಾಗಿರುವ ಅಪಾಯದ ಬಗ್ಗೆ ವಿಷಯ ತಜ್ಞರಿಂದ ಆ.8ರಂದು ಮಂಡ್ಯದಲ್ಲಿ ವಿಚಾರ ಸಂಕಿರಣ ನಡೆಸುವುದಾಗಿ ಘೋಷಿಸಿದೆ. ಮಂಡ್ಯ ಜಿಲ್ಲೆಯ ವಿವಿಧ ಪ್ರದೇಶದಲ್ಲಿ ನಡೆದಿರುವ ಅಕ್ರಮ ಗಣಿಗಾರಿಕೆ ಬಗ್ಗೆ ಸಮಗ್ರ ತನಿಖೆಗೊಳಪಡಿಸಲು ಸಿಬಿಐ ತನಿಖೆಗೆ ಮುಂದಾಗಬೇಕೆಂದು ಒತ್ತಾಯಿಸಿತು. ಅದೇ ರೀತಿ ಅಕ್ರಮ ಗಣಿಗಾರಿಕೆಯಲ್ಲಿ ಹಲವು ಕಾರ್ಮಿಕರು ದುರ್ಮರಣಕ್ಕೀಡಾಗಿದ್ದು, ಈ ಬಗ್ಗೆ ರಾಜ್ಯ ಸರ್ಕಾರ ಸೂಕ್ತ ತನಿಖೆ ನಡೆಸಬೇಕು, ಕಾರ್ಮಿಕರ ಕುಟುಂಬಕ್ಕೆ ನ್ಯಾಯ ಒದಗಿಸಬೇಕು ಎಂದು ಆಗ್ರಹಿಸಿದೆ.

ಕೃಷ್ಣರಾಜಸಾಗರದ ಸುತ್ತಮುತ್ತಲ ಪ್ರದೇಶದಲ್ಲಿ ಪರೀಕ್ಷಾರ್ಥ ಸ್ಫೋಟ ನಡೆಸಲು ಮುಂದಾಗಿದ್ದ ಜಿಲ್ಲಾಡಳಿತ ಜನಪರ ಹೋರಾಟಕ್ಕೆ ಮಣಿದು ಪ್ರಯೋಗಾರ್ಥ ಸ್ಫೋಟವನ್ನು ರದ್ದು ಮಾಡಿರುವುದನ್ನು ಸ್ವಾಗತಿಸಿದ ಸಭೆಯು, ಮುಂದಿನ ದಿನಗಳಲ್ಲಿ ಯಾವುದೇ ಸಂದರ್ಭದಲ್ಲಿ ಪರೀಕ್ಷಾರ್ಥ ಸ್ಫೋಟಕ್ಕೆ ಮುಂದಾಗಬಾರದು ಎಂದು ಒತ್ತಾಯಿಸುವ ನಿರ್ಣಯವನ್ನು ಮಂಡಿಸಲಾಯಿತು.

ಕರ್ನಾಟಕ ರಾಜ್ಯ ರೈತ ಸಂಘದ ಅಧ್ಯಕ್ಷ ಬಡಗಲಪುರ ನಾಗೇಂದ್ರ ದಸಂಸ ಗುರುಪ್ರಸಾದ್ ಕೆರಗೋಡು, ಮಾಜಿ ಸಚಿವ ಎಂ.ಎಸ್.ಆತ್ಮಾನಂದ, ಪ್ರಧಾನ ಕಾರ್ಯದರ್ಶಿ ಎನ್.ರಾಜು, ಬಿ.ಬಸವರಾಜು, ಬೋರೇಗೌಡ, ರೈತ ಸಂಘದ ಪ್ರಸನ್ನ ಎಸ್.ಗೌಡ, ಕೆ.ಟಿ.ಗೋವಿಂದೇಗೌಡ, ಹರೀಶ್, ಸ್ವಾಮಿಗೌಡ, ಮಧುಚಂದನ್, ಕರವೇ ಮುಖಂಡ ಜಯರಾಮು, ಕದಂಬ ಸೈನ್ಯದ ಬೇಕರಿ ರಮೇಶ್, ಪ್ರಗತಿಪರ ಸಂಘಟನೆಯ ಪ್ರೊಹುಲ್ಕೆರೆ ಮಹದೇವ್, ಕೆ.ಆರ್. ರವೀಂದ್ರ ಇತರರು ಭಾಗ ವಹಿಸಿದ್ದರು.

ವ್ಯಕ್ತಿಯನ್ನು ಕೊಂದು ಪರಾರಿಯಾಗಿದ್ದ ಆರೋಪಿ ಸೆರೆ

ಶ್ರೀರಂಗಪಟ್ಟಣ, ಜು.29– ತನ್ನ ಸಂಬಂಧಿಯೊಬ್ಬರ ಜೊತೆ ಅಕ್ರಮ ಸಂಬಂಧವಿಟ್ಟುಕೊಂಡಿದ್ದ ವ್ಯಕ್ತಿಯನ್ನು ಬರ್ಬರವಾಗಿ ಹತ್ಯೆಗೈದು ಪರಾರಿಯಾಗಿದ್ದ ಆರೋಪಿಯನ್ನು ಕೆಆರ್‌ಎಸ್ ಪೊಲೀಸರು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಶ್ರೀರಂಗಪಟ್ಟಣ ತಾಲೂಕು ಬೆಳಗೊಳ ಗ್ರಾಮದ ಮಂಜುನಾಥ ಬಡಾವಣೆ ನಿವಾಸಿ ಎನ್.ಶರತ್ ಅಲಿಯಾಸ್ ಕುಬೇರ ಅಲಿಯಾಸ್ ಅಪ್ಪಿ(28) ಎಂಬಾತನೇ ಬಂಧಿತನಾದ ಕೊಲೆ ಆರೋಪಿ. ಬೆಳಗೊಳ ಗ್ರಾಮದ ವಾಸಿ ಬಿ.ವಿ.ರವಿ(30) ಎಂಬಾತನೇ ಕೊಲೆಯಾದ ದುರ್ದೈವಿ.

ರವಿ ಬೆಳಗೊಳದ ಸವಿತ ವೈನ್ ಸ್ಟೋರ್‌ನಲ್ಲಿ ಸಪ್ಲೆಯರ್ ಆಗಿ ಕೆಲಸ ಮಾಡುತ್ತಿದ್ದ. ಜು.27 ರಂದು ರಾತ್ರಿ 8.45 ರಲ್ಲಿ ವೈನ್‌ಸ್ಟೋರ್‌ಗೆ ಬಂದ. ಅದೇ ಗ್ರಾಮದ ಶರತ್ ಅಲಿಯಾಸ್ ಕುಬೇರ ಅಲಿಯಾಸ್ ಅಪ್ಪಿ ಎಂಬಾತ ರವಿಯನ್ನು ವೈನ್‌ಸ್ಟೋರ್ ಮುಂಭಾಗ ಕರೆಸಿಕೊಂಡು ಗಲಾಟೆ ಮಾಡಿ ಏಕಾಏಕಿ ಮಚ್ಚಿನಿಂದ ರವಿಯ ತಲೆ ಮತ್ತು ಕುತ್ತಿಗೆ ಮೇಲೆ ಹಲ್ಲೆ ನಡೆಸಿ ಪರಾರಿಯಾದ.

ಇದರಿಂದ ತೀವ್ರ ರಕ್ತ ಸ್ರಾವವಾಗಿ ಪ್ರಜ್ಞೆ ತಪ್ಪಿ ಬಿದ್ದ ರವಿಯನ್ನು ತಕ್ಷಣ ಮೈಸೂರಿನ ಆಸ್ಪತ್ರೆಗೆ ಕರೆದೊಯ್ಯಲಾಗಿತ್ತಾದರೂ ಅಷ್ಟರಲ್ಲಾಗಲೇ ರವಿ ಮೃತಪಟ್ಟಿದ್ದ. ಈ ಸಂಬಂಧ ಕೆಆರ್‌ಎಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಮಂಡ್ಯ ಜಿಲ್ಲಾ ಪೊಲೀಸ್ ಅಧೀಕ್ಷಕ ಯತೀಶ್, ಅಡಿಷನಲ್ ಎಸ್‌ಪಿ ಎಂ.ವೇಣುಗೋಪಾಲ್, ಡಿವೈಎಸ್ಪಿ ಸಂದೇಶ್ ಕುಮಾರ್ ಅವರ ಮಾರ್ಗದರ್ಶನದಲ್ಲಿ ತಂಡವನ್ನು ರಚಿಸಿ ಕೊಲೆ ಪ್ರಕರಣವನ್ನು ಭೇದಿಸಿ ಆರೋಪಿ ಬಂಧನಕ್ಕೆ ಸೂಚಿಸಲಾಯಿತು.

ಈ ಹಿನ್ನೆಲೆಯಲ್ಲಿ ಸರ್ಕಲ್ ಇನ್ಸ್‌ಪೆಕ್ಟರ್ ಯೋಗೇಶ್, ಸಬ್‌ಇನ್ಸ್‌ಪೆಕ್ಟರ್ ಲಿಂಗರಾಜು ಮತ್ತು ಸಿಬ್ಬಂದಿಗಳು ತಕ್ಷಣ ಕಾರ್ಯ ಪ್ರವೃತ್ತರಾಗಿ ಪ್ರಕರಣ ನಡೆದು ಒಂದೇ ದಿನದಲ್ಲಿ ಆರೋಪಿಯನ್ನು ಪತ್ತೆ ಹಚ್ಚಿ ಬಂಧಿಸಿದರು. ರವಿಯು ಆರೋಪಿ ಶರತ್ ಸಂಬಂಧಿಯೊಬ್ಬರ ಜೊತೆ ಅಕ್ರಮ ಸಂಬಂಧವಿಟ್ಟುಕೊಂಡಿದ್ದು, ಅಂದು ಈ ವಿಷಯವಾಗಿ ಜಗಳವಾಗಿ ಕೊಲೆ ಮಾಡಿದ್ದಾಗಿ ಆರೋಪಿ ಒಪ್ಪಿಕೊಂಡಿದ್ದಾನೆ ಎಂದು ಪೊಲೀಸರು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಆರೋಪಿ ಶರತ್ ತಲೆ ಮರೆಸಿಕೊಂಡು ಮೈಸೂರು ರೈಲ್ವೆ ನಿಲ್ದಾಣದ ಬಳಿ ಇರುವ ವಿಚಾರ ತಿಳಿದು, ಕಾರ್ಯ ಪ್ರವೃತ್ತರಾಗಿ ಪೊಲೀಸರು ಬಂಧಿಸಿದ್ದಾರೆ.

ನಾಗಮಂಗಲ ಸುತ್ತಮುತ್ತ ಭಾರೀ ಮಳೆ

ನೆಲಕ್ಕೊರಗಿದ 250ಕ್ಕೂ ಹೆಚ್ಚಿನ ತೆಂಗಿನ ಮರ, ಬಾಳೆ ಗಿಡಗಳು; ಮನೆಗಳು ಜಖಂ

ನಾಗಮಂಗಲ, ಜು.29– ಕಳೆದ ಎರಡು ದಿನಗಳಿಂದ ತಾಲೂಕಿನಲ್ಲಿ ಸುರಿಯುತ್ತಿರುವ ಧಾರಾಕಾರ ಮಳೆಯಿಂದ ನಾಗಮಂಗಲ ಅಕ್ಷರ ಸಹ ನಲುಗಿ ಹೋಗಿದ್ದು, ರೈತರ ಬದುಕು ಅಸ್ತವ್ಯಸ್ತವಾಗಿದೆ.

ಗುರುವಾರ ಮಧ್ಯೆ ರಾತ್ರಿ ಸತತ ಮೂರು ಗಂಟೆಗಳ ಕಾಲ ಸುರಿದ ಬಿರುಗಾಳಿ ಸಹಿತ ಮಳೆಗೆ ಸುಮಾರು 250ಕ್ಕೂ ಹೆಚ್ಚು ಫಸಲು ನೀಡುತ್ತಿದ್ದ ತೆಂಗಿನ ಗಿಡಗಳು ನೆಲಕ್ಕೊರಗಿರುವುದರ ಜೊತೆಗೆ ಬಾಳೆ, ತರಕಾರಿ ಗಿಡಗಳು ನೀರಿನಲ್ಲಿ ಕೊಚ್ಚಿ ಹೋಗಿವೆ. ಸುಮಾರು 5 ಲಕ್ಷ ರೂ.ಗಳಿಗೂ ಹೆಚ್ಚು ನಷ್ಟವಾಗಿದೆ. ಈ ಘಟನೆ ಕಸಬಾ ಹೋಬಳಿಯ ಪಿ ನೇರಲಕೆರೆ, ದಾಖಲೆ ಗ್ರಾಮ, ಸಿಂಗಾರಮ್ಮನ ಕೊಪ್ಪಲು ಗ್ರಾಮದಲ್ಲಿ ನಡೆದಿದೆ.

ಒಂದು ತಿಂಗಳಿನಿಂದ ಮಳೆ ಬರುತ್ತಿತ್ತಾದರೂ ಬುಧವಾರ ಸಂಜೆ ಮತ್ತೆ ತನ್ನ ರುದ್ರ ನರ್ತನ ತೋರಿದೆ. ಅದರಲ್ಲೂ ಗುರುವಾರ ಮಧ್ಯೆ ರಾತ್ರಿ ಆರಂಭವಾದ ಮಳೆ ಸತತ ಮೂರು ಗಂಟೆ ಸುರಿದು ನೇರಲಕೆರೆ ಗ್ರಾಮದಲ್ಲಿ ಸಾಕಷ್ಟು ಹಾನಿಯಾಗಿದೆ. ಅಹೋರಾತ್ರಿ ಸುರಿದ ಮಳೆಗೆ ಅಲ್ಲಿನ ಜನ ನಲುಗಿ ಹೋಗಿದ್ದು, ರಾಮೇಗೌಡ ಎಂಬುವರ ಮನೆಯ ಕೊಟ್ಟಿಗೆಯ ಮೇಲೆ ತೆಂಗಿನ ಮರ ಬಿದ್ದು ಮನೆಯಲ್ಲಿ ಮಲಗಿದ್ದ ಎಂಟು ಜನ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಮತ್ತೊಂದು ಕಡೆ ರಸ್ತೆಯಲ್ಲಿದ್ದ ಎರಡು ವಿದ್ಯುತ್ ಕಂಬಗಳು ಬುಡ ಸಮೇತ ನೆಲಕ್ಕೆ ಬಿದ್ದದ್ದು ತಕ್ಷಣವೇ ವಿದ್ಯುತ್ ಕಡಿತಗೊಂಡು ಮುಂದಾಗುವ ಅನಾಹುತ ತಪ್ಪಿದಂತಾಗಿದೆ. ನೇರಲಕೆರೆ ಗ್ರಾಮದ ಕಮಲಮ್ಮ ಮತ್ತು ದೊಡ್ಡಯ್ಯ ಎಂಬುವರ ಮನೆಯ ಮೇಲ್ಛಾವಣಿ ಹಾರಿ ಹೋಗಿದ್ದು, ಲಕ್ಷ್ಮಮ್ಮ ಎಂಬುವರು ಮಲಗಿದ್ದ ಸಮಯದಲ್ಲಿ ಮನೆಯ ಒಂದು ಪಾರ್ಶ್ವ ಕುಸಿದಿದೆ. ಸಿಂಗಾರಮ್ಮನ ಕೊಪ್ಪಲು ಗ್ರಾಮದ ರಾಮೇಗೌಡ ಎಂಬುವರ ಇನ್ನೂರಕ್ಕೂ ಹೆಚ್ಚು ಬಾಳೆಯ ಗಿಡಗಳು ನಾಶವಾಗಿದ್ದು ಜಮೀನಿನಲ್ಲಿ ಒಂದು ಅಡಿ ನೀರು ನಿಂತಿರುವುದು ಕಂಡು ಬಂದಿದೆ.

ಇನ್ನೂ ಅದೇ ಗ್ರಾಮದಲ್ಲಿ ಬೆಳೆದು ನಿಂತಿದ್ದ 250ಕ್ಕೂ ಹೆಚ್ಚಿನ ತೆಂಗಿನ ಗಿಡಗಳು ಕೆಲವು ಅರ್ಧಕ್ಕೆ ತುಂಡಾಗಿದ್ದರೇ, ಮತ್ತೆ ಕೆಲವು ಬುಡ ಸಮೇತ ಮುರಿದುಕೊಂಡು ನೆಲಕ್ಕೊರಗಿವೆ, ಗ್ರಾಮದ ಉಮೇಶ್, ಲಕ್ಷ್ಮೀಗೌಡ, ಕೆಂಪೇಗೌಡ, ಮೋಹನ್ ರಾಜು, ರುದ್ರೇಶ್, ಮಲ್ಲೇಗೌಡ, ಗಂಗಮ್ಮ, ರಾಮೇಗೌಡ ಎಂಬುವರಿಗೆ ಸೇರಿದ ತೆಂಗಿನ ಗಿಡ ಮತ್ತು ಸಸಿಗಳು ನೀರು ತುಂಬಿದ ತೋಟದಲ್ಲಿ ಮುಳುಗಿವೆ.

ವಿಷಯ ತಿಳಿದ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಸ್ಥಿತಿಯನ್ನು ಅವಲೋಕಿಸಿದರು.

ಪಿ.ಹೊಸಹಳ್ಳಿ ಗ್ರಾಪಂ ಉಪಾಧ್ಯಕ್ಷರಾಗಿ ವಿಶ್ವನಾಥ್ ಆಯ್ಕೆ



ಶ್ರೀರಂಗಪಟ್ಟಣ, ಜು.29– ತಾಲೂಕಿನ ಪಿ.ಹೊಸಹಳ್ಳಿ ಗ್ರಾಮ ಪಂಚಾಯಿತಿಯ ನೂತನ ಉಪಾಧ್ಯಕ್ಷರಾಗಿ ಕೆ.ಎಸ್.ವಿಶ್ವನಾಥ್ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಈ ಹಿಂದೆ ಉಪಾಧ್ಯಕ್ಷರಾಗಿದ್ದ ಕೃಷ್ಣಾನಂದ ರಾಜೀನಾಮೆಯಿಂದ ತೆರವಾದ ಸ್ಥಾನಕ್ಕೆ ಚುನಾವಣೆ ನಿಗದಿಯಾಗಿತ್ತು. ಪಿ.ಹೊಸಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಒಟ್ಟು 20 ಮಂದಿ ಸದಸ್ಯರಿದ್ದು, ಗ್ರಾಪಂನಲ್ಲಿ 11 ಮಂದಿ ಕಾಂಗ್ರೆಸ್ ಬೆಂಬಲಿತ ಸದಸ್ಯರಿದ್ದರು. ವಿಶ್ವನಾಥ್ ಒಬ್ಬರೆ ಉಪಾಧ್ಯಕ್ಷ ಸ್ಥಾನಕ್ಕೆ ನಾಮಪತ್ರ ಸಲ್ಲಿಸಿದ್ದರಿಂದ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿ ತಾಪಂ ಇಒ ಬಿಂದು ಘೋಷಣೆ ಮಾಡಿದರು.

ಗ್ರಾಮ ಪಂಚಾಯಿತಿ ಅಧ್ಯಕ್ಷ ಜಯಶೀಲ, ಮಾಜಿ ಅಧ್ಯಕ್ಷೆ ಉಮಾ, ಸದಸ್ಯರಾದ ಕೃಷ್ಣಾನಂದ, ಗೀತಾ ಸುಮಿತ್ರ, ತರುಣ್, ಶ್ರೀನಿವಾಸ್, ಶ್ರೀಕಂಠು, ಸಂಕಾಳಮ್ಮ ಸೇರಿದಂತೆ ಇತರರು ನೂತನ ಉಪಾಧ್ಯಕ್ಷರನ್ನು ಅಭಿನಂಧಿಸಿದರು.

ಚಿಕ್ಕೇಗೌಡ ನಿಧನ



ಭಾರತೀನಗರ,ಜು.29– ಇಲ್ಲಿಗೆ ಸಮೀಪದ ಮಾಲಗಾರನಹಳ್ಳಿ ಗ್ರಾಮದ ಭದ್ರಾವತಿ ಕಬ್ಬಿಣ ಮತ್ತು ಉಕ್ಕು ಕಾರ್ಖಾನೆಯ ನಿವೃತ್ತ ನೌಕರ ಎಂ.ಸಿ. ಚಿಕ್ಕೇಗೌಡ(80) ಅನಾರೋಗ್ಯದಿಂದ ನಿಧನ ಹೊಂದಿದ್ದಾರೆ.

ಮೃತರು ಪತ್ನಿ, ಇಬ್ಬರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧುಮಿತ್ರರನ್ನು ಅಗಲಿದ್ದಾರೆ. ಮೃತರಿಗೆ ಗ್ರಾಮದ ಹಿರಿಯರು, ಮುಖಂಡರು ಸಂತಾಪ ಸೂಚಿಸಿದ್ದಾರೆ.

ಅಂತ್ಯಕ್ರಿಯೆ ಸ್ವಗ್ರಾಮವಾದ ಮಾಲಗಾರನಹಳ್ಳಿ ಗ್ರಾಮದಲ್ಲಿ ನೆರವೇರಿತು.

ಹಲ್ಲಿ ಬಿದ್ದ ಬಿಸಿಯೂಟ ಸೇವಿಸಿ 46 ಮಕ್ಕಳು ಅಸ್ವಸ್ಥ

ಯಳಂದೂರು ತಾಲೂಕು ಕೆಸ್ತೂರು ಗ್ರಾಮದ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಘಟನೆ





ಉಪವಿಭಾಗಾಧಿಕಾರಿ ಗೀತಾ ಹುಡೇದ ಅವರು ಅಸ್ವಸ್ಥಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಮಕ್ಕಳ ಆರೋಗ್ಯ ವಿಚಾರಿಸಿದರು. ಮತ್ತೊಂದು ಚಿತ್ರದಲ್ಲಿ ಊಟದಲ್ಲಿ ಹಲ್ಲಿ ಬಿದ್ದಿರುವುದನ್ನು ಕಾಣಬಹುದು.

ಯಳಂದೂರು,ಜು.29–ಹಲ್ಲಿ ಬಿದ್ದ ಬಿಸಿಯೂಟ ಸೇವಿಸಿ 46 ಮಕ್ಕಳು ಅಸ್ವಸ್ಥಗೊಂಡಿರುವ ಬಗ್ಗೆ ತಾಲೂಕಿನ ಕೆಸ್ತೂರಿನಿಂದ ವರದಿಯಾಗಿದೆ.

ಕೆಸ್ತೂರು ಗ್ರಾಮದ ಉನ್ನತೀಕರಿಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ–1ರಲ್ಲಿ 1 ರಿಂದ 4ನೇ ತರಗತಿವರೆಗೆ ಆಂಗ್ಲ ಮಾಧ್ಯಮ ಹಾಗೂ 1 ರಿಂದ 8ನೇ ತರಗತಿವರೆಗೆ ಕನ್ನಡ ಮಾಧ್ಯಮದ ಒಟ್ಟು 330 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ಯಳಂದೂರು ಪಟ್ಟಣದ ಅಕ್ಷರ ದಾಸೋಹ ಸಂಸ್ಥೆಯಿಂದ ಕೆಸ್ತೂರು ಶಾಲೆಗೆ ಎಂದಿನಂತೆ ಬಿಸಿಯೂಟವನ್ನು ದೊಡ್ಡದೊಡ್ಡ ಮೂರು ಬಾಕ್ಸ್‌ಗಳಲ್ಲಿ ಪೂರೈಸಲಾಗಿದೆ. ಎರಡು ಬಾಕ್ಸ್ ಬಿಸಿಯೂಟವನ್ನು ಸೇವಿಸಿದ ಶಾಲಾ ಮಕ್ಕಳಲ್ಲಿ ಹೊಟ್ಟೆನೋವು, ವಾಂತಿ–ಭೇದಿ ಕಾಣಿಸಿಕೊಂಡು ಅವರನ್ನು ತಾಲೂಕು ಆಸ್ಪತ್ರೆಯಲ್ಲಿ ಚಿಕಿತ್ಸೆ ದಾಖಲಿಸಲಾಗಿದೆ.


ಮಕ್ಕಳು ಎರಡು ಬಾಕ್ಸ್‌ಗಳಲ್ಲಿ ಬಿಸಿಯೂಟ ಸೇವಿಸಿದ ನಂತರ ಮೂರನೇ ಬಾಕ್ಸ್ ತೆರೆದಾಗ ಊಟದಲ್ಲಿ ಹಲ್ಲಿ ಬಿದ್ದಿರುವುದು ಕಂಡು ಬಂದಿದೆ ತಕ್ಷಣ ಮಕ್ಕಳಿಗೆ ಊಟ ನೀಡುವುದನ್ನು ನಿಲ್ಲಿಸಲಾಯಿತು. ಆದರೆ ಎರಡು ಬಾಕ್ಸ್ ಊಟವನ್ನು ಆಗಾಗಲೇ ಸುಮಾರು 120 ಶಾಲಾ ಮಕ್ಕಳು ಸೇವಿಸಿದ್ದರು ಎನ್ನಲಾಗಿದೆ.

> 6 ಕೆಸ್ತೂರಿನ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಲ್ಲಿ ಬಿದ್ದ ಬಿಸಿಯೂಟ ಸೇವನೆಯಿಂದ 46 ಮಕ್ಕಳು ಅಸ್ವಸ್ಥರಾಗಿದ್ದು, ಅವರಿಗೆಲ್ಲ ಚಿಕಿತ್ಸೆ ನೀಡಿ ಆಸ್ಪತ್ರೆಯಿಂದ ಡಿಸ್ಚಾರ್ಜ್ ಮಾಡಲಾಗಿದೆ. ಸದ್ಯ ಅವರೆಲ್ಲರೂ ಆರೋಗ್ಯವಾಗಿ ಮನೆಗೆ ಮರಳಿದ್ದಾರೆ. ಅತಂಕ ಪಡುವ ಅಗತ್ಯವಿಲ್ಲ.
>
> –ಆನಂದಪ್ಪ ನಾಯಕ್, ತಹಸೀಲ್ದಾರ್.

ವಿಷಯ ತಿಳಿದು ಆಸ್ಪತ್ರೆಗೆ ದೌಡಾಯಿಸಿದ ಉಪಾವಿಭಾಗಾಧಿಕಾರಿ ಗೀತಾ ಹುಡೇದ, ಚಿಕಿತ್ಸೆ ಪಡೆಯುತ್ತಿರುವ ಮಕ್ಕಳ ಆರೋಗ್ಯ ವಿಚಾರಿಸಿದರು. ಮಕ್ಕಳು ನಮಗೆ ವಾಂತಿ–ಭೇದಿ, ಹೊಟ್ಟೆನೋವು ಉಂಟಾಗಿದೆ ಎಂದು ಉಪವಿಭಾಗಾಧಿಕಾರಿಗೆ ಅಲವತ್ತುಕೊಂಡರು. ಅಲ್ಲದೆ ಉಪವಿಭಾಗಾಧಿಕಾರಿ ಶಾಲೆಯ ಮುಖ್ಯ ಶಿಕ್ಷಕರಿಂದ ಘಟನೆಗೆ ಸಂಬಂಧಿಸಿದ ಮಾಹಿತಿ ಪಡೆದರು. ಶಾಸಕ ಎನ್.ಮಹೇಶ್, ತಹಸೀಲ್ದಾರ್ ಆನಂದಪ್ಪ ನಾಯಕ್, ಬಿಇಓ ಕೆ.ಕಾಂತರಾಜು ಆಸ್ಪತ್ರೆಗೆ ಭೇಟಿ ನೀಡಿ ಮಕ್ಕಳು ಆರೋಗ್ಯ ವಿಚಾರಿಸಿದರು. ಈ ಘಟನೆಯಿಂದಾಗಿ ಕೆಸ್ತೂರು ಗ್ರಾಮಸ್ಥರು ಆತಂಕದಿಂದ ಆಸ್ಪತ್ರೆ ಮುಂದೆ ಜಮಾಯಿಸಿದ್ದರು. ಜನಜಂಗುಳಿ ನಿಯಂತ್ರಿಸಲು ಪೊಲೀಸರು ಅರಸಾಹಸಪಟ್ಟರು.

ವನ್ಯಜೀವಿಗಳ ರಕ್ಷಣೆ ಪ್ರತಿಯೊಬ್ಬರ ಹೊಣೆ

ಶಾಸಕ ಸಿ.ಎಸ್.ನಿರಂಜನಕುಮಾರ್ ಅಭಿಮತ



ಗುಂಡ್ಲುಪೇಟೆ, ಜು.29–ಪರಿಸರ ಹಾಗೂ ವನ್ಯಜೀವಿಗಳ ರಕ್ಷಣೆ ಪ್ರತಿಯೊಬ್ಬರ ಹೊಣೆ ಎಂದು ಶಾಸಕ ಸಿ.ಎಸ್.ನಿರಂಜನ ಕುಮಾರ್ ಹೇಳಿದರು.

ತಾಲೂಕಿನ ಮೇಲುಕಾಮನಹಳ್ಳಿಯ ಸಫಾರಿ ಟಿಕೆಟ್ ಕೌಂಟರ್‌ನಲ್ಲಿ ಅರಣ್ಯ ಇಲಾಖೆ ಶುಕ್ರವಾರ ಆಯೋಜಿಸಿದ್ದ ಅಂತಾರಾಷ್ಟ್ರೀಯ ಹುಲಿ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು. ದೇಶದ ಪ್ರಮುಖ ಹುಲಿ ಸಂರಕ್ಷಣಾಧಾಮವಾದ ಬಂಡೀಪುರ ರಾಷ್ಟ್ರೀಯ ಉದ್ಯಾನ ನಮ್ಮ ತಾಲೂಕಿನಲ್ಲಿರುವುದು ನಮ್ಮೆಲ್ಲರ ಹೆಮ್ಮೆ. ಸಿಬ್ಬಂದಿಯು ಜೀವದ ಹಂಗು ತೊರೆದು ಹಗಲಿರುಳೂ ಸಂರಕ್ಷಣೆ ಮಾಡಿದ್ದರಿಂದ ಪ್ರತಿ ವರ್ಷವೂ ಹುಲಿಗಳ ಸಂತತಿ ಹೆಚ್ಚಾಗುತ್ತಿದೆ ಎಂದರು.

ಅರಣ್ಯನಾಶ ಹಾಗೂ ಮಳೆಯ ಕೊರತೆ, ವಾತಾವರಣದಲ್ಲಿ ವ್ಯತ್ಯಯವಾಗುವ ಜೊತೆಗೆ ಇತ್ತೀಚಿಗೆ ಮಾನವ ವನ್ಯಜೀವಿಗಳ ಸಂಘರ್ಷ ದಿನೇದಿನೆ ಹೆಚ್ಚಾಗುತ್ತಿದೆ. ಇಂತಹ ಸಂದರ್ಭದಲ್ಲಿ ಇಲಾಖೆ ಜನಸ್ನೇಹಿಯಾಗಿ ಕಾರ್ಯ ನಿರ್ವಹಿಸಬೇಕು ಎಂದು ಕಿವಿಮಾತು ಹೇಳಿದರು. ಮೈಸೂರು ವೃತ್ತದ ಅರಣ್ಯ ಸಂರಕ್ಷಣಾಧಿಕಾರಿ ಡಾ.ಮಾಲತಿ ಪ್ರಿಯ ಮಾತನಾಡಿ, ರಷ್ಯಾದಲ್ಲಿ ಹುಲಿ ಸಂತತಿ ಉಳಿವಿಗೆ ನಿರ್ಣಯ ಕೈಗೊಂಡು ಅಂತಾರಾಷ್ಟ್ರೀಯ ಮಟ್ಟದಲ್ಲಿ ಹುಲಿ ದಿನಾಚರಣೆ ಆಚರಿಸುತ್ತಿವೆ. ಭಾರತ ಸೇರಿ 13 ರಾಷ್ಟ್ರಗಳು ಹುಲಿ ಸಂತತಿ ಹೆಚ್ಚಿಸಲು ಪ್ರತಿಜ್ಞೆ ಮಾಡಿ ಕಟ್ಟುನಿಟ್ಟಿನ ಕ್ರಮ ಕೈಗೊಂಡಲಾಗಿದೆ. ಇದರಿಂದ ಪ್ರತಿ ಗಣತಿಯಲ್ಲಿಯೂ ಹುಲಿಗಳ ಸಂಖ್ಯೆ ಹೆಚ್ಚಳವಾಗುತ್ತಿದೆ ಎಂದರು. ಕಾರ್ಯಕ್ರಮದಲ್ಲಿ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಜಗತ್‌ರಾಂ, ಡಿಸಿ ಚಾರುಲತಾ ಸೋಮಲ್. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಿವಕುಮಾರ್, ಹಂಗಳ ಗ್ರಾಪಂ ಅಧ್ಯಕ್ಷ ಮಲ್ಲಪ್ಪ, ವನ್ಯಜೀವಿ ಮಂಡಲಿ ಸದಸ್ಯ ಮಲ್ಲೇಶಪ್ಪ, ಚಾಮರಾಜನಗರ ವನ್ಯಜೀವಿ ಪರಿಪಾಲಕ ನಂಜುಂಡ ರಾಜೇ ಅರಸ್, ಎಸಿಎಫ್‌ಗಳಾದ ನವೀನ್, ರವೀಂದ್ರ, ಕೆ.ಪರಮೇಶ್ ಸೇರಿದಂತೆ ಅರಣ್ಯ ಇಲಾಖೆ ಸಿಬ್ಬಂದಿ ಭಾಗವಹಿಸಿದ್ದರು.

ಆ.1, ವೀರಶೈವ–ಲಿಂಗಾಯತ ಮಹಾಸಭಾ ಪ್ರತಿಭಟನೆ

ಚಾಮರಾಜನಗರ, ಜು.29–ವೀರಶೈವ– ಲಿಂಗಾಯತ ಸಮದಾಯದ ಎಲ್ಲಾ ಪಂಗಡಗಳನ್ನು ಹಿಂದುಳಿದ ವರ್ಗಗಳ (ಓಬಿಸಿ) ಪಟ್ಟಿಯಲ್ಲಿ ಸೇರಿಸುವಂತೆ ಒತ್ತಾಯಿಸಿ ಅಖಿಲ ಭಾರತ ವೀರಶೈವ–ಲಿಂಗಾಯತ ಮಹಾಸಭಾದಿಂದ ನಗರದಲ್ಲಿ ಆ.1ರಂದು ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮಹಾಸಭಾ ರಾಷ್ಟ್ರೀಯ ಉಪಾಧ್ಯಕ್ಷರೂ ಆದ ಮಾಜಿ ಸಚಿವೆ ಡಾ. ಗೀತಾ ಮಹದೇವಪ್ರಸಾದ್ ಅವರು ಈ ವಿಷಯ ತಿಳಿಸಿದರು. ಅಂದು ಬೆಳಗ್ಗೆ 10 ಗಂಟೆಗೆ ನಗರದ ಶ್ರೀ ಚಾಮರಾಜೇಶ್ವರ ದೇವಸ್ಥಾನದ ಮುಂಭಾಗದಿಂದ ಪ್ರತಿಭಟನೆ ಆರಂಭವಾಗಲಿದೆ. ಮೌನ ಪ್ರತಿಭಟನೆ ಮೂಲಕ ಜಿಲ್ಲಾಡಳಿತ ಭವನಕ್ಕೆ ಆಗಮಿಸಿ ಮನವಿ ಸಲ್ಲಿಸಲಾಗುವುದು ಎಂದರು.

ರಾಜ್ಯದಲ್ಲಿ 60 ವರ್ಷಗಳಿಂದ ವೀರಶೈವ– ಲಿಂಗಾಯತ ಸಮುದಾಯವು ರಾಜ್ಯದ ಇತರೇ ಹಿಂದುಳಿದ ವರ್ಗಗಳಪಟ್ಟಿಯಲ್ಲಿ ಸೇರಿದ್ದರೂ, ಈ ವರ್ಗವನ್ನು ಕೇಂದ್ರದ ಓಬಿಸಿ ಪಟ್ಟಿಗೆ ಸೇರಿಸದೆ ಇರುವುದು ದುರದೃಷ್ಟಕರ ಎಂದು ಬೇಸರ ವ್ಯಕ್ತಪಡಿಸಿದರು. ಮಹಾಸಭಾದ ಜಿಲ್ಲಾ ಅಧ್ಯಕ್ಷ ಮೂಡ್ಲು ಪುರ ನಂದೀಶ್ ಮಾತನಾಡಿದರು. ಮಹಾಸಭಾದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಡಿ.ನಾಗೇಂದ್ರ, ಜಿಲ್ಲಾ ಉಪಾಧ್ಯಕ್ಷೆ ರತ್ನಮ್ಮ, ರಾಜ್ಯ ಘಟಕದ ಸದಸ್ಯ ಸುಜೇಂದ್ರ, ಗುಂಡ್ಲುಪೇಟೆ ತಾಲೂಕು ಅಧ್ಯಕ್ಷ ಹೆಚ್.ಎಸ್. ನಂಜಪ್ಪ ಸುದ್ದಿಗೋಷ್ಠಿಯಲ್ಲಿದ್ದರು.

ಮ.ಬೆಟ್ಟದಲ್ಲಿ ಲಾಡು ಪ್ರಸಾದದ ಜೊತೆ ಭಕ್ತನ ಕೈ ಸೇರಿದ 2.91 ಲಕ್ಷ ನಗದು!



ಹನೂರು, ಜು.29–ತಾಲೂಕಿನ ಪ್ರಸಿದ್ಧ ಯಾತ್ರಾ ಕ್ಷೇತ್ರ ಮಲೆ ಮಹದೇಶ್ವರಸ್ವಾಮಿ ದೇವಾಲಯದ ಸಿಬ್ಬಂದಿ ಎಡವಟ್ಟಿನಿಂದಾಗಿ ಲಾಡು ಪ್ರಸಾದದ ಜೊತೆ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರಕ್ಕೆ ಸೇರಿದ 2.91 ಲಕ್ಷ ರೂ. ಹಣ ಭಕ್ತನ ಕೈ ಸೇರಿದೆ.

ಭೀಮನ ಅಮಾವಾಸ್ಯೆ ದಿನವಾದ ಗುರುವಾರ ಬೆಟ್ಟಕ್ಕೆ ಭಕ್ತರ ದಂಡೇ ಹರಿದು ಬಂದಿತ್ತು. ಮಹದೇಶ್ವರಬೆಟ್ಟದ ರಾಜಗೋಪುರ ಬಳಿ ವಿಶೇಷ ದರ್ಶನದ 500 ರೂ. ಟಿಕೆಟ್ ಕೌಂಟರ್‌ನಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಸಿಬ್ಬಂದಿಯೊಬ್ಬರು ಭಕ್ತರಿಗೆ ವಿಶೇಷ ದರ ಟಿಕೆಟ್ ನೀಡಿ ಪ್ರಸಾದ ನೀಡಿದ್ದಾರೆ. ಲಾಡು ಪ್ರಸಾದ ಇಟ್ಟಿದ್ದ ಬ್ಯಾಗ್ ಸಮೀಪವೇ ಹಣ ಇದ್ದ ಚೀಲ ಇದ್ದುದರಿಂದ ಲಾಡು ಪ್ರಸಾದದ ಬ್ಯಾಗ್ ಜೊತೆ ಹಣವಿದ್ದ ಬ್ಯಾಗ್ ಭಕ್ತರೊಬ್ಬರಿಗೆ ಸಿಬ್ಬಂದಿ ನೀಡಿದ್ದಾರೆ.

ಮಧ್ಯಾಹ್ನ ಹಣ ಕಾಣಿಸದೇ ಇದ್ದುದ ರಿಂದ ಗಾಬರಿಗೊಂಡು ಬಳಿಕ ಮಲೆ ಮಹದೇ ಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಅಧಿಕಾರಿಗಳಿಗೆ ಸಿಬ್ಬಂದಿ ವಿಷಯ ತಿಳಿಸಿ ದ್ದಾರೆ. ಸಿಸಿಟಿವಿ ಕ್ಯಾಮೆರಾ ದೃಶ್ಯಾವಳಿ ಪರಿಶೀಲಿಸಿದಾಗ, 4 ಟಿಕೆಟ್ ಪಡೆದಿದ್ದ ಭಕ್ತರೊಬ್ಬರಿಗೆ 3 ಲಾಡು ಪ್ರಸಾದದ ಬ್ಯಾಗ್ ಜೊತೆಗೆ ಹಣವಿದ್ದ ಬ್ಯಾಗನ್ನು ಸಿಬ್ಬಂದಿ ನೀಡಿರುವುದು ಕಂಡು ಬಂದಿದೆ. ಕಣ್ತಪ್ಪಿನಿಂದ ಈ ಘಟನೆ ಜರುಗಿದೆ ಎಂದು ಹೇಳಲಾಗುತ್ತಿದ್ದು, ಪ್ರಾಧಿಕಾರದ ಬೊಕ್ಕಸಕ್ಕೆ 2.91 ಲಕ್ಷ ನಷ್ಟವಾಗಿದ್ದ ಈ ಹಣವನ್ನು ಕರ್ತವ್ಯ ನಿರ್ವಹಿಸುತ್ತಿದ್ದ ಸಿಬ್ಬಂದಿ ಯಿಂದಲೇ ಜಮಾ ಮಾಡಿಸಲು ತಾಕೀತು ಮಾಡಲಾಗಿದೆ ಎಂದು ಪ್ರಾಧಿಕಾರದ ಮೂಲಗಳು ತಿಳಿಸಿವೆ.

ಹಾಡಹಗಲೇ ಮನೆಗೆ ನುಗ್ಗಿ ಗೃಹಿಣಿ ಹತ್ಯೆ



ಹಾಸನ, ಜು.29– ಹಾಡಹಗಲೇ ಮನೆಗೆ ನುಗ್ಗಿ ಗೃಹಿಣಿಯ ಕುತ್ತಿಗೆ ಬಿಗಿದು ಹತ್ಯೆ ಮಾಡಿ ಚಿನ್ನಾಭರಣ ದೋಚಿರುವ ಘಟನೆ ಹಾಸನದ ಜವೇನಹಳ್ಳಿ ಮಠದ ಲಕ್ಷ್ಮೀಪುರಂ ಬಡಾವಣೆಯಲ್ಲಿ ಶುಕ್ರವಾರ ನಡೆದಿದೆ. ನಗರದ ಜುವೆಲರಿ ಶಾಪ್ ಮಾಲೀಕ ಕುಮಾರ್ ಅವರ ಪತ್ನಿ ಮಂಜುಳಾ(42) ಹತ್ಯೆಗೊಳಗಾದವರು. ಕುಮಾರ್ ಅಂಗಡಿಗೆ ಹಾಗೂ ಮಕ್ಕಳು ಕಾಲೇಜಿಗೆ ತೆರಳಿದ ನಂತರ ಮನೆಯಲ್ಲಿ ಒಂಟಿಯಾಗಿದ್ದ ಮಂಜುಳಾ ಅವರ ಕುತ್ತಿಗೆ ಬಿಗಿದು ಹತ್ಯೆಗೈಯ್ಯಲಾಗಿದೆ. ಬಳಿಕ ಹಂತಕರು ಮನೆಯಲ್ಲಿದ್ದ ಚಿನ್ನಾಭರಣ ದೋಚಿ ಪರಾರಿಯಾಗಿದ್ದಾರೆ. ಮಧ್ಯಾಹ್ನ ಕುಮಾರ್ ಅವರು ಮನೆಗೆ ಊಟಕ್ಕೆ ಬಂದಾಗ ಪ್ರಕರಣ ಬೆಳಕಿಗೆ ಬಂದಿದೆ. ಈ ಸಂಬಂಧ ಮಂಜುಳಾ ತಂದೆ ಸುದ್ದಿಗಾರರ ಜೊತೆ ಮಾತನಾಡಿ, ಇಂದು ಬೆಳಗ್ಗೆ 11 ಗಂಟೆಗೆ ನಮ್ಮ ಅಳಿಯ ಅಂಗಡಿಗೆ ಹೋಗಿ ಮಧ್ಯಾಹ್ನ 2 ಗಂಟೆಗೆ ಊಟಕ್ಕೆ ಮನೆಗೆ ಹಿಂತಿರುಗಿದಾಗ ಈ ಘಟನೆ ಬೆಳಕಿಗೆ ಬಂದಿದೆ. ಯಾರೋ ಗೊತ್ತಿರುವವರೇ ಮನೆಯವರ ಚಲನವಲನ ಗಮನಿಸಿ ಈ ಕೃತ್ಯ ಎಸಗಿದ್ದಾರೆ ಎಂದು ಶಂಕೆ ವ್ಯಕ್ತಪಡಿಸಿದರು. ಪೆನ್ಷನ್ ಮೊಹಲ್ಲಾ ಠಾಣೆ ಪೊಲೀಸರು, ಬೆರಳಚ್ಚು ತಜ್ಞರು ಹಾಗೂ ಶ್ವಾನದಳದೊಂದಿಗೆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ವೃತ್ತಿ ಕಲಾವಿದರ ಸಮಿತಿಯ ದ್ವಿತೀಯ ವಾರ್ಷಿಕೋತ್ಸವ

ಮೈಸೂರು, ಜು.29– ಮೈಸೂರು ನಗರ ಮತ್ತು ಜಿಲ್ಲಾ ಸಾಂಸ್ಕೃತಿಕ ವೃತ್ತಿ ಕಲಾವಿದರ ಸಮಿತಿಯ ದ್ವಿತೀಯ ವಾರ್ಷಿಕೋತ್ಸವ ಸಮಾರಂಭ ಜು. 31 ರಂದು ಬೆಳಗ್ಗೆ 11ಕ್ಕೆ ನಗರದ ಪುರಭವನದಲ್ಲಿ ನಡೆಯಲಿದೆ ಎಂದು ಖ್ಯಾತ ಕಲಾವಿದ ಜಯರಾಮರಾಜು ತಿಳಿಸಿದ್ದಾರೆ. ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಾರ್ಷಿಕೋತ್ಸವದ ಅಂಗವಾಗಿ ಭಕ್ತಿಗೀತೆ ಹಾಗೂ ಜನಪದ ಗೀತೆ, ತಬಲಾ ವಾದನ, ಕನ್ನಡದ ಹಳೆಯ ಸುಮಧುರ ಗೀತೆಗಳ ಗಾಯನ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಕಲಾರಸಿಕರಿಗೆ ರಸದೌತಣ ನೀಡಲು ಈ ಕಾರ್ಯಕ್ರಮ ಯಶಸ್ವಿಯಾಗಲಿದೆ. ಸಾರ್ವಜನಿಕರಿಗೆ ಉಚಿತ ಪ್ರವೇಶವಿದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಸಮಿತಿ ಸದಸ್ಯರಾದ ಜನಾರ್ಧನ್, ಎಂ. ಪುಟ್ಟಸ್ವಾಮಿ, ಬಿ. ಶ್ರೀಕಂತ್, ಶಿವಕುಮಾರ್ ಹಾಗೂ ನಂದಕುಮಾರ್ ಇದ್ದರು.

ಮೈಸೂರು ಮಿತ್ರ 43 ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಮೂರನೇ ಪುಟದಿಂದ

ಕೇಂದ್ರ ಹಸಿರು ನಿಶಾನೆ

ಭರಿಸಲಿದೆ. ಯೋಜನೆಗೂ ಮುನ್ನ ಕರ್ನಾಟಕ ಮತ್ತು ತಮಿಳುನಾಡಿನ ನಡುವೆ ಮಹತ್ವದ ಒಪ್ಪಂದವೂ ಆಗಬೇಕಾಗಿದೆ ಎಂದರು. ರಾಜ್ಯದಲ್ಲಿ ಸದ್ಯಕ್ಕೆ ಒಂಭತ್ತು ರೈಲ್ವೇ ಮಾರ್ಗಗಳ ನಿರ್ಮಾಣ ಕಾರ್ಯವನ್ನು ಕೈಗೆತ್ತಿಕೊಳ್ಳಲಾಗಿದ್ದು ಮುಂದಿನ ಎರಡು ವರ್ಷಗಳಲ್ಲಿ ಇವು ಪೂರ್ಣವಾಗುವ ನಿರೀಕ್ಷೆ ಇದೆ ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು.

ಈ ಒಂಭತ್ತು ಯೋಜನೆಗಳ ಕಾಮಗಾರಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರವೇ ಭೂಸ್ವಾಧೀನ ಕಾರ್ಯ ನಡೆಸಿದ್ದು ಕಾಮಗಾರಿಗಾಗಿ 1666 ಕೋಟಿ ರೂಪಾಯಿ ಬಿಡುಗಡೆ ಮಾಡಿದೆ ಎಂದರು. ಈ ವರ್ಷ ಸದರಿ ಯೋಜನೆಗಳಿಗೆ ಐನೂರು ಕೋಟಿ ರೂ.ಗಳನ್ನು ಮೀಸಲಿಟ್ಟಿದ್ದು ತ್ವರಿತಗತಿಯಲ್ಲಿ ಕಾಮಗಾರಿ ನಡೆಯುತ್ತಿದೆ ಎಂದು ನುಡಿದರು.

ಇಂದು ವಿಚಾರಣೆ

ಮೈಸೂರು ಜಿಲ್ಲಾಧಿಕಾರಿಯಾಗಿದ್ದಾಗ ಪರಿಸರ ಸ್ನೇಹಿ ಬಟ್ಟೆ ಬ್ಯಾಗ್ ಖರೀದಿಸಲು 2021ರ ಏಪ್ರಿಲ್ 9ರಂದು ಕಾರ್ಯಾದೇಶ ಹೊರಡಿಸಿದ್ದ ಸಿಂಧೂರಿ ಅವರು, 14,71,458 ಬಟ್ಟೆ ಬ್ಯಾಗ್‌ಗಳನ್ನು ಪ್ರತಿ ಬ್ಯಾಗಿಗೆ 52 ರೂಗಳಂತೆ ಖರೀದಿಸಲು ಅನುಮೋದನೆ ನೀಡಿದ್ದಾರೆ. ಆದರೆ, ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದವರು ಸರಬರಾಜು ಮಾಡಿರುವ ಬಟ್ಟೆ ಬ್ಯಾಗ್‌ಗಳಷ್ಟೇ ಗುಣಮಟ್ಟ ಮತ್ತು ಗಾತ್ರದ ಬ್ಯಾಗ್‌ಗಳು ಮುಕ್ತ ಮಾರುಕಟ್ಟೆಯಲ್ಲಿ ಜಿಎಸ್‌ಟಿ ಸೇರಿ 10 ರಿಂದ 13 ರೂಗಳಲ್ಲಿ ಸಿಗುತ್ತಿದ್ದರೂ, 52 ರೂ. ನಿಗದಿಪಡಿಸಿ ಅನುಮೋದನೆ ನೀಡಿರುವುದರಿಂದ ಹಣ ಅಪವ್ಯಯವಾಗಿದೆ ಎಂದು ಶಾಸಕ ಸಾ.ರಾ.ಮಹೇಶ್ ಅವರು ಸರ್ಕಾರಕ್ಕೆ ದೂರು ಸಲ್ಲಿಸಿದ್ದರು.

ಅದೇ ರೀತಿ ಜಿಲ್ಲಾಧಿಕಾರಿಗಳ ಅಧಿಕೃತ ನಿವಾಸ ಜಲದರ್ಶಿನಿ ಪಾರಂಪರಿಕ ಕಟ್ಟಡದಲ್ಲಿ 50 ಲಕ್ಷ ರೂ. ವೆಚ್ಚದ ಈಜುಕೊಳ, ಜಿಮ್ ಹಾಗೂ 16.35 ಲಕ್ಷ ರೂಗಳ ವಿಟ್ರಿಫೈಡ್ ಟೈಲ್ಸ್ ಹಾಕಿಸಿ ಪಾರಂಪರಿಕ ನಿಯಮಗಳನ್ನು ಉಲ್ಲಂಘಿಸಿದ್ದಾರೆ ಎಂದು ಅವರು ಆರೋಪಿಸಿದ್ದರಲ್ಲದೆ, ಕೋವಿಡ್ ಸೋಂಕಿನಿಂದ ಮೃತಪಟ್ಟವರ ಮಾಹಿತಿಯನ್ನು ಸರ್ಕಾರಕ್ಕೆ ತಪ್ಪಾಗಿ ನೀಡಿದ್ದಾರೆಂದು ಆಪಾದಿಸಿದ್ದನ್ನು ಇಲ್ಲಿ ಸ್ಮರಿಸಬಹುದು.

ಯುದ್ಧ ಸ್ಮಾರಕಕ್ಕೆ ಶಂಕುಸ್ಥಾಪನೆ

ಗ್ರೂಪ್ ಕಮಾಂಡರ್ ಕರ್ನಲ್ ರಾಕೇಶ್ ಮೆನನ್, ಏರ್ ಕಮಾಂಡರ್ ಪಿ.ಸರವಣನ್, ಮೈಲ್ಯಾಕ್ ಅಧ್ಯಕ್ಷ ರಘು ಆರ್.ಕೌಟಿಲ್ಯ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕ ವಿ.ಎನ್.ಮಲ್ಲಿಕಾರ್ಜುನಸ್ವಾಮಿ, ಸಹಾಯಕ ನಿರ್ದೇಶಕ ಡಾ.ಎಂ.ಡಿ. ಸುದರ್ಶನ್, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪನಿರ್ದೇಶಕ ಡಾ.ಜಿ.ಆರ್.ಬಾಲಸುಬ್ರಮಣ್ಯ, ಇನ್ನಿತರರು ಉಪಸ್ಥಿತರಿದ್ದರು.

48 ಅಡಿ ಎತ್ತರ: ಸ್ಮಾರಕ ಸ್ಥಂಭ 33 ಅಡಿ ಎತ್ತರವಿರಲಿದೆ. 10 ಅಡಿ ಅಡಿಪಾಯವೂ ಸೇರಿದರೆ ಸ್ಮಾರಕದ ಎತ್ತರ 43 ಅಡಿಗಳಾಗುತ್ತದೆ. ಅಂತಿಮವಾಗಿ ಸ್ಥಂಭದ ಮೇಲೆ 5 ಅಡಿಯ ಅಶೋಕ ಲಾಂಛನ ಅಳವಡಿಸುವುದರಿಂದ ಒಟ್ಟಾರೆ ಸ್ಮಾರಕ 48 ಅಡಿಗಳಾಗುತ್ತದೆ. ಸ್ಮಾರಕಕ್ಕೆ ಬಳಸುವ ಕಲ್ಲಿಗೆ ಪಾಲಿಶ್ ಮಾಡಿದ ನಂತರ ಅಮೇರಿಕನ್ ವೈಟ್ ಪೇಯಿಂಟ್‌ನಿಂದ ಪದಗಳ ನಮೂದಿಸುವುದರಿಂದ ಎಂದಿಗೂ ಅಕ್ಷರಗಳು ಮಾಸುವುದಿಲ್ಲ. ಪಾಲಿಶ್ ಮಾಡಿದ ನಂತರ ಜೆಟ್ ಬ್ಲಾಕ್ ಕಲರ್ ಆಗುತ್ತದೆ.

ಸ್ಮಾರಕದಲ್ಲಿ: ಪಾರಂಪರಿಕ ಶೈಲಿಯಲ್ಲಿಯೇ ಚೌಕಾಕಾರದಲ್ಲಿ ಸ್ಮಾರಕ ನಿರ್ಮಿಸಲಾಗುತ್ತದೆ. ಒಂದು ಭಾಗದಲ್ಲಿ ಸೇನೆಯ ಮೂರು ವಿಭಾಗದ ಸಂಕೇತದೊಂದಿಗೆ ದ್ವಾರ ನಿರ್ಮಿಸಲಾಗುತ್ತದೆ. ನಂತರ ಉಳಿದ ಮೂರು ಬದಿಯಲ್ಲಿ ಯುದ್ಧ ಟ್ಯಾಂಕರ್‌ಗಳು, ವಿಮಾನಗಳು, ನೌಕೆ, ಬಂದೂಕು ಸೇರಿದಂತೆ ಯುದ್ಧದಲ್ಲಿ ಬಳಸುವ ಪರಿಕರಗಳನ್ನು ಪ್ರದರ್ಶನಕ್ಕಿಡಲು ನಿರ್ಧರಿಸಲಾಗಿದ್ದು, ಇದಕ್ಕಾಗಿ ಸರ್ಕಾರದಿಂದ ರಕ್ಷಣಾ ಇಲಾಖೆಗೆ ಪತ್ರ ಬರೆದು ಟ್ಯಾಂಕರ್, ಬಂದೂಕು ಸೇರಿದಂತೆ ಇನ್ನಿತರ ಪರಿಕರಗಳ ತರಲು ಅಧಿಕಾರಿಗಳು ಸಿದ್ಧತೆ ಮಾಡಿಕೊಳ್ಳುತ್ತಿದ್ದಾರೆ.

ಎನ್‌ಐಎ ತನಿಖೆ

ಕ್ಯಾಂಪ್‌ಗಳು, ಹಲವಾರು ಖಾಲಿ ಹುದ್ದೆಗಳನ್ನು ತುಂಬಲು ಕ್ರಮ ತೆಗೆದುಕೊಳ್ಳಬೇಕು, ರಾತ್ರಿ ಗಸ್ತನ್ನು ಹೆಚ್ಚಿಸಬೇಕು ಹಾಗೂ ಕೆಎಸ್‌ಆರ್‌ಪಿಯ ಮತ್ತೊಂದು ತುಕಡಿಯನ್ನು ದಕ್ಷಿಣ ಕನ್ನಡ ಜಿಲ್ಲೆಗೆ ನಿಯೋಜಿಸಲು ಸೂಚಿಸಲಾಗಿದೆ ಎಂದರು.

ನಿನ್ನೆ ಸುರತ್ಕಲ್‌ನಲ್ಲಿ ನಡೆದ ಹತ್ಯೆಯ ಬಗ್ಗೆಯೂ ತೀವ್ರಗತಿಯಲ್ಲಿ ತನಿಖೆಯಾಗಿ, ತಪ್ಪಿತಸ್ಥರನ್ನು ಬಂಧಿಸಬೇಕು. ಅದಕ್ಕೂ ಕೂಡ ತಂಡಗಳನ್ನು ರಚಿಸಿ ತನಿಖೆ ಪ್ರಾರಂಭ ಮಾಡಬೇಕೆಂದು ತೀರ್ಮಾನ ಮಾಡಲಾಗಿದೆ ಎಂದರು. ಜಿಲ್ಲಾ ಮಟ್ಟದಲ್ಲಿ ಧಾರ್ಮಿಕ ಮುಖಂಡರನ್ನು ಕರೆದು ಶಾಂತಿ ಸಭೆಗಳನ್ನು ನಡೆಸಲಾಗುವುದು ಎಂದು ಮುಖ್ಯಮಂತ್ರಿಗಳು ತಿಳಿಸಿದರು. ನಮಗೆ ಜನರ ಜೀವ ಮುಖ್ಯ. ನಾವು ಎಲ್ಲರನ್ನೂ ಸರಿಸಮಾನವಾಗಿ ಕಾಣುತ್ತೇವೆ ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು. ಮಂಗಳೂರಿನಿಂದ ಹಿಂತಿರುಗಿದ ನಂತರ ಮಂಗಳೂರಿನಲ್ಲಿ ಮತ್ತೊಂದು ಕೊಲೆಯಾಗಿರುವ ಬಗ್ಗೆ ವಿಷಯ ತಿಳಿದು ಮಾಹಿತಿ ಪಡೆಯಲಾಗಿದೆ. ಕಾನೂನು ಸುವ್ಯವಸ್ಥೆ ಎಡಿಜಿಪಿ ಅವರನ್ನು ಅಲ್ಲಿಯೇ ಇದ್ದು ಸೂಕ್ತ ಕ್ರಮ ವಹಿಸುವಂತೆ ಸೂಚಿಸಿದ್ದೇನೆ ಎಂದರು.

ಎಲ್ಲಾ ಮೂರು ಪ್ರಕರಣಗಳಲ್ಲಿಯೂ ಕಠಿಣ ಕ್ರಮ ವಹಿಸಲಾಗುವುದು. ಕಾನೂನಿನ ವ್ಯಾಪ್ತಿಯಲ್ಲಿ ಅಗತ್ಯವಿರುವ ಕ್ರಮ ವಹಿಸಲಾಗುವುದು. ಅದು ಯು.ಪಿ ಮಾದರಿ ಅಥವಾ ಕರ್ನಾಟಕ ಮಾದರಿಯಾಗಿರಬಹುದು ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳಲ್ಲಿ ವಿಶೇಷ ಪೊಲೀಸ್ ಕ್ರಮಗಳನ್ನು ತೆಗೆದುಕೊಳ್ಳಲು ತೀರ್ಮಾನಿಸಲಾಗಿದೆ. ಕರಾವಳಿ ಪ್ರದೇಶದಲ್ಲಿ ಇನ್ನಷ್ಟು ಕಠಿಣ ಕ್ರಮ ತೆಗೆದುಕೊಳ್ಳುವ ಸಂಬಂಧ ಪೊಲೀಸ್ ಹಿರಿಯ ಅಧಿಕಾರಿಗಳೊಂದಿಗೆ ಉನ್ನತ ಮಟ್ಟದ ಸಭೆಯನ್ನು ನಡೆಸಲಾಗುವುದು. ಕೇರಳ ಗಡಿ ಭಾಗದಲ್ಲಿ 55 ರಸ್ತೆಗಳನ್ನು ನಿಭಾಯಿಸುವುದು, ನಿರ್ಬಂಧ ಹೇರಿಕೆ ಸೇರಿದಂತೆ ಪ್ರಮುಖ ತೀರ್ಮಾನಗಳ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗುವುದು ಎಂದರು.

ರಾಜ್ಯದಲ್ಲಿ ಜನ ಭಯದಿಂದ ಬದುಕುವಂತಾಗಿದೆ

ಹೆದರುತ್ತಿದ್ದಾರೆ. ಮನೆಯಿಂದ ಹೊರಬಂದರೆ ಮತ್ತೆ ಮನೆ ಸೇರುತ್ತೇವೆಯೋ, ಇಲ್ಲವೋ ಎನ್ನುವ ಭಯ ಅವರಲ್ಲಿದೆ ಎಂದು ಅಭಿಪ್ರಾಯಪಟ್ಟರು. ಸಿದ್ದರಾಮಯ್ಯ ಕಾಲದಲ್ಲೂ ಕೊಲೆಗಳಾಗಿವೆ ಎಂಬ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿಕೆಗೆ ತಿರುಗೇಟು ನೀಡಿದ ಸಿದ್ದರಾಮಯ್ಯ, ಆಗ ಕೊಲೆ ಆಯ್ತು ಈಗಲೂ ಕೊಲೆಯಾಗಿದೆ ಎಂದರೆ ಅದು ಸಮರ್ಥನೆನಾ? ಹಿಂದಿನ ಸರ್ಕಾರಕ್ಕೂ ಕಾನೂನು ಸುವ್ಯವಸ್ಥೆ ಹದಗೆಡುವುದಕ್ಕೂ ಏನು ಸಂಬಂಧ ಎಂದು ಪ್ರಶ್ನಿಸಿದರು.

ಸಾಕ್ಷಿ ಇದ್ದರೆ ಎಸ್‌ಡಿಪಿಐ, ಪಿಎಫ್‌ಐ ನಿಷೇಧಿಸಲಿ: ರಾಜ್ಯದಲ್ಲೂ ಉತ್ತರಪ್ರದೇಶ ಮಾದರಿ ಅನುಸರಿಸಬೇಕಾಗುತ್ತದೆ ಎಂದು ಮುಖ್ಯಮಂತ್ರಿ ಹೇಳಿದ್ದಾರೆ. ಹಾಗಾದರೆ ಕರ್ನಾಟಕ ಬಿಹಾರ, ಉತ್ತರ ಪ್ರದೇಶ ರೀತಿ ಆಗಿದೆಯಾ? ಹಾಗೆಂದು ಮುಖ್ಯಮಂತ್ರಿ ಒಪ್ಪಿಕೊಂಡಿದ್ದಾರಾ? ಅಲ್ಲಿಯ ರೀತಿ ಇಲ್ಲೂ ಕಾನೂನು–ಸುವ್ಯವಸ್ಥೆ ಕೆಟ್ಟ ಹೋಗಿದೆ ಎಂಬುದು ಮುಖ್ಯಮಂತ್ರಿ ಮಾತಿನ ಅರ್ಥನಾ ? ಸಿದ್ದರಾಮಯ್ಯ ಸರ್ಕಾರ ಹಂಗಿತ್ತು ನಾವು ಹೀಗಿದ್ದೇವೆ ಎಂದು ಹೋಲಿಕೆ ಮಾಡಲು ನೀವು ಅಧಿಕಾರಕ್ಕೆ ಬಂದಿದ್ದೀರಾ? ಎಸ್‌ಡಿಪಿಐ, ಪಿಎಫ್‌ಐ ಸಂಘಟನೆಯವರು ಕಾನೂನು ಉಲ್ಲಂಘಿಸಿದ್ದರೆ, ಅದಕ್ಕೆ ಸಾಕ್ಷಿ ಇದ್ದರೆ ನಿಷೇಧ ಮಾಡಲಿ ಎಂದರು. ಪ್ರವೀಣ್ ಮನೆಗೆ ಹೋಗಿದ್ದ ಮುಖ್ಯಮಂತ್ರಿ ಫಾಜಿಲ್ ಮನೆಗೆ ಹೋಗಲಿಲ್ಲ. ಬಾದಾಮಿಯಲ್ಲಿ ನಡೆದಿದ್ದ ಗಲಾಟೆ ಪ್ರಕರಣದಲ್ಲೂ ಕೆಲ ಸಚಿವರು ಇದೇ ರೀತಿ ಮಾಡಿದ್ದರು. ಗಾಯಗೊಂಡ ತಮ್ಮ ಪಕ್ಷದವರನ್ನು ನೋಡಲು ಹೋಗುತ್ತಾರೆಯೇ ಹೊರತು, ಮುಸ್ಲಿಮರನ್ನು ನೋಡಲು ಹೋಗುವುದಿಲ್ಲ. ಇವರು ಸರ್ಕಾರ ನಡೆಸಲು ಯೋಗ್ಯರಾ ಎಂದು ಪ್ರಶ್ನಿಸಿದರು. ಮುಖ್ಯಮಂತ್ರಿಯು ಹತಾಶೆಯಿಂದ ಏನೇನೋ ಹೇಳಿಕೆ ಕೊಡುತ್ತಿದ್ದಾರೆ. ಸರ್ಕಾರ ನಡೆಸಲು ಆಗದಿದ್ದರೆ ಬಿಟ್ಟು ಹೋಗಲಿ. ಪ್ರಜಾಪ್ರಭುತ್ವದಲ್ಲಿ ನಂಬಿಕೆ ಇಲ್ಲದಿದ್ದರೆ, ವಿರೋಧ ಪಕ್ಷದವರ ಮಾತುಗಳನ್ನು ಕೇಳದಿದ್ದರೆ ರಾಜೀನಾಮೆ ಕೊಟ್ಟು ಹೊರ ಹೋಗಲಿ. ಈ ಸರ್ಕಾರಕ್ಕೆ ನೈತಿಕತೆಯೇ ಇಲ್ಲ. ನೈತಿಕತೆ ಇಲ್ಲದವರು ಈ ಪ್ರಕರಣಗಳ ನೈತಿಕ ಹೊಣೆ ಹೇಗೆ ಹೊರುತ್ತಾರೆ ಎಂದು ಪ್ರಶ್ನಿಸಿದರು.

ಸಂಸದ ತೇಜಸ್ವಿ ವಿರುದ್ಧ ಅಸಮಾದಾನ: ಕಾಂಗ್ರೆಸ್ ಪಕ್ಷದ ಆಡಳಿತವಿದ್ದರೆ ಕಲ್ಲು ಹೊಡೆಯ ಬಹುದಿತ್ತು ಎಂಬ ಸಂಸದ ತೇಜಸ್ವಿ ಸೂರ್ಯ ಹೇಳಿಕೆಗೆ ಪ್ರತಿಕ್ರಿಯಿಸಿ, ಆ ಸಂಸದ ಬೇಜವಾಬ್ದಾರಿತನದಿಂದ ಹೇಳಿಕೆ ನೀಡಿದ್ದಾರೆ. ಇವರ ಸರ್ಕಾರಕ್ಕೆ ಕೊಳಕು ಮೊಟ್ಟೆ, ಚಪ್ಪಲಿಯಲ್ಲಿ ಹೊಡೆಯಬೇಕು ಎಂದು ಕೆಂಡಾಮಂಡಲವಾದರು. ಬಳಿಕ ನಾನು ಮಾತಿನ ಭರದಲ್ಲಿ ಚಪ್ಪಲಿ ಪದ ಬಳಸಿದ್ದೆ. ಅದನ್ನು ತೆಗೆದುಬಿಡಿ. ಯಾರೂ ಅದನ್ನು ಬಳಸಬೇಡಿ. ಅದು ಆವೇಶದಲ್ಲಿ ಬಂದ ಪದ. ಅದು ಸರಿಯಾದುದಲ್ಲ ಎಂದು ತಿದ್ದಿಕೊಂಡರು.

ಮಗನ ಕಾರ್ಯಕ್ಕೆ ಆಗಮನ: ಮಂಡಕಳ್ಳಿ ವಿಮಾನ ನಿಲ್ದಾಣದಿಂದ ಟಿ.ಕಾಟೂರಿನ ತೋಟದ ಮನೆಯಲ್ಲಿ ಇಂದು ನಡೆದ ಪುತ್ರ ದಿವಂಗತ ರಾಕೇಶ್ ಅವರ ವಾರ್ಷಿಕ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ತೆರಳಿದರು. ಕಾರ್ಯ ಮುಗಿದ ನಂತರ ಮತ್ತೆ ಬೆಂಗಳೂರಿಗೆ ವಾಪಸ್ಸಾದರು. ಈ ಸಂದರ್ಭದಲ್ಲಿ ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಬಿ.ಜೆ.ವಿಜಯಕುಮಾರ್, ನಗರಾಧ್ಯಕ್ಷ ಆರ್.ಮೂರ್ತಿ, ಜಿ.ಪಂ. ಮಾಜಿ ಅಧ್ಯಕ್ಷ ಕೆ.ಮರೀಗೌಡ ಸೇರಿದಂತೆ ಇನ್ನಿತರರು ಇದ್ದರು.

ವಕೀಲರು ನಾಪತ್ತೆ, ಮತ್ತೊಬ್ಬರ ರಕ್ಷಣೆ

ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಸರಗೂರು ಠಾಣೆ ಪೊಲೀಸರು, ಅಶೋಕ್ ಅವರನ್ನು ಇಲ್ಲಿನ ವಿವೇಕಾನಂದ ಆಸ್ಪತ್ರೆಗೆ ಕರೆದೊಯ್ದು ಪ್ರಥಮ ಚಿಕಿತ್ಸೆ ಕೊಡಿಸಿದ ನಂತರ ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರಿನ ಆಸ್ಪತ್ರೆಗೆ ರವಾನಿಸಿದ್ದಾರೆ. ನಾಲೆಗೆ ಬಿದ್ದ ಕಾರನ್ನು ಹೊರ ತೆಗೆಯಲಾಗಿದ್ದು, ನೀರಿನಲ್ಲಿ ಕೊಚ್ಚಿ ಹೋದ ಇಬ್ಬರು ವಕೀಲರ ಪತ್ತೆಗಾಗಿ ಶೋಧ ಕಾರ್ಯ ಮುಂದುವರೆದಿದೆ. ಈ ಕುರಿತು ಸರಗೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಸ್ಥಳದಲ್ಲಿ ಡಿವೈಎಸ್‌ಪಿ ರವಿಪ್ರಸಾದ್, ಆರಕ್ಷಕ ನಿರೀಕ್ಷಕ ಬಸವರಾಜು, ಎಸ್‌ಐ ಶ್ರವಣದಾಸರೆಡ್ಡಿ, ಜಯಪ್ರಕಾಶ್, ಅಗ್ನಿಶಾಮಕ ದಳ, ಸರಗೂರು ಪೊಲೀಸ್ ಸಿಬ್ಬಂದಿ ಇದ್ದರು.

ಮೈಸೂರು ಬೋಗಾದಿ ಬಾಪೂಜಿ ಬಡಾವಣೆಯಲ್ಲಿ ಜೆಎಸ್‌ಎಸ್ ಬಾಲಕಿಯರ ಪಿಯು ಕಾಲೇಜು ಉದ್ಘಾಟನೆ

ಸ್ವಾವಲಂಬಿ ಭಾರತ ನಿರ್ಮಾಣಕ್ಕೆ ಎನ್‌ಇಪಿ ಪೂರಕ



> ಹಣದ ಮೇಲೆ ವ್ಯಾಮೋಹ ಹೆಚ್ಚಾಗಿರುವ ಸಮಾಜದಲ್ಲಿ, ಸಾಮಾಜಿಕ ಬದ್ಧತೆ ಕಡಿಮೆಯಾಗಿದೆ. ಮಾನವೀಯತೆಗೆ ಬೆಲೆಯಿಲ್ಲದಾಗಿದೆ. ಹೀಗಾಗಿಯೇ ಅನೈತಿಕತೆ ಹೆಚ್ಚಿದೆ ಎಂದ ಅವರು, ಸಂಸ್ಕೃತಿ– ಸಂಸ್ಕಾರ ಕಲಿಸುವ ಶಿಕ್ಷಣ ಬೇಕಿದೆ. ಸುತ್ತೂರು ಮಠವು ಲಕ್ಷಾಂತರ ವಿದ್ಯಾರ್ಥಿಗಳಿಗೆ ಆಶ್ರಯ ನೀಡುವ ಜೊತೆಗೆ ಗುಣಮಟ್ಟದ ಶಿಕ್ಷಣವನ್ನು ನೀಡಿ ನಾಡನ್ನು ರೂಪಿಸುವ ಕೆಲಸದಲ್ಲಿ ನಿರತವಾಗಿದೆ.
> -ಬಿ.ಸಿ.ನಾಗೇಶ್, ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವ

ಮೈಸೂರು, ಜು.29(ಆರ್‌ಕೆಬಿ)– ಶಿಕ್ಷಣ ವ್ಯವಸ್ಥೆಯನ್ನು ಸುಧಾರಿಸಲು ದೇಶೀಯವಾದ ಶಿಕ್ಷಣ ನೀತಿ ಜಾರಿಗೊಳಿಸುವ ಆಶಯದೊಂದಿಗೆ ಕೇಂದ್ರದ ಹೊಸ ಶಿಕ್ಷಣ ನೀತಿಯನ್ನು ರಾಜ್ಯ ಸರ್ಕಾರ ಜಾರಿಗೊಳಿಸುತ್ತಿದ್ದು, ಜೆಎಸ್‌ಎಸ್ ಶಿಕ್ಷಣ ಸಂಸ್ಥೆ ಅನುಷ್ಠಾನದಲ್ಲಿ ಸರ್ಕಾರಕ್ಕಿಂತ ಮುಂಚೂಣಿಯಲ್ಲಿದೆ ಎಂದು ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವ ಬಿ.ಸಿ.ನಾಗೇಶ್ ತಿಳಿಸಿದರು.

ಮೈಸೂರಿನ ಬೋಗಾದಿ ಬಾಪೂಜಿ ಬಡಾವಣೆಯಲ್ಲಿ ಶುಕ್ರವಾರ ಜೆಎಸ್‌ಎಸ್ ಬಾಲಕಿಯರ ಪದವಿ ಪೂರ್ವ ಕಾಲೇಜು ಉದ್ಘಾಟಿಸಿ ಅವರು ಮಾತನಾಡಿದರು. ಸ್ವಾವಲಂಬಿ ಭಾರತ ನಿರ್ಮಾಣಕ್ಕೆ ನೂತನ ರಾಷ್ಟ್ರೀಯ ಶಿಕ್ಷಣ ನೀತಿ ಪೂರಕವಾಗಿದೆ. ದೇಶವನ್ನು ವಿಶ್ವಗುರುವಾಗಿಸುವ ಪ್ರಯತ್ನ ಇದಾಗಿದೆ ಎಂದು ಹೇಳಿದರು.

ಎನ್‌ಇಪಿ ಅನುಷ್ಠಾನಕ್ಕೆ ಶಾಲಾ–ಕಾಲೇಜುಗಳಲ್ಲಿ ಅಗತ್ಯ ಮೂಲಸೌಕರ್ಯ ಇರಬೇಕು. ಆ ನಿಟ್ಟಿನಲ್ಲಿ ಹೊಸ ಕಾಲೇಜಿನಲ್ಲಿ ಸುಸಜ್ಜಿತ ಪ್ರಯೋಗಾಲಯ, ಆಧುನಿಕ ತಂತ್ರಜ್ಞಾನ ಪರಿಕರಗಳು ಲಭ್ಯವಿವೆ. ಗುಣಮಟ್ಟದ ಶಿಕ್ಷಣವನ್ನು ಜೆಎಸ್‌ಎಸ್ ಸಂಸ್ಥೆಯು ನೀಡುವ ಮೂಲಕ ಮಾದರಿಯಾಗಿದೆ. ಅಂತಾರಾಷ್ಟ್ರೀಯ ಮಟ್ಟದಲ್ಲೂ ಹೆಸರು ಮಾಡಿದೆ ಮೈಸೂರಿನಲ್ಲಿ ವಸತಿ ಕಾಲೇಜು ಆರಂಭಕ್ಕೂ ಮುಂದಾಗಬೇಕು ಎಂದು ಸಲಹೆ ನೀಡಿದರು.

ಭಾರತೀಯ ಸಮಾಜ ವ್ಯವಸ್ಥೆಯು ಕ್ರಮಬದ್ಧವಾಗಿ ರೂಪುಗೊಂಡಿದೆ. ಆದರೆ, ಮೆಕಾಲೆ ಶಿಕ್ಷಣ ನೀತಿಯನ್ನು ಉಳಿಸಿಕೊಳ್ಳಲಾಗಿದೆ. ಇದೀಗ ಕೇಂದ್ರ ಸರ್ಕಾರವು ಸ್ಥಳೀಯ ಆಚಾರ, ವಿಚಾರಗಳಿಗೆ ಒತ್ತು ನೀಡುವ ಶಿಶು ಕೇಂದ್ರಿತ ಶಿಕ್ಷಣ ವ್ಯವಸ್ಥೆಯನ್ನು ಜಾರಿಗೊಳಿಸುತ್ತಿದೆ. ದೇಶದ ಸ್ವಾತಂತ್ರ್ಯ ಹೋರಾಟಗಾರರ ಆಶಯವೂ ಇದೇ ಆಗಿತ್ತು ಎಂದರು.

ಎಂಸಿಡಿಸಿಸಿ ಬ್ಯಾಂಕ್ ಅಧ್ಯಕ್ಷ ಜಿ.ಡಿ.ಹರೀಶ್‌ಗೌಡ ಮಾತನಾಡಿ, ಹಳ್ಳಿಯಿಂದ ಅಂತಾರಾಷ್ಟ್ರೀಯ ಮಟ್ಟದವರೆಗೆ ಶಿಕ್ಷಣವನ್ನು ಎಲ್ಲರಿಗೂ ಜೆಎಸ್‌ಎಸ್ ಸಂಸ್ಥೆ ನೀಡುತ್ತಿದೆ. ಪೂರ್ವ ಪ್ರಾಥಮಿಕ ಶಾಲೆಯಿಂದ ಹಿಡಿದು ವೈದ್ಯಕೀಯ, ತಾಂತ್ರಿಕ ಕಾಲೇಜು ಮತ್ತು ವಿಶ್ವವಿದ್ಯಾಲಯದವರೆಗೆ ಇದು ಬೆಳೆದಿದೆ. ಈ ಮೂಲಕ ಶೈಕ್ಷಣಿಕ ಪ್ರಗತಿಗೆ ನೆರವಾಗಿದೆ ಎಂದು ಹೇಳಿದರು.

ಚಾಮುಂಡೇಶ್ವರಿ ಕ್ಷೇತ್ರದ ಸರ್ಕಾರಿ ಶಾಲೆಗಳಿಗೆ ಹೊಸ ಕೊಠಡಿ ಮತ್ತು ಮೂಲ ಸೌಲಭ್ಯ ಕಲ್ಪಿಸಿಕೊಡಲು ಅನುದಾನ ಬಿಡುಗಡೆ ಮಾಡಬೇಕು ಎಂದು ತಂದೆ ಜಿ.ಟಿ.ದೇವೇಗೌಡ ಪರವಾಗಿ ಅವರು, ಸಚಿವರಿಗೆ ಮನವಿ ಮಾಡಿದರು.

ಮಾಜಿ ಎಂಎಲ್‌ಸಿ ಅರುಣ್ ಶಹಾಪುರ ಮಾತನಾಡಿ, ಮಂಗಳೂರು ಭಾಗದಲ್ಲಿ ವಸತಿ ಕಾಲೇಜುಗಳು ಹೆಚ್ಚಿವೆ. ಇದೇ ರೀತಿಯಲ್ಲಿ ಜೆಎಸ್‌ಎಸ್ ಮಹಾವಿದ್ಯಾಪೀಠದಿಂದ ಇಲ್ಲಿಯೂ ಪದವಿಪೂರ್ವ ವಸತಿ ಕಾಲೇಜುಗಳನ್ನು ಪ್ರಾರಂಭಿಸಿ ರಾಜ್ಯದ ವಿವಿಧ ಭಾಗದ ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸಬೇಕು ಎಂದು ಸಲಹೆ ನೀಡಿದರು.

ಸಾನ್ನಿಧ್ಯ ವಹಿಸಿದ್ದ ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಮಾತನಾಡಿ, ಸದ್ವಿಚಾರಗಳನ್ನು ಆಲಿಸುವ ಶ್ರಾವಣ ಮಾಸದ ವಿಶೇಷ ಸಂದರ್ಭದಲ್ಲಿ ಕಾಲೇಜು ಆರಂಭವಾಗಿದೆ. ಎಲ್ಲರೂ ಧಾರ್ಮಿಕ ಪ್ರಜ್ಞೆ ಬೆಳೆಸಿಕೊಂಡು ಬದುಕಿನ ವಿಕಾಸಕ್ಕೆ ಶ್ರಮಿಸಬೇಕು ಎಂದು ತಿಳಿಸಿದರು.

ಸಮಾರಂಭದಲ್ಲಿ ವೀಣಾ ನಾಗೇಶ್, ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾರ್ಯ ನಿರ್ವಾಹಕ ಕಾರ್ಯದರ್ಶಿ ಡಾ.ಸಿ.ಜಿ.ಬೆಟಸೂರ್ ಮಠ, ಕಾಲೇಜು ಶಿಕ್ಷಣ ವಿಭಾಗದ ನಿರ್ದೇಶಕ ಶ್ರೀನಿವಾಸಮೂರ್ತಿ, ಡಿಡಿಪಿಐ ರಾಮಚಂದ್ರ ರಾಜೇಅರಸ್, ಶಾಲಾ ಶಿಕ್ಷಣ ವಿಭಾಗದ ನಿರ್ದೇಶಕ ಬಿ.ಎ.ರಾಜಶೇಖರ್, ಬಿಇಓ ಎನ್.ರೇಣುಕಸ್ವಾಮಿ, ಎಂ.ವಿಜಯಕುಮಾರ್ ಇನ್ನಿತರರು ಉಪಸ್ಥಿತರಿದ್ದರು.

ಸಿದ್ದರಾಮಯ್ಯ ಹುಟ್ಟುಹಬ್ಬಕ್ಕೆ ಮೈಸೂರಿಂದ 25 ಸಾವಿರ ಕಾರ್ಯಕರ್ತರು



ಮೈಸೂರು, ಜು.29(ಎಸ್‌ಬಿಡಿ)– ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ 75ನೇ ವರ್ಷದ ಹುಟ್ಟುಹಬ್ಬದ ಹಿಂದೆ ಯಾವುದೇ ರಾಜಕೀಯ ಹಿತಾಸಕ್ತಿ ಇಲ್ಲ ಎಂದು ಮೈಸೂರು ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಾ.ಬಿ.ಜೆ.ವಿಜಯ್‌ಕುಮಾರ್ ಹೇಳಿದರು.

ದಾವಣಗೆರೆಯಲ್ಲಿ ಆ.3ರಂದು ಸಿದ್ದರಾಮಯ್ಯನವರ ಜನ್ಮದಿನದ ಅಮೃತಮಹೋತ್ಸವ ಆಯೋಜಿಸಿರುವ ಹಿನ್ನೆಲೆಯಲ್ಲಿ ಮೈಸೂರಿನ ಕಾಂಗ್ರೆಸ್ ಕಚೇರಿಯಲ್ಲಿ ಶುಕ್ರವಾರ ನಡೆದ ಚಾಮುಂಡೇಶ್ವರಿ ವಿಧಾನಸಭಾ ವ್ಯಾಪ್ತಿಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಸಿದ್ದರಾಮಯ್ಯನವರು ಎಂದೂ ಹುಟ್ಟುಹಬ್ಬ ಆಚರಿಸಿಕೊಂಡವರಲ್ಲ. ಆದರೆ ಅವರಿಗೆ 75 ವರ್ಷವಾಗಿರುವ ಕಾರಣ ರಾಜ್ಯದ ಜನರೇ ಸ್ವಯಂ ಪ್ರೇರಿತವಾಗಿ ಅಮೃತ ಮಹೋತ್ಸವ ಆಚರಣೆಗೆ ಸಿದ್ಧತೆ ಮಾಡಿಕೊಂಡಿದ್ದಾರೆ. ಇದು ಸಿದ್ದರಾಮಯ್ಯನವರು ಭವಿಷ್ಯದ ರಾಜಕೀಯ ಹಾಗೂ ಅಧಿಕಾರ ದೃಷ್ಟಿಯಿಂದ ತಮ್ಮ ಶಕ್ತಿ ಪ್ರದರ್ಶನಕ್ಕಾಗಿ ಕೈಗೊಂಡ ನಿರ್ಧಾರವಲ್ಲ ಎಂದು ಸ್ಪಷ್ಟಪಡಿಸಿದರು.

ಮೈಸೂರು ಜಿಲ್ಲೆಯಿಂದ 495 ಬಸ್, 600ಕ್ಕೂ ಹೆಚ್ಚು ಇತರೆ ವಾಹನಗಳ ಮೂಲಕ 25 ಸಾವಿರಕ್ಕೂ ಹೆಚ್ಚು ಜನ ಸಮಾರಂಭಕ್ಕೆ ತೆರಳುವ ನಿರೀಕ್ಷೆಯಿದೆ ಎಂದು ತಿಳಿಸಿದರು.

ಜಿಪಂ ಮಾಜಿ ಅಧ್ಯಕ್ಷ ಕೆ.ಮರಿಗೌಡ ಮಾತನಾಡಿ, ಕ್ಷೇತ್ರದ ಪ್ರತಿ ಗ್ರಾಪಂ ವ್ಯಾಪ್ತಿಗೂ ಪ್ರತ್ಯೇಕ ಬಸ್ ವ್ಯವಸ್ಥೆ ಮಾಡಲಾಗುವುದು. ಒಟ್ಟು 45ಕ್ಕೂ ಹೆಚ್ಚು ಬಸ್‌ಗಳು ಹಾಗೂ 150ಕ್ಕೂ ಹೆಚ್ಚು ಇತರೆ ವಾಹನಗಳ ವ್ಯವಸ್ಥೆ ಮಾಡಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ತಮ್ಮ ಆದರ್ಶ ರಾಜಕೀಯ ಜೀವನದಲ್ಲಿ ಎಲ್ಲಾ ವರ್ಗದ ಸಾವಿರಾರು ಮುಖಂಡರನ್ನು ಸೃಷ್ಟಿಸಿದ ಸಿದ್ದರಾಮಯ್ಯನವರ ಹುಟ್ಟುಹಬ್ಬದಲ್ಲಿ ಭಾಗಿಯಾಗಲು ಜನ ಕಾತುರರಾಗಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ನಿರೀಕ್ಷೆ ಇದೆ ಎಂದು ಹೇಳಿದರು.



ಕಾಂಗ್ರೆಸ್ ಮುಖಂಡ ಕೆ. ಹರೀಶ್‌ಗೌಡ ಹುಟ್ಟುಹಬ್ಬದ ಪ್ರಯುಕ್ತ ಅವರನ್ನು ಮೈಸೂರು ಕೋ ಆಪರೇಟಿವ್ ಬ್ಯಾಂಕ್ ಉಪಾಧ್ಯಕ್ಷ ಜೆ.ಯೋಗೇಶ್, ಸ್ನೇಹಿತರಾದ ದೇವರಾಜ್, ನಟರಾಜ್, ವೆಂಕಟಗಿರಿ, ದಿನೇಶ್, ಗಿರೀಶ್, ವೈರಮುಡಿ, ಭಟೇರಿ ಸ್ವಾಮಿ, ಸುರೇಂದ್ರ, ಅರುಣ್, ಪ್ರದೀಪ್ ಹಾಗೂ ಇನ್ನಿತರರು ಅಭಿನಂದಿಸಿ, ಶುಭಾಶಯ ಕೋರಿದರು.

ಹರ್ ಘರ್ ತಿರಂಗಾ ಅಭಿಯಾನ ಯಶಸ್ವಿಗೊಳಿಸಿ

ರಾಜ್ಯ ಸರ್ಕಾರಿ ನೌಕರರಿಗೆ ಮುಖ್ಯ ಕಾರ್ಯದರ್ಶಿ ಕರೆ



ಮೈಸೂರು, ಜು.29– ಆಗಸ್ಟ್ 13 ರಿಂದ 15 ರವರೆಗೆ ತಮ್ಮ ಮನೆಗಳ ಮೇಲೆ ತ್ರಿವರ್ಣ ಧ್ವಜವನ್ನು ಹಾರಿಸಿ ಹರ್ ಘರ್ ತಿರಂಗಾ ಅಭಿಯಾನವನ್ನು ಯಶಸ್ವಿಗೊಳಿಸುವಂತೆ ರಾಜ್ಯದ ಮುಖ್ಯ ಕಾರ್ಯದರ್ಶಿ ವಂದಿತಾ ಶರ್ಮಾ ಅವರು ರಾಜ್ಯದ ಎಲ್ಲಾ ಸರ್ಕಾರಿ ನೌಕರರಿಗೆ ಕರೆ ನೀಡಿದ್ದಾರೆ. ರಾಜ್ಯ ಮಟ್ಟದ ಸ್ವಾತಂತ್ರ್ಯ ದಿನಾಚರಣೆಯ ಕುರಿತು ವಿಧಾನ ಸೌಧದ ಸಮ್ಮೇಳನ ಸಭಾಂಗಣದಲ್ಲಿ ಶುಕ್ರವಾರ ನಡೆದ ಪೂರ್ವ ಸಿದ್ಧತಾ ಸಭೆಯಲ್ಲಿ ಅಧಿಕಾರಿಗಳನ್ನು ಉದ್ದೇಶಿಸಿ ಅವರು ಮಾತನಾಡುತ್ತಿದ್ದರು.

ತಮ್ಮ ಮನೆಗಳ ಮೇಲೆ ರಾಷ್ಟ್ರ ಧ್ವಜ ಹಾರಿಸಿ ಇಡೀ ದೇಶಕ್ಕೆ ಮಾದರಿಯಾಗಲು ರಾಜ್ಯ ಸರ್ಕಾರಿ ನೌಕರರಿಗೆ ಇದೊಂದು ಸದಾವಕಾಶ ಎಂದು ಅವರು ಬಣ್ಣಿಸಿದ್ದಾರೆ. ರಾಷ್ಟ್ರದೆಲ್ಲೆಡೆಯಂತೆ, ರಾಜ್ಯದಲ್ಲಿಯೂ ಆಗಸ್ಟ್ 13 ರಿಂದ 15 ರವರೆಗೆ ಹರ್ ಘರ್ ತಿರಂಗಾ ಅಂದರೆ ಮನೆ ಮನೆಯ ಮೇಲೆ ತ್ರಿವರ್ಣ ಧ್ವಜ ಹಾರಿಸುವ ಅಭಿಯಾನವನ್ನು ಆಯೋಜಿಸಲಾಗಿದೆ.

ಭಾರತ ಸ್ವಾತ್ರಂತ್ಯ ಅಮೃತ ಮಹೋತ್ಸವದ ಸಂಸ್ಮರಣೆಯಲ್ಲಿ ಈ ಅವಧಿಯಲ್ಲಿ ಹಗಲು ರಾತ್ರಿ ಎನ್ನದೆ ಮೂರು ದಿನಗಳ ಕಾಲ ಇಡೀ ರಾಷ್ಟ್ರದಲ್ಲಿ ಹರ್ ಘರ್ ತಿರಂಗಾ ಅಭಿಯಾನಕ್ಕೆ ಚಾಲನೆ ನೀಡಲು ಕೇಂದ್ರ ಸರ್ಕಾರ ಎಲ್ಲಾ ರಾಜ್ಯಗಳಿಗೆ ಸೂಚಿಸಿದೆ. ಅದರಂತೆ ಈ ಅಭಿಯಾನಕ್ಕೆ ಕರ್ನಾಟಕದಲ್ಲೂ ಪೂರ್ಣ ಪ್ರಮಾಣದ ಸ್ಪಂದನೆ ದೊರೆಯಬೇಕೆಂಬುದು ರಾಜ್ಯ ಸರ್ಕಾರದ ಸದಾಶಯವಾಗಿದೆ.

ಸಾರ್ವಜನಿಕರಲ್ಲಿ ಮನವಿ: ಭಾರತದ ಎಲ್ಲಾ ಪ್ರಜೆಗಳಲ್ಲೂ ರಾಷ್ಟ್ರ ಪ್ರೇಮ ಮತ್ತು ರಾಷ್ಟ್ರ ಭಕ್ತಿಯನ್ನು ಇಮ್ಮಡಿಗೊಳಿಸುವ ಈ ಅಭಿಯಾನದಲ್ಲಿ ಸಾರ್ವಜನಿಕರೂ ಕೂಡಾ ಕೈಮಗ್ಗ ಅಥವಾ ವಿದ್ಯುತ್ ಮಗ್ಗದಿಂದ ಹತ್ತಿ, ಪಾಲಿಯೆಸ್ಟರ್, ಉಣ್ಣೆ ರೇಷ್ಮೆ, ಅಥವಾ ಖಾದಿಯಲ್ಲಿ ತಯಾರಿಸಿರುವ ರಾಷ್ಟ್ರ ಧ್ವಜವನ್ನು ಆಗಸ್ಟ್ 13ರಿಂದ 15 ರವರೆಗೆ ಮೂರು ದಿನಗಳ ಅವಧಿಯಲ್ಲಿ ರಾಜ್ಯಾದ್ಯಂತ ಇರುವ ಕೋಟಿಗೂ ಹೆಚ್ಚು ಮನೆಗಳ ಮೇಲೆ ಹಾರಿಸಿ ದೇಶ ಪ್ರೇಮ ಮೆರೆಯಬೇಕೆಂಬುದು ರಾಜ್ಯ ಸರ್ಕಾರದ ಇಚ್ಛೆಯಾಗಿದೆ ಆದಕಾರಣ, ತಮ್ಮ ಮನೆಗಳ ಮೇಲೆ ರಾಷ್ಟ್ರಧ್ವಜವನ್ನು ಹಾರಿಸುವಂತೆ ಮುಖ್ಯ ಕಾರ್ಯದರ್ಶಿ ಸಾರ್ವಜನಿಕರಲ್ಲಿ ವಿಶೇಷ ಮನವಿ ಮಾಡಿದ್ದಾರೆ. ಅಲ್ಲದೆ, ರಾಷ್ಟ್ರ ಧ್ವಜದ ಮುಂದೆ ನಿಂತು ಸೆಲ್ಫಿ ತೆಗೆದು ಹರ್ ಘರ್ ತಿರಂಗಾ ಅಂತರ್ಜಾಲ ತಾಣ https://harghartiranga.com ರಲ್ಲಿ ಅಪ್ ಲೋಡ್ ಮಾಡುವ ಮೂಲಕ ಪ್ರತಿಯೊಬ್ಬರೂ ರಾಷ್ಟ್ರ ಪ್ರೇಮವನ್ನು ದುಪ್ಪಟು ಗೊಳಿಸುವ ಈ ವಿಶೇಷ ಅಭಿಯಾನದಲ್ಲಿ ಭಾಗವಹಿಸಿ ದೇಶಾಭಿಮಾನವನ್ನು ಪ್ರದರ್ಶಿಸೋಣ ಎಂದು ಮುಖ್ಯ ಕಾರ್ಯದರ್ಶಿ ವಂದಿತಾ ಶರ್ಮಾ ಅವರು ಹೇಳಿದ್ದಾರೆ.

ಸ್ಕೂಟರ್‌ಗೆ ಟೆಂಪೋ ಟ್ರಾವಲರ್ ಡಿಕ್ಕಿ: ಇಬ್ಬರು ಸಾವು

ಮೈಸೂರು, ಜು.29– ಸ್ಕೂಟರ್‌ಗೆ ಟೆಂಪೋ ಟ್ರಾವಲರ್ ಡಿಕ್ಕಿ ಹೊಡೆದು ಇಬ್ಬರು ಯುವಕರು ಸಾವನ್ನಪ್ಪಿದ ಘಟನೆ ಮೈಸೂರು–ಹೆಚ್.ಡಿ.ಕೋಟೆ ರಸ್ತೆಯ ಗುಜ್ಜೇಗೌಡನಪುರ ಸಮೀಪ ಸಂಭವಿಸಿದೆ. ಹಿನಕಲ್‌ನ ಹೊಸಬೀದಿ ನಿವಾಸಿಗಳಾದ ಪಿ. ಕಾರ್ತಿಕ್ (24) ಮತ್ತು ರಾಜು (18) ಅಪಘಾತದಲ್ಲಿ ಮೃತಪಟ್ಟವರಾಗಿದ್ದು, ಇವರಿಬ್ಬರು ಜು.26ರಂದು ಸುಜುಕಿ ಆಕ್ಸಿಸ್ (ಕೆಎ09, ಹೆಚ್‌ವೈ2095) ಸ್ಕೂಟರ್‌ನಲ್ಲಿ ಚಿಕ್ಕದೇವಮ್ಮನವರ ದೇವಸ್ಥಾನಕ್ಕೆ ಹೋಗಿ ಸಂಜೆ 7.30ರ ಸುಮಾರಿನಲ್ಲಿ ಹಿನಕಲ್‌ಗೆ ಹಿಂದಿರುಗುತ್ತಿದ್ದಾಗ ಗುಜ್ಜೇಗೌಡನಪುರ ಬಳಿ ಟೆಂಪೋ ಟ್ರಾವೆಲರ್ (ಕೆಎ51–7294) ಇವರ ಬೈಕ್‌ಗೆ ಡಿಕ್ಕಿ ಹೊಡೆದಿದೆ. ತೀವ್ರವಾಗಿ ಗಾಯಗೊಂಡ ಇಬ್ಬರನ್ನು ಆಸ್ಪತ್ರೆಗೆ ಸಾಗಿಸುವ ಮಾರ್ಗಮಧ್ಯೆ ಕಾರ್ತಿಕ್ ಮೃತಪಟ್ಟರೆ, ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಕಾರಿಯಾಗದೆ ಜು.27ರಂದು ಬೆಳಗ್ಗೆ ರಾಜು ಮೃತಪಟ್ಟಿದ್ದಾನೆ. ಈ ಸಂಬಂಧ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ವೃದ್ಧೆಯ 1.10 ಲಕ್ಷ ಮೌಲ್ಯದ ಸರ ಕಳವು

ಮೈಸೂರು, ಜು.29– ಸರಗಳ್ಳರು ವೃದ್ಧೆಯಿಂದ 1.10 ಲಕ್ಷ ರೂ. ಮೌಲ್ಯದ 28 ಗ್ರಾಂ ಚಿನ್ನದ ಸರ ಕಿತ್ತುಕೊಂಡು ಪರಾರಿಯಾದ ಘಟನೆ ಮೈಸೂರಿನ ಕುವೆಂಪುನಗರ ಎಂ ಬ್ಲಾಕ್‌ನಲ್ಲಿ ನಡೆದಿದೆ. ಕುವೆಂಪುನಗರ ಸಿಐಟಿಬಿ 2ನೇ ಹಂತದ ನಿವಾಸಿ ಎನ್. ಶಾಂತ (75) ಸರ ಕಳೆದುಕೊಂಡವರಾಗಿದ್ದು, ಇವರು ಜು.26ರಂದು ಸಂಜೆ 6.30ರ ವೇಳೆಯಲ್ಲಿ ಪೂಜಾ ಬೇಕರಿ ಬಳಿಯಿರುವ ದೇವಸ್ಥಾನಕ್ಕೆ ಹೋಗಿ ಮನೆಗೆ ಹಿಂದಿರುಗುತ್ತಿದ್ದಾಗ ಬೈಕ್‌ನಲ್ಲಿ ಬಂದ ಇಬ್ಬರು ಖದೀಮರು ವಿಳಾಸ ಕೇಳುವ ನೆಪದಲ್ಲಿ ಅವರ ಕತ್ತಿನಲ್ಲಿದ್ದ ಚಿನ್ನದ ಸರ ಕಿತ್ತುಕೊಂಡು ಪರಾರಿಯಾಗಿದ್ದಾರೆ. ಈ ಸಂಬಂಧ ಕುವೆಂಪುನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ರಾಷ್ಟ್ರಪತ್ನಿ ಹೇಳಿಕೆ: ಮುರ್ಮು ಕ್ಷಮೆಯಾಚಿಸಿದ ಚೌಧರಿ




ನವದೆಹಲಿ: ಕಾಂಗ್ರೆಸ್ ನಾಯಕ ಅಧೀರ್ ರಂಜನ್ ಚೌಧರಿ ಶುಕ್ರವಾರ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ಪತ್ರ ಬರೆದು ತಮ್ಮ ಆಕ್ಷೇಪಾರ್ಹ ಹೇಳಿಕೆ ಬಗ್ಗೆ ಕ್ಷಮೆಯಾಚಿಸಿದ್ದಾರೆ. ಈ ಸಂಬಂಧ ರಾಷ್ಟ್ರಪತಿಗಳಿಗೆ ಬರೆದ ಪತ್ರದಲ್ಲಿ ಅಧೀರ್ ರಂಜನ್ ಚೌಧರಿ ಅವರು ತಾವು ತಪ್ಪಾಗಿ ರಾಷ್ಟ್ರಪತ್ನಿ ಪದ ಬಳಸಿದ್ದು, ಬಾಯಿ ತಪ್ಪಿನಿಂದಾಗಿದೆ ಎಂದು ಹೇಳಿದ್ದಾರೆ.

ನೀವು ಹೊಂದಿರುವ ಸ್ಥಾನವನ್ನು ವಿವರಿಸಲು ತಪ್ಪು ಪದವನ್ನು ಬಳಸಿದ್ದಕ್ಕಾಗಿ ನಾನು ವಿಷಾದ ವ್ಯಕ್ತಪಡಿಸಲು ಈ ಪತ್ರ ಬರೆಯುತ್ತಿದ್ದೇನೆ. ಇದು ಬಾಯಿ ತಪ್ಪಿನಿಂದಾಗಿದೆ ಎಂದು ನಾನು ನಿಮಗೆ ಭರವಸೆ ನೀಡುತ್ತೇನೆ. ನಾನು ಕ್ಷಮೆಯಾಚಿಸುತ್ತೇನೆ ಮತ್ತು ಅದನ್ನು ಸ್ವೀಕರಿಸಲು ವಿನಂತಿಸುತ್ತೇನೆ ಎಂದು ಚೌಧರಿ ಅವರು ತಮ್ಮ ಪತ್ರದಲ್ಲಿ ರಾಷ್ಟ್ರಪತಿಗಳಿಗೆ ಹೇಳಿದ್ದಾರೆ.

ಕಳೆದ ಬುಧವಾರ ವಿಜಯ್ ಚೌಕ್‌ನಲ್ಲಿ ನಡೆದ ಪ್ರತಿಭಟನೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಚೌಧರಿ, ರಾಷ್ಟ್ರಪತಿ ಮುರ್ಮು ಅವರಿಗೆ 'ರಾಷ್ಟ್ರಪತ್ನಿ' ಪದವನ್ನು ಬಳಸಿದ್ದರು, ಇದು ಆಡಳಿತಾರೂಢ ಬಿಜೆಪಿ ಸಂಸತ್ತಿನಲ್ಲಿ ವಿಷಯ ಪ್ರಸ್ತಾಪಿಸಿ, ಚೌಧರಿ ಮತ್ತು ಕಾಂಗ್ರೆಸ್ ಅಧ್ಯಕ್ಷೆ ಸೋನಿಯಾ ಗಾಂಧಿ ಕ್ಷಮೆಯಾಚಿಸಬೇಕು ಎಂದು ಒತ್ತಾಯಿಸಿತ್ತು.



ಕಾಂಗ್ರೆಸ್ ಮುಖಂಡ ಹರೀಶ್‌ಗೌಡರ ಹುಟ್ಟುಹಬ್ಬದ ಪ್ರಯುಕ್ತ ಅವರನ್ನು ಬಡವರ ಬಂಧು ಕನ್ನಡ ಯುವಕರ ಸಂಘದ ವತಿಯಿಂದ ಸನ್ಮಾನಿಸಿ, ಶುಭಾಶಯ ಕೋರಲಾಯಿತು. ಈ ವೇಳೆ ಮಾಜಿ ಮೇಯರ್ ಅನಂತ್, ಡಾ. ಕೆಂಪೇಗೌಡ, ಡಾ.ರೂಪ, ಪಡುವಾರಹಳ್ಳಿ ಪಾಪಣ್ಣ, ರಮೇಶ್, ಕೃಷ್ಣ, ಸಿಟಿ ಕೋ–ಆಪರೇಟಿವ್ ಬ್ಯಾಂಕ್ ನಿರ್ದೇಶಕ ರವಿ, ಯೋಗ, ಮಾದೇಶ, ಸುನಿ, ಮಹೇಶ್ ಇತರರು ಹಾಜರಿದ್ದರು. ನಂತರ ಜಯಲಕ್ಷ್ಮಿಪುರಂನ ಲಕ್ಷ್ಮಿ ದೇವಮ್ಮ ಹೆರಿಗೆ ಆಸ್ಪತ್ರೆಯ ಬಾಣಂತಿಯರಿಗೆ ಹಣ್ಣು, ಹಂಪಲು ವಿತರಣೆ ಮಾಡಲಾಯಿತು.



ಮೈಸೂರಿನ ಪುರಭವನದಲ್ಲಿ ಇತ್ತೀಚೆಗೆ ಏರ್ಪಡಿಸಲಾಗಿದ್ದ ದಕ್ಷಯಜ್ಞ ಅಥವಾ ಭೃಗುಮುನಿಯ ಗರ್ವಭಂಗ ಪೌರಾಣಿಕ ನಾಟಕ ನಾಟಕದಲ್ಲಿ ಸೂತ್ರದಾರಿ ಪಾತ್ರ ನಿರ್ವಹಿಸಿದ ಹುಯಿಲಾಳು ರಾಮಸ್ವಾಮಿ ಅವರನ್ನು ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ ಅಭಿನಂದಿಸಿದರು. ಚಿತ್ರದಲ್ಲಿ ಮುಳ್ಳೂರು ದೇವರಾಜ್, ಮಾಕಿ ಮಹಾದೇವು, ಶೆಟ್ಟಿನಾಯಕನಹಳ್ಳಿ ಸಿದ್ದಾರ್ಥ, ವೀರಭದ್ರಪ್ಪ ಇತರರಿದ್ದಾರೆ

ಮೈಸೂರಿಗರ ಕಾಳಜಿಯಿಂದ ಹಸಿರು ವಲಯವಾಗಿರುವ ಮೈಸೂರು

● ನಗರಪಾಲಿಕೆ ಆಯುಕ್ತ ಡಾ.ಲಕ್ಷ್ಮೀಕಾಂತ ರೆಡ್ಡಿ ಪ್ರಶಂಸೆ ● ಮೈಸೂರಲ್ಲೇ 600ಕ್ಕೂ ಅಧಿಕ ಉದ್ಯಾನವನಗಳಿವೆ



ಮೈಸೂರು ಸಸ್ಯಾರಾಧನಾ ಸಮಿತಿ, ವಿದ್ಯಾವರ್ಧಕ ಶಿಕ್ಷಣ ಸಂಸ್ಥೆ, ಜೆ.ಕೆ.ಟೈರ್ಸ್, ಲಯನ್ಸ್ ಸಂಸ್ಥೆ ಮೈಸೂರಿನ ಹೆಬ್ಬಾಳು ಶಿಷ್ಕರಣೆ ಸೆಂಟ್ರಲ್ ಶಾಲೆಯಲ್ಲಿ ಏರ್ಪಡಿಸಿದ್ದ ಸಸ್ಯಾರಾಧನೆ ಅಭಿಯಾನ ಕಾರ್ಯಕ್ರಮದಲ್ಲಿ ಹಂಗಾಮಿ ಮೇಯರ್ ಸುನಂದಾ ಪಾಲನೇತ್ರ, ಆದಿಚುಂಚನಗಿರಿ ಮೈಸೂರು ಶಾಖಾ ಮಠದ ಶ್ರೀ ಸೋಮೇಶ್ವರನಾಥ ಸ್ವಾಮೀಜಿ ಸಸಿ ನೆಟ್ಟು ನೀರೆರೆದರು. ಚಿತ್ರದಲ್ಲಿ ನಗರಪಾಲಿಕೆ ಸದಸ್ಯೆ ಪ್ರೇಮಾ ಶಂಕರೇಗೌಡ ಇನ್ನಿತರರನ್ನು ಕಾಣಬಹುದು.

ಮೈಸೂರು, ಜು.29(ಆರ್‌ಕೆಬಿ)– ಮೈಸೂರು ಉದ್ಯಾನವನಗಳ ನಗರವಷ್ಟೇ ಅಲ್ಲ, ಹಸಿರು ನಗರವಾಗಿದೆ. ಇದಕ್ಕೆ ಕಾರಣ ಮೈಸೂರಿನ ನಾಗರಿಕರ ಪರಿಸರ ಕಾಳಜಿ ಎಂದು ಮೈಸೂರು ಮಹಾನಗರ ಪಾಲಿಕೆ ಆಯುಕ್ತ ಡಾ.ಲಕ್ಷ್ಮೀಕಾಂತ ರೆಡ್ಡಿ ಪ್ರಶಂಸಿಸಿದರು.

ಮೈಸೂರಿನ ಹೆಬ್ಬಾಳು ಶಿಷ್ಕರಣೆ ಸೆಂಟ್ರಲ್ ಸ್ಕೂಲ್‌ನಲ್ಲಿ ಶುಕ್ರವಾರ ಮೈಸೂರು ಸಸ್ಯಾರಾಧನಾ ಸಮಿತಿ, ವಿದ್ಯಾವರ್ಧಕ ಶಿಕ್ಷಣ ಸಂಸ್ಥೆ, ಜೆ.ಕೆ.ಟೈಯರ್ಸ್, ಲಯನ್ಸ್ ಇಂಟರ್‌ನ್ಯಾಷನಲ್ ಜಂಟಿ ಆಶ್ರಯದಲ್ಲಿ ಏರ್ಪಡಿಸಿದ್ದ ಸಸ್ಯಾರಾಧನೆ ಅಭಿಯಾನ ಮತ್ತು ಅಭಿನಂದನಾ ಕಾರ್ಯಕ್ರಮಕ್ಕೆ ಅವರು ಚಾಲನೆ ನೀಡಿದರು.

ಬೇರೆಲ್ಲ ನಗರಗಳಿಗೆ ಹೋಲಿಕೆ ಮಾಡಿದರೆ ಮೈಸೂರಿನಲ್ಲಿರುವಷ್ಟು ಉದ್ಯಾನವನಗಳು ಬೇರೆಲ್ಲೂ ಇಲ್ಲ. ಒಟ್ಟು 600ಕ್ಕೂ ಹೆಚ್ಚು ಉದ್ಯಾನವನಗಳಿವೆ. ನಗರದ ಸಂಘ ಸಂಸ್ಥೆಗಳು ಜನರ ಸಹಕಾರದಿಂದ ಇದು ಸಾಧ್ಯವಾಗಿದೆ. ಇದನ್ನು ಹೀಗೆ ಮುಂದಿನ ಪೀಳಿಗೆಗೆ ಉಳಿಸಬೇಕಿದೆ ಎಂದು ಹೇಳಿದರು.

ಮಾಜಿ ಎಂಎಲ್‌ಸಿ, ಸಿಐಟಿಬಿ ಮಾಜಿ ಅಧ್ಯಕ್ಷ ಡಿ.ಮಾದೇಗೌಡರು ಮಾತನಾಡಿ, ಹೆಬ್ಬಾಳ ಸಾಮ್ರಾಜ್ಯವನ್ನು ಹಸಿರುಮಯವಾಗಿಡಲು ನಾಗರಿಕರ ಸಹಕಾರ ಅತ್ಯಗತ್ಯ. ಈ ನಿಟ್ಟಿನಲ್ಲಿ ಸಸ್ಯಾರಾಧನಾ ಸಮಿತಿಯು ಈ ಪ್ರದೇಶವನ್ನು ಮತ್ತಷ್ಟು ಹಸಿರುಮಯವಾಗಿ ಮಾರ್ಪಡಿಸಲು ಶ್ರಮಿಸುತ್ತಿದೆ. ಮುಂದಿನ ಮೂರು ತಿಂಗಳಲ್ಲಿ 2 ಸಾವಿರ ಸಸಿಗಳನ್ನು ನೆಡಲಾಗುವುದು ಎಂದು ತಿಳಿಸಿದರು.

ಒಂದು ಸಾವಿರ ಸಸಿಗಳು ಹಾಗೂ ಒಂದು ಸಾವಿರ ಟ್ರೀಗಾರ್ಡ್‌ಗಳ ಕೊಡುಗೆ ನೀಡಿದ ಮೈಸೂರಿನ ಜೆ.ಕೆ.ಟೈರ್ಸ್ ಉಪಾದ್ಯಕ್ಷ ಈಶ್ವರರಾವ್ ಅವರನ್ನು ಸಮಿತಿ ವತಿಯಿಂದ ಡಿ.ಮಾದೇಗೌಡರು ಸನ್ಮಾನಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಈಶ್ವರ್‌ರಾವ್, ಮೈಸೂರು ವಾತಾವರಣ ಎಲ್ಲರಿಗೂ ಹಿತಕರವಾಗಿದೆ. ಇಲ್ಲಿ ಸಂಘ ಸಂಸ್ಥೆಗಳು, ನಾಗರಿಕರು ಪರಿಸರ ಕಾಳಜಿಯಿಂದ ಗಿಡಗಳನ್ನು ನೆಟ್ಟು, ಅವುಗಳನ್ನು ಪೋಷಿಸಿ ಬೆಳೆಸಿರುವುದರಿಂದ ಇಲ್ಲಿನ ವಾತಾವರಣ ಚೆನ್ನಾಗಿದೆ. ಆದರೆ ಉತ್ತರ ಭಾರತದ ಹಲವು ಕಡೆಗಳಲ್ಲಿ ನೀರಿಗೆ ಹಾಹಾಕಾರವಿದೆ. ಹಲವು ಕಡೆಗಳಲ್ಲಿ ಶುದ್ಧ ಗಾಳಿಯೇ ದೊರೆಯದ ಸ್ಥಿತಿ ನಿರ್ಮಾಣವಾಗಿದೆ. ಹೀಗಾಗಿ ನಾವು ಮುಂದಿನ ಪೀಳಿಗೆಯವರಿಗೆ ಶುದ್ಧ ಗಾಳಿ, ಪರಿಸರ ಉಳಿಸಿಕೊಡುವ ನಿಟ್ಟಿನಲ್ಲಿ ಸಸ್ಯಾರಾಧನೆ ಸಮಿತಿಯು ಶ್ಲಾಘನೀಯ ಕಾರ್ಯ ಕೈಗೊಂಡಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸಾನ್ನಿಧ್ಯ ವಹಿಸಿದ್ದ ಆದಿಚುಂಚನಗಿರಿ ಶಾಖಾ ಮಠದ ಶ್ರೀ ಸೋಮೇಶ್ವರನಾಥ ಸ್ವಾಮೀಜಿ, ಹಂಗಾಮಿ ಮೇಯರ್ ಸುನಂದಾ ಪಾಲನೇತ್ರ ಮಾತನಾಡಿದರು. ನಂತರ ಆದಿಚುಂಚನಗಿರಿ ಮೈಸೂರು ಶಾಖಾ ಮಠದ ಸೋಮೇಶ್ವರನಾಥ ಸ್ವಾಮೀಜಿ, ಹಂಗಾಮಿ ಮೇಯರ್ ಸುನಂದಾ ಪಾಲನೇತ್ರ, ಆಯುಕ್ತ ಡಾ.ಲಕ್ಷ್ಮೀಕಾಂತರೆಡ್ಡಿ ಇನ್ನಿತರರು ಸಸಿಗಳನ್ನು ನೆಟ್ಟರು. ಪಾಲಿಕೆ ಸದಸ್ಯೆ ಪ್ರೇಮಾ ಶಂಕರೇಗೌಡ ಅಧ್ಯಕ್ಷತೆ ವಹಿಸಿದ್ದರು. ನಗರಪಾಲಿಕೆ ಸದಸ್ಯರಾದ ಕೆ.ವಿ.ಶ್ರೀಧರ್, ಪೈ. ಶ್ರೀನಿವಾಸ್, ಉಷಾ ಕುಮಾರ್, ರಮೇಶ್, ಮಾಜಿ ಸದಸ್ಯ ಶಿವಣ್ಣ ಇನ್ನಿತರರು ಉಪಸ್ಥಿತರಿದ್ದರು.

8 ಕೋಟಿ ವೆಚ್ಚದಲ್ಲಿ ವಿದ್ಯುತ್ ಉಪಕೇಂದ್ರ, ಚಿತಾಗಾರ ಸ್ಥಾಪನೆ

ವಿದ್ಯುತ್ ಮಹೋತ್ಸವ ಕಾರ್ಯಕ್ರಮದಲ್ಲಿ ಬಿ.ಹರ್ಷವರ್ಧನ್

ನಂಜನಗೂಡು, ಜು.29– ತಾಲೂಕಿನ ಗೋಳೂರು ಗ್ರಾಮದ ಬಳಿ 8 ಕೋಟಿ ರೂ. ವೆಚ್ಚದಲ್ಲಿ ವಿದ್ಯುತ್ ಉಪಕೇಂದ್ರ ಹಾಗೂ ನಗರ ಪ್ರದೇಶದಲ್ಲಿ ವಿದ್ಯುತ್ ಚಿತಾಗಾರ ನಿರ್ಮಿಸಲು ಯೋಜನೆ ರೂಪಿಸಲಾಗಿದೆ ಎಂದು ಶಾಸಕ ಬಿ.ಹರ್ಷವರ್ಧನ್ ತಿಳಿಸಿದರು.

ನಗರದ ಅಂಬೇಡ್ಕರ್ ಭವನದಲ್ಲಿ ಶುಕ್ರವಾರ ಚಾಮುಂಡೇಶ್ವರಿ ವಿದ್ಯುತ್ ನಿಗಮ, ಜಿಲ್ಲಾಡಳಿತ, ಇಂಧನ ಇಲಾಖೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ವಿದ್ಯುತ್ ಮಹೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕೇಂದ್ರ ಸರ್ಕಾರ ಕಳೆದ 8 ವರ್ಷಗಳಲ್ಲಿ ವಿದ್ಯುತ್ ಕ್ಷೇತ್ರದಲ್ಲಿ ಮಹತ್ತರ ಸಾಧನೆ ತೋರಿದೆ. 248 ಲಕ್ಷ ಮೆಗಾವ್ಯಾಟ್ ಉತ್ಪಾದನಾ ಸಾಮರ್ಥ್ಯದಿಂದ 4 ಲಕ್ಷ ಮೆಗಾವ್ಯಾಟ್‌ಗೆ ಹೆಚ್ಚಿಸಲಾಗಿದೆ. ಪ್ರಸ್ತುತ 1.63 ಲಕ್ಷ ಮೆಗಾ ವ್ಯಾಟ್ ವಿದ್ಯುತ್ ಅನ್ನು ನವೀಕರಿಸಬಹುದಾದ ಇಂಧನ ಮೂಲಗಳಿಂದ ಉತ್ಪಾದಿಸಲಾಗುತ್ತಿದೆ. ಶೇ.40 ರಷ್ಟು ಯೋಜನೆಗೆ ಮೊದಲೇ ಸಾಧನೆ ಮಾಡಲಾಗಿದೆ ಎಂದರು.

ವಿದ್ಯುತ್ ಇಲಾಖೆ ಯೋಜನೆಗಳು ಜನಸಾಮಾನ್ಯರಿಗೆ ತಲುಪುತ್ತಿವೆಯೇ ಎಂಬುದರ ಬಗ್ಗೆ ಅಧಿಕಾರಿಗಳು ಗ್ರಾಮಗಳಿಗೆ ತೆರಳಿ ವಾಸ್ತವಾಂಶ ಅರಿಯಬೇಕು. ತಾಲೂಕಿನ ಇಬ್ಬಾಳು ಗ್ರಾಮದ ಸಮೀಪ ಮಹದೇವ ನಗರ ಬಡಾವಣೆಗೆ ನಾನು ಭೇಟಿ ನೀಡಿದಾಗ ಅಲ್ಲಿನ ಮನೆಗಳಿಗೆ ವಿದ್ಯುತ್ ಸಂಪರ್ಕವಿರಲ್ಲಿಲ್ಲ. ಕಾಡಂಚಿನ ಗ್ರಾಮವಾದ್ದರಿಂದ ಸಂಜೆ ನಂತರ ಜನರು ಮನೆಯಿಂದ ಹೊರಗೆ ಬರಲು ಹೆದರುತ್ತಿದ್ದ ಪರಿಸ್ಥಿತಿ ಇತ್ತು. ಅದರ ಸಮಸ್ಯೆ ನಿವಾರಿಸಿ, ವಿದ್ಯುತ್ ಸೌಲಭ್ಯ ಒದಗಿಸಲಾಗಿದೆ. ಕೇಂದ್ರ ಸರ್ಕಾರದ ಸಾಧನೆಯನ್ನು ಹೊಗಳುತ್ತಾ ಸಾಗಿದರೆ ಸಾಲದು, ಗ್ರಾಮೀಣ ಜನರಿಗೆ ಶುದ್ಧ ಕುಡಿಯುವ ನೀರು, ರಸ್ತೆ, ವಿದ್ಯುತ್ ಮುಂತಾದ ಮೂಲ ಸೌಲಭ್ಯಗಳನ್ನು ಕಲ್ಪಿಸುವತ್ತ ಅಧಿಕಾರಿಗಳು ಹೆಚ್ಚಿನ ಗಮನ ಹರಿಸಬೇಕು. ಮುಂದಿನ ದಿನಗಳಲ್ಲಿ ವಿದ್ಯುತ್ ಚಾಲಿತ ವಾಹನಗಳ ಸಂಖ್ಯೆಯೂ



ಹೆಚ್ಚಾಗಲಿದೆ. ಜೊತೆಗೆ ವಿದ್ಯುತ್ ಕೊರತೆ ನಿವಾರಿಸಲು ಕೇಂದ್ರ ಸರ್ಕಾರ ಸೋಲಾರ್ ಮೂಲಕ ವಿದ್ಯುತ್ ತಯಾರಿಕೆಗೆ ಮುಂದಾಗಿದೆ. 2030ರ ವೇಳೆಗೆ ದೇಶ ಇಂಧನ ಕ್ಷೇತ್ರದಲ್ಲಿ ಸಂಪೂರ್ಣ ಸಾಯತ್ತತೆ ಸಾಧಿಸಲಿದೆ ಎಂದರು.

ನಿಗಮದ ವ್ಯವಸ್ಥಾಪಕ ನಿರ್ದೇಶಕ ಜಯ ವಿಭವಸ್ವಾಮಿ ಮಾತನಾಡಿ, ರಾಜ್ಯದಲ್ಲಿ ಸಂಪೂರ್ಣವಾಗಿ ವಿದ್ಯುತ್ ಕೊರತೆ ನೀಗಿಸಲಾಗಿದೆ. ವಿದ್ಯುತ್ ಅಮೂಲ್ಯ, ಮಿತವಾಗಿ ಬಳಸಿ ಎಂಬ ಇಲಾಖೆಯ ಘೋಷ ವಾಕ್ಯವನ್ನು ತೆಗೆದು ಹಾಕಲಾಗಿದ್ದು, ಹೆಚ್ಚಿನ ವಿದ್ಯುತ್ ಅನ್ನು ಹೊರ ರಾಜ್ಯ ಗಳಿಗೆ ಮಾರುವಷ್ಟು ಸಾಯತ್ತತೆ ಸಾಧಿಸಲಾ ಗಿದೆ.

ಇಡೀ ದೇಶವನ್ನು ಒಂದು ರಾಷ್ಟ್ರ ಒಂದು ಗ್ರಿಡ್ ಯೋಜನೆಯಡಿ 1.63 ಲಕ್ಷ ಕಿಮೀ ಪ್ರಸರಣ ಮಾರ್ಗ ನಿರ್ಮಿಸಲಾಗಿದ್ದು, ಈ ಮೂಲಕ 1.12 ಲಕ್ಷ ಮೆಗಾವ್ಯಾಟ್ ವಿದ್ಯುತ್ ಅನ್ನು ದೇಶದ ಎಲ್ಲಾ ಭಾಗಗಳಿಗೆ ರವಾನಿಸಲಾಗಿದೆ. ಜಿಲ್ಲೆಯಲ್ಲಿ 220 ವಿದ್ಯುತ್ ವಾಹನಗಳ ಚಾರ್ಜಿಂಗ್ ಕೇಂದ್ರಗಳನ್ನು ತೆರೆಯಲು ಉದ್ದೇಶಿಸಲಾಗಿದೆ. ಆಸಕ್ತರು ಮುಂದೆ ಬಂದು ಸ್ಥಾಪನೆಗೆ ಮುಂದಾಗಬಹುದು ಎಂದ ಅವರು ಎಸ್ಸಿ, ಎಸ್ಟಿ ವರ್ಗದ ಬಿಪಿಎಲ್ ಕಾರ್ಡ್ ಹೊಂದಿರುವವರಿಗೆ ವಿದ್ಯುತ್ ಸಬ್ಸಿಡಿ ಯೋಜನೆ ಜಾರಿಗೊಳಿಸಲಾಗಿದ್ದು, ಇದನ್ನು ಸದುಪಯೋಗಪಡಿಸಿಕೊಳ್ಳಿ ಎಂದರು.

ಕಾರ್ಯಕ್ರಮದಲ್ಲಿ ನಿಗಮದ ಅಧೀಕ್ಷಕ ಅಭಿಯಂತರ ನಾಗೇಶ್, ಜಿಲ್ಲಾ ವ್ಯವಸ್ಥಾಪಕ ಸಮ್ಮಯ್ಯ, ಜಿಲ್ಲಾ ಕಾರ್ಯ ನಿರ್ವಾಹಕ ಇಂಜಿನಿಯರ್ ಅನಿತಾ, ಪ್ರದೀಪ್, ಕಾರ್ಯ ನಿರ್ವಾಹಕ ಇಂಜಿನಿಯರ್ ದೇವರಾಜ್, ದೀಪಕ್, ಬಿಜೆಪಿ ತಾಲೂಕು ಅಧ್ಯಕ್ಷ ಪಿ.ಮಹೇಶ್ ಉಪಸ್ಥಿತರಿದ್ದರು.

ಶ್ರೀಬಸವೇಶ್ವರ ಪೌರಾಣಿಕ ನಾಟಕದ ಪೋಸ್ಟರ್ ಬಿಡುಗಡೆ

ತಿ.ನರಸೀಪುರ, ಜು.29– ಬಿಜೆಪಿ ಕಾರ್ಯಕರ್ತರು ನಾಟಕದ ಮೂಲಕ ಸಮಾಜಕ್ಕೆ ಉತ್ತಮ ಸಂದೇಶ ಸಾರುವ ಕೆಲಸ ಮಾಡುತ್ತಿರುವುದು ಒಳ್ಳೆಯ ಬೆಳವಣಿಗೆ ಎಂದು ವಾಟಾಳು ಮಠದ ಡಾ.ಸಿದ್ದಲಿಂಗ ಶಿವಾಚಾರ್ಯ ಸ್ವಾಮೀಜಿ ತಿಳಿಸಿದರು.

ತಾಲೂಕಿನ ವಾಟಾಳು ಮಠದಲ್ಲಿ ಜಗಜ್ಯೋತಿ ಶ್ರೀಬಸವೇಶ್ವರ ಪೌರಾಣಿಕ ನಾಟಕದ ಪೋಸ್ಟರ್ ಬಿಡುಗಡೆ ಮಾಡಿ ಮಾತನಾಡಿದ ಅವರು, ಬಿಜೆಪಿ ಗ್ರಾಮಾಂತರ ಎಸ್ಸಿ ಮೋರ್ಚಾ ಪದಾಧಿಕಾರಿಗಳು ಈ ನಾಟಕದಿಂದ ಬರುವ ಹಣವನ್ನು ಬಡ ಎಸ್ಸಿ/ಎಸ್‌ಟಿ ಮಕ್ಕಳ ಉನ್ನತ ಶಿಕ್ಷಣದ ವಿದ್ಯಾಭ್ಯಾಸದ ಸಹಾಯಕ್ಕೆ ಬಳಸುತ್ತಿರುವುದು ಶ್ಲಾಘನೀಯ ಎಂದರು.

ಬಿಜೆಪಿ ಜಿಲ್ಲಾ ಗ್ರಾಮಾಂತರ ಎಸ್ಸಿ ಕಾರ್ಯದರ್ಶಿ ಸಾಮ್ರಾಟ್ ಸುಂದರೇಶನ್ ಮಾತನಾಡಿ, ಜು.31ರಂದು ಮಧ್ಯಾಹ್ನ 12 ಗಂಟೆಗೆ ಮೈಸೂರಿನ ಜೆ.ಕೆ.ಮೈದಾನದಲ್ಲಿ ಸಾಮಾಜಿಕ ನ್ಯಾಯ ವೇದಿಕೆ, ಮೈಸೂರು ಮತ್ತು ಜನಸೇವಾ ಕಲಾ ಬಳಗದಿಂದ



ಜಗಜ್ಯೋತಿ ಶ್ರೀ ಬಸವೇಶ್ವರ ಪೌರಾಣಿಕ ನಾಟಕ ಪ್ರದರ್ಶನ ಏರ್ಪಡಿಸಲಾಗಿದೆ. ನಾಟಕದಲ್ಲಿ ಮೈಸೂರು ಜಿಲ್ಲಾ ಗ್ರಾಮಾಂತರ ಬಿಜೆಪಿ ಎಸ್ಸಿ ಮೋರ್ಚಾ ಪದಾಧಿಕಾರಿಗಳು ಅಭಿನಯಿಸಲಿದ್ದಾರೆ.

ಸುತ್ತೂರು ಶ್ರೀಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಆಶೀರ್ವಾದದೊಂದಿಗೆ, ವಾಟಾಳು ಸೂರ್ಯ ಸಿಂಹಾಸನ ಮಠದ ಡಾ. ಸಿದ್ದಲಿಂಗ ಶಿವಾಚಾರ್ಯ ಸ್ವಾಮೀಜಿ ಸಾನಿಧ್ಯದಲ್ಲಿ, ಮಾಜಿ ಸಿಎಂ ಬಿ.ಎಸ್.ಯಡಿ ಯೂರಪ್ಪ, ಸಂಸದರಾದ ವಿ.ಶ್ರೀನಿವಾಸ್ ಪ್ರಸಾದ್, ಪ್ರತಾಪ್ ಸಿಂಹ, ಬಿಜೆಪಿ ರಾಜ್ಯ ಉಪಾಧ್ಯಕ್ಷ ಬಿ.ವೈ.ವಿಜಯೇಂದ್ರ, ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ.ಸೋಮಶೇಖರ್, ಸಾಮಾಜಿಕ ನ್ಯಾಯ ವೇದಿಕೆ ಓ.ಶ್ಯಾಮ ಭಟ್ಟರು, ವಿಧಾನ ಪರಿಷತ್ ಸದಸ್ಯ ಛಲವಾದಿ ನಾರಾಯಣ ಸ್ವಾಮಿ ಭಾಗವಹಿಸಲಿದ್ದಾರೆ ಎಂದರು.

ಈ ವೇಳೆ ಜಿಲ್ಲಾ ಗ್ರಾಮಾಂತರ ಎಸ್‌ಸಿ ಮೋರ್ಚಾ ಜಿಲ್ಲಾಧ್ಯಕ್ಷ ಸಿ.ಎಂ.ಮಹದೇವಯ್ಯ, ತಾಪಂ ಮಾಜಿ ಅಧ್ಯಕ್ಷ ಚಿಕ್ಕಳ್ಳಿ ಡಿ.ಕೃಷ್ಣಮೂರ್ತಿ, ತಿ.ನರಸೀಪುರ ಎಸ್‌ಸಿ ಮೋರ್ಚಾ ಅಧ್ಯಕ್ಷ ಶಿವಕುಮಾರ್, ಹಿರಿಯ ವಕೀಲ ನಂಜುಂಡಸ್ವಾಮಿ, ಮುಖಂಡ ವಾಸುದೇವಮೂರ್ತಿ ಉಪಸ್ಥಿತರಿದ್ದರು.

ಇಂದು ಪಿ.ಪಟ್ಟಣದಲ್ಲಿ ಪತ್ರಿಕಾ ದಿನಾಚರಣೆ

ಪಿರಿಯಾಪಟ್ಟಣ, ಜು.29– ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದಿಂದ ಜು.30ರಂದು ಪತ್ರಿಕಾ ದಿನಾಚರಣೆ ನಡೆಯಲಿದೆ ಎಂದು ಪ್ರಧಾನ ಕಾರ್ಯದರ್ಶಿ ಪಿ.ಡಿ.ಪ್ರಸನ್ನ ತಿಳಿಸಿದ್ದಾರೆ.

ಬೆಳಗ್ಗೆ 11 ಗಂಟೆಗೆ ತಾಪಂನಲ್ಲಿ ನಡೆಯುವ ಕಾರ್ಯಕ್ರಮವನ್ನು ಶಾಸಕ ಕೆ.ಮಹದೇವ್ ಉದ್ಘಾಟಿಸಲಿದ್ದು, ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಎಸ್.ಟಿ.ರವಿಕುಮಾರ್ ಪ್ರಾಸ್ತಾವಿಕ ನುಡಿಗಳನ್ನಾಡಲಿದ್ದಾರೆ. ಕನ್ನಡಪ್ರಭ ಪತ್ರಿಕೆ ಕಾರ್ಯ ನಿರ್ವಾಹಕ ಸಂಪಾದಕ ಹಾಗೂ ಮೈಸೂರು ವಿಭಾಗೀಯ ಮುಖ್ಯಸ್ಥ ಅಂಶಿ ಪ್ರಸನ್ನಕುಮಾರ್ ಪ್ರಧಾನ ಭಾಷಣ ಮಾಡಲಿದ್ದು, ಸಂಘದ ಅಧ್ಯಕ್ಷ ಬಿ.ಎಸ್.ಸತೀಶ್ ಆರಾಧ್ಯ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮೈಮುಲ್ ಅಧ್ಯಕ್ಷ ಪಿ.ಎಂ.ಪ್ರಸನ್ನ, ಕಲ್ಪವೃಕ್ಷ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಅಧ್ಯಕ್ಷ ಪಿ.ಪ್ರಶಾಂತ್ ಗೌಡ, ಉದ್ಯಮಿ ಅಣ್ಣಪ್ಪ, ತಾಪಂ ಇಓ ಸಿ.ಆರ್.ಕೃಷ್ಣಕುಮಾರ್, ಜಿಲ್ಲಾ ಸಂಘದ ಪ್ರಧಾನ ಕಾರ್ಯದರ್ಶಿ ಎಂ.ಸುಬ್ರಹ್ಮಣ್ಯ, ಗ್ರಾಮಾಂತರ ಉಪಾಧ್ಯಕ್ಷ ನಾರಾಯಣ್, ಕಾರ್ಯದರ್ಶಿ ಎಂ.ಮಹದೇವ್, ರಾಜ್ಯ ಕಾರ್ಯಕಾರಿಣಿ ನಿರ್ದೇಶಕ ರಾಘವೇಂದ್ರ, ಪತ್ರಕರ್ತರ ರಾಷ್ಟ್ರೀಯ ಮಂಡಳಿ ಸದಸ್ಯ ಸಿ.ಎಂ.ಕಿರಣ್‌ಕುಮಾರ್, ಅಭ್ಯುದಯ ಸಹಕಾರ ಸಂಘ ಅಧ್ಯಕ್ಷ ದೀಪಕ್ ಭಾಗವಹಿಸಲಿದ್ದಾರೆ. ಸಮಾರಂಭದಲ್ಲಿ 'ಮೈಸೂರು ಮಿತ್ರ' ವರದಿಗಾರ ಪಿ.ಎಸ್.ವೀರೇಶ್‌ಗೆ ಸನ್ಮಾನ ಹಾಗೂ ಚರ್ಚಾ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಣೆ ಕಾರ್ಯಕ್ರಮ ನಡೆಯಲಿದೆ ಎಂದು ತಿಳಿಸಿದ್ದಾರೆ.



ಕಂಪಲಾಪುರ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳಿಗೆ ಪ್ರಧಾನ ಮಂತ್ರಿ ರಾಷ್ಟ್ರೀಯ ಪೋಷಣಾ ಅಭಿಯಾನದ ಅಂಗವಾಗಿ ಎಸ್‌ಡಿಎಂಸಿ ಅಧ್ಯಕ್ಷ ಸದಾಶಿವ ಮೊಟ್ಟೆ ವಿತರಿಸಿದರು. ಮುಖ್ಯ ಶಿಕ್ಷಕ ಮಹದೇವಯ್ಯ, ಶಿಕ್ಷಕರಾದ ಜಗದೀಶ್, ಶಿವರಾಜ್, ಪೂರ್ಣಿಮಾ, ಪತ್ರಿಕಾ ಪ್ರತಿನಿಧಿ ಸ್ನೇಕ್ ಗಿರೀಶ್ ಹಾಜರಿದ್ದರು.



ಕೆ.ಆರ್.ನಗರ ಹೊರವಲಯದ ಹಾಸನ–ಮೈಸೂರು ಮುಖ್ಯ ರಸ್ತೆಯ ತೋಪಮ್ಮ ದೇವಸ್ಥಾನದ ಬಳಿ 10 ಕೋಟಿ ರೂ. ವೆಚ್ಚದ ಡಾ.ಬಿ.ಆರ್.ಅಂಬೇಡ್ಕರ್ ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಶಂಕುಸ್ಥಾಪನೆ ನೆರವೇರಿಸಿದರು. ಈ ವೇಳೆ ಶಾಸಕರಾದ ಸಾ.ರಾ.ಮಹೇಶ್, ಸಿ.ಎನ್.ಮಂಜೇಗೌಡ, ಜೆಡಿಎಸ್ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ತಿ.ನರಸೀಪುರದಲ್ಲಿ ಆರೋಗ್ಯ ತಪಾಸಣಾ ಶಿಬಿರ



ತಿ.ನರಸೀಪುರ, ಜು.29– ಹಿರಿಯ ನಾಗರಿಕರು ಮತ್ತು ವಿಕಲಚೇತನರಿಗೆ ಅವಶ್ಯವಿರುವ ಸಾಧನ ಸಲಕರಣೆಗಳನ್ನು ವಿತರಿಸಿ ಅವರಿಗೆ ಅನುಕೂಲ ಕಲ್ಪಿಸಿಕೊಡುವ ನಿಟ್ಟಿನಲ್ಲಿ ಪೂರ್ವಭಾವಿಯಾಗಿ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ ಎಂದು ತಾಪಂ ಕಾರ್ಯ ನಿರ್ವಹಣಾಧಿಕಾರಿ ಸಿ.ಕೃಷ್ಣ ತಿಳಿಸಿದರು.

ಜಿಲ್ಲಾಡಳಿತ, ಜಿಪಂ, ತಾಪಂ ಮತ್ತು ಪುರಸಭೆ ಹಾಗೂ ವಿವಿಧ ಇಲಾಖೆಗಳ ಸಹಕಾರದೊಂದಿಗೆ ಬೆಂಗಳೂರಿನ ಅಲಿಂಮ್ಕೋ ಸಂಸ್ಥೆ ಸಹಯೋಗದೊಂದಿಗೆ ಪಟ್ಟಣದ ಸರ್ಕಾರಿ ಬಾಲಕರ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ವಿಕಲಚೇತನರು ಹಾಗೂ ಹಿರಿಯ ನಾಗರಿಕರಿಗೆ ಸಾಧನ ಸಲಕರಣೆ ಸೌಲಭ್ಯ ಒದಗಿಸುವ ಸಲುವಾಗಿ ಹಮ್ಮಿಕೊಳ್ಳಲಾಗಿದ್ದ ತಪಾಸಣಾ ಶಿಬಿರದಲ್ಲಿ ಅವರು ಮಾತನಾಡಿದರು.

ಹಿರಿಯ ನಾಗರಿಕರು ಹಾಗೂ ವಿಕಲಚೇತನರಿಗೆ ಅವಶ್ಯಕತೆ ಇರುವ ಸಲಕರಣೆಗಳ ಪಟ್ಟಿಯನ್ನು ಆರೋಗ್ಯ ಇಲಾಖೆ ಅಧಿಕಾರಿಗಳು ಹಾಗೂ ಅಲಿಂಮ್ಕೋ ಸಂಸ್ಥೆ ಸಿದ್ಧಪಡಿಸಲಿದ್ದು, ನಂಜನಗೂಡಿನಲ್ಲಿ ನಡೆಯಲಿರುವ ಬೃಹತ್ ಕಾರ್ಯಕ್ರಮದಲ್ಲಿ ಸಂಸದ ವಿ.ಶ್ರೀನಿವಾಸ ಪ್ರಸಾದ್ ಸಾಧನ–ಸಲಕರಣೆಗಳನ್ನು ವಿತರಿಸಲಿದ್ದಾರೆ ಎಂದರು.

ಶಿಶು ಯೋಜನಾ ಅಭಿವೃದ್ಧಿ ಅಧಿಕಾರಿ ಬಿ.ಎನ್.ಬಸವರಾಜು ಮಾತನಾಡಿ, ಈಗಾಗಲೇ ಸಾಧನ ಸಲಕರಣೆ ಪಡೆದಿರುವವರನ್ನು ಹೊರತುಪಡಿಸಿ ಅವಶ್ಯಕತೆ ಇರುವವರಿಗೆ ಮಾತ್ರವೇ ಸೌಲಭ್ಯ ದೊರಕಲಿದೆ ಎಂದರು. ಶಿಬಿರದಲ್ಲಿ ಸಾವಿರಾರು ಹಿರಿಯ ನಾಗರಿಕರ ಹೃದಯ, ನರ, ಮೂಳೆ, ಕಣ್ಣು, ಮೂತ್ರಪಿಂಡ, ಮಾನಸಿಕ, ಕಿವಿ ಮತ್ತು ಮೂಗು ರೋಗಗಳ ಸಮಸ್ಯೆಗಳನ್ನು ಪರೀಕ್ಷಿಸಲಾಯಿತು.

ಈ ವೇಳೆ ತಹಶೀಲ್ದಾರ್ ಸಿ.ಜಿ.ಗೀತಾ, ಜಿಲ್ಲಾ ಯೋಜನಾಧಿಕಾರಿ ಸವಿತಾ, ಬಿಇಓ ಮರಿಸ್ವಾಮಿ, ಪುರಸಭೆ ಮುಖ್ಯಾಧಿಕಾರಿ ಬಸವರಾಜು, ಜಿಲ್ಲಾ ಅಂಗವಿಕಲರ ಪುನರ್ವಸತಿ ಕೇಂದ್ರದ ಮಾಲತಿ, ತಾಲೂಕು ಆರೋಗ್ಯಾಧಿಕಾರಿ ಡಾ.ರವಿಕುಮಾರ್, ಜಿಲ್ಲಾ ಅಂಗವಿಕಲರ ಸಂಘದ ಅಧ್ಯಕ್ಷ ಶ್ರೀಧರ್ ದಿಕ್ಷಿತ್, ಸಮಾಜ ಕಲ್ಯಾಣಧಿಕಾರಿ ರಾಮೇಗೌಡ ಮತ್ತಿತರರು ಹಾಜರಿದ್ದರು.

ನೂತನ ತಾಲೂಕು ಸರಗೂರು ಅಭಿವೃದ್ಧಿಗೆ ಶ್ರಮಿಸುವೆ



ಸರಗೂರು, ಜು.29– ರಾಜ್ಯದಲ್ಲಿ ಪಕ್ಷ ಅಧಿಕಾರದಲ್ಲಿ ಇಲ್ಲದಿದ್ದರೂ, ನೂತನ ತಾಲೂಕು ಸರಗೂರು ಅಭಿವೃದ್ಧಿಗೆ ಶಕ್ತಿಮೀರಿ ಶ್ರಮಿಸುತ್ತೇನೆ ಎಂದು ಶಾಸಕ ಅನಿಲ್ ಚಿಕ್ಕಮಾದು ಭರವಸೆ ನೀಡಿದ್ದಾರೆ.

ತಾಲೂಕಿನ ತೆರಣಿಮುಂಟಿ, ತೆಲುಗು ಮಸಹಳ್ಳಿ, ಕಳಸೂರು, ಎನ್.ಬೇಗೂರು ಗ್ರಾಮಗಳಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಗುದ್ದಲಿ ಪೂಜೆ ನೆರವೇರಿಸಿ ಅವರು ಮಾತನಾಡಿದರು. ರಾಜ್ಯದಲ್ಲಿ ಬಿಜೆಪಿ ಸರ್ಕಾರ ಅಧಿಕಾರದಲ್ಲಿದೆ. ಆದರೆ, ಅಭಿವೃದ್ಧಿಗೆ ಪೂರಕವಾದ ಅನುದಾನ ನೀಡುತ್ತಿಲ್ಲ. ಕಾಂಗ್ರೆಸ್ ಅಧಿಕಾರದಲ್ಲಿದ್ದರೆ ಇನ್ನು ಹೆಚ್ಚಿನ ಅಭಿವೃದ್ಧಿ ಕೆಲಸಗಳನ್ನು ಮಾಡಲು ಸಹಕಾರಿಯಾಗುತ್ತಿತ್ತು. ಹೀಗಾಗಿ ಮುಂದಿನ ದಿನಗಳಲ್ಲಿ ಮತ್ತಷ್ಟು ಅಭಿವೃದ್ಧಿಗೆ ಶ್ರಮಿಸಲಾಗುವುದು ಎಂದರು.

ಕ್ಷೇತ್ರದ ಪ್ರತಿ ಗ್ರಾಮಗಳ ಅಭಿವೃದ್ಧಿಗೆ ಸಾಕಷ್ಟು ಅನುದಾನ ನೀಡಲಾಗಿದ್ದು, ಆ ಪೈಕಿ ಸಿಸಿ ರಸ್ತೆ ಚರಂಡಿ, ಭವನ ನಿರ್ಮಾಣ, ಏತ ನೀರಾವರಿ ಯೋಜನೆ ಸೇರಿದಂತೆ ಹತ್ತಾರು ಅಭಿವೃದ್ಧಿ ಕಾರ್ಯಗಳನ್ನು ಕೈಗೆತ್ತಿಕೊಂಡು ಜನಪರ ಕೆಲಸ ಮಾಡ ಲಾಗಿದೆ ಎಂದು ಅವರು ವಿವರಿಸಿದರು.

ಈ ವೇಳೆ ಗ್ರಾಮಸ್ಥರಿಂದ ಅಹವಾಲು ಸ್ವೀಕರಿಸಿದ ಶಾಸಕ ಅನಿಲ್ ಚಿಕ್ಕಮಾದು, ಸಮಸ್ಯೆಗಳನ್ನು ಶೀಘ್ರ ಇತ್ಯರ್ಥಪಡಿಸಲಾಗುವುದು ಎಂದ ಅವರು, ಪಿಡಿಓ ದೇವರಾಜು ಉತ್ತಮವಾಗಿ ಕರ್ತವ್ಯ ನಿರ್ವಹಿಸುತ್ತಿದ್ದು, ಸಾರ್ವಜನಿಕರು ಗ್ರಾಮಗಳ ಅಭಿವೃದ್ಧಿಗೆ ಬಳಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಕಬಿನಿ ನೀರಾವರಿ ಇಲಾಖೆ ಎಇಇ ಜನಾರ್ಧನ್, ಎಇ ವಿಶ್ವನಾಥ್, ಗ್ರಾಪಂ ಅಧ್ಯಕ್ಷ ವೆಂಕಟಸ್ವಾಮಿ, ಸದಸ್ಯರಾದ ಸತೀಶ್, ರಾಣಿ, ನೇತ್ರಾ, ಅಂಕನಾಯಕ, ನಾಡಗೌಡ್ರು ಮಾದಪ್ಪ, ಮುಖಂಡರಾದ ಸಿದ್ದಮಲ್ಲಪ್ಪ, ಸೀತಾರಾಮ್, ಬಿ.ಸಿ.ರಾಜು, ಗಿರೀಶ್, ಮಾರನಾಯಕ, ಗಿರಿಯಯ್ಯ, ಕೃಷ್ಣ ಶೆಟ್ಟಿ, ಸಿದ್ದಮಲ್ಲಪ್ಪ. ಕಲೀಮ್, ಮಹದೇವ ಶೆಟ್ಟರು, ನಾಗರಾಜು ಇನ್ನಿತರರಿದ್ದರು.

ಕೋಟೆಯಲ್ಲಿ ಪ್ರವೀಣ್‌ಗೆ ಶ್ರದ್ಧಾಂಜಲಿ

ಹೆಚ್.ಡಿ.ಕೋಟೆ, ಜು.29– ಪಟ್ಟಣದ ಬಿಜೆಪಿ ಕಚೇರಿಯಲ್ಲಿ ದಕ್ಷಿಣ ಕನ್ನಡ ಜಿಲ್ಲೆ ಬೆಳ್ಳಾರೆಯಲ್ಲಿ ಹತ್ಯೆಗೊಳಗಾದ ಪ್ರವೀಣ್ ನೆಟ್ಟಾರು ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಈ ವೇಳೆ ಮಾತನಾಡಿದ ಅರಣ್ಯ ಮತ್ತು ವಸತಿ ಧಾಮಗಳ ನಿಗಮದ ಅಧ್ಯಕ್ಷ ಎಂ.ಅಪ್ಪಣ್ಣ, ಪ್ರವೀಣ್ ಅವರನ್ನು ಹತ್ಯೆಗೈದ ಹಂತಕರನ್ನು ಪೊಲೀಸರು ಶೀಘ್ರದಲ್ಲೇ ಬಂಧಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದ ಅವರು, ಒಬ್ಬ ಮಾಡುವ ಕೆಲಸಕ್ಕೆ ಇಡೀ ಸಮಾಜವನ್ನು ದೂಷಿಸುವುದು ಸರಿಯಲ್ಲ, ಎಲ್ಲಾ ಸಮಾಜದಲ್ಲೂ ಒಳ್ಳೆಯವರು, ಕೆಟ್ಟವರು ಇರುತ್ತಾರೆ ಎಂದರು.

ಶಿವಮೊಗ್ಗದಲ್ಲಿ ಹರ್ಷ, ಮೈಸೂರಿನ ಎನ್.ಆರ್.ಮೊಹಲ್ಲಾದಲ್ಲಿ ರಾಜು, ಈಗ ಪ್ರವೀಣ್ ಹತ್ಯೆ ನಡೆದಿದೆ. ಸರ್ಕಾರ ಹತ್ಯೆ ಮಾಡಿದವರನ್ನು ಬಂಧಿಸುವ ಜೊತೆಗೆ ಉಗ್ರ ಶಿಕ್ಷೆಗೆ ಗುರಿಪಡಿಸುವ ಮೂಲಕ ಮತ್ತೆ ಇಂತಹ ಪ್ರಕರಣಗಳು ಮರುಕಳಿಸದಂತೆ ಎಚ್ಚರ ವಹಿಸಬೇಕು ಎಂದರು.



ಈ ಘಟನೆ ಬಗ್ಗೆ ವಿರೋಧ ಪಕ್ಷಗಳು ಮಾತನಾಡುತ್ತಿಲ್ಲ. ಕಾಂಗ್ರೆಸ್ ಮತ್ತು ಜೆಡಿಎಸ್ ನವರಿಗೆ ಜನರ ಹಿತ ಬೇಕಿಲ್ಲ ಎಂದು ಕಿಡಿ ಕಾರಿದರು. ಈ ಸಂದರ್ಭ ಅಕ್ರಮ ಸಕ್ರಮ ಸಮಿತಿ ಸದಸ್ಯ ಮೊತ್ತ ಬಸವರಾಜಪ್ಪ, ಜಿಪಂ ಮಾಜಿ ಸದಸ್ಯ ಹೆಚ್.ಸಿ.ಲಕ್ಷ್ಮಣ್, ಮುಖಂಡರಾದ ಶಂಕರೇಗೌಡ, ಮಂಜು ನಾಥ್, ತಾಲೂಕು ಬಿಜೆಪಿ ಪ್ರಧಾನ ಕಾರ್ಯದರ್ಶಿ ವಿವೇಕಾನಂದ, ಟೌನ್ ಅಧ್ಯಕ್ಷ ನಂದೀಶ್, ಮಾಜಿ ಅಧ್ಯಕ್ಷ ಯೋಗೇಶ್, ಬಹದ್ದೂರ್ ಸತೀಶ್, ಕೃಷ್ಣ ದೊಡ್ಡ ವೀರನಾಯಕ, ದೀಪಕ್ ಇದ್ದರು.

ಹುಣಸೂರಲ್ಲಿ ಇಂದು ಸಹಕಾರ ಸಮ್ಮಿಲನ

5.57 ಕೋಟಿ ವೆಚ್ಚದ ಕಟ್ಟಡಗಳ ಉದ್ಘಾಟನೆ, ಶಂಕುಸ್ಥಾಪನೆ



ಹುಣಸೂರು, ಜು.29– ನಗರದಲ್ಲಿ ಹಾಲಿನ ಡೇರಿ ಸೇರಿದಂತೆ ವಿವಿಧ ಸಹಕಾರ ಸಂಘ–ಸಂಸ್ಥೆಗಳ ಸಹಕಾರ ಸಮ್ಮಿಲನ ಕಾರ್ಯಕ್ರಮ ಜು.30ರಂದು ಆಯೋಜಿಸಲಾಗಿದೆ ಎಂದು ಮೈಮುಲ್ ನಿರ್ದೇಶಕ ಕೆ.ಎಸ್.ಕುಮಾರ್ ತಿಳಿಸಿದರು.

ಅಂದು ಬೆಳಗ್ಗೆ 11ಕ್ಕೆ ನಗರದ ಮುನೇಶ್ವರ ಕಾವಲ್ ಮೈದಾನದಲ್ಲಿ ನಡೆಯುವ ಬೃಹತ್ ಸಮಾರಂಭದಲ್ಲಿ ಒಟ್ಟಾರೆ 5.57 ಕೋಟಿ ವೆಚ್ಚದ ವಿವಿಧ ಹಾಲಿನ ಡೇರಿ ಹಾಗೂ ಪತ್ತಿನ ಸಹಕಾರ ಸಂಘಗಳ ಕಟ್ಟಡಗಳ ಉದ್ಘಾಟನೆ, ಶಂಕಸ್ಥಾಪನೆ ನಡೆಯಲಿದೆ.

ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ.ಸೋಮಶೇಖರ್ ಉದ್ಘಾಟಿಸುವರು. ಶಾಸಕ ಹೆಚ್.ಪಿ.ಮಂಜುನಾಥ್ ಅಧ್ಯಕ್ಷತೆ ವಹಿಸುವರು. ನೂತನ ಬಿಎಂಸಿ ಕೇಂದ್ರವನ್ನು ಶಾಸಕರೂ ಆದ ರಾಜ್ಯ ಸಹಕಾರ ಮಹಾಮಂಡಲ ಅಧ್ಯಕ್ಷ ಜಿ.ಟಿ.ದೇವೇಗೌಡರು, ನೂತನ ಡೇರಿ ಕಟ್ಟಡಗಳನ್ನು ಸಂಸದ ಪ್ರತಾಪ ಸಿಂಹ ಮತ್ತು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ನೂತನ ಕಟ್ಟಡವನ್ನು ಎಂಸಿಡಿಸಿಸಿ ಬ್ಯಾಂಕ್ ಅಧ್ಯಕ್ಷ ಜಿ.ಡಿ.ಹರೀಶ್‌ಗೌಡ ಉದ್ಘಾಟಿಸುವರು.

ಡೇರಿ ಕಟ್ಟಡಗಳಿಗೆ ಶಾಸಕ ಹಾಗೂ ಕರ್ನಾಟಕ ಹಾಲು ಮಹಾಮಂಡಲದ ಅಧ್ಯಕ್ಷ ಬಾಲಚಂದ್ರ ಜಾರಕಿ ಹೋಳಿ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಕಟ್ಟಡಕ್ಕೆ ಮೈಮುಲ್ ಅಧ್ಯಕ್ಷ ಪಿ.ಎಂ.ಪ್ರಸನ್ನ ಹಾಗೂ ಟಿಎಪಿಸಿಎಂಎಸ್ ಕಟ್ಟಡಕ್ಕೆ ಮೈಮುಲ್ ನಿರ್ದೇಶಕ ಕೆ.ಎಸ್.ಕುಮಾರ್ ಶಂಕುಸ್ಥಾಪನೆ ನೆರವೇರಿಸುವರು. ಕಾರ್ಯಕ್ರಮದಲ್ಲಿ ಜಿಲ್ಲೆಯ ಎಲ್ಲಾ ವಿಧಾನ ಪರಿಷತ್ ಸದಸ್ಯರು, ಎಂಸಿಡಿಸಿಸಿ ಬ್ಯಾಂಕ್ ಹಾಗೂ ಜಿಲ್ಲಾ ಹಾಲು ಒಕ್ಕೂಟದ ನಿರ್ದೇಶಕರು ಭಾಗವಹಿಸುವರು ಎಂದು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಕಾರ್ಯಕ್ರಮದ ವಿವರ: ಮೈಮುಲ್ ವ್ಯಾಪ್ತಿಯ ಹಾಲು ಉತ್ಪಾದಕರ ಸಹಕಾರ ಸಂಘಗಳ 200ನೇ ಸಂಘ ಉದ್ಘಾಟನೆ. ಡೇರಿಯ ನೂತನ 4 ಕಟ್ಟಡಗಳು ಹಾಗೂ 10 ಬಿಎಂಸಿ ಕೇಂದ್ರಗಳ ಉದ್ಘಾಟನೆ, 5 ಬಿಎಂಸಿ ಕೇಂದ್ರಗಳ ಕಟ್ಟಡ ನಿರ್ಮಾಣ ಹಾಗೂ 3 ಸಂಘಗಳ ನೂತನ ಕಟ್ಟಡದ ಶಂಕುಸ್ಥಾಪನೆ ಮತ್ತು ಇದೇ ಸಮಾರಂಭದಲ್ಲಿ ಎಂಸಿಡಿಸಿಸಿ ಬ್ಯಾಂಕ್‌ನ ಮೊಬೈಲ್ ಆ್ಯಪ್ ಬಿಡುಗಡೆ, 5 ಕೃಷಿ ಪತ್ತಿನ ಸಹಕಾರ ಸಂಘಗಳ ನೂತನ ಕಟ್ಟಡ ಉದ್ಘಾಟನೆ. 7 ಸಹಕಾರ ಸಂಘಗಳ ನೂತನ ಕಟ್ಟಡದ ಶಂಕುಸ್ಥಾಪನೆ ಮತ್ತು 1.12 ಕೋಟಿ ವೆಚ್ಚದ ಟಿಎಪಿಸಿಎಂಎಸ್‌ನ ಕಟ್ಟಡದ ಶಂಕುಸ್ಥಾಪನೆ ನೆರವೇರಲಿದೆ ಎಂದರು.

ಮೆರವಣಿಗೆ: ಕಾರ್ಯಕ್ರಮಕ್ಕೂ ಮುನ್ನಾ ಬೆಳಗ್ಗೆ 10 ಗಂಟೆಗೆ ಮಂಜುನಾಥಸ್ವಾಮಿ ದೇವಾಲಯದ ಆವರಣದಿಂದ ಕಳಸಹೊತ್ತ 1500 ಮಹಿಳೆಯರು ಸೇರಿದಂತೆ 5 ಸಾವಿರಕ್ಕೂ ಹೆಚ್ಚು ಸಹಕಾರಿಗಳು ವಿವಿಧ ಕಲಾತಂಡಗಳೊಂದಿಗೆ ಮೆರವಣಿಗೆಯಲ್ಲಿ ನಗರಸಭಾ ಮೈದಾನಕ್ಕೆ ಆಗಮಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಎಲ್ಲಾ ಸಹಕಾರಿಗಳು, ಸಾರ್ವಜನಿಕರು ಭಾಗವಹಿಸಿ ಯಶಸ್ವಿಗೊಳಿಸಬೇಕು. ಕಾರ್ಯಕ್ರಮದ ನಂತರ 8000ಕ್ಕೂ ಹೆಚ್ಚು ಮಂದಿಗೆ ಊಟದ ವ್ಯವಸ್ಥೆ ಮಾಡಲಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ನಗರಸಭಾ ಸದಸ್ಯ ಸತೀಶ್ ಕುಮಾರ್, ಟಿಎಪಿಸಿಎಂಎಸ್ ಅಧ್ಯಕ್ಷ ಕೆಂಪೇಗೌಡ, ಕಸಬಾ ಸೊಸೈಟಿ ಅಧ್ಯಕ್ಷ ವಾಸೇಗೌಡ, ದೊಡ್ಡಹೆಜ್ಜೂರು ಗ್ರಾಪಂ ಅಧ್ಯಕ್ಷ ಸುಭಾಷ್ ಉಪಸ್ಥಿತರಿದ್ದರು.

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1 ವಿಕ್ರಾಂತ್ ರೋಣ (3ಡಿ) (ಕ): ಬೆ.10.10ಕ್ಕೆ, ಮ.1.05ಕ್ಕೆ, ರಾ.10ಕ್ಕೆ, ರಾಮರಾವ್ ಆನ್ ಡ್ಯೂಟಿ (ತೆ): ಸಂ.4ಕ್ಕೆ, ಸಂ.6.55ಕ್ಕೆ.

ಸ್ಕ್ರೀನ್ 2 ವಿಕ್ರಾಂತ್ ರೋಣ (ಕ): ಬೆ.10.20ಕ್ಕೆ, ವಿಕ್ರಾಂತ್ ರೋಣ (3ಡಿ) (ಕ): ಮ.1.15ಕ್ಕೆ, ರಾ.7.20ಕ್ಕೆ, ದಿ ಲೆಜೆಂಡ್ (ತ): ಸಂ.4ಕ್ಕೆ, ವಿಕ್ರಾಂತ್ ರೋಣ (ಹಿಂ): ರಾ.10.10ಕ್ಕೆ.

ಸ್ಕ್ರೀನ್ 3 ಏಕ್ ವಿಲ್ಲನ್ ರಿಟರ್ನ್ಸ್ (ಹಿಂ): ಬೆ.10.30ಕ್ಕೆ, ಸಂ.4.30ಕ್ಕೆ, ರಾ.7.10ಕ್ಕೆ, ರಾ.9.50ಕ್ಕೆ, ಗುಲುಗುಲು (ತ): ಮ.1.15ಕ್ಕೆ

ಸ್ಕ್ರೀನ್ 4 ವಿಕ್ರಾಂತ್ ರೋಣ (3ಡಿ) (ಕ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.9.55ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1 ವಿಕ್ರಾಂತ್ ರೋಣ (3ಡಿ) (ಕ): ಬೆ.9.50ಕ್ಕೆ, ಮ.1ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ

ಸ್ಕ್ರೀನ್ 2 ಏಕ್ ವಿಲ್ಲನ್ ರಿಟರ್ನ್ಸ್ (ಹಿಂ): ಬೆ.9.30ಕ್ಕೆ, ವಿಕ್ರಾಂತ್ ರೋಣ (ಕ): ಮ.12.15ಕ್ಕೆ, ಮ.3.20ಕ್ಕೆ, ಸಂ.6.25ಕ್ಕೆ, ರಾ.9.30ಕ್ಕೆ.

ಸ್ಕ್ರೀನ್ 3 ವಿಕ್ರಾಂತ್ ರೋಣ (ಕ): ಬೆ.11ಕ್ಕೆ, ಏಕ್ ವಿಲ್ಲನ್ ರಿಟರ್ನ್ಸ್ (ಹಿಂ): ಮ.2.05ಕ್ಕೆ, ಸಂ.4.50ಕ್ಕೆ, ರಾ.7.35ಕ್ಕೆ, ರಾ.10.20ಕ್ಕೆ.

ಸ್ಕ್ರೀನ್ 4 ವಿಕ್ರಾಂತ್ ರೋಣ (ಕ): ಬೆ.10.10ಕ್ಕೆ, ಏಕ್ ವಿಲ್ಲನ್ ರಿಟರ್ನ್ಸ್ (ಹಿಂ): ಮ.1.15ಕ್ಕೆ, ರಾಮರಾವ್ ಆನ್ ಡ್ಯೂಟಿ (ತೆ): ಸಂ.4ಕ್ಕೆ, ರಾ.10.10ಕ್ಕೆ, ಗುಲುಗುಲು (ತ): ರಾ.7.05ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1 ಚೇಜ್ (ಕ): ಬೆ.10.45ಕ್ಕೆ, ಸಂ.4ಕ್ಕೆ, ಕರ್ಮಣ್ಯೇ ವಾಧಿಕಾರಸ್ತೆ (ಕ): ಮ.1.30ಕ್ಕೆ, ಪೆಟ್ರೋಮ್ಯಾಕ್ಸ್ (ಕ): ಸಂ.6.45ಕ್ಕೆ, ಮೈ ಡಿಯರ್ ಭೂತ್ (ತ): ರಾ.9.20ಕ್ಕೆ.

ಸ್ಕ್ರೀನ್ 2 ಪೆಟ್ರೋಮ್ಯಾಕ್ಸ್ (ಕ): ಬೆ.10.45ಕ್ಕೆ, ಮ.1.30ಕ್ಕೆ, ಗಾರ್ಗಿ (ಕ): ಸಂ.4.05ಕ್ಕೆ, ಬೆಂಕಿ (ಕ): ಸಂ.6.50ಕ್ಕೆ, ಲಡ್ಕಿ (ಹಿಂ): ರಾ.9.15ಕ್ಕೆ.

ಸ್ಕ್ರೀನ್ 3 ಗಾರ್ಗಿ (ಕ): ಮ.1.30ಕ್ಕೆ, 777 ಚಾರ್ಲಿ (ಕ): ರಾ.7.45ಕ್ಕೆ.

ಸ್ಕ್ರೀನ್ 4 ದಿ ವಾರಿಯರ್ (ತೆ): ಬೆ.10.30ಕ್ಕೆ, ಸಂ.6.20ಕ್ಕೆ, ರಾ.9.20ಕ್ಕೆ, ಬೆಂಕಿ (ಕ): ಮ.1.30ಕ್ಕೆ, ಜುಡಾ ಹೊಕೆ ಬೈ (ಹಿಂ): ಸಂ.4ಕ್ಕೆ

ಪಿವಿಆರ್ ಸಿನಿಮಾಸ್
PVR CINEMAS
ಮೊ.ನಂ: 8951357139
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಪೆಟ್ರೋಮ್ಯಾಕ್ಸ್ (ಕ): ಮ.12.30ಕ್ಕೆ, ಗಾರ್ಗಿ (ಕ): ಸಂ.6ಕ್ಕೆ, 777 ಚಾರ್ಲಿ (ಕ): ಮ.12.25ಕ್ಕೆ, ಸಂ.6.25ಕ್ಕೆ, ಮಿನಿಯನ್ಸ್ (3ಡಿ)(ಇಂ): ರಾ.7.50ಕ್ಕೆ, ಥಾರ್: ಲವ್ ಅಂಡ್ ಥಂಡರ್ (3ಡಿ)(ಇಂ): ಮ.2.45ಕ್ಕೆ, ರಾ.10ಕ್ಕೆ, ಪಾಮ್ಸ್ ಆಫ್ ಫ್ಯೂರಿ; ದಿ ಲೆಜೆಂಡ್ ಆಫ್ ಹಾಂಕ್ (ಇಂ): ಮ.12.25ಕ್ಕೆ, ಸಂ.5.30ಕ್ಕೆ, ಶಂಶೇರಾ (ಹಿಂ): ಬೆ.9.10ಕ್ಕೆ, ಮ.12.30ಕ್ಕೆ, ಮ.3.50ಕ್ಕೆ, ಸಂ.4ಕ್ಕೆ, ರಾ.7.10ಕ್ಕೆ, ರಾ.10ಕ್ಕೆ, ರಾ.10.30ಕ್ಕೆ, ರಾಕೆಟ್ರಿ (ಹಿಂ): ಮ.12.40ಕ್ಕೆ, ಥ್ಯಾಂಕ್ ಯೂ (ತೆ): ಬೆ.10.10ಕ್ಕೆ, ಮ.1ಕ್ಕೆ, ಮ.3.50ಕ್ಕೆ, ಸಂ.6.40ಕ್ಕೆ, ರಾ.9.30ಕ್ಕೆ, ಮಲಯನ್‌ಕುಂಜು (ಮ): ಮ.3.25ಕ್ಕೆ, ಮಹಾವೀರ್ಯರ್ (ಮ): ರಾ.9ಕ್ಕೆ, ಮಹಾ (ತ): ಮ.3.45ಕ್ಕೆ, ರಾ.9.55ಕ್ಕೆ, ದೆಜಾವು (ತ): ರಾ.7.20ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಪದ್ಮ ಚಿತ್ರಮಂದಿರ	(ದೂ: 2521923)
ಗುಲು ಗುಲು (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ವಿಕ್ರಾಂತ್ ರೋಣ (ಕ)	4 ಪ್ರದರ್ಶನಗಳು
ಉಮಾ ಚಿತ್ರಮಂದಿರ	(ದೂ: 2520009)
ಮಿಸ್ ಮಲ್ಲಿಗೆ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ವಿಲನ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ವಿಕ್ರಾಂತ್ ರೋಣ (ಕ)	4 ಪ್ರದರ್ಶನಗಳು
ಗಾಯಿತ್ರಿ	
ವಿಕ್ರಾಂತ್ ರೋಣ (ಕ)	4 ಪ್ರದರ್ಶನಗಳು
ರಾಜ್‌ಕಮಲ್	
ವಿಕ್ರಾಂತ್ ರೋಣ (ಕ)	4 ಪ್ರದರ್ಶನಗಳು
ಸಂಗಂ	
ರಾಮರಾವ್ (ತೆ)	4 ಪ್ರದರ್ಶನಗಳು
ಲಿಡೋ	
ಏಕ್ ವಿಲಿಯನ್ ರಿಟರ್ನ್ (ಹಿ)	4 ಪ್ರದರ್ಶನಗಳು
ತಿಬ್ಬಾದೇವಿ	
ವಿಕ್ರಾಂತ್ ರೋಣ (ಕ)	4 ಪ್ರದರ್ಶನಗಳು
ಸ್ಟರ್ಲಿಂಗ್	
ಓ ಮೈ ಲವ್ (ಕ)	4 ಪ್ರದರ್ಶನಗಳು
ಸ್ಕೈಲೈನ್	
ಅಂಜನ (ಕ)	4 ಪ್ರದರ್ಶನಗಳು
ಪ್ರಭಾ	
ಬೈರಾಗಿ (ಕ)	4 ಪ್ರದರ್ಶನಗಳು

ಹಾಡಹಗಲೇ ಮಹಿಳೆ ಭೀಕರ ಹತ್ಯೆ


ನಂಜನಗೂಡು ತಾಲೂಕು ನೇರಳೆ ಗ್ರಾಮದಲ್ಲಿ ಘಟನೆ

ಆರೋಪಿ ಪರಾರಿ, ಹಳೆ ದ್ವೇಷವೇ ಘಟನೆಗೆ ಕಾರಣ

ದೇವನೂರು, ಜು.29– ಹಳೇ ದ್ವೇಷದ ಹಿನ್ನೆಲೆಯಲ್ಲಿ ಹಾಡಹಗಲೇ ಮಹಿಳೆಯೊಬ್ಬರನ್ನು ಬರ್ಬರವಾಗಿ ಮಚ್ಚಿನಿಂದ ಕೊಚ್ಚಿ ಕೊಲೆ ಮಾಡಿರುವ ದಾರುಣ ಘಟನೆ ನಂಜನಗೂಡು ತಾಲೂಕಿನ ಹಂಪಾಪುರ ಗ್ರಾಮದಲ್ಲಿ ಸಂಭವಿಸಿದೆ.



ನೇರಳೆ ಗ್ರಾಪಂ ಸದಸ್ಯ ಪ್ರಕಾಶ್ ಅವರ ತಾಯಿ ಮಿಣುಕಮ್ಮ (45) ಕೊಲೆಯಾದ ದುರ್ದೈವಿ. ಹಳೇಪುರ ಗ್ರಾಮದ ಮಹದೇವ ನಾಯಕ ಅಲಿಯಾಸ್ ಮದಕರಿ(50) ಕೊಲೆ ಮಾಡಿ ಪರಾರಿಯಾಗಿರುವ ಆರೋಪಿ. ಆರೋಪಿ ಮಹದೇವನಾಯಕ ಮತ್ತು ಪ್ರಕಾಶ್ ಕುಟುಂಬದ ನಡುವೆ ಈ ಹಿಂದೆ ಅನೈತಿಕ ಸಂಬಂಧದ ವಿಚಾರವಾಗಿ ಗಲಾಟೆ ನಡೆದಿತ್ತು. ಈ ಪ್ರಕರಣ ಕವಲಂದೆ ಪೊಲೀಸ್ ಠಾಣೆ ಮೆಟ್ಟಿಲು ಹತ್ತಿ ಅಲ್ಲಿ ಸಮಸ್ಯೆ ಇತ್ಯರ್ಥವಾಗಿತ್ತು. ಇದನ್ನೇ ಮನಸ್ಸಿನಲ್ಲಿ ಇಟ್ಟುಕೊಂಡಿದ್ದ ಮಹದೇವನಾಯಕ ಶುಕ್ರವಾರ ಬೆಳಗ್ಗೆ ಹಾಲು ತರಲು ಮನೆಯಿಂದ ಹೊರಗಡೆ ಬಂದ ಮಿಣುಕಮ್ಮಳನ್ನು ಮಚ್ಚಿನಿಂದ ಕೊಚ್ಚಿ ಕೊಲೆ ಮಾಡಿ ಪರಾರಿಯಾಗಿದ್ದಾನೆ. ವಿಷಯ ತಿಳಿದು ಸ್ಥಳಕ್ಕೆ ಕವಲಂದೆ ಪೊಲೀಸ್ ಠಾಣೆ ಎಸ್‌ಐ ಮಹೇಂದ್ರ, ಸಿಪಿಐ ಲಕ್ಷ್ಮೀಕಾಂತ್ ತಳವಾರ್ ಭೇಟಿ ನೀಡಿ ಪರಿಶೀಲಿಸಿದ್ದಾರೆ. ಈ ಸಂಬಂಧ ಕವಲಂದೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ತುಳಸಮ್ಮ ನಿಧನ

ಹುಲ್ಲಹಳ್ಳಿ, ಜು.29– ಗ್ರಾಮದ ಶ್ರೀಮಹದೇವ ತಾತ ಬಡಾವಣೆ ನಿವಾಸಿ ಲೇ.ರಾಮಶೆಟ್ಟಿ ಅವರ ಪತ್ನಿ ತುಳಸಮ್ಮ(77) ಗುರುವಾರ ಸಂಜೆ ನಿಧನರಾದರು, ಮೃತರು ಮೂವರು ಪುತ್ರರು, ಇಬ್ಬರು ಪುತ್ರಿಯರು ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಗ್ರಾಮದ ಕಪಿಲ ನದಿ ದಡದಲ್ಲಿ ಶುಕ್ರವಾರ ಮಧ್ಯಾಹ್ನ ನೆರವೇರಿತು.

ಜವನಮ್ಮ



ಮೈಸೂರು, ಜು.29– ತಾಲೂಕಿನ ಕೂಡನಹಳ್ಳಿ ಗ್ರಾಮದ ನಿವಾಸಿ ಜವನಮ್ಮ(95) ಶುಕ್ರವಾರ ನಿಧನರಾದರು.

ಮೃತರು ಗ್ರಾಪಂ ಮಾಜಿ ಅಧ್ಯಕ್ಷ ಎಂ.ರಾಜಣ್ಣ ಸೇರಿದಂತೆ ಇಬ್ಬರು ಪುತ್ರರು, ಮೂವರು ಪುತ್ರಿಯರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಶನಿವಾರ ಮಧ್ಯಾಹ್ನ 12 ಗಂಟೆಗೆ ಸ್ವಗ್ರಾಮದಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.